ಸಂಪುಟ: 21, ಸಂಚಿಕೆ: 221, ಪುಟಗಳು: 8, ಸೋಮವಾರ, 20 ಮೇ 2024 RNI NO. KARKAN/2002/08054
epaper: www.sanjemugilu.com

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ



ವೇಣು ಸಾರಥ್ಯದಲ್ಲಿ...

**ಸುಭಾಷಿತ**

ನಮ್ಮೆಲ್ಲ ಸಮಸ್ಯೆಗಳು ಪರಿಹಾರಗೊಳ್ಳುವ ತನಕ ಚಳವಳಿಗಳನ್ನು ಜೀವಂತವಾಗಿಟ್ಟಿರುವುದು ಅತ್ಯಗತ್ಯ

● ಕುವೆಂಪು

**ಪಂಚಾಂಗ**

(ಸೋಮವಾರ 20, ಮೇ-2024)

- ಶ್ರೀ ಕ್ರೋಧಿ ನಾಮ ಸಂವತ್ಸರ,
- ಉತ್ತರಾಯಣ, ವಸಂತ ಋತು
- ವೈಶಾಖ ಮಾಸ, ಶುಕ್ಲ ಪಕ್ಷ,
- ವಾರ: ಸೋಮವಾರ, ತಿಥಿ: ದ್ವಾದಶಿ
- ನಕ್ಷತ್ರ: ಚಿತ್ತಾ
- ರಾಹುಕಾಲ: 7.32 ರಿಂದ 9.08
- ಗುಳಿಕಕಾಲ: 1.55 ರಿಂದ 3.31
- ಯಮಗಂಡಕಾಲ: 10.44 ರಿಂದ 12.20

## 8 ರಾಜ್ಯ, ಕೇಂದ್ರಾಡಳಿತ ಪ್ರದೇಶಗಳ 49 ಸ್ಥಾನಗಳಿಗೆ ಐದನೇ ಹಂತದ ಮತದಾನ

**ಉತ್ತರ ಪ್ರದೇಶ:** ಲೋಕಸಭೆ ಚುನಾವಣೆ 2024ರ ಐದನೇ ಹಂತದಲ್ಲಿ, ಎಂಟು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿನ 49 ಸ್ಥಾನಗಳಿಗೆ ಇಂದು ಮತದಾನ ಆರಂಭವಾಗಿದೆ. 5ನೇ ಹಂತದ ಮತದಾನದ ಪ್ರಮುಖ ಅಂಶವೆಂದರೆ ಅದು ರಾಜನಾಥ್ ಸಿಂಗ್ ಮತ್ತು ಸ್ಮೃತಿ ಇರಾನಿ ಮತ್ತು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಸೇರಿದಂತೆ ನಾಲ್ವರು ಕೇಂದ್ರ ಸಚಿವರ ಭವಿಷ್ಯವನ್ನು ನಿರ್ಧರಿಸುತ್ತದೆ. ಲಕ್ನೋ ಪೂರ್ವ ವಿಧಾನಸಭಾ ಕ್ಷೇತ್ರದ ವಿಧಾನಸಭಾ ಉಪಚುನಾವಣೆಗೂ ಇಂದು ಮತದಾನ ನಡೆಯುತ್ತಿದೆ.

ಪುಟ 2





## 8 ಬಾರಿ ಮತದಾನ ಸಿಕ್ಕಿಬಿದ್ದ ಯುವಕ, ಇಟಾಹ್‌ನಲ್ಲಿ ಮರು ಮತದಾನ

**ಉತ್ತರ ಪ್ರದೇಶ:** ಉತ್ತರಪ್ರದೇಶದ ಇಟಾಹ್ (ಇಣಚು)ನಲ್ಲಿ ಮೂರನೇ ಹಂತದ ಮತದಾನದಲ್ಲಿ ಯುವಕನೊಬ್ಬ ಒಂದೇ ಬೂತ್‌ನಲ್ಲಿ 8 ಬಾರಿ ಮತ ಚಲಾಯಿಸಿ ಸಿಕ್ಕಿಬಿದ್ದಿದ್ದಾನೆ.

ಪುಟ 2

## ಮಾಜಿ ಸಂಸದ ಎಲ್.ಆರ್ ಶಿವರಾಮೇಗೌಡ ಮನೆ ಮೇಲೆ ಮೊಟ್ಟೆ ದಾಳಿ

**ಬೆಂಗಳೂರು:** ಸಂಸದ ಪ್ರಜ್ವಲ್ ರೇವಣ್ಣ ಅವರದ್ದು ಎನ್ನಲಾಗಿರುವ ಪೆನ್ ಡ್ರೈವ್ ಪ್ರಕರಣಕ್ಕೆ ಸಂಬಂಧಿಸಿದಂತೆ ಆಡಿಯೋ ಒಂದರಲ್ಲಿ ಮಾಜಿ ಪ್ರಧಾನಿ ಹೆಚ್ ಡಿ ದೇವೇಗೌಡ ಅವರನ್ನು ಅವಹೇಳನಕಾರಿಯಾಗಿ ನಿಂದಿಸಿದ್ದಾರೆ ಎನ್ನಲಾಗಿರುವ ಮಾಜಿ ಸಂಸದ ಎಲ್ ಆರ್ ಶಿವರಾಮೇಗೌಡ ಅವರ ಮನೆ ಮೇಲೆ ಮೊಟ್ಟೆ ದಾಳಿಗೆ ಯತ್ನಿಸಲಾಗಿದೆ.

ತಡರಾತ್ರಿ ಕಾರಿನಲ್ಲಿ ಬಂದ ವ್ಯಕ್ತಿಗಳು ಪೊಲೀಸರನ್ನು ಕಂಡು ಅವರ ಕಣ್ಣು ತಪ್ಪಿಸಿ ಎಲ್ ಆರ್ ಶಿವರಾಮೇಗೌಡ ಮನೆ ಮುಂದೆ 5-6 ಮೊಟ್ಟೆ ಎಸೆದು ಪರಾರಿಯಾಗಿದ್ದಾರೆ. ಮೊಟ್ಟೆ ಎಸೆಯಲು ಯತ್ನಿಸಿ ಪರಾರಿ ಆದವರಿಗಾಗಿ ಚನ್ನಮ್ಮನ ಕೆರೆ



ಅಚ್ಚುಕಟ್ಟು ಪೊಲೀಸರು ಸಿಸಿಟಿವಿ ವಿಶ್ಯುವಲ್ಸ್ ಆಧರಿಸಿ ಹುಡುಕಾಟ ನಡೆಸಿದ್ದಾರೆ. ಮೊಟ್ಟೆ ಎಸೆದು ಹೋದ ಬಳಿಕ ಪೊಲೀಸರು ಎಲ್ ಆರ್ ಶಿವರಾಮೇಗೌಡ ಮನೆ ರಸ್ತೆಯ ಎರಡು ಕಡೆ ಬ್ಯಾರಿಕೇಡ್ ಹಾಕಿ ಬಂದೋಬಸ್ತ್ ಮಾಡಿದ್ದಾರೆ.

ಪುಟ 2

**ಸಂಕ್ಷಿಪ್ತ ಸುದ್ದಿ**

### ಗಂಡ್ ಹೈಕ್ಳಿಗೆ ಬಿಗ್ ಆಫರ್



ಸಾಮಾಜಿಕ ಜಾಲತಾಣಗಳಲ್ಲಿ ಸಾಕಷ್ಟು ವಿಡಿಯೋಗಳು ಹರಿದಾಡುತ್ತಿರುತ್ತವೆ. ಇದೀಗ ತನ್ನ ಮಗಳನ್ನು ಒಂದು ವಾರದೊಳಗೆ ಮದುವೆಯಾಗಲು ಮುಂದೆ ಬರುವ ವರನಿಗೆ ಬ್ಲ್ಯಾಂಕ್ ಚೆಕ್ ನೀಡುವೆ ಎಂದು ಹೇಳಿರುವ ವ್ಯಕ್ತಿಯೊಬ್ಬರ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ. ಆದರೆ ಈ ವಿಡಿಯೋ ನಕಲಿಯೋ ಅಸಲಿಯೋ ಎಂಬುದು ತಿಳಿದುಬಂದಿಲ್ಲ. ಇನ್‌ಸ್ಟಾಗ್ರಾಮ್‌ನಲ್ಲಿ ಪೋಸ್ಟ್ ಮಾಡಲಾದ ಈ ವೀಡಿಯೊದಲ್ಲಿ, ತಂದೆ ತನ್ನ ಮಗಳೊಂದಿಗೆ ಜೀಪ್ ಮುಂದೆ ನಿಂತಿರುವುದನ್ನು ಕಾಣಬಹುದು. ತಂದೆಯ ಕೈಯಲ್ಲಿ ಚೆಕ್ ಬುಕ್ ಇದೆ. ''ನನ್ನ ಮಗಳನ್ನು ಮದುವೆಯಾಗಲು ವರ ಬೇಕಾಗಿದ್ದಾನೆ.

ಪುಟ 2

### ಲೈಂಗಿಕ ದೌರ್ಜನ್ಯ ಪ್ರಕರಣ– ಹೆಚ್.ಡಿ ರೇವಣ್ಣಗೆ ಸಿಗುತ್ತಾ ಜಾಮೀನು?



**ಬೆಂಗಳೂರು:** ಹೊಳೆನರಸೀಪುರ ಲೈಂಗಿಕ ದೌರ್ಜನ್ಯ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಸಚಿವ ಹೆಚ್.ಡಿ ರೇವಣ್ಣ ಅವರಿಗೆ ಜಾಮೀನು ಅರ್ಜಿ ಭವಿಷ್ಯ ಇಂದು ನಿರ್ಧಾರವಾಗಲಿದೆ. ಮ್ಯಾಜಿಸ್ಟ್ರೇಟ್ 42 ರ ನ್ಯಾಯಾಧೀಶರು ಮುಖ್ಯ ಅರ್ಜಿಯ ತೀರ್ಪು ಪ್ರಕಟಿಸಲಿದ್ದಾರೆ. ಪ್ರಕರಣ ಸಂಬಂಧ ಜಾಮೀನು ಅರ್ಜಿ ವಿಚಾರಣೆಯ ಸಂದರ್ಭದಲ್ಲಿ ಇಬ್ಬರು ಎಸ್ ಪಿ ಪಿಗಳು ರೇವಣ್ಣಗೆ ಜಾಮೀನು ನೀಡದಂತೆ ಪ್ರಬಲ ವಾದ ಮಂಡಿಸಿದ್ದರು. ಎಸ್‌ಪಿಪಿಗಳ ವಾದಕ್ಕೆ ರೇವಣ್ಣ ಪರ ವಕೀಲ ಸಿ ವಿ ನಾಗೇಶ್ ಅವರು ಪ್ರಬಲ ಪ್ರತಿವಾದ ಸಲ್ಲಿಸಿದ್ದರು.

ಪುಟ 2

## ನುಡಿದಂತೆ ನಡೆದು, ಸವಾಲುಗಳ ಮಧ್ಯೆಯೇ ಸವಾಲು ಎದುರಿದ ಸಿಎಂ

# ವರ್ಷ ಪೂರೈಸಿದ ಸರ್ಕಾರ

**ಬೆಂಗಳೂರು:** ಕಳೆದ ರಾಜ್ಯ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ 136 ಕ್ಷೇತ್ರಗಳಲ್ಲಿ ಗೆಲ್ಲುವ ಮೂಲಕ ಭರ್ಜರಿ ಬಹುಮ ಪಡೆಯಿತು. ಅಭೂತಪೂರ್ವವಾದ ಗೆಲುವಿನ ಸಂತಸದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ 2023 ಮೇ 20 ರಂದು ರಚನೆಯಾಯಿತು. ಕಾಂಗ್ರೆಸ್ ರಾಜ್ಯದಲ್ಲಿ ಅಧಿಕಾರದ ಚುಕ್ಕಾಣಿ ಹಿಡಿದು ಇಂದಿಗೆ (ಮೇ 20) ಒಂದು ವರ್ಷ ಪೂರ್ಣವಾಗಿದೆ. ಈ ಒಂದು ವರ್ಷದಲ್ಲಿ ರಾಜ್ಯ ಸರ್ಕಾರ ಹಲವು ಸವಾಲುಗಳನ್ನು ಎದುರಿಸಿತು. ಹಾಗೆ ಚುನಾವಣೆ ಪೂರ್ವದಲ್ಲಿ ತಾನು ಘೋಷಿಸಿದ್ದ ಹಲವು ಗ್ಯಾರೆಂಟಿಗಳನ್ನು ಜಾರಿ ಮಾಡಿದೆ. ಒಂದು ವರ್ಷ ಪೂರೈಸಿದ ಸಂತಸದಲ್ಲಿರುವ ಸರ್ಕಾರ ಎದುರಿಸಿದ ಸವಾಲುಗಳೇನು ಮಾಡಿದ ಸಾಧನೆಗಳೇನು ಪ್ರತಿಪಕ್ಷಗಳಿಗೆ ಕೊಟ್ಟ ಚಾಟಿ ಏಟಿನ ಕುರಿತಾದ ಸಂಪೂರ್ಣ ಮಾಹಿತಿ ಇಲ್ಲಿದೆ.

ಈ ಒಂದು ವರ್ಷದ ಅವಧಿಯಲ್ಲಿ ಹಲವು ಸವಾಲುವಳನ್ನು ಎದರಿಸಿರುವ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರಕ್ಕೆ ಐದು ಗ್ಯಾರಂಟಿ ಯೋಜನೆಗಳೇ ಮೂಲಬೇರು. ಗ್ಯಾರಂಟಿ ಭರವಸೆಗಳನ್ನು ನೀಡಿಯೇ ಕಾಂಗ್ರೆಸ್ ಅಧಿಕಾರಕ್ಕೆ ಬಂತು. ಚುನಾವಣೆಯಲ್ಲಿ ಘೋಷಣೆ ಮಾಡಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೊದಲ ಕ್ಯಾಬಿನೆಟ್ ನಲ್ಲಿಯೇ ಐದು ಗ್ಯಾರಂಟಿಗಳಿಗೆ ಅನುಮೋದನೆ ನೀಡಿತು.

**ಶಾಸಕರ ಅಸಮಾಧಾನ:** ಶಕ್ತಿ ಯೋಜನೆ, ಅನ್ನ ಭಾಗ್ಯದ ಹೆಚ್ಚುವರಿ ಹಣ, ಗೃಹ ಲಕ್ಷ್ಮಿ, ಗೃಹ ಜ್ಯೋತಿ, ಯುವನಿಧಿ ಮೂಲಕ ಮಹಿಳೆಯರ ಮತ್ತು ಯುವಕರ ಮನಗೆದ್ದ ಸರ್ಕಾರ ಈ ಗ್ಯಾರಂಟಿ ಜಾರಿಗೆ ಹಣ ಸರಿದೂಗಿಸಲು ಹಲವು ಕಸರತ್ತು ಮಾಡಿತು. ಗ್ಯಾರಂಟಿ ಯೋಜನೆಯಿಂದ ಹಲವು ಕ್ಷೇತ್ರಗಳಿಗೆ ಅನುದಾನ ಕಡಿತವಾಗಿದೆ ಎಂದು ಕೆಲ ಸ್ವಪಕ್ಷದ ಶಾಸಕರೇ ಸರ್ಕಾರದ ವಿರುದ್ಧ ಅಸಮಾಧಾನ ಹೊರ ಹಾಕಿದರು.

ಪುಟ 2



**ಬರಗಾಲ**

ಕಾಂಗ್ರೆಸ್ ಅಧಿಕಾರದ ಚುಕ್ಕಾಣಿ ಹಿಡಿದು ಮೂರೇ ತಿಂಗಳಲ್ಲಿ ರಾಜ್ಯದಲ್ಲಿ ಬರಗಾಲ ಆವರಿಸಿತು. ಸಮರ್ಪಕವಾಗಿ ಮಳೆಯಾಗದೆ ಕುಡಿಯಲು ಸಹಿತ ನೀರಿಲ್ಲದಂತ ಪರಿಸ್ಥಿತಿ ಎದುರಾಯಿತು. ರಾಜಧಾನಿ ಬೆಂಗಳೂರಿನಲ್ಲೇ ಕುಡಿಯುವ ನೀರಿಗಾಗಿ ಪರದಾಡುವಂತಾಯಿತು. ಮಳೆ ಇಲ್ಲದೆ ಜಲಾಶಯಗಳು ಬತ್ತಲು ಆರಂಭಿಸಿದವು. ನೀರಿಲ್ಲದೆ ಸಂಕಷ್ಟ ಪಡುತ್ತಿರುವ ಮಧ್ಯೆಯೇ ಕೆಆರ್ ಎಸ್ ನಿಂದ ತಮಿಳುನಾಡಿಗೆ ನೀರು ಬಿಡಬೇಕೆಂಬ ಆದೇಶ ಸಹಜವಾಗಿ ಸರ್ಕಾರದ ವಿರುದ್ಧ ಜನರು ಆಕ್ರೋಶಗೊಳ್ಳುವಂತೆ ಮಾಡಿತು.

### ಸಿದ್ದರಾಮಯ್ಯ ಸರ್ಕಾರ ಪೂರೈಸಿದ್ದು ವರುಷ, ಸಾಧಿಸಿದ್ದು ಶೂನ್ಯ

## ವಿಜಯೇಂದ್ರ ಟೀಕೆ

**ಬೆಂಗಳೂರು:** ರಾಜ್ಯದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಅಧಿಕಾರಿಕ್ಕೆ ಬಂದು ಇಂದಿಗೆ (ಮೇ 20) ವರ್ಷವಾಯಿತು. ಆದರೆ ಸಾಧಿಸಿದ್ದು ಮಾತ್ರ ಶೂನ್ಯ ಎಂದು ಬಿಜೆಪಿ ರಾಜ್ಯಾಧ್ಯಾಕ್ಷ ಬಿವೈ ವಿಜಯೇಂದ್ರ ಟೀಕೆ ಮಾಡಿದ್ದಾರೆ. ''ಪೂರೈಸಿದ್ದು ವರುಷ ಮಾತ್ರ ಆದರೆ, ಸಾಧಿಸಿದ್ದು ಶೂನ್ಯ. ಖಜಾನೆ ಖಾಲಿ ಖಾಲಿ, ವಸೂಲಿ ಭಾರಿ ಭಾರಿ'' ಎಂದು ಟ್ವೀಟ್ ಮೂಲಕ ಹರಿಹಾಯ್ದಿದ್ದಾರೆ.



ರಾಜ್ಯದ ಸಿದ್ದರಾಮಯ್ಯ ಅವರ ನೇತೃತ್ವದ ಕಾಂಗ್ರೆಸ್ ಸರ್ಕಾರ ಒಂದು ವರ್ಷದಲ್ಲಿ ಬಿಟ್ಟಿ ಭಾಗ್ಯಗಳಿಗಾಗಿ ಅಭಿವೃದ್ಧಿಯನ್ನು ಸಂಪೂರ್ಣವಾಗಿ ಕಡೆಗಣಿಸಿದ ಪರಿಣಾಮ, ನಿರುದ್ಯೋಗ ಭವಣೆ ಹೆಚ್ಚಾಗಿದೆ. ಶಿಕ್ಷಣ ಕ್ಷೇತ್ರ ಎಡವಿ ಬಿದ್ದಿತು, ಉತ್ಪನ್ನ ಕ್ಷೇತ್ರ ಸೊರಗಿತು. ನಾರಿ ಕುಲ ರಕ್ಷಣೆ ಇಲ್ಲದೆ ನಲುಗಿತು, ಬೆಳೆಯೆಲ್ಲ ಒಣಗಿತು. ದಲಿತ ಕಲ್ಯಾಣ ಕಾರ್ಯಗಳು ಕುಸಿಯಿತು. ಹಿಂದುಳಿದವರ ಅಭಿವೃದ್ಧಿ ಹಿಂದುಳಿಯಿತು. ರೈತರ ಬಾಳು ಗೋಳಾಯಿತು ಎಂದು ಬಿವೈ ವಿಜಯೇಂದ್ರ ಆರೋಪ ಮಾಡಿದ್ದಾರೆ.

**ವಿಪಕ್ಷದಿಂದ ರಾಜ್ಯಾದ್ಯಂತ ಪ್ರತಿಭಟನೆ:** ಸಿದ್ದರಾಮಯ್ಯ ಅವರು ತಮ್ಮ ಸರ್ಕಾರ ಒಂದು ವರ್ಷದಲ್ಲಿ ಏನೇನು ಮಾಡಿದೆ ಎಂದು ಇಂದು (ಮೇ 20) ಸುದಿಗೋಷ್ಠಿ ನಡೆಸಿ ರಾಜ್ಯದ ಜನತೆ ಮುಂದೆ ಬಿಚ್ಚಿಡಲಿದ್ದಾರೆ.

ಪುಟ 2




## ಇಂಡಿಯಾ ಮೈತ್ರಿಕೂಟದ ನಾಯಕರು ರಾವಣನ ಅನುಯಾಯಿಗಳು

**ಮಧ್ಯಪ್ರದೇಶ:** ವಿರೋಧ ಪಕ್ಷದ ನಾಯಕರನ್ನು ಮಧ್ಯಪ್ರದೇಶದ ಮುಖ್ಯಮಂತ್ರಿ ಮೋಹನ್ ಯಾದವ್‌ರಾವಣನ ಅನುಯಾಯಿಗಳು ಎಂದು ಬಣ್ಣಿಸಿದ್ದಾರೆ. ಶ್ರೀರಾಮನನ್ನು ನಂಬಬೇಡಿ, ಕೃಷ್ಣನನ್ನು ನಂಬಬೇಡಿ ಎಂದು ಹೇಳುವವರು, ಭಗವದ್ಗೀತೆ, ಗೋವಿನ ಬಗ್ಗೆ ನಂಬಿಕೆ ಇಲ್ಲದವರು ರಾವಣನಂತೆ ಮಾರುವೇಷ ತೊಟ್ಟು ಸೀತೆಯನ್ನು ಅಪಹರಿಸಿದಂತೆ ಇಲ್ಲಿ ಮತವನ್ನು ಅಪಹರಿಸಲು ಬಂದಿದ್ದಾರೆ ಎಂದರು.

ಕಾಂಗ್ರೆಸ್ ಮತ್ತು ಸಮಾಜವಾದಿ ಪಕ್ಷದ ವಿರುದ್ಧ ವಾಗ್ದಾಳಿ ನಡೆಸಿದರು. ವರು ಬಲ್ಲಿಯಾ ಜಿಲ್ಲೆಯ ಶೇಖ್‌ಪುರ ಮತ್ತು ಬೈರಿಯಾದಲ್ಲಿ ಚುನಾವಣಾ ಸಭೆಗಳನ್ನು ಉದ್ದೇಶಿಸಿ ಮಾತನಾಡುತ್ತಿದ್ದರು.

ಸನಾತನ ಧರ್ಮವನ್ನು ಅವಮಾನಿಸುತ್ತಿದೆ



ಮತ್ತು ನಂಬಿಕೆಯೊಂದಿಗೆ ಆಟವಾಡುತ್ತಿದೆ ಎಂದು ಆರೋಪಿಸಿದ ಅವರು ಇಂಡಿಯಾ ಒಕ್ಕೂಟವನ್ನು ಟೀಕಿಸಿದರು ಮತ್ತು ಪ್ರಜಾಪ್ರಭುತ್ವವನ್ನು ದುರುಪಯೋಗ ಪಡಿಸಿಕೊಳ್ಳುವವರನ್ನು ಸೋಲಿಸಲು ಜನರಿಗೆ ಮನವಿ ಮಾಡಿದರು.

ಪುಟ 2

### ತೆಲುಗು ನಟಿಯರು ಭಾಗಿಯಾಗಿದ್ದ ರೇವ್ ಪಾರ್ಟಿ ಮೇಲೆ ಸಿಸಿಬಿ ದಾಳಿ

## ಡ್ರಗ್ಸ್, ಕೊಕೇನ್ ಪತ್ತೆ

**ಬೆಂಗಳೂರು:** ನಗರದ ಎಲೆಕ್ಟ್ರಾನಿಕ್ ಸಿಟಿ ಬಳಿಯ G.R.ಫಾರ್ಮ್ ಹೌಸ್ ನಲ್ಲಿ ನಡೆಯುತ್ತಿದ್ದ ರೇವ್ ಪಾರ್ಟಿ ಮೇಲೆ ಸಿಸಿಬಿ ತಂಡ ದಾಳಿ ನಡೆಸಿದೆ. ಬೆಳಗಿನ ಜಾವ 3 ಗಂಟೆಯಲ್ಲಿ ಸಿಸಿಬಿ ಪೊಲೀಸರು ದಾಳಿ ನಡೆಸಿದ್ದು ದಾಳಿ ವೇಳೆ ಪಾರ್ಟಿಯಲ್ಲಿ ಡ್ರಗ್ಸ್ ಪತ್ತೆಯಾಗಿದೆ. ಹಾಗೂ ಕೆಲ ತೆಲುಗು ನಟಿಯರು ಕೂಡ ಈ ಪಾರ್ಟಿಯಲ್ಲಿ ಭಾಗಿಯಾಗಿದ್ದರು ಎಂದು ತಿಳಿದುಬಂದಿದೆ.

ಕಾನ್ ಕಾರ್ಡ್ ಮಾಲೀಕ ಗೋಪಾಲ ರೆಡ್ಡಿ ಎಂಬುವವರ ಮಾಲಿಕತ್ವದ G.R.ಫಾರ್ಮ್ ಹೌಸ್ ನಲ್ಲಿ ಹೈದ್ರಾಬಾದ್ ಮೂಲದ ವಾಸು ಎಂಬಾತ ಪಾರ್ಟಿ ಆಯೋಜನೆ ಮಾಡಿದ್ದ. ಬರ್ತಡೇ ಪಾರ್ಟಿ ಹೆಸರಿನಲ್ಲಿ ನಡೆಯುತ್ತಿದ್ದ ಈ ಪಾರ್ಟಿ ತಡರಾತ್ರಿ 2 ಗಂಟೆಯಾದ್ರೂ ಮುಗಿದಿರಲಿಲ್ಲ. ಅವಧಿ ಮೀರಿ ಪಾರ್ಟಿ ಮಾಡಲಾಗುತ್ತಿತ್ತು. ಹೀಗಾಗಿ ಸಿಸಿಬಿಯ ಆಂಟಿ ನಾರ್ಕೊಟಿಕ್ ವಿಭಾಗದ ಅಧಿಕಾರಿಗಳು ದಾಳಿ ನಡೆಸಿದ್ದು ಪಾರ್ಟಿಯಲ್ಲಿ ಡ್ರಗ್ಸ್ ಪತ್ತೆಯಾಗಿದೆ.



### ಸರ್ಕಾರದಲ್ಲಿ ಹಣವಿಲ್ಲ ಅಂತಾ ಕೆಲಸ ನೀಡದ ಪಿಡಿಓ

## ಬೆಳ್ಳಂಬೆಳಗ್ಗೆ ಜನರಿಂದ ಪ್ರತಿಭಟನೆ

**ಗದಗ:** ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಕಾಯಿದೆ 2005 ಅಥವಾ MGNREGA, ಮೊದಲು ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಕಾಯಿದೆ ಅಥವಾ NREGA ಎಂದು ಕರೆಯಲಾಗುತ್ತಿತ್ತು. ಈ ಯೋಜನೆಯು ಗ್ರಾಮೀಣ ಭಾಗದಲ್ಲಿ ಕೆಲಸ ಮಾಡುವ ಹಕ್ಕನ್ನು ಖಾತರಿಪಡಿಸುವ ಗುರಿಯನ್ನು ಹೊಂದಿರುವ ಭಾರತೀಯ ಸಮಾಜ ಕಲ್ಯಾಣ ಕ್ರಮವಾಗಿದೆ. ನರೇಗಾ ಯೋಜನೆ ಅಡಿ ವರ್ಷಕ್ಕೆ ನೂರು ದಿನ ಕೆಲಸ ನೀಡಬೇಕೆಂಬ ಆದೇಶ ಇದೆ. ಆದರೆ ಇದಕ್ಕೂ ಡೋಂಟ್ ಕೇರ್ ಎನ್ನುತ್ತಾರೆ ಗ್ರಾಮೀಣ ಭಾಗದಲ್ಲಿ ಸರ್ಕಾರಿ ಅಧಿಕಾರಿಗಳು. ವಾರಾರಂಭದಲ್ಲಿ ಇಂದು ಬೆಳಗ್ಗೆ ಗದಗ ಜಿಲ್ಲೆಯಲ್ಲೂ ಇಂತಹ ಪ್ರಕರಣ ನಡೆದಿದ್ದು, ನರೇಗಾ ಯೋಜನೆಯಲ್ಲಿ ಕೆಲಸ ನೀಡದ ಗ್ರಾಮ ಪಂಚಾಯತ್ ಪಿಡಿಓ ವಿರುದ್ಧ ಗ್ರಾಮಸ್ಥರು ಆಕ್ರೋಶ ಹೊರಹಾಕಿ ಪ್ರತಿಭಟನೆ ನಡೆಸಿದ್ದಾರೆ.



ಗದಗ ಜಿಲ್ಲೆ ಮುಂಡರಗಿ ತಾಲೂಕಿನ ಜಂತ್ಲಿ-ಶಿರೂರು ಗ್ರಾಮದಲ್ಲಿ ಈ ಘಟನೆ ನಡೆದಿದೆ. ಇಂದು ಬೆಳ್ಳಂಬೆಳಗ್ಗೆ ರೊಚ್ಚಿಗೆದ್ದ ಜನರು ಗ್ರಾಮ ಪಂಚಾಯತ್ ಗೆ ಮುತ್ತಿಗೆ ಹಾಕಿದ್ದಾರೆ. ಗ್ರಾಮ ಪಂಚಾಯತ ಪಿಡಿಓ ವಸಂತ ವಿರುದ್ಧ ಕಾರ್ಮಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಭೀಕರ ಬರದಿಂದ ಜನರು ಕೆಲಸವಿಲ್ಲದೆ ಕಂಗಾಲಾಗಿದ್ದಾರೆ. ನರೇಗಾ ಯೋಜನೆ ಅಡಿಯಲ್ಲಿ ನೂರು ದಿನ ಕೆಲಸ ನೀಡಬೇಕೆಂಬ ಆದೇಶ ಇದ್ರೂ ಆ ಅಧಿಕಾರಿ ಡೋಂಟ್ ಕೇರ್ ಅಂದಿದ್ದಾರೆ.

### ಸರ್ವಿಸ್ ರೋಡ್ ನಲ್ಲಿ ಓಡಾಡುವ ವಾಹನಗಳಿಗೂ ಟೋಲ್ ಹಣ ಸಂಗ್ರಹ

## ಅನ್ಯಾಯದ ವಿರುದ್ಧ ಸವಾರರ ಆಕ್ರೋಶ

**ಬೆಂಗಳೂರು:** ಸಾಮಾನ್ಯವಾಗಿ ಹೆದ್ದಾರಿಯ ಟೋಲ್ ಗಳಲ್ಲಿನ ಸರ್ವಿಸ್ ರೋಡ್ ನಲ್ಲಿ ಓಡಾಡುವ ವಾಹನಗಳಿಗೆ ಹಣ ತೆಗೆದುಕೊಳ್ಳುವಂತಿಲ್ಲ. ಆದರೆ ಇಲ್ಲಿ ಸರ್ವಿಸ್ ರೋಡ್ ನಲ್ಲಿ ಹೋದ ವಾಹನಗಳಿಗೂ ಹಣ ತೆಗೆದುಕೊಳ್ಳಲಾಗುತ್ತಿದೆ. ಸರ್ವಿಸ್ ರೋಡ್ ನಲ್ಲಿ ಸಂಚಾರ ಮಾಡುವ ವಾಹನಗಳನ್ನು ಟೋಲ್ ನಲ್ಲಿರುವ ಕ್ಯಾಮರಾ ಗಳು ಕ್ಯಾಪ್ಚರ್ ಮಾಡುತ್ತದೆ. ಅದರಿಂದ ಟೋಲ್ ನವ್ರು ಮಾಹಿತಿ ತಗೊಂಡು ಹಣ ಕಟ್ ಮಾಡುತ್ತಿದ್ದಾರೆ ಎಂದು ಸವಾರರು ಆಕ್ರೋಶ ಹೊರ ಹಾಕಿದ್ದಾರೆ.

ಮೇ 17 ರಂದು ಬೆಳಿಗ್ಗೆ 8-15 ನಿಮಿಷಕ್ಕೆ ವಾಹನ ಮಾಲೀಕನೊಬ್ಬ ತನ್ನ ಮಗಳನ್ನು ಕಾಲೇಜಿಗೆ ಡ್ರಾಪ್ ಮಾಡಲು ಬೆಂಗಳೂರು ಟೂ ತುಮಕೂರು ರೋಡ್ ನಲ್ಲಿ ಬರುವ ಅಂಚೆಪಾಳ್ಯ ಸರ್ವಿಸ್ ರೋಡ್ ಮೂಲಕ ಹೋಗಿದ್ದಾರೆ.




ಸರ್ವಿಸ್ ರೋಡ್ ದಾಟಿ ಮುಂದೆ ಹೋಗಿ 20 ನಿಮಿಷ ಆದ ಮೇಲೆ ಅವರಿಗೆ ಟೋಲ್ ಹಣ ಕಟ್ಟಾಗಿರುವುದರ ಬಗ್ಗೆ ಮೇಸೆಜ್ ಬಂದಿದೆ. ಈ ವ್ಯಕ್ತಿ ಹೋಗಿರೋದು ಸರ್ವಿಸ್ ರೋಡ್ ನಲ್ಲಿ ಆದ್ರು ಹಣ ಕಟ್ ಆಗಿದೆ. ಮೂರು ಗಂಟೆಗಳ ನಂತರ ಟೋಲ್ ಹತ್ತಿರ ಹೋಗಿ ನಾನು ಸರ್ವಿಸ್ ರೋಡ್ ನಲ್ಲಿ ಹೋಗಿದ್ದೇನೆ. ಆದ್ರೂ ನನಗೆ ಹಣ ಕಟ್ ಆಗಿದೆ ಯಾಕೆ ಅಂತ ಕೇಳಿದ್ದಾರೆ. ಈ ಬಗ್ಗೆ ಪ್ರಶ್ನೆ ಮಾಡಿದಕ್ಕೆ ಹತ್ತು ಗುಂಡಾಗಳನ್ನು ಕರೆಸಿ ಅವಾಜ್ ಹಾಕಿಸಿದ್ರಂತೆ. ನಂತರ ಟೋಲ್ ಸಿಬ್ಬಂದಿಗಳು ಹೆಡ್ ಆಫೀಸ್‌ಗೆ ಹೋಗಿ ಕೇಳಿ ಎಂದಿದ್ದಾರೆ. 30 ರೂಪಾಯಿ ಕಟ್ ಆಗಿದ್ದಕ್ಕೆ 300 ರೂಪಾಯಿ ಡೀಸೆಲ್ ಖರ್ಚು ಮಾಡಿಕೊಂಡು ಹೆಡ್ ಆಫೀಸ್ ಗೆ ಹೋಗಿ ದೂರು ನೀಡಲು ಸಾಧ್ಯ ನಾ ಇದು ಮೊದಲ ಬಾರಿ ನಡೆದಿರೋದಲ್ಲ ಸಾಕಷ್ಟು ಬಾರಿ ಈ ರೀತಿ ಆಗುತ್ತದೆ ಎಂದು ಪ್ರಶ್ನೆ ಮಾಡಿದ್ದಾರೆ. ಹಣ ಕಟ್ ಆಗಿದ್ದ ಮೇಸೆಜ್ ಅನ್ನ ತೋರಿಸಿ ಕೇಳಿದ್ದಾರೆ. ಕಮ್ಮಿ ಅಂದರೆ ತಿಂಗಳಲ್ಲಿ 20 ಕ್ಕೂ ಹೆಚ್ಚು ಬಾರಿ ಈ ರೀತಿಯಲ್ಲಿ ಹಣ ಕಟ್ ಆಗುತ್ತದೆ. ಒಂದು ಸಲಕ್ಕೆ 30 ರೂಪಾಯಿ ಕಟ್ ಆಗುತ್ತದೆ ಎಂದು ಟ್ರಾವೆಲ್ಸ್ ಮಾಲೀಕ ಹೆಚ್ ಸಿ ಹರೀಶ್ ಅಳಲು ತೋಡಿಕೊಂಡಿದ್ದಾರೆ.

ಇನ್ನೂ ಸರ್ವಿಸ್ ರೋಡ್ ನಲ್ಲಿ ಸಂಚಾರ ಮಾಡುವ ವಾಹನಗಳನ್ನು ಟೋಲ್ ನಲ್ಲಿರುವ ಕ್ಯಾಮರಾಗಳು ಕ್ಯಾಪ್ಚರ್ ಮಾಡುತ್ತದೆ. ಅದರಿಂದ ಟೋಲ್ ನವ್ರು ಮಾಹಿತಿ ತಗೊಂಡು ಹಣ ಕಟ್ ಮಾಡುತ್ತಿದ್ದಾರೆ.

ಪುಟ 2

## ಶಾಸಕ ಹರೀಶ್ ಪೂಂಜಾ ವಿರುದ್ಧ ಎಫ್‌ಐಆರ್!

**ಮಂಗಳೂರು:** ಬಿಜೆಪಿ ಶಾಸಕ ಹರೀಶ್ ಪೂಂಜಾ ಮೇಲೆ ಎಫ್‌ಐಆರ್ ದಾಖಲಾಗಿದೆ. ಶಾಸಕರು ತನ್ನ ಬೆಂಬಲಿಗರ ಪರ ಪೊಲೀಸ್ ಠಾಣೆಯಲ್ಲಿ ಧರಣಿ ನಡೆಸಿದ್ದರು. ಅಲ್ಲದೇ ಪೊಲೀಸ್ ಠಾಣೆ ನಿಮ್ಮ ಅಪ್ಪಂದಾ ಎಂದು ಬೆಳ್ತಂಗಡಿ ಪಿಎಸ್‌ಐ ಮುರುಳಿಧರ್ ನಾಯ್ಕ್ ಗೆ ಧಮ್ಕಿ ಹಾಕಿದ್ದಾರೆ. ಈ ಹಿನ್ನೆಲೆಯಲ್ಲಿ ದಕ್ಷಿಣ ಕನ್ನಡ ಜಿಲ್ಲೆ ಬೆಳ್ತಂಗಡಿ ಪೊಲೀಸ್ ಠಾಣೆಯಲ್ಲಿ ಶಾಸಕರ ವಿರುದ್ಧ ಪ್ರಕರಣ ದಾಖಲಾಗಿದೆ.



**ನಡೆದಿದ್ದೇನು..?:** ಶಾಸಕ ಪೂಂಜಾ ಆಪ್ತರು ಅಕ್ರಮ ಕಲ್ಲುಗಣಿಕಾರಿಕೆ ನಡೆಸುತ್ತಿದ್ದ ಎಂಬ ಆರೋಪದ ಮೇಲೆ ಬೆಳ್ತಂಗಡಿಯ ಮೆಲಂತಬೆಟ್ಟುವಿನ ಕಲ್ಲಿನ ಕೋರೆಗೆ ತಹಶೀಲ್ದಾರ್ ನೇತೃತ್ವದ ಪೊಲೀಸ್ ತಂಡ ದಾಳಿ ನಡೆಸಿತ್ತು. ಈ ವೇಳೆ ಗುರುವಾಯನಕೆರೆಯ ಬಿಜೆಪಿಯ ಯುವಮೋರ್ಚಾದ ತಾಲೂಕು ಅಧ್ಯಕ್ಷ, ರೌಡಿಶೀಟರ್ ಶಶಿರಾಜ್ ಶೆಟ್ಟಿಯನ್ನು ಬಂಧಿಸಲಾಗಿತ್ತು. ಇದಕ್ಕೆ ಕೆರಳಿದ್ದ ಶಾಸಕರು ಹಾಗೂ ಬಿಜೆಪಿ ಕಾರ್ಯಕರ್ತರು ಬೆಳ್ತಂಗಡಿ ಠಾಣೆಯೆದುರು ರಾತ್ರೋರಾತ್ರಿ ಪ್ರತಿಭಟನೆ ನಡೆಸಿ ಪೊಲೀಸರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದರು. ಪ್ರತಿಭಟನೆಯ ವೇಳೆ ಅಮಾಯಕನ ಬಂಧನವಾಗಿದ್ದು, ಕೂಡಲೇ ಆತನನ್ನು ಬಿಡುಗಡೆಗೊಳಿಸಬೇಕೆಂದು ಆಗ್ರಹಿಸಿದರು. ಅಲ್ಲದೇ ಪ್ರತಿಭಟನೆ ವೇಳೆ ಪೊಲೀಸ್ ಹಾಗೂ ಇಲಾಖೆ ವಿರುದ್ಧ ಶಾಸಕರು ಅವಹೇಳನ ಮಾಡಿದ್ದರು. ಈ ಹಿನ್ನೆಲೆಯಲ್ಲಿ ಶಾಸಕ ಪೂಂಜಾ ವಿರುದ್ಧ ಬೆಳ್ತಂಗಡಿ ಪೊಲೀಸರು ಎಫ್ ಐಆರ್ ದಾಖಲಿಸಿಕೊಂಡರು.

## ಬೋಟ್ ಪಲ್ಟಿ 40 ಜನರ ರಕ್ಷಣೆ

**ಕಾರವಾರ:** ಪ್ರವಾಸಿಗರನ್ನು ಕರೆದೊಯ್ಯುತ್ತಿದ್ದ ಬೋಟ್ ಪಲ್ಟಿಯಾಗಿ ನೀರುಪಾಲಾಗುತಿದ್ದ ನಲವತ್ತು ಜನ ಪ್ರವಾಸಿಗರನ್ನು ಕರಾವಳಿ ಕಾವಲು ಪಡೆ ಹಾಗೂ ಸ್ಥಳೀಯ ರಕ್ಷಣಾ ತಂಡ ರಕ್ಷಣೆ ಮಾಡಿದ ಘಟನೆ ಉತ್ತರ ಕನ್ನಡ ಜಿಲ್ಲೆಯ ಕುಮಟಾ ತಾಲೂಕಿನ ತದಡಿ ಗ್ರಾಮದ ಮೂಡಂಗಿಯ ಸಮೀಪ ನಡೆದಿದೆ. ಮೂಡಂಗಿಯ ಗಣೇಶ, ರಮೇಶ ಎನ್ನುವವರಿಗೆ ಸೇರಿದ ಪ್ರವಾಸಿ ಬೋಟ್ ಇದಾಗಿದ್ದು, ಪ್ರವಾಸೋದ್ಯಮ ಇಲಾಖೆಯ ಅನುಮತಿ ಇಲ್ಲದೇ 28 ಜನರನ್ನು ಕರೆದೊಯ್ಯುವ ಬದಲು 40 ಜನರನ್ನು ಕರೆದೊಯ್ದಿದ್ದಾರೆ. ಮಿತಿಗಿಂತ ಹೆಚ್ಚಿನ ಜನರನ್ನು ದೋಣಿಯಲ್ಲಿರಿಸಿ ಕರೆದೊಯ್ದ ಕಾರಣ ಬೋಟ್ ಮಗುಚಿದೆ. ಅದೃಷ್ಟವಶಾತ್ ಬೋಟ್‌ನಲ್ಲಿದ್ದ ಪ್ರವಾಸಿಗರು ಲೈಫ್ ಜಾಕೆಟ್ ಹಾಕಿದ್ದರಿಂದ ಪ್ರಾಣಾಪಾಯದಿಂದ ಪಾರಾಗಿದ್ದಾರೆ.



# ಅಂಜಲಿ ಕುಟುಂಬಕ್ಕೆ ಜೋಶಿ ನೆರವು



**ಹುಬ್ಬಳ್ಳಿ:** ನಗರದ ವೀರಾಪುರ ಓಣಿ ನಿವಾಸಿ ಮೃತ ಅಂಜಲಿ ಅಂಬಿಗೇರ ಕುಟುಂಬಕ್ಕೆ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿಯವರು ವೈಯಕ್ತಿಕವಾಗಿ 50 ಸಾವಿರ ರೂ. ಚೆಕ್ ಅನ್ನು ಹಸ್ತಾಂತರಿಸಿದರು.

ಅಂಜಲಿ ಮನೆಗೆ ಭೇಟಿ ನೀಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾನು ಬಿಹಾರದಿಂದ ನೇರವಾಗಿ ಅಂಜಲಿ ಮನೆಗೆ ಭೇಟಿ ನೀಡಿದ್ದೇನೆ. ಅಂಜಲಿಯ ಅಜ್ಜಿಸಹೋದರಿಯರು ಹೇಳಿದ ಮಾತು ಕೇಳಿದ್ರೆ, ಭಯ ಹುಟ್ಟುತ್ತೆ. ಈ ಹಿಂದೆಯೂ ಆರೋಪಿ ಬಗ್ಗೆ ದೂರು ಕೇಳಿಬಂದಿದ್ದರೂ ನಿರ್ಲಕ್ಷ್ಯ ವಹಿಸಿದ್ದಾರೆ. ಆ ಸಂದರ್ಭ ಯಾವ ಅಧಿಕಾರಿಗಳಿದ್ದರು ಅವರ ಬಗ್ಗೆಯೂ ತನಿಖೆಯಾಗಬೇಕು ಎಂದು ಆಗ್ರಹಿಸಿದರು.

ನೇಹಾ ಹತ್ಯೆಯಾದಾಗ ಬಹೊದೊಡ್ಡ ಜನಾಂದೋಲನವಾಯಿತು. ಆ ವೇಳೆ ಸಿಎಂ ಹಾಗೂ ಗೃಹ ಸಚಿವರ ಹೇಳಿಕೆ ಕೃತ್ಯ ನಡೆಸುವವರಿಗೆ ಪ್ರೋತ್ಸಾಹ ನೀಡಿದಂತಾಯಿತು. ಸಿಎಂ ಅವರು ಹೊಣೆಗೇಡಿತನದ ಹೇಳಿಕೆ ನೀಡಿದ್ದರ ಪರಿಣಾಮ ಈ ಘಟನೆಯಾಗಿದೆ. ಸರ್ಕಾರಕ್ಕೆ ಗಂಭೀರತೆ ಇಲ್ಲ. ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದ ಮೇಲೆ 490 ಕೊಲೆ 600 ರೈತರ ಆತ್ಮಹತ್ಯೆಗಳಾಗಿವೆ. ಇದನ್ನ ಪ್ರಶ್ನೆ ಮಾಡಿದ್ರೆ ಈ ಹಿಂದೆ ಎಷ್ಟು ಪ್ರಕರಣಗಳಾಗಿವೆ ಅಂತಾ ಹುಡುಕುತ್ತಾರೆ ಎಂದು ಕಾಂಗ್ರೆಸ್ ಸರ್ಕಾರದ ವಿರುದ್ಧ ಕಿಡಿಕಾರಿದರು.

ಟ್ರಾನ್ಸ್ ಫರ್ ಗಳಲ್ಲಿ ಸಿಕ್ಕಾಪಟ್ಟೆ ಹಣ ತೆಗೆದುಕೊಳ್ತಾರೆ. ಗಾಂಜಾ ಅಫೀಮು ಚಟುವಟಿಕೆಗಳಿಗೆ ಕಡಿವಾಣ ಹಾಕಲು ಆಗ್ತಿಲ್ಲ. ಕಾನೂನು ಸುವ್ಯವಸ್ಥೆ ಸಂಪೂರ್ಣವಾಗಿ ಹದಗೆಟ್ಟಿದೆ. ಈ ಸರ್ಕಾರದಲ್ಲಿ ಹತ್ಯೆ ಹಾಗೂ ಆತ್ಮಹತ್ಯೆ ಸೇರಿದಂತೆ ಅಭಿವೃದ್ದಿಯ ಸಮಾಧಿಯಾಗಿದೆ. ಅನೇಕ ಬಡಜನರು ತಮ್ಮ ಮಕ್ಕಳನ್ನ ಕಾಲೇಜಿಗೆ ಶಾಲೆಗೆ ಕಳುಹಿಸಲು ಭಯಪಡುತ್ತಿದ್ದಾರೆ. ಯಾರೋ ಒಬ್ಬ ಅಧಿಕಾರಿ ಸಸ್ಪೆಂಡ್ ಮಾಡಿ ಕೈತೊಳೆದುಕೊಳ್ಳಬಾರದು. ಜನರು ಗಾಬರಿಗೊಂಡಿದ್ದಾರೆ ಎಂದರು.

ಜನರೇ ಬಂದು ಹೋರಾಟ ಮಾಡುವ ಪರಿಸ್ಥಿತಿಯನ್ನ ಸರ್ಕಾರ ತಂದುಕೊಳ್ಳಬಾರದು. ಡ್ರಗ್ಸ್, ಗಾಂಜಾ ಅಫೀಮು ಚಟುವಟಿಕೆಗಳಿಗೆ ಕಡಿವಾಣ ಹಾಕಬೇಕು. ಈ ಪ್ರಕರಣದ ಸಂಪೂರ್ಣ ತನಿಖೆಗೆ ಫಾಸ್ಟ್ ಟ್ರ್ಯಾಕ್ ಕೋರ್ಟ್ ತೆರೆಯಬೇಕು. ಈ ಘಟನೆಗಳಿಗೆ ಸರ್ಕಾರ ಹಾಗೂ ಗೃಹ ಸಚಿವರ ನಿರ್ಲಕ್ಷ್ಯವೇ ಕಾರಣ ಎಂದು ಜೋಶಿ ಗರಂ ಆದರು.



# 1.58 ಕೋಟಿ ರೂ. ಮೌಲ್ಯದ ಅಕ್ರಮ ಮರಳು ಜಪ್ತಿ

**ರಾಯಚೂರು:** ಜಿಲ್ಲೆಯಲ್ಲಿ ಅಕ್ರಮ ಮರಳು ದಂಧೆ ಅವ್ಯಾಹತವಾಗಿ ನಡೆಯುತ್ತಿದ್ದು, ಬೃಹತ್ ಅಕ್ರಮ ಮರಳು ಅಡ್ಡಾದ ಮೇಲೆ ಗಣಿ ಮತ್ತು ಭೂವಿಜ್ಞಾನ ಅಧಿಕಾರಿಗಳು ದಾಳಿ ಮಾಡಿದ್ದಾರೆ. ದಾಳಿ ವೇಳೆ ಸುಮಾರು 1,58,26,070 ರೂ. ಮೊತ್ತದ ಅಕ್ರಮ ಮರಳು ಜಪ್ತಿ ಮಾಡಲಾಗಿದೆ.

ಜಿಲ್ಲೆಯ ದೇವದುರ್ಗ ತಾಲೂಕಿನ ಚಿಕ್ಕರಾಯಕುಂಪಿಯಲ್ಲಿ ದಾಳಿ ನಡೆಸಿದ್ದು, ಅಕ್ರಮವಾಗಿ ಸಂಗ್ರಹಿಸಿಟ್ಟಿದ್ದ 20,033 ಮೆಟ್ರಿಕ್ ಟನ್ ನಷ್ಟು ಮರಳನ್ನು ಅಧಿಕಾರಿಗಳು ಸೀಜ್ ಮಾಡಿದ್ದಾರೆ. ಜಮೀನು ಮಾಲೀಕರಾದ ಚಂದ್ರಮ್ಮ ಹಾಗೂ ಇತರರ ವಿರುದ್ಧ ದೂರು ದಾಖಲಾಗಿದೆ.

ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಅಧಿಕಾರಿ ಪುಷ್ಪಲತಾ ಎಸ್ ಕವಲೂರು ನೇತೃತ್ವದಲ್ಲಿ ದಾಳಿ ನಡೆದಿದೆ. ಅಧಿಕಾರಿಗಳು ಗಬ್ಬೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ.

# ಅಪರಾಧಿ ಸ್ಥಾನದಲ್ಲಿರುವ ರಾಜ್ಯ ಸರ್ಕಾರವನ್ನು ಗಲ್ಲಿಗೇರಿಸಬೇಕು

**ಬೆಂಗಳೂರು:** ರಾಜ್ಯ ಸರ್ಕಾರ ಅಪರಾಧಿ ಸ್ಥಾನದಲ್ಲಿದ್ದು, ಅದನ್ನು ಗಲ್ಲಿಗೇರಿಸಬೇಕು ಎಂದು ವಿಪಕ್ಷ ನಾಯಕ ಆರ್.ಅಶೋಕ್ ವಾಗ್ದಾಳಿ ನಡೆಸಿದ್ದಾರೆ.

ಪದ್ಮನಾಭನಗರದಲ್ಲಿ ಮಾಜಿ ಪ್ರಧಾನಿ ಹೆಚ್.ಡಿ ದೇವೇಗೌಡರ ಮನೆಗೆ ಭೇಟಿ ನೀಡಿ ಅವರ ಹುಟ್ಟುಹಬ್ಬಕ್ಕೆ ಶುಭಕೋರಿ ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ್ದಾರೆ. ಈ ವೇಳೆ ಕರ್ನಾಟಕ ಕ್ರೈಂ ರಾಜ್ಯ ಆಗಿದೆ. ಕೊಲೆ, ಸುಲಿಗೆ, ಅತ್ಯಾಚಾರಕ್ಕೆಲ್ಲ ಈ ಸರ್ಕಾರ ಬೆಂಬಲ ಕೊಡ್ತಿದೆ. ಸಿದ್ದರಾಮಯ್ಯ ಸರ್ಕಾರ ಬಂದ್ರೆ ಮಳೆ ಬರಲ್ಲ, ಬರ ಬರುತ್ತೆ. ಆದರೆ ಅವರು ಸಿಎಂ ಆದಾಗ ಕೊಲೆಗಳ ಮಳೆ ಸುರಿಯುತ್ತದೆ. ಇಷ್ಟೇ ಅಲ್ಲದೇ ರೌಡಿಗಳಿಗೆ, ಕೊಲೆಗಡುಕರಿಗೆ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಹಬ್ಬ. ನೇಹಾ ಹತ್ಯೆ ಬೆನ್ನಲ್ಲೇ ಅಲ್ಲಿ ಅಂಜಲಿ ಹತ್ಯೆಯಾಗಿದೆ. ಸರ್ಕಾರ ಸತ್ತು, ಕೋಮಾ ಸ್ಥಿತಿಯಲ್ಲಿದೆ ಎಂದು ಅವರು ಕಿಡಿಕಾರಿದ್ದಾರೆ.

ದೇವರಾಜೇಗೌಡ ಅವರು ಡಿಕೆಶಿ ವಿರುದ್ಧ 100 ಕೋಟಿ ರೂ. ಆಫರ್ ಆರೋಪದ ವಿಚಾರವಾಗಿ ಪ್ರತಿಕ್ರಿಯಿಸಿದ ಅವರು, ಅವರ ಬಳಿ ಸಾಕ್ಷ್ಯ ಇದೆ ಎಂದು ಅವರನ್ನು ಬಂಧಿಸಲಾಗಿದೆ. ಅವರು ಹೊರಗಿದ್ರೆ, ದಾಖಲೆ ಬಿಡುಗಡೆ ಮಾಡ್ತಾರೆ ಎಂಬ ಭಯ ಸರ್ಕಾರಕ್ಕಿದೆ. ದೇವರಾಜೇಗೌಡ ಅವರು ಆರೋಪಿಸಿರುವುದು ಎಲ್ಲಾ ನೂರಕ್ಕೆ ನೂರು ಸತ್ಯ. ಅದಕ್ಕೆಲ್ಲ ಅವರ ಬಳಿ ಸಾಕ್ಷಿ ಇದೆ ಎನಿಸುತ್ತಿದೆ. ಈಗಾಗಲೇ ಡಿಕೆಶಿ ಮಾತಾಡಿದ ದಾಖಲೆ ಸಹ ಬಿಡುಗಡೆ ಮಾಡಿದ್ದಾರೆ. ಅವರನ್ನು ಬಿಟ್ರೆ ಸರಣಿ ದಾಖಲೆ ಬಿಡ್ತಾರೆ. ಸರ್ಕಾರಕ್ಕೆ ಮುಜುಗರ ಆಗುತ್ತೆ ಎಂದು ಬಂಧಿಸಿದ್ದಾರೆ. ಇದೆಲ್ಲ ಮಾಧ್ಯಮಗಳಲ್ಲಿ ಬರಬಾರದು ಎನ್ನುವುದು ಡಿಕೆಶಿ ಉದ್ದೇಶವಾಗಿದೆ. ಬೆಂಕಿ ಇಲ್ಲದೇ ಹೊಗೆ ಆಡಲ್ಲ ಎಂದು ಕುಟುಕಿದ್ದಾರೆ.

ದೇವರಾಜೇಗೌಡ ಅವರು ಮಾಡಿರುವ ಆರೋಪ ಬಗ್ಗೆ ಎಸ್‌ಐಟಿ ತನಿಖೆ ನಡೆಸೋದಿಲ್ಲ. ಎಸ್‌ಐಟಿ ಸರ್ಕಾರದ ಪ್ರಾಯೋಜಕತ್ವದಲ್ಲಿ ತನಿಖೆ ನಡೆಸುತ್ತಿದೆ. ಅದಕ್ಕಾಗಿಯೇ ಸಿಬಿಐ ತನಿಖೆಗೆ ಪ್ರಕರಣ ವಹಿಸಬೇಕು. ನಿವೃತ್ತ ಜಡ್ಜ್‌ಗಳ ಮೂಲಕ ತನಿಖೆ ನಡೆಸಲಿ ಎಂದು ಅವರು ಆಗ್ರಹಿಸಿದ್ದಾರೆ.

ಸಿಬಿಐಗೆ ಕೊಟ್ರೆ ಸತ್ಯ ಹೊರಗೆ ಬರುತ್ತೆ ಎಂದು ಕೊಡ್ತಿಲ್ಲ. ಸಿಬಿಐ ತನಿಖೆ ಜಾರ್ಜ್ ವಿಚಾರದಲ್ಲೂ ನಡೆದಿತ್ತು. ತಪ್ಪಿಲ್ಲ ಎಂದರೆ ತಪ್ಪಿಲ್ಲ ಎಂದೇ ವರದಿ ಕೊಡ್ತಾರೆ. ಎಸ್‌ಐಟಿ ಮೇಲೆ ನಮಗೆ ನಂಬಿಕೆ ಇಲ್ಲ. ಕಾರ್ತಿಕ್‌ಗೆ ಬೇಲ್ ಕ್ಯಾನ್ಸಲ್ ಆದ್ರೂ ಯಾಕೆ ಬಂಧಿಸ್ತಿಲ್ಲ? ರೇವಣ್ಣರನ್ನು ಬಂಧಿಸಿದ್ರು, ತಪ್ಪು ಯಾರೇ ಮಾಡಿದ್ರೂ ಶಿಕ್ಷೆ ಆಗಲಿ, ಇದು ಪ್ರಜ್ವಲ್‌ಗೂ ಅನ್ವಯವಾಗುತ್ತದೆ. ಹಾಗೆಯೇ ಪೆನ್ ಡ್ರೈವ್ ಹಂಚಿದವರಿಗೂ ಶಿಕ್ಷೆ ಆಗಬೇಕು. ಈ ಕೇಸ್ ಮುಚ್ಚಿ ಹಾಕಲು ಸಂಚು ಮಾಡಿದ್ದಾರೆ ಎಂದು ಅವರು ಆರೋಪಿಸಿದ್ದಾರೆ.

ಸುರ್ಜೇವಾಲಾ, ಸಿಎಂ, ಡಿಕೆಶಿ ಸೇರಿ ಈ ಮಾಸ್ಟರ್ ಪ್ಲ್ಯಾನ್ ಮಾಡಿದ್ದಾರೆ. ಒಕ್ಕಲಿಗರನ್ನು ಮುಗಿಸಬೇಕು ಎಂಬ ಸ್ಕೀಂನ್ನು ಕಾಂಗ್ರೆಸ್ ಹಾಕಿಕೊಂಡಿದೆ. ಈಗಾಗಲೇ ಸಿದ್ದರಾಮಯ್ಯ ಕುರುಬ ನಾಯಕರನ್ನ ಮುಗಿಸಿದ್ದಾರೆ ಎಂದು ಟೀಕಿಸಿದ್ದಾರೆ. ಇದೇ ವೇಳೆ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಒಂದು ವರ್ಷವಾದರೂ ಅಭಿವೃದ್ಧಿ ಕಾರ್ಯಗಳು ನಡೆದಿಲ್ಲವೆಂದು ಬೇಸರ ವ್ಯಕ್ತಪಡಿಸಿದ್ದಾರೆ.

# ಯುವತಿಯನ್ನು ತೊಡೆಯ ಮೇಲೆ ಕೂರಿಸಿಕೊಂಡು ಯುವಕ ಜಾಲಿ ರೈಡ್!

**ಬೆಂಗಳೂರು:** ಪ್ರಿಯತಮೆಯನ್ನು ಟ್ಯಾಂಕ್ ಮೇಲೆ ಕೂರಿಸಿಕೊಂಡು ಕಿಸ್ ಮಾಡುತ್ತಲೇ ಬೈಕ್ ಓಡಿಸಿದ ಪ್ರಕರಣಗಳನ್ನು ಈ ಹಿಂದೆ ಓದಿದ್ದೀರಿ. ಇದೀಗ ಯುವಕನೊಬ್ಬ ಯುವತಿಯನ್ನು ತನ್ನ ತೊಡೆಯ ಮೇಲೆ ಕೂರಿಸಿಕೊಂಡು ಜಾಲಿ ರೈಡ್ ಹೋದ ಘಟನೆಯೊಂದು ನಡೆದಿರುವ ಬಗ್ಗೆ ಬೆಳಕಿಗೆ ಬಂದಿದೆ.

ಈ ಗಟನೆ ಬೆಂಗಳೂರಿನ ಯಲಹಂಕದ ಏರ್ ಪೋರ್ಟ್ ರಸ್ತೆಯ ಯಲಹಂಕ ಫ್ಲೈ ಓವರ್ ಮೇಲೆ ನಡೆದಿದೆ ಎನ್ನಲಾಗಿದೆ. ಇದರ ವೀಡಿಯೋವನ್ನು ವಾಹನ ಸವಾರರೊಬ್ಬರು ವೀಡಿಯೋ ಮಾಡಿದ್ದು, ಸದ್ಯ ಈ ವೀಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ಸಖತ್ ವೈರಲ್ ಆಗುತ್ತಿದೆ.

ಮೇ 17 ರಂದು ರಾತ್ರಿ ಯುವಕ ಹೆಲ್ಮೆಟ್ ಧರಿಸದೇ ಅಜಾಗರೂಕತೆಯಿಂದ ಬೈಕ್ ಚಾಲನೆ ಮಾಡಿದ್ದಾನೆ. ಅಲ್ಲದೇ ಯುವತಿಯನ್ನು ತೊಡೆಯ ಮೇಲೆ ಕೂರಿಸಿಕೊಂಡು ಯುವಕ ಡೆಡ್ಲಿ ಬೈಕ್ ರೈಡ್ ಮಾಡಿದ್ದಾನೆ. ಈ ಘಟನೆ ಯಲಹಂಕ ಸಂಚಾರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದ್ದು, ಪೊಲೀಸರು ಇನ್ನೂ ಇಬ್ಬರ ಮೇಲೆ ಕ್ರಮ ಕೈಗೊಂಡಿಲ್ಲ. ಹೀಗಾಗಿ ಜೋಡಿ ವಿರುದ್ಧ ಕ್ರಮ ಕೈಗೊಳ್ಳುವಂತೆ ಸಾರ್ವಜನಿಕರು ಆಗ್ರಹಿಸಿದ್ದಾರೆ.



## ಐದನೇ ಹಂತದ ಮತದಾನ

ಈ ಹಂತದಲ್ಲಿ ಉತ್ತರ ಪ್ರದೇಶದ 14, ಮಹಾರಾಷ್ಟ್ರದ 13, ಪಶ್ಚಿಮ ಬಂಗಾಳದ 7, ಒಡಿಶಾದ 5, ಬಿಹಾರದ 5, ಜಾರ್ಖಂಡ್‌ನ 3, ಜಮ್ಮು ಮತ್ತು ಕಾಶ್ಮೀರದ ಒಂದು ಮತ್ತು ಲಡಾಖ್‌ನ ಒಂದು ಸ್ಥಾನಗಳಿಗೆ ಮತದಾನ ನಡೆಯುತ್ತಿದೆ. ಈ ಹಂತದಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್, ಸ್ಮೃತಿ ಇರಾನಿ, ರಾಹುಲ್ ಗಾಂಧಿ, ಚಿರಾಗ್ ಪಾಸ್ವಾನ್, ರಾಜೀವ್ ಪ್ರತಾಪ್ ರೂಡಿ, ರೋಹಿಣಿ ಆಚಾರ್ಯ, ಒಮರ್ ಅಬ್ದುಲ್ಲಾ ಮತ್ತು ಪಿಯೂಷ್ ಗೋಯಲ್ ಅವರಂತಹ ಹಿರಿಯ ನಾಯಕರನ್ನು ಒಳಗೊಂಡಿದ್ದು, ಅವರ ಕ್ಷೇತ್ರಗಳಲ್ಲಿ ಮತದಾನ ನಡೆಯುತ್ತಿದೆ.

ಚುನಾವಣಾ ಆಯೋಗದ ಪ್ರಕಾರ, ಈ ಹಂತದಲ್ಲಿ 8.95 ಕೋಟಿ ಮತದಾರರು ತಮ್ಮ ಹಕ್ಕು ಚಲಾಯಿಸಲಿದ್ದಾರೆ. ಒಟ್ಟು 94372 ಮತಗಟ್ಟೆಗಳನ್ನು ರಚಿಸಲಾಗಿದ್ದು, ಇದರಲ್ಲಿ 9.47 ಲಕ್ಷ ಮತಗಟ್ಟೆ ಅಧಿಕಾರಿಗಳು ಮತದಾನ ಪ್ರಕ್ರಿಯೆ ನಡೆಸಲಿದ್ದಾರೆ. ಅನಿಲ್ ಅಂಬಾನಿ ಮುಂಬೈನ ಮತಗಟ್ಟೆಯೊಂದರಲ್ಲಿ ಮತದಾನಕ್ಕಾಗಿ ಸರತಿ ಸಾಲಿನಲ್ಲಿ ನಿಂತು ಮತದಾನ ಆರಂಭಕ್ಕಾಗಿ ಕಾಯುತ್ತಿರುವ ದೃಶ್ಯ ಕಂಡುಬಂತು.

ಇಂದು ಜಮ್ಮು ಮತ್ತು ಕಾಶ್ಮೀರದ ಬಾರಾಮುಲ್ಲಾ ಮತದಾರರು ಪ್ರಜಾಪ್ರಭುತ್ವದ ಆಚರಣೆಯಲ್ಲಿ ಮತ ಚಲಾಯಿಸಲಿದ್ದಾರೆ. ದಶಕಗಳಿಂದ ನಿಮ್ಮ ಹಕ್ಕುಗಳನ್ನು ಕಸಿದುಕೊಂಡಿರುವ ಕುಟುಂಬಗಳಿಗೆ ಉತ್ತರ ನೀಡಲು ಗರಿಷ್ಠ ಸಂಖ್ಯೆಯಲ್ಲಿ ಮತ ಚಲಾಯಿಸುವಂತೆ ನಾನು ಇಲ್ಲಿನ ನಿವಾಸಿಗಳಲ್ಲಿ ಮನವಿ ಮಾಡುತ್ತೇನೆ . ನಿಮ್ಮ ಸಂಸದೀಯ ಕ್ಷೇತ್ರದಲ್ಲಿ ದೇಶದ ಏಕತೆ , ಸಮಗ್ರತೆ ಮತ್ತು ನಿಮ್ಮ ಪ್ರದೇಶದ ಅಭಿವೃದ್ಧಿಗೆ ಮೀಸಲಾದ ಪ್ರತಿನಿಧಿಯನ್ನು ಆಯ್ಕೆ ಮಾಡಿ. ನಿಮ್ಮ ಒಂದು ಮತವು ಜಮ್ಮು ಮತ್ತು ಕಾಶ್ಮೀರದ ಮಕ್ಕಳ ಶಾಂತಿ ಮತ್ತು ಉಜ್ವಲ ಭವಿಷ್ಯದ ಅಡಿಪಾಯವನ್ನು ಬಲಪಡಿಸುತ್ತದೆ ಎಂದು ಅಮಿತ್ ಶಾ ಪೋಸ್ಟ್? ಮಾಡಿದ್ದಾರೆ.

ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರು ಎಕ್ಸ್ ನಲ್ಲಿ ಪೋಸ್ಟ್ ಮಾಡುವ ಮೂಲಕ ಜನರಲ್ಲಿ ವಿಶೇಷ ಮನವಿ ಮಾಡಿದ್ದಾರೆ. ಅವರು ತಮ್ಮ ಪೋಸ್ಟ್‌ನಲ್ಲಿ, ಗೌರವಾನ್ವಿತ ಮತದಾರರೇ, ನಾಳೆ ಐದನೇ ಹಂತದ ಲೋಕಸಭೆ ಚುನಾವಣೆ. ನೀವೆಲ್ಲರೂ ಮತದಾನ ಮಾಡಬೇಕು ಎಂಬುದು ನನ್ನ ಮನವಿ. ನಿಮ್ಮ ಅಮೂಲ್ಯವಾದ ಮತವು ಬಲವಾದ ಸುರಕ್ಷಿತ ಭಾರತದ ಆಧಾರವಾಗುತ್ತದೆ ಮತ್ತು ಅಭಿವೃದ್ಧಿ ಹೊಂದಿದ ಭಾರತದ ಸಂಕಲ್ಪವನ್ನು ಸಾಕಾರಗೊಳಿಸುತ್ತದೆ ಎಂದು ಯೋಗಿ ಆದಿತ್ಯನಾಥ್? ನಿನ್ನೆ ಪೋಸ್ಟ್ ಮಾಡಿದ್ದರು.

### ಮತದಾನ

ಅಷ್ಟೇ ಅಲ್ಲ ಪ್ರತಿ ಬಾರಿಯೂ ವಿಡಿಯೋ ಮಾಡಿ ಸಾಮಾಜಿಕ ಜಾಲತಾಣಗಳಲ್ಲಿ ಅಪ್ಲೋಡ್ ಮಾಡಿದ್ದಾರೆ.

ಈ ವಿಡಿಯೋ ವೈರಲ್ ಆಗಿದ್ದು, ಸಮಾಜವಾದಿ ಪಕ್ಷದ ಮುಖ್ಯಸ್ಥ ಅಖಿಲೇಶ್ ಯಾದವ್ ಅವರು ಟ್ವಿಟ್ಟರ್‌ನಲ್ಲಿ ವೀಡಿಯೊವನ್ನು ಹಂಚಿಕೊಂಡಿದ್ದಾರೆ ಮತ್ತು ಅದರ ಮೇಲೆ ಕ್ರಮಕ್ಕೆ ಒತ್ತಾಯಿಸಿದ್ದಾರೆ.

ಉತ್ತರ ಪ್ರದೇಶ ಮುಖ್ಯ ಚುನಾವಣಾಧಿಕಾರಿ ನವದೀಪ್ ರಿನ್ವಾ ಅವರು ತಕ್ಷಣ ಕಾರ್ಯಪ್ರವೃತ್ತರಾಗಿ ಯುವಕನನ್ನು ಬಂಧಿಸಲಾಗಿದೆ ಎಂದು ತಿಳಿಸಿದರು. ಚುನಾವಣಾ ತಂಡದ ಎಲ್ಲ ಸದಸ್ಯರನ್ನು ಅಮಾನತುಗೊಳಿಸಲಾಗಿದ್ದು, ಮರು ಮತದಾನಕ್ಕೆ ಶಿಫಾರಸು ಮಾಡಲಾಗಿದೆ. ಮೇ 7 ರಂದು ಮೂರನೇ ಹಂತದ ಅಡಿಯಲ್ಲಿ ಇಟಾಹ್‌ನಲ್ಲಿ ಮತದಾನ ನಡೆಯಿತು. 2 ನಿಮಿಷ 20 ಸೆಕೆಂಡ್‌ನ ಈ ವಿಡಿಯೋದಲ್ಲಿ ಈ ಯುವಕ ಪ್ರತಿ ಬಾರಿಯೂ ಮತದಾನ ಮಾಡಿದ್ದಾನೆ. ಅವರು ಕಮಲದ ಚಿಹ್ನೆಯ ಮುಂಭಾಗದಲ್ಲಿರುವ ಗುಂಡಿಯನ್ನು ಒತ್ತುವುದನ್ನು ಕಾಣಬಹುದು.

ಚುನಾವಣಾ ಆಯೋಗ ಬಿಜೆಪಿಯ ಹಿತಾಸಕ್ತಿಯಂತೆ ಕೆಲಸ ಮಾಡುತ್ತಿದೆ, ಇದೆಲ್ಲದರ ಬಗ್ಗೆ ತನಿಖೆ ನಡೆಸಿ ಕ್ರಮ ಕೈಗೊಳ್ಳಲಾಗುವುದು ಎಂದು ಅಖಿಲೇಶ್ ಪೋಸ್ಟ್ ಮಾಡಿದ್ದಾರೆ.

### ಮೊಟ್ಟೆ ದಾಳಿ

**ಜೆಡಿಎಸ್ ಪ್ರತಿಭಟನೆ:** ಆಡಿಯೋ ಸಂಭಾಷಣೆಯೊಂದರಲ್ಲಿ

## ಮೊದಲನೇ ಪುಟದಿಂದ...

ಮಾಜಿ ಪ್ರಧಾನಿ ಹೆಚ್ ಡಿ ದೇವೇಗೌಡರ ಬಗ್ಗೆ ಮಾಜಿ ಸಂಸದ ಎಲ್ ಆರ್ ಶಿವರಾಮೇಗೌಡ ಅವರು ಅವಹೇಳನಕಾರಿಯಾಗಿ ಮಾತನಾಡಿದ್ದಾರೆ ಎನ್ನಲಾಗಿದೆ. ಇದನ್ನು ಖಂಡಿಸಿ ಇಂದು (ಮೇ 20) ಜೆಡಿಎಸ್ ನಾಯಕರು ಬೃಹತ್ ಪ್ರತಿಭಟನೆ ಮಾಡಲಿದ್ದಾರೆ.

ಎಲ್ .ಆರ್ . ಶಿವರಾಮೇಗೌಡರನ್ನು ಬಂಧಿಸಿ ಸೂಕ್ತ ತನಿಖೆ ನಡೆಸಬೇಕು. ಡಿಸಿಎಂ ಡಿಕೆ ಶಿವಕುಮಾರ್ ಅವರನ್ನು ವಿಚಾರಣೆಗೊಳಪಡಿಸಬೇಕು. ಪೆನ್ ಡ್ರೈವ್ ಕೇಸ್ ಸಿಬಿಐಗೆ ನೀಡಬೇಕು ಎಂದು ಆಗ್ರಹಿಸಿ ಬೆಳಗ್ಗೆ 11ಕ್ಕೆ ಬೆಂಗಳೂರಿನ ಫ್ರೀಡಂಪಾರ್ಕ್ ನಲ್ಲಿ ಧರಣಿ ನಡೆಸಲಿದ್ದಾರೆ.

### ವರ್ಷ ಪೂರೈಸಿದ ಸರ್ಕಾರ

ಈ ಅಸಮಾಧಾನ ನಡುವೆಯೂ ಸರ್ಕಾರ ಗ್ಯಾರಂಟಿ ಅನುಷ್ಠಾನ ಕೈ ಬಿಡದೇ ಜಾರಿ ಮಾಡಿಯೇ ಬಿಟ್ಟಿತು. ನುಡಿದಂತೆ ನಡೆದಿದ್ದೇವೆ ಎಲ್ಲ ಗ್ಯಾರಂಟಿ ಜಾರಿ ಮಾಡಿದ್ದೇವೆ ಅನ್ನೋದು ಸರ್ಕಾರದ ಹೆಗ್ಗಳಿಕೆಯಾಗಿದೆ. ಲೋಕಸಭೆ ಚುನಾವಣೆಯಲ್ಲೂ ಸಹ ಇದೇ ಗ್ಯಾರಂಟಿ ಕೈ ಹಿಡಿದಿದೆ ಎಂಬ ವಿಶ್ವಾಸ ಕಾಂಗ್ರೆಸ್ ಸರ್ಕಾರಕ್ಕೆ ಇದೆ.

**ಹೆಚ್ಚುವರಿ ಅಕ್ಕಿಗಾಗಿ ಪರದಾಟ:** ಚುನಾವಣೆ ಪೂರ್ವದಲ್ಲಿ ಕಾಂಗ್ರೆಸ್ ಅನ್ನ ಭಾಗ್ಯ ಯೋಜನೆ ಅಡಿಯಲ್ಲಿ ರಾಜ್ಯ ಸರ್ಕಾರ 10 ಕೆಜಿ ಅಕ್ಕಿ ನೀಡುತ್ತೇವೆ ಎಂದು ಭರವಸೆ ನೀಡಿತ್ತು. ಆದರೆ ಅಧಿಕಾರಕ್ಕೆ ಬಂದ ಮೇಲೆ ಸರ್ಕಾರದ ಉಗ್ರಾಣದಲ್ಲಿ ಹೆಚ್ಚುವರಿ ಅಕ್ಕಿ ಇರಲಿಲ್ಲ. (ಐದು ಕೆಜಿ ಅಕ್ಕಿ ಮೊದಲೆ ನೀಡಲಾಗುತ್ತಿದ್ದು, ಐದು ಕೆಜಿ ಹೆಚ್ಚುವರಿ ನೀಡುವುದು) ಇದರಿಂದ ಹೆಚ್ಚುವರಿ ಅಕ್ಕಿ ಹೊಂದಿಸಲು ಕಷ್ಟವಾಯಿತು. ಹೀಗಾಗಿ ರಾಜ್ಯ ಸರ್ಕಾರ ಅಕ್ಕಿಗಾಗಿ ಕೇಂದ್ರ ಸರ್ಕಾರದ ಮೊರೆ ಹೋಯಿತು. ಆದರೆ ಕೇಂದ್ರ ಸರ್ಕಾರ ನೀಡಲು ನಿರಾಕರಿಸಿತು. ಬಳಿಕ ವಿವಿಧ ರಾಜ್ಯದ ಸಿಎಂಗಳೊಂದಿಗೆ ಮಾತನಾಡಿದರೂ, ಏನು ಪ್ರಯೋಜನವಾಗಲಿಲ್ಲ. ಬಳಿಕ ಐದು ಕೆಜಿ ಅಕ್ಕಿ ಬದಲಾಗಿ, ಹಣವನ್ನು ಫಲಾನುಭವಿಗಳ ಖಾತೆಗೆ ಹಾಕಲು ಆರಂಭಿಸಿದೆ.

ಬರಗಾಲದ ಹಿನ್ನೆಲೆಯಲ್ಲಿ ಕೇಂದ್ರದ ಜೊತೆಗಿನ ಸಂಘರ್ಷ ಮತ್ತೆ ಶುರುವಾಯಿತು. ಬರ ಪರಿಹಾರ ವಿಚಾರವಾಗಿ ಕೇಂದ್ರ ಸರ್ಕಾರದ ವಿರುದ್ಧ ರಾಜ್ಯ ಸರ್ಕಾರ ಸಂಘರ್ಷಕ್ಕೆ ಇಳಿಯಿತು. ಕೇಂದ್ರ ಸರ್ಕಾರ ಮಲತಾಯಿ ಧೋರಣೆ ಮಾಡುತ್ತಿದೆ ಅಂತ ರಾಜ್ಯ ಸರ್ಕಾರ ಹೊರಟ ನಡೆಸಿತು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ಇಡೀ ಸಂಪುಟವನ್ನೇ ದೆಹಲಿ ತನಕ ಕರೆದುಕೊಂಡು ಹೋಗಿ ಕೇಂದ್ರ ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸಿದರು.

ಇನ್ನೂ ಒಂದು ಹೆಜ್ಜೆ ಮುಂದೆ ಹೋಗಿ ಕೇಂದ್ರದ ವಿರುದ್ಧ ಸುಪ್ರೀಂ ಕೋರ್ಟ್ ಮೊರೆ ಹೋಯಿತು. ಸುಪ್ರಿಂ ಕೋರ್ಟ್ ನಲ್ಲಿ ಸಮರ್ಥ ವಾದ ಮಂಡಿಸಿ ಚುನಾವಣೆ ನಡುವೆಯೂ ಪರಿಹಾರದ ಹಣ ಪಡೆದುಕೊಳ್ಳುವಲ್ಲಿ ರಾಜ್ಯ ಸರ್ಕಾರ ಯಶಸ್ವಿಯಾಯಿತು.

**ಪಾಕ್ ಪರ ಘೋಷಣೆ:** ರಾಜ್ಯಸಭೆಗೆ ನಡೆದ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಡಾ. ಸೈಯದ್ ನಾಸಿರ್ ಹುಸೇನ್ ಗೆಲುವಿನ ಸಂಭ್ರಮಾಚರಣೆ ವೇಳೆ ವಿಧಾನಸೌದದಲ್ಲಿ ಪಾಕಿಸ್ತಾನ ಪರ ಘೋಷಣೆ ಕೂಗಲಾಗಿತ್ತು. ಇದು ಸಹಜವಾಗಿ ವಿಪಕ್ಷಗಳಿಗೆ ಅಸ್ತ್ರವಾಗಿ ಪರಿಣಮಿಸಿದ್ದು, ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದವು. ಪಾಕಿಸ್ತಾನ ಪರ ಘೋಷಣೆ ಕೂಗಿಯೇ ಇಲ್ಲ ಎಂದು ಕಾಂಗ್ರೆಸ್ ನಾಯಕರು ಬೇಳಿಕೆ ನೀಡಿದರು. ಇದಾದ ಬೆನ್ನಲ್ಲೇ ತನಿಖೆ ವರದಿ ಬಂದಿದ್ದು, ಪಾಕಿಸ್ತಾನ ಪರ ಘೋಷಣೆ ಕೂಗಿರುವುದು ಸತ್ಯ ಅಂತ ಬಯಲಾಯಿತು. ಇದು ಸಹಜವಾಗಿ ಸರ್ಕಾರಕ್ಕೆ ಮುಜುಗರ ಉಂಟು ಮಾಡಿತು.

**ರಾಮೇಶ್ವರಂ ಕೆಫೆ ಬ್ಲಾಸ್ಟ್ :** ಪಾಕ್ ಪರ ಘೋಷಣೆ ಮಾಸುವ ಮುನ್ನವೇ ಬೆಂಗಳೂರಿನ ವೈಟ್ ಫೀಲ್ಡ್ ನಲ್ಲಿನ ರಾಮೇಶ್ವರಂ ಕೆಫೆಯಲ್ಲಿ ಬಾಂಬ್ ಸ್ಫೋಟವಾಯಿತು. ಇದು ವ್ಯಾಪಾರ ಪೈಪೋಟಿಗಾಗಿ ನಡೆದ ಬ್ಲಾಸ್ಟ್ ಎಂದು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಹೇಳಿಕೆ ನೀಡಿದರು. ಈ ಪ್ರಕರಣ ಎನ್ ಐಗೆ ಹಸ್ತಾಂತರ ಆಗುತ್ತಿದ್ದಂತೆ ಈ ಕೃತ್ಯದಲ್ಲಿ ಉಗ್ರರ ಕೈವಾಡ ಇರುವುದು ತಿಳಿಯುತ್ತಿದ್ದಂತೆ ರಾಜ್ಯ ಸರ್ಕಾರ ಮತ್ತೊಮ್ಮೆ ಮುಜುಗರ ಪಡುವಂತಾಯಿತು.

**ಕಾನೂನು ಸುವ್ಯವಸ್ಥೆ:** ಬೆಳಗಾವಿಯ ವಂಟಮೂರಿಯಲ್ಲಿ ನಡೆದ ಮಹಿಳೆಯ ಬೆತ್ತಲೆ ಮೆರವಣಿಗೆ, ಹಾವೇರಿಯಲ್ಲಿ ಸಾಮೂಹಿಕ ಅತ್ಯಾಚರ, ಹುಬ್ಬಳ್ಳಿಯ ನೇಹಾ ಹಿರೇಮಠ, ಅಂಜಲಿ ಅಂಬಿಗೇರ ಮತ್ತು ಕೊಡಗಿನ ಎಸ್ ಎಸ್ ಎಲ್ ಸಿ ವಿದ್ಯಾರ್ಥಿನಿ ಮೀನಾ ಕೊಲೆಗಳು ರಾಜ್ಯ ಸರ್ಕಾರದ ಕಾನೂನು ಸುವ್ಯವಸ್ಥೆಗೆ ಹಿಡಿದ ಕೈಗನ್ನಡಿ ಎಂದು ವಿರೋಧ ಪಕ್ಷಗಳು ಆರೋಪ ಮಾಡುತ್ತಿದೆ. ಈ ಒಂದು ವರ್ಷದ ಅಪರಾಧ ಪ್ರಕರಣಗಳು ಹೆಚ್ಚಾಗಿವೆ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ ಎಂದು ಬಿಜೆಪಿ ದೊಡ್ಡ ಮಟ್ಟದಲ್ಲಿ ಆರೋಪಿಸುತ್ತಿದೆ. ಈಗ ವಿವಿಧ ಜಿಲ್ಲೆಗಳಲ್ಲಿ ಆಗುತ್ತಿರುವ ಪ್ರಕರಣಗಳನ್ನು ಹತೋಟಿಗೆ ತರುವ ದೊಡ್ಡ ಸವಾಲು ಸರ್ಕಾರದ ಮುಂದಿದೆ.

### ವಿಜಯೇಂದ್ರ ಟೀಕೆ

ಮತ್ತೊಂದೆಡೆ ವಿಪಕ್ಷಗಳಾದ ಜೆಡಿಎಸ್ ಮತ್ತು ಬಿಜೆಪಿ ರಾಜ್ಯಾದ್ಯಂತ ಪ್ರತಿಭಟನೆ ಮಾಡಲು ನಿರ್ಧರಿಸಿವೆ.

ಒಂದು ವರ್ಷದಲ್ಲಿ ಸರ್ಕಾರ ಲೋಪ-ದೋಷಗಳು, ವೈಫಲ್ಯಗಳನ್ನು ಮುಂದಿಟ್ಟುಕೊಂಡು ರಾಜ್ಯಾದ್ಯಂತ ಪ್ರತಿಭಟನೆ ಮಾಡಲು ರಾಜ್ಯ ಬಿಜೆಪಿ, ತನ್ನ ಎಲ್ಲ ಘಟಕಗಳಿಗೆ ಸೂಚನೆ ನೀಡಿದೆ. ಮತ್ತೊಂದೆಡೆ ವಿಪಕ್ಷದ ಹಿರಿಯ ನಾಯಕರು ಸಹ ಸುದ್ದಿಗೋಷ್ಠಿ ನಡೆಸಿ ಸಮಾಜ ಕಲ್ಯಾಣ, ಆಹಾರ, ಕೃಷಿ ಮತ್ತು ಗೃಹ ಇಲಾಖೆ ಸೇರಿದಂತೆ ಹಲವು ಇಲಾಖೆಗಳ ವೈಫಲ್ಯಗಳ ಕುರಿತು ಜನರ ಮುಂದಿಡಲು ತೀರ್ಮಾನಿಸಿದ್ದಾರೆ. ಅಲ್ಲದೆ ರಾಜ್ಯದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಹದಗೆಟ್ಟಿರುವ ಕುರಿತು ರಾಜ್ಯಪಾಲರಿಗೆ ದೂರು ನೀಡಲು ನಿರ್ಧರಿಸಿದೆ.

### ಅನುಯಾಯಿಗಳು

ರಾವಣ ನಕಲಿ ಸಾಧುವಿನ ವೇಷ ಧರಿಸಿ ಸೀತೆಯನ್ನು ಅಪಹರಿಸಿದಂತೆಯೇ ಕಾಂಗ್ರೆಸ್ ಮತ್ತು ಸಮಾಜವಾದಿ ಸಿದ್ಧಾಂತದವರೂ ನಕಲಿ ವೇಷ ಧರಿಸಿ ಮತ ಕೇಳಲು ಬರುತ್ತಿದ್ದಾರೆ.

ಗಾಜಿಪುರದಲ್ಲಿ ಕಾರ್ಖಾನೆಯೇ ಇಲ್ಲ. ಇಲ್ಲಿ ಕೇವಲ ಒಂದು ಕುಟುಂಬದ ಲೂಟಿ ಉದ್ಯಮ ನಡೆಯುವುದರಿಂದ ಇಲ್ಲಿ ಕೈಗಾರಿಕೆ ನಡೆಯುತ್ತಿಲ್ಲ. ಭಯೋತ್ಪಾದನೆಯ ಅಬ್ಬರ ಸೃಷ್ಟಿಯಾಗಿದೆ. ನೆನಪಿರಲಿ, ಎಷ್ಟೇ ಅವ್ಯವಸ್ಥೆ ಮಾಡಿದರೂ ಈಗ ಪ್ರಧಾನಿ ಮೋದಿಯವರ ಸರ್ಕಾರದಲ್ಲಿ ಎಲ್ಲದಕ್ಕೂ ಲೆಕ್ಕ ಸಿಗುತ್ತದೆ ಎಂದು ಹೇಳಿದರು.

ದೇಶವನ್ನು ತಿಂದು ಪಾಕಿಸ್ತಾನವನ್ನು ಹಾಡಿ ಹೊಗಳುತ್ತಿದ್ದರು. ಬಿಜೆಪಿ ಸರ್ಕಾರ ಆ ಪಾಕಿಸ್ತಾನಿಯ ಮನೆಗೆ ನುಗ್ಗಿ ಕೊಲ್ಲುವ ಸಾಹಸ ಮಾಡಿದೆ. ಪ್ರಧಾನಿ ನರೇಂದ್ರ ಮೋದಿಯವರನ್ನು ನಿಂದಿಸುವವರಿಗೆ ಈ ಬಾರಿ ಸಾರ್ವಜನಿಕರೇ ತಕ್ಕ ಪಾಠ ಕಲಿಸಲಿದ್ದಾರೆ ಎಂದು ಹೇಳಿದರು.

### ಡ್ರಗ್ಸ್, ಕೊಕೇನ್ ಪತ್ತೆ

ದಾಳಿ ವೇಳೆ 17 ಎಂಡಿಎಂಎ ಮಾತ್ರೆ, ಕೊಕೇನ್ ಪತ್ತೆಯಾಗಿದೆ. ಆಂಧ್ರ, ಬೆಂಗಳೂರು ಮೂಲದ 100ಕ್ಕೂ ಹೆಚ್ಚು ಜನ ಮತ್ತು 25ಕ್ಕೂ ಹೆಚ್ಚು ಯುವತಿಯರು ಪಾರ್ಟಿಯಲ್ಲಿ ಭಾಗಿಯಾಗಿದ್ದು ತಿಳಿದುಬಂದಿದೆ. ಆಯೋಜಕ ಪಾರ್ಟಿಗಾಗಿಯೇ ಆಂಧ್ರದಿಂದ ಫ್ಲೈಟ್‌ನಲ್ಲಿ ಜನರನ್ನು ಕರೆಸಿಕೊಂಡಿದ್ದ. ಇನ್ನು ಅಚ್ಚರಿ ಎಂದರೆ

ಒಂದು ಬೆಂಜ್ ಕಾರಿನಲ್ಲಿ ಆಂಧ್ರ ಶಾಸಕನ ಪಾಸ್ ಪತ್ತೆಯಾಗಿದೆ. ಎಂಎಲ್ಎ ಕಾಕನಿ ಗೋವರ್ಧನರೆಡ್ಡಿ ಹೆಸರಿನ ಪಾಸ್ ಸಿಕ್ಕಿದೆ. ಜೊತೆಗೆ ದಾಳಿ ನಡೆದ ಫಾರ್ಮ್ ಹೌಸ್ ಬಳಿ ಮರ್ಸಿಡಿಸ್-ಬೆನ್ಜ್, ಜಾಗ್ವಾರ್, ಆಡಿ ಕಾರ್ ಸೇರಿದಂತೆ 15ಕ್ಕೂ ಹೆಚ್ಚು ಐಷಾರಾಮಿ ಕಾರುಗಳು ಪತ್ತೆಯಾಗಿವೆ. ಇನ್ನು ಈ ಪಾರ್ಟಿಯಲ್ಲಿ ಮಾಡೆಲ್‌ಗಳು ಹಾಗೂ ಟೆಕ್ಕಿಗಳು ಭಾಗಿಯಾಗಿದ್ದರು ಜೊತೆಗೆ ತೆಲುಗು ನಟಿಯರು ಕೂಡ ಭಾಗಿಯಾಗಿದ್ದರು. ಸದ್ಯ ಈ ಘಟನೆ ಸಂಬಂಧ ಎಲೆಕ್ಟ್ರಾನಿಕ್ ಸಿಟಿ ಪೊಲೀಸ್ ಠಾಣೆಯಲ್ಲಿ ಕೇಸ್ ದಾಖಲಾಗಿದೆ.

ಭಾನುವಾರ ಸಂಜೆ ಐದು ಘಂಟೆಯಿಂದ ಬೆಳಗ್ಗೆ ಆರು ಘಂಟೆ ತನಕ ಈ ಪಾರ್ಟಿ ನಡೆಯಬೇಕಿತ್ತು. ಸದ್ಯ ಸಿಸಿಬಿ ಪೊಲೀಸರು ತಡರಾತ್ರಿ ದಾಳಿ ನಡೆಸಿ ಅಕ್ರಮ ಬಯಲಿಗೆಳೆದಿದ್ದಾರೆ. ನಗರದ ಒಳಭಾಗದಲ್ಲಿ ದಾಳಿಗಳು ನಿರಂತರ ನಡೆಯುತಿದ್ದ ಹಿನ್ನಲೆ ಹೊರ ವಲಯದಲ್ಲಿ ಪಾರ್ಟಿ ಆಯೋಜನೆ ಮಾಡಲಾಗಿತ್ತು. ಒಂದು ದಿನದ ಪಾರ್ಟಿಗೆ ಮೂವತ್ತರಿಂದ ಐವತ್ತು ಲಕ್ಷ ಖರ್ಚು ಮಾಡಿ ಆಯೋಜನೆ ಮಾಡಲಾಗಿತ್ತು. ಸದ್ಯ ನಾರ್ಕೊಟಿಕ್ಸ್ ಸ್ನಿಫರ್ ಡಾಗ್ ಗಳಿಂದ ಸ್ಥಳ ಪರಿಶೀಲನೆ ನಡೆಸಲಾಗಿದೆ. ಪೊಲೀಸರು ಪಾರ್ಟಿಯಲ್ಲಿ ಭಾಗಿಯಾದವರ ಗುರುತು ಪತ್ತೆ ಮಾಡುತ್ತಿದ್ದಾರೆ.

### ಸವಾರರ ಆಕ್ರೋಶ

ನಮಗೂ ಸುಮಾರು ಬಾರಿ ಸರ್ವಿಸ್ ರೋಡ್ ನಲ್ಲಿ ಹೋದಾಗಲು ಹಣ ಕಟ್ ಆಗಿದೆ. ಟೋಲ್ ನವ್ರದ್ದು ಭಾರಿ ಅನ್ಯಾಯ. ಅವರದ್ದು ತುಂಬಾ ತಪ್ಪಿದೆ. ಬಹಳ ದೌರ್ಜನ್ಯ ಮಾಡ್ತಾರೆ ಟೋಲ್ ನವ್ರು. ಇಲ್ಲಿ ರೌಡಿಗಳನ್ನು ಇಟ್ಟುಕೊಂಡಿದ್ದಾರೆ. ಇದು ತುಂಬಾ ಅನ್ಯಾಯ ಇದನ್ನು ನಾವು ಖಂಡಿಸ್ತಿವಿ ಎಂದು ಆಟೋ ಚಾಲಕ ಪರಶುರಾಮ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಒಟ್ನಲ್ಲಿ ಹೆದ್ದಾರಿ ರೂಲ್ಸ್ ಪ್ರಕಾರ ಸರ್ವಿಸ್ ರೋಡ್ ಮೂಲಕ ಸಂಚಾರ ಮಾಡುವ ವಾಹನಗಳಿಗೆ ಟೋಲ್ ಚಾರ್ಜ್ ತೆಗೆದುಕೊಳ್ಳುವಂತಿಲ್ಲ, ಆದರೆ ಅಂಚೆಪಾಳ್ಯ ಬಳಿ ಟೋಲ್ ಟೆಂಡರ್ ಪಡೆದಿರುವ ಕಂಪನಿ, ಸರ್ವಿಸ್ ರೋಡ್ ನಲ್ಲಿ ಸಂಚಾರ ಮಾಡುವ ವಾಹನಗಳ ಬಳಿಯೂ ಹಣ ಕಟ್ ಮಾಡ್ತಿರೋದು ನಿಜಕ್ಕೂ ಸರಿಯಲ್ಲ ಕೂಡಲೇ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಕ್ರಮ ಕೈಗೊಳ್ಳಬೇಕಿದೆ.

### ಜನರಿಂದ ಪ್ರತಿಭಟನೆ

ಇದಕ್ಕೂ ಮುನ್ನ ಜಂತ್ಲಿ-ಶಿರೂರು ಗ್ರಾಮದಲ್ಲಿ ಸದರಿ ಪಿಡಿಓ ಅಧಿಕಾರಿ ನಾಮ್ ಕೇ ವಾಸ್ತೆ ಕೇವಲ ಮೂರು ದಿನ ಕೆಲಸ ನೀಡಿ ಕೈ ತೊಳೆದುಕೊಂಡಿದ್ದಾರೆ. ಕೂಲಿ ಕಾರ್ಮಿಕರು ಅಧಿಕಾರಿಯನ್ನು ಭೇಟಿ ಮಾಡಿ ಕೆಲಸ ಕೇಳಿದ್ರೆ, ಹಣವಿಲ್ಲ ಅಂತಾಯಿದ್ದಾರಂತೆ.

ಗ್ರಾಮ ಪಂಚಾಯತ ಅಧಿಕಾರಿಗಳ ಈ ನಿರ್ಲಕ್ಷ್ಯಕ್ಕೆ ಕೂಲಿ ಕಾರ್ಮಿಕರು ಆಕ್ರೋಶಗೊಂಡಿದ್ದಾರೆ. ಹಾಗಾಗಿ ಸಲಕೆ, ಗುದ್ದಿ, ಬುಟ್ಟಿಗಳ ಸಮೇತವಾಗಿ ಗ್ರಾಮ ಪಂಚಾಯತ ಕಚೇರಿಗೆ ಮುತ್ತಿಗೆ ಹಾಕಿ ಹೋರಾಟ ನಡೆಸಿದ್ದಾರೆ. ಮಹಿಳೆಯರು ತಮ್ಮ ತಲೆಯ ಮೇಲೆ ಬುಟ್ಟಿಯನ್ನ ಇಟ್ಟಿಕೊಂಡು ಹೋರಾಟದಲ್ಲಿ ಭಾಗಿಯಾಗಿದ್ದಾರೆ.

ಇದುವರಿಗೆ ಮಳೆ ಇಲ್ಲ. ಇತ್ತ ಕೆಲಸವೂ ಕೊಡುತ್ತಿಲ್ಲ ಅಂತ ಗ್ರಾಮದ ಕಾರ್ಮಿಕರು ಕಿಡಿಕಾರಿದ್ದಾರೆ. ಹೊಟ್ಟೆಗೆ ಏನು ಮಾಡೋಣ.. ದುಡಿಮೆ ಇಲ್ಲದೆ ಮಹಿಳೆಯರು ಕಂಗಾಲಾಗಿದ್ದಾರೆ. ಬೇರೆ ಪಂಚಾಯತಗಳಲ್ಲಿ ನೂರು ದಿನ ಕೆಲಸ ನೀಡಿದ್ದಾರೆ. ಆದರೆ ನಮ್ಮ ಪಂಚಾಯತ್ ನಲ್ಲಿ ಕೆಲಸ ನೀಡುತ್ತಿಲ್ಲ ಅಂತ ಅವರು ಸೂಚ್ಯವಾಗಿ ತಮ್ಮ ದುಃಖ ಹೊರಹಾಕಿದ್ದಾರೆ. ಸರ್ಕಾರ ಹಾಗೂ ಅಧಿಕಾರಿಗಳ ವಿರುದ್ಧ ಧಿಕ್ಕಾರ ಕೂಗಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

### ಆಫರ್

ಆದರೆ ಹೆಚ್ಚು ಸಮಯಾವಕಾಶ ಇಲ್ಲ. ಕೇವಲ ಒಂದೇ ಒಂದು ವಾರದೊಳಗಾಗಿ ನನ್ನ ಮಗಳನ್ನು ಮದುವೆಯಾಗಬೇಕು. ಇದರ ಜೊತೆಗೆ ಆತನ ಅದೃಷ್ಟವು ಬದಲಾಗಲಿದೆ. ಯಾಕೆಂದರೆ ಆತನಿಗೆ ನಾನು ಬ್ಲ್ಯಾಂಕ್ ಚೆಕ್ ನೀಡುವೆ'' ಎಂದು ತಂದೆ ಹೇಳಿರುವುದು ವಿಡಿಯೋದಲ್ಲಿ ಸೆರೆಯಾಗಿದೆ.

@shadi_karne_wali_girls ಎಂಬ ಇನ್ಸ್ಟಾಗ್ರಾಮ್ ಖಾತೆಯಲ್ಲಿ ಮಾರ್ಚ್ 18 ರಂದು ಈ ವಿಡಿಯೋ ಹಂಚಿಕೊಳ್ಳಲಾಗಿದೆ. ಈ ವಿಡಿಯೋ ಇಲ್ಲಿಯವರೆಗೆ 12 ಮಿಲಿಯನ್ ವೀಕ್ಷಣೆಯನ್ನು ಪಡೆದುಕೊಂಡಿದೆ. ಹಲವು ಕಾಮೆಂಟ್‌ಗಳು ಬಂದಿವೆ. ಇದೆಲ್ಲವೂ ನಕಲಿ ಎಂದು ಹಲವರು ಕಾಮೆಂಟ್ ನಲ್ಲಿ ಬರೆದುಕೊಂಡಿದ್ದಾರೆ. ಈ ವೀಡಿಯೋ ಹರಿಯಾಣದ್ದು ಎಂದು ಹೇಳಲಾಗಿದೆ. ಏಕೆಂದರೆ ವಾಹನದ ಸಂಖ್ಯೆ hr ನಿಂದ ಪ್ರಾರಂಭವಾಗುತ್ತಿದೆ.

### ಜಾಮೀನು?

ಎರಡೂ ಕಡೆಯ ವಾದ ಪ್ರತಿವಾದ ಆಲಿಸಿದ್ದ ನ್ಯಾಯಾಧೀಶರು ಇಂದಿಗೆ ಇಂದಿಗೆ ಆದೇಶ ಕಾಯ್ದಿರಿಸಿದ್ದರು. ಸದ್ಯ ಮಧ್ಯಂತರ ಜಾಮೀನಿನ ಮೇಲಿರುವ ರೇವಣ್ಣಗೆ ಇಂದು ಜಾಮೀನು ಸಿಗುತ್ತಾ ಅಥವಾ ಮತ್ತೆ ಜೈಲು ಫಿಕ್ಸಾ ಎಂಬ ಕುತೂಹಲ ಮನೆ ಮಾಡಿದೆ. ಒಂದು ವೇಳೆ ಜಾಮೀನು ಸಿಕ್ಕರೆ ರೇವಣ್ಣಗೆ ಬಿಗ್ ರಿಲೀಫ್ ಸಿಗಲಿದೆ.

## ರಾಹುಲ್‌ಗಾಂಧಿ ಪ್ರಧಾನಿಯಾಗುವರೆಗೆ ಇಲ್ಲಿ ಸಾಲ ನೀಡುವುದಿಲ್ಲ

# ದಯವಿಟ್ಟು ಗಮನಿಸಿ

ಕೆಲವೊಬ್ಬರು ಹೆಚ್ಚಾಗಿ ಸಾಲ ಮಾಡಿ ದಿನಸಿ ಖರೀದಿಸುವುದೋ ಅಥವಾ ಸಾಲ ಮಾಡಿ ಚಹಾ, ಸಿಗರೇಟ್ ಖರೀದಿಸುವುದು ಮಾಡುತ್ತಿರುತ್ತಾರೆ. ಹೀಗೆ ತೆಗೆದುಕೊಂಡ ದಿನಸಿಯ ಹಣವನ್ನು ಕೆಲವೊಬ್ಬರು ಎಷ್ಟೇ ವರ್ಷವಾದರೂ ಪಾವತಿಸದೆ ಅಂಗಡಿ ವ್ಯಾಪಾರಿಗಳಿಗನ್ನು ಆಟವಾಡಿಸುತ್ತಿರುತ್ತಾರೆ. ಹೀಗೆ ಸಾಲ ಕೇಳುವವರ ಕಾಟದಿಂದ ತಪ್ಪಿಸಿಕೊಳ್ಳಲು ಕೆಲವೊಂದು ಬುದ್ಧಿವಂತ ವ್ಯಾಪಾರಿಗಳು ಇಲ್ಲಿ ಸಾಲ ಕೊಡಲಾಗುವುದಿಲ್ಲ, ಸಾಲ ಕೇಳಿ ಸ್ನೇಹ ಕಳೆದುಕೊಳ್ಳಬೇಡಿ, ಗ್ರಾಹಕರು ದೇವರಿದ್ದಂತೆ ದೇವರಿಗೆ ಸಾಲ ಕೊಡುವಷ್ಟು ನಾನು ದೊಡ್ಡವನಲ್ಲ ಎಂಬಿತ್ಯಾದಿ ಬೋರ್ಡ್ ಗಳನ್ನು ಅಂಗಡಿಯ ಮುಂದೆ ಹಾಕಿಕೊಳ್ಳುತ್ತಾರೆ. ಆದರೆ ಇಲ್ಲೊಬ್ಬರು ಬೀದಿ ಬದಿ ವ್ಯಾಪಾರಿ ರಾಹುಲ್ ಗಾಂಧಿ ಪ್ರಧಾನಿಯಾಗುವವರೆಗೆ ಇಲ್ಲಿ ಸಾಲ ಕೊಡಲಾಗುವುದಿಲ್ಲ ಎಂಬ ಬೋರ್ಡ್ ಅನ್ನು ಹಾಕಿಕೊಂಡಿದ್ದಾರೆ. ಈ ಕುರಿತ ವಿಡಿಯೋವೊಂದು ಇದೀಗ ಸಿಕ್ಕಾಪಟ್ಟೆ ವೈರಲ್ ಆಗುತ್ತಿದೆ.



ಹೆಚ್ಚಿನವರಿಗೆ ಸಂಜೆ ಹೊತ್ತು ಬೀದಿ ಬದಿ ಅಂಗಡಿಗಳಿಗೆ ಹೋಗಿ ಅಲ್ಲಿ ಬಿಸಿ ಬಿಸಿ ತಿನಿಸುಗಳನ್ನು ತಿನ್ನುವ ಅಭ್ಯಾಸವಿರುತ್ತದೆ. ಅದರಲ್ಲಿ ಕೆಲವರು ದಿನ ಯಾರಪ್ಪಾ ಹಣ ಕೊಡ್ತಾರೆ ಎಂದು ಸಾಲ ಮಾಡಿ ಬಿಸಿ ಬಿಸಿ ಬಜ್ಜಿ, ಬೋಂಡಾ ತಿಂದು ತಿಂಗಳ ಕೊನೆಯಲ್ಲಿ ಪಾವತಿ ಮಾಡುತ್ತಾರೆ. ಇಂತಹ ಸಾಲ ಕೇಳುವವರ ಕಾಟದಿಂದ ತಪ್ಪಿಸಿಕೊಳ್ಳಲು ಬೀದಿ ಬದಿ ವ್ಯಾಪಾರಿಯೊಬ್ಬರು ತಮ್ಮ ಅಂಗಡಿಯ ಮುಂದೆ ರಾಹುಲ್ ಗಾಂಧಿ ಈ ದೇಶದ ಪ್ರಧಾನಿಯಾಗುವವರೆಗೆ ಇಲ್ಲಿ ಸಾಲ ನೀಡಲಾಗುವುದಿಲ್ಲ ಎಂಬ ಬೋರ್ಡ್ ಹಾಕಿಕೊಂಡಿದ್ದಾರೆ.

ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗುತ್ತಿರುವ ಈ ವಿಡಿಯೋವನ್ನು ಕವಿಶ್ ಅಝೀರ್ಝ್ ಎಂಬವರು ತಮ್ಮ ಖಾತೆಯಲ್ಲಿ ಹಂಚಿಕೊಂಡಿದ್ದು, ''ಈ ಅಂಗಡಿಯಲ್ಲಿ ರಾಹುಲ್ ಗಾಂಧಿ ದೇಶದ ಪ್ರಧಾನಿಯಾಗುವವರೆಗೆ ಸಾಲ ಮಾಡುವುದನ್ನು ನಿಷೇಧಿಸಲಾಗಿದೆ'' ಎಂಬ ಶೀರ್ಷಿಕೆಯನ್ನು ಬರೆದುಕೊಂಡಿದ್ದಾರೆ.

ಆರು ಸೆಕೆಂಡುಗಳ ಈ ವೈರಲ್ ವಿಡಿಯೋದಲ್ಲಿ ಬೀದಿ ಬದಿ ವ್ಯಾಪಾರಿಯೊಬ್ಬರು ತಮ್ಮ ಅಂಗಡಿಯ ಮುಂದೆ ಸಾಲ ಕೇಳುವಂತಿಲ್ಲ; ರಾಹುಲ್ ಗಾಂಧಿ ಭಾರತದ ಪ್ರಧಾನಿಯಾಗುವವರೆ ಇಲ್ಲಿ ಸಾಲವನ್ನು ನೀಡಲಾಗುವುದಿಲ್ಲ ಎಂಬ ಬರಹವನ್ನು ಬರೆದಿರುವ ಬೋರ್ಡ್ ಒಂದನ್ನು ನೇತು ಹಾಕಿರುವ ದೃಶ್ಯವನ್ನು ಕಾಣಬಹುದು.

ಎರಡು ದಿನಗಳ ಹಿಂದೆ ಹಂಚಿಕೊಳ್ಳಲಾದ ಈ ವಿಡಿಯೋ ಒಂಬತ್ತು ಸಾವಿರಕ್ಕೂ ಅಧಿಕ ವೀಕ್ಷಣೆಗಳನ್ನು ಹಾಗೂ ಹಲವಾರು ಕಾಮೆಂಟ್ಸ್‌ಗಳನ್ನು ಪಡೆದುಕೊಂಡಿದೆ. ಒಬ್ಬ ಬಳಕೆದಾರರು ಇದು ತುಂಬಾನೇ ಫನ್ನಿಯಾಗಿದೆ ಎಂಬ ಕಾಮೆಂಟ್ ಬರೆದುಕೊಂಡಿದ್ದಾರೆ. ಇನ್ನೊಬ್ಬ ಬಳಕೆದಾರರು ಇಲ್ಲಿ ಸಾಲವನ್ನು ಪಡೆಯುವ ಭರವಸೆ ಬಿಟ್ಟು ಬಿಡಿ ಎಂಬ ಕಾಮೆಂಟ್ ಬರೆದುಕೊಂಡಿದ್ದಾರೆ. ಇನ್ನೂ ಅನೇಕರು ಸಾಲ ಕೇಳಲು ಬರುವ ಗ್ರಾಹಕರಿಂದ ಹಿಂಗೂ ತಪ್ಪಿಸಿಕೊಳ್ಳಬಹುದಾ ಎಂದು ಈ ವ್ಯಾಪಾರಿಯ ಹೊಸ ಐಡಿಯಾವನ್ನು ಕಂಡು ಶಾಕ್ ಆಗಿದ್ದಾರೆ.

## ಬಾಲ್ಕನಿಯಿಂದ ಬೀಳುತ್ತಿದ್ದ ಮಗುವನ್ನು ರಕ್ಷಣೆ ಮಾಡಿದ ವಾರಗಳ ಬಳಿಕ ಮಗುವಿನ ತಾಯಿ ಶವವಾಗಿ ಪತ್ತೆ

**ಚೆನ್ನೈ:** ಚೆನ್ನೈನ ಅಪಾರ್ಟ್ ಮೆಂಟ್ ನ ಬಾಲ್ಕನಿಯೊಂದರಿಂದ ಬೀಳುತ್ತಿದ್ದ ಮಗುವನ್ನು ರಕ್ಷಣೆ ಮಾಡಿ ವಾರಗಳ ಬಳಿಕ ಮಗುವಿನ ತಾಯಿ ಶವವಾಗಿ ಪತ್ತೆಯಾಗಿದ್ದಾರೆ. ಏಪ್ರಿಲ್ 28ರಂದು ಎಂಟು ತಿಂಗಳ ಪುಟ್ಟ ಮಗು ಅಪಾರ್ಟ್ ಮೆಂಟ್ ನ ಮೇಲ್ಛಾವಣಿಯ ಶೀಟ್ ಮೇಲೆ ನೇತಾಡುತ್ತಿರುವ ವಿಡಿಯೋ ವೈರಲ್ ಆಗಿತ್ತು.

ಅಕ್ಕಪಕ್ಕದವರು ಮಗು ಬಿದ್ದರೆ ಬೆಡ್ ಶೀಟ್ ಮೇಲೆ ಬೀಳಲಿ ಎಂದು ಕೆಳಗೆ ಬೆಡ್ ಶೀಟ್ ಹಿಡಿದು ನಿಂತಿರುವುದನ್ನು ವಿಡಿಯೋದಲ್ಲಿ ನೋಡಬಹುದು. ಹಾಗೆಯೇ ಯಾರೂ ಮಗುವನ್ನು ರಕ್ಷಿಸುವುದರಲ್ಲಿ ಯಶಸ್ವಿಯಾಗಿದ್ದರು.

ರಕ್ಷಣೆ ಮಾಡಿದವರನ್ನು ಪ್ರಶಂಸೆ ಮಾಡಲಾಯಿತಾದರೂ ಮಗುವಿನ ತಾಯಿಯ ನಿರ್ಲಕ್ಷ್ಯದ ಬಗ್ಗೆ ಸಾಮಾಜಿಕ ಜಾಲತಾಣಗಳಲ್ಲಿ ಟೀಕೆಗಳು ವ್ಯಕ್ತವಾಗಿದ್ದವು.

ಆಕೆ ಮಗುವನ್ನು ತುಂಬಾ ಚೆನ್ನಾಗಿ ನೋಡಿಕೊಂಡಿದ್ದಾರೆ ಆದರೆ ಇದು ಕೇವಲ ಒಂದು ಅಪಘಾತ ಎಂದು ಅಕ್ಕಪಕ್ಕದ ಮನೆಯವರು ಹೇಳಿದ್ದರು.

ಘಟನೆಯ ನಂತರ ರಮ್ಯಾ ತನ್ನ ಮಗುವನ್ನು ಕರಮಡೈನಲ್ಲಿರುವ ತನ್ನ ಪೋಷಕರ ಮನೆಗೆ ಕರೆದುಕೊಂಡು ಹೋಗಿದ್ದರು. ಭಾನುವಾರ ಮನೆಯಲ್ಲಿ ಪ್ರಜ್ಞಾಹೀನ ಸ್ಥಿತಿಯಲ್ಲಿದ್ದ ರಮ್ಯಾ ಅವರನ್ನು ಆಸ್ಪತ್ರೆಗೆ ಸಾಗಿಸಲಾಗಿದ್ದು, ಅಲ್ಲಿ ಆಕೆ ಮೃತಪಟ್ಟಿದ್ದಾಳೆ ಎಂದು ವೈದ್ಯರು ಘೋಷಿಸಿದ್ದಾರೆ.

ಕೆಪಿಸಿಸಿ ವಕ್ತಾರ ಎಚ್.ಎ.ವೆಂಕಟೇಶ್ ವಾಗ್ದಾಳಿ

# ಕಾಂಗ್ರೆಸ್ ಸರ್ಕಾರದ ವರ್ಚಸ್ಸಿಗೆ ದಕ್ಕೆ ತರಲು ಬಿಜೆಪಿ ಹುನ್ನಾರ

**ಮೈಸೂರು:** ರಾಜ್ಯದ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ವರ್ಷ ಕಳೆದಿರುವ ಈ ಶುಭ ಸಂದರ್ಭದಲ್ಲಿ ಬಿಜೆಪಿ ಅನಗತ್ಯ ವಿಷಯಗಳನ್ನು ಮುಂದೆಮಾಡಿ ಸರ್ಕಾರದ ವರ್ಚಸ್ಸಿಗೆ ಧಕ್ಕೆ ತರುವಂತೆ ವರ್ತಿಸುತ್ತಿರುವುದು ಆಕ್ಷೇಪಾರ್ಹ ಎಂದು ಕೆಪಿಸಿಸಿ ವಕ್ತಾರ ಎಚ್.ಎ.ವೆಂಕಟೇಶ್ ವಾಗ್ದಾಳಿ ನಡೆಸಿದರು.

ಈ ಕುರಿತು ಪತ್ರಿಕಾ ಪ್ರಕಟಣೆ ಮೂಲಕ ಬಿಜೆಪಿ, ಜೆಡಿಎಸ್ ವಿರುದ್ಧ ಕಿಡಿಕಾರಿರುವ ಹೆಚ್.ಎ.ವೆಂಕಟೇಶ್, ಹುಬ್ಬಳ್ಳಿಯಲ್ಲಿ ನಡೆದ ಕೊಲೆ ಘಟನೆಗಳು ಆತಂಕಕಾರಿ ನಿಜ. ಆದರೆ ಇವುಗಳಿಗೂ ಸರ್ಕಾರಕ್ಕೂ ಸಂಬಂಧ ಕಲ್ಪಿಸುವುದು ಅನಾರೋಗ್ಯಕಾರಿ ಬೆಳವಣಿಗೆ. ವೈಯಕ್ತಿಕ ಕಾರಣ, ಸೇಡಿನ ಮನೋಭಾವ, ಹತಾಶ ಸ್ಥಿತಿ ಅಪರಾಧಿಕ ಹಿನ್ನೆಲೆಯೂ ಸೇರಿದಂತೆ ಇನ್ನಿತರ ಮಾನಸಿಕ ಹಾಗೂ ಸಮಾಜೋ ಆರ್ಥಿಕ ಕಾರಣಗಳಿಂದಾಗಿ ನಡೆಯುಬಹುದಾದ ಇಂತಹ ಘಟನೆಗಳನ್ನು



ಸಾರ್ವತ್ರೀಕರಿಸಿ ನೋಡುವುದು ಮತ್ತು ಈ ಘಟನೆಗಳಿಗೆ ಗೃಹ ಇಲಾಖೆಯತ್ತ ಬೊಟ್ಟು ಮಾಡುವುದು ಕುಬ್ಜ ಮನಸ್ಥಿತಿಯ ಸಂಕೇತ ಎಂದು ಟೀಕಿಸಿದರು.

ರಾಜ್ಯ ಸರ್ಕಾರ ಕಾನೂನು ಸುವ್ಯವಸ್ಥೆಯನ್ನು ಸಮರ್ಥವಾಗಿ ನಿಭಾಯಿಸುತ್ತಿದೆ. ಈಚೆಗೆ



ನಡೆದ ಚುನಾವಣೆಯ ಎರಡು ಹಂತಗಳ ಮತದಾನದಲ್ಲಿ ಯಾವುದೇ ಲೋಪವಾಗಿಲ್ಲ. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹಾಳಾಗಿದೆ ಎಂದು ಕೂಗಿಕೊಳ್ಳುವವರು ಬಿಜೆಪಿ ಆಡಳಿತವಿರುವ ಉತ್ತರ ಪ್ರದೇಶದಲ್ಲಿ ಮತದಾನದ ಸಮಯ ನಡೆದ ಅರಾಜಕ ಘಟನೆಗಳನ್ನು ಗಮನಿಸಬೇಕು.

ದಲಿತರು, ಶೋಷಿತರು ಹಾಗೂ ಅಲ್ಪಸಂಖ್ಯಾತರ ಮನೆಗಳನ್ನು ಬುಲ್ಡೋಜರ್‌ನಿಂದ ಉರುಳಿಸುವ ಅಸಂವಿಧಾನಿಕ ವಿಧಾನವನ್ನೇ ಉತ್ತಮ ಆಡಳಿತ ಎಂದು ಬಿಂಬಿಸುವ ಬಿಜೆಪಿಯ ಕ್ರೂರ ಮನಸ್ಥಿತಿಯವರು. ರಾಜ್ಯ ಸರ್ಕಾರದ ಜನಪರ ಆಡಳಿತ ಪ್ರಶಂಸಿಸುವುದು ಸಾಧ್ಯವಿಲ್ಲ. ಹೀಗಾಗಿ ಬಿಜೆಪಿಯ ಇಂತಹ ಆರೋಪಗಳಿಗೆ ಬೆಲೆಯಿಲ್ಲ. ಇಷ್ಟಕ್ಕೂ ಬಿಜೆಪಿ ಆಡಳಿತದ ಸಮಯದಲ್ಲಿ ಇಂತಹ ನೂರಾರು ಅಪರಾಧಿಕ ಘಟನೆಗಳು ನಡೆದಿರುವುದನ್ನು ಉದಾಹರಿಸಬಹುದು. ಆದರೆ, ಕಾಂಗ್ರೆಸ್ ಸರ್ಕಾರವಾಗಲೀ, ನಾಯಕರಾಗಲಿ ಇದಕ್ಕೆ ಮುಂದಾಗುವುದಿಲ್ಲ ಎಂದಿದ್ದಾರೆ.

ಕಾಂಗ್ರೆಸ್ ಪಕ್ಷ ಚುನಾವಣೆಗೂ ಮೊದಲು ನೀಡಿದ ವಾಗ್ದಾನದಂತೆ ಐದು ಗ್ಯಾರಂಟಿ ಯೋಜನೆಗಳನ್ನು ಯಶಸ್ವಿಯಾಗಿ ಜಾರಿಗೆ ತಂದಿದೆ. ಬಿಜೆಪಿಯ ಕೇಂದ್ರ ಸರ್ಕಾರದ ದಮನಕಾರಿ ಆಡಳಿತದಲ್ಲಿ ಬೆಲೆ ಏರಿಕೆ ಬಿಸಿಯಿಂದ ಬಳಲುತ್ತಿದ್ದ ಬಡಜನತೆಗೆ ನೆಮ್ಮದಿ ಸಿಕ್ಕಿದೆ. ಉಚಿತ ಪ್ರಯಾಣದ ಶಕ್ತಿ ಯೋಜನೆ, ಗೃಹಲಕ್ಷ್ಮಿ, ಗೃಹಜ್ಯೋತಿ, ಅನ್ನಭಾಗ್ಯ ಮತ್ತು ಯುವನಿಧಿ ಯೋಜನೆಗಳು ಜನರ ಕೈಹಿಡಿದಿವೆ. ಗೃಹಲಕ್ಷ್ಮಿ ಯೋಜನೆಯಂತೂ ವಿಶ್ವದ ಅತಿದೊಡ್ಡ ಡಿಬಿಟಿ ಯೋಜನೆಯಾಗಿ ಗುರುತಿಸಿಕೊಂಡಿದೆ. ಹಲವು ಕೋಟಿ ಮಹಿಳೆಯರು ಶಕ್ತಿ ಯೋಜನೆಯ ಲಾಭ ಪಡೆದು ಸಂಚರಿಸುತ್ತಿದ್ದಾರೆ. ಇದರಿಂದಾಗಿ ವಿವಿಧ ಧಾರ್ಮಿಕ ಕೇಂದ್ರಗಳು, ಪ್ರವಾಸಿ ಕೇಂದ್ರಗಳಲ್ಲಿ ಆರ್ಥಿಕ ಚಟುವಟಿಕೆಗಳು ಚುರುಕು ಪಡೆದಿವೆ. ಆದರೂ ಇದಾವುದರ ಬಗ್ಗೆಯೂ ಕನಿಷ್ಠಜ್ಞಾನವಿಲ್ಲದೇ ಖಾಲಿ ಡಬ್ಬದಂತೆ ಕರ್ಕಷ ಸದ್ದು ಮಾಡುವ ಬಿಜೆಪಿ ಜೆಡಿಎಸ್ ನಾಯಕರು, ಜನತೆಗೆ ಒಳಿತು ಮಾಡುತ್ತಿರುವ ಸರ್ಕಾರದ ಕೆಲಸವನ್ನು ಹಳದಿ ಕನ್ನಡಕ ತೆಗೆದಿಟ್ಟು ಪ್ರಾಮಾಣಿಕವಾಗಿ ಪರಾಮರ್ಶಿಸಲಿ ಎಂದು ಕೋರುತ್ತೇನೆ ಎಂದು ಹೆಚ್.ಎ.ವೆಂಕಟೇಶ್ ಟಾಂಗ್ ಕೊಟ್ಟಿದ್ದಾರೆ.

## ಜಿಟಿ ಜಿಟಿ ಮಳೆಗೆ ಜನಜೀವನ ಅಸ್ತವ್ಯಸ್ತ

**ಮೈಸೂರು:** ನಗರದಲ್ಲಿ ಮಳೆ ಮುಂದುವರಿದಿದ್ದು, ಭಾನುವಾರ ದಿನವಿಡೀ ಸುರಿದ ಜಿಟಿ ಜಿಟಿ ಸೋನೆ ಮಳೆಗೆ ಜನಜೀವನ ಅಸ್ತವ್ಯಸ್ತಗೊಂಡಿತು.

ಬೆಳಗ್ಗೆಯಿಂದ ಸಂಜೆವರೆಗೂ ಮೋಡ ಕವಿದ ವಾತಾವರಣ ಇತ್ತು. ಬೆಳಗ್ಗೆ 9.30 ಗಂಟೆಗೆ ವೇಳೆಗೆ ಸೋನೆಯೊಂದಿಗೆ ಆರಂಭವಾದ ಮಳೆ ನಂತರ ಜೋರಾಗಿಯೇ ಸುರಿಯಿತು. ಪರಿಣಾಮ, ತಗ್ಗು ಪ್ರದೇಶಕ್ಕೆ ನೀರು ಹರಿಯಿತು. ಕೊಂಚ ಕಾಲದ ಬಿಡುವಿನ ನಂತರ ಶುರುವಾದ ಜಿಟಿಜಿಟಿ ಮಳೆ ಆಗೊಮ್ಮೆ, ಈಗೊಮ್ಮೆ ಜೋರಾಗಿ ಸುರಿದಿದ್ದು, ಮೈಸೂರು ಮಲೆನಾಡಿನಂತೆ ಗೋಚರವಾಯಿತು.

ದಿನವಿಡೀ ಮೋಡ ಕವಿದ ವಾತಾವರಣವಿತ್ತು. ತಾಪಮಾನ ಕಡಿಮೆಯಾಗಿ ಹಿತಕರವಾದ ತಂಪುಗಾಳಿ ಬೀಸಿತು. ಇದರಿಂದ ಮನೆ ಮೂಲೆ ಸೇರಿದ್ದ ಸ್ವೆಟರ್, ಜರ್ಕಿನ್, ಕೈಗವಸುಗಳನ್ನು ಹೊರತೆಗೆದು ಧರಿಸಿಕೊಂಡ ಜನರು, ಚಳಿಯಿಂದ ರಕ್ಷಿಸಿಕೊಂಡು ಬೆಚ್ಚಗಾದರು. ಸಾರ್ವಜನಿಕರು ಒಂದೆಡೆಯಿಂದ ಮತ್ತೊಂದೆಡೆ ತೆರಳಲು ಪರದಾಡುವ ಸ್ಥಿತಿ ನಿರ್ಮಾಣವಾಯಿತು. ಪ್ರಮುಖ ರಸ್ತೆಗಳ ಮೇಲೆ ನೀರು ಹರಿಯುತ್ತಿದ್ದ ಕಾರಣ ಸಂಚರಿಸಲು ವಾಹನ ಸವಾರರು ಹರಸಾಹಸಪಟ್ಟರು. ಸಾಕಷ್ಟು ಜನ ಅಂಗಡಿ-ಮುಂಗಟ್ಟುಗಳಲ್ಲಿ ಆಶ್ರಯ ಪಡೆದು, ಮಳೆ ನಿಂತ ನಂತರ ತೆರಳಿದರು. ಕಳೆದ ಒಂದು ವಾರದಿಂದ ಜಿಲ್ಲಾದ್ಯಂತ ಉತ್ತಮ ಮಳೆಯಾಗುತ್ತಿರುವುದರಿಂದ ರೈತರು, ಜನರಲ್ಲಿ ಮಂದಹಾಸ ಮೂಡಿಸಿದೆ.

ವಿದ್ಯಾರಣ್ಯಪುರಂ, ಕುವೆಂಪುನಗರ, ಜೆ.ಪಿ.ನಗರ, ಅಗ್ರಹಾರ, ಶಾರದಾದೇವಿನಗರ, ಬೋಗಾದಿ, ಕನಕದಾಸನಗರ, ಜನತಾನಗರ ಸೇರಿದಂತೆ ಹಲವೆಡೆ ಹೆಚ್ಚಾಗಿ ಮಳೆಯಾದ ಹಿನ್ನೆಲೆಯಲ್ಲಿ ರಸ್ತೆ, ಮೋರಿ, ಒಳಚರಂಡಿಗಳಲ್ಲಿ ನೀರು ಹರಿಯಿತು. ನಗರದ ಹೃದಯ ಭಾಗ ಕೆ.ಆರ್.ವೃತ್ತ, ಹಾರ್ಡಿಂಜ್ ವೃತ್ತ, ಸಯ್ಯಜಿರಾವ್ ರಸ್ತೆ, ಶಿವರಾಂಪೇಟೆ, ಡಿ.ದೇವರಾಜ ಅರಸು ರಸ್ತೆ ಸೇರಿದಂತೆ ಪ್ರಮುಖ ರಸ್ತೆಗಳಲ್ಲೂ ನೀರು ಹರಿಯಿತು.




# 24ರಿಂದ ಮಾವು, ಹಲಸು ಮೇಳ

## ಒಂದೇ ಸೂರಿನಡಿ ವಿವಿಧ ತಳಿಯ ಹಣ್ಣುಗಳ ಮಾರಾಟಕ್ಕೆ ಇಲಾಖೆ ಸಿದ್ಧತೆ

**ಮೈಸೂರು:** ಒಂದೇ ಸೂರಿನಡಿ ವಿವಿಧ ಮಾವಿನ ತಳಿಯ ಹಣ್ಣು, ಹಲಸಿನ ಹಣ್ಣಿನ ರುಚಿ ಸವಿಯಲು ಮೇ 24ರಿಂದ ಮೂರು ದಿನಗಳ ಮಾವು, ಹಲಸು ಮೇಳ ಆಯೋಜಿಸಲಾಗುತ್ತಿದೆ.

ತೋಟಗಾರಿಕೆ ಇಲಾಖೆ, ಜಿಲ್ಲಾ ಹಾಪ್‌ಕಾಮ್ಸ್ ವತಿಯಿಂದ ನಗರದ ಕುಪ್ಪಣ್ಣ ಪಾರ್ಕ್ ಆವರಣದಲ್ಲಿ ಮೇ 24, 25 ಮತ್ತು 26 ರಂದು ಮಾವು ಮತ್ತು ಹಲಸು ಮೇಳ ಆಯೋಜಿಸಲು ಸಿದ್ಧತೆ ಮಾಡಿಕೊಳ್ಳಲಾಗಿದೆ. ಮೂರು ದಿನಗಳ ಕಾಲ ಮೇಳ ನಡೆಸಲು ಉದ್ದೇಶಿಸಲಾಗಿದೆ. ಈ ಸಂಬಂಧ ತೋಟಗಾರಿಕೆ ಇಲಾಖೆ ಅಧಿಕಾರಿಗಳು ಲೋಕಸಭಾ ಚುನಾವಣೆ ಬಳಿಕ ರೈತರ ಸಭೆ ಕರೆದಿದ್ದು, ಸಭೆಯಲ್ಲಿ ಚರ್ಚಿಸಿ ಮೇಳದ ದಿನಾಂಕ ಅಂತಿಮಗೊಳಿಸಿದ್ದಾರೆ. ಮಾವಿನಹಣ್ಣು ಈಗಾಗಲೇ ಮಾರುಕಟ್ಟೆಗೆ ಲಗ್ಗೆ ಇಟ್ಟಿವೆ. ಮಧ್ಯವರ್ತಿಗಳ ಹಾವಳಿ ತಪ್ಪಿಸಿ ಈ ಹಣ್ಣುಗಳ ಬೆಳೆಗಾರರಿಗೆ ಉತ್ತಮ ದರ ದೊರಕುವಂತೆ ಮಾಡುವುದು ಹಾಗೂ ಗ್ರಾಹಕರು ನ್ಯಾಯಯುತ ಬೆಲೆಯಲ್ಲಿ ಹಣ್ಣುಗಳನ್ನು ಖರೀದಿಸಲು ಉತ್ತೇಜನ ನೀಡುವ ಉದ್ದೇಶದೊಂದಿಗೆ ತೋಟಗಾರಿಕೆ ಇಲಾಖೆ ಹಲವು ವರ್ಷಗಳಿಂದ ಮಾವು ಮತ್ತು ಹಲಸು ಮೇಳ ಏರ್ಪಡಿಸುತ್ತಿದೆ. ಈ ಬಾರಿಯೂ ಅದನ್ನು ಮುಂದುವರಿಸಲು ಸಿದ್ಧತೆ ನಡೆಸಿದೆ.

ರಾಸಾಯನಿಕ ಮುಕ್ತ ಹಣ್ಣು: ಮಾವು ಪ್ರಿಯರ ಆರೋಗ್ಯದ ಹಿತದೃಷ್ಟಿಯಿಂದ ಕ್ಯಾಲ್ಸಿಯಂ ಕಾರ್ಬೈಡ್ ಮುಕ್ತ, ನೈಸರ್ಗಿಕವಾಗಿ ಮಾಗಿಸಿದ ಉತ್ಕೃಷ್ಟ ದರ್ಜೆಯ ವಿವಿಧ ತಳಿಯ ಹಣ್ಣುಗಳು ಮೇಳದಲ್ಲಿ ಗ್ರಾಹಕರಿಗೆ ದೊರೆಯುವಂತೆ ಮಾಡುತ್ತಿದ್ದು, ಉತ್ತಮ ಬೆಲೆ ನಿಗದಿಪಡಿಸಲಾಗುತ್ತದೆ. ವಿವಿಧ ಮಾವು, ಹಲಸಿನ ತಳಿಗಳನ್ನು ಮೇಳದಲ್ಲಿ ಪರಿಚಯಿಸಲು ಉದ್ದೇಶಿಸಲಾಗಿದೆ. ಮಾನಕೂರ, ಆಮ್ಲೆಟ್, ಚೈತ್ರಪ್ಯೆರಿ, ಸೇಲಂ, ಶಿರಸಿ ಲೋಕಲ್, ರತ್ನಗಿರಿ(ಆಲ್ಫನ್ಸ್), ಬಾದಾಮಿ, ರಸಪೂರಿ, ಮಲಗೋವ, ಮಲ್ಲಿಕಾ, ಸಿಂಧೂರ, ತೋತಾಪುರಿ, ಬಾಗನಪಲ್ಲಿ, ದಶೇರಿ, ಕಾಲಾಪ ಹಾಡ್, ಕೇಸರ್, ಸಕ್ಕರೆಗುತ್ತಿ, ಆಮ್ರಪಾಲಿ, ದಿಲ್‌ಪಸಂದ್ ಸೇರಿದಂತೆ ಹಲವು ತಳಿಯ ಹಣ್ಣುಗಳನ್ನು ಮೇಳದಲ್ಲಿ ಮಾರಾಟ ಮಾಡುವ ಮಾಡುವ ಸಾಧ್ಯತೆ ಇದೆ. ಒಂದೊಂದು ಜಾತಿಯ ಮಾವಿಗೂ ಒಂದೊಂದು ಬೆಲೆ ನಿಗದಿ ಮಾಡಲಾಗುತ್ತದೆ. ತೋಟಗಾರಿಕೆ ಇಲಾಖೆ ದರ ನಿಗದಿಪಡಿಸಲಿದೆ.

**ನೈಸರ್ಗಿಕ ಹಣ್ಣು ಮಾರಾಟ:** ನೈಸರ್ಗಿಕವಾಗಿ ಹಣ್ಣಾಗಿಸಿದ ಮಾವಿನಹಣ್ಣುಗಳ ಜತೆಗೆ, ಕ್ಯಾಲ್ಸಿಯಂ ಕಾರ್ಬೈಡ್‌ನಿಂದ ಮಾಗಿಸಿದ ಹಣ್ಣುಗಳೂ ದೊಡ್ಡ ಪ್ರಮಾಣದಲ್ಲಿ ಮಾರುಕಟ್ಟೆ ಪ್ರವೇಶಿಸಿವೆ. ಕ್ಯಾಲ್ಸಿಯಂ ಕಾರ್ಬೈಡ್ ರಾಸಾಯನಿಕ ಸಿಂಪಡಿಸಿದ ಹಣ್ಣುಗಳ ಸೇವನೆಯಿಂದ ಕ್ಯಾನ್ಸರ್, ಅಸ್ತಮಾ, ಕೆಮ್ಮು, ನೆಗಡಿ ಮುಂತಾದ ಆರೋಗ್ಯ ಸಮಸ್ಯೆಗಳು ಕಾಣಿಸಿಕೊಳ್ಳಲಿವೆ. ಆದರೆ, ನೈಸರ್ಗಿಕವಾಗಿ ಮತ್ತು ಕ್ಯಾಲ್ಸಿಯಂ ಕಾರ್ಬೈಡ್ ನಿಂದ ಮಾಗಿಸಿದ ಹಣ್ಣುಗಳ ನಡುವಿನ ವ್ಯತ್ಯಾಸ ಗುರುತಿಸುವುದು ಗ್ರಾಹಕರಿಗೆ ಕಷ್ಟವಾಗಲಿದೆ. ಆದ್ದರಿಂದ ಮೇಳದಲ್ಲಿ ಈ ಗೊಂದಲಕ್ಕೆ ಅವಕಾಶ ಇಲ್ಲದಂತೆ ನೈಸರ್ಗಿಕವಾಗಿ ಮಾಗಿಸಿದ ಹಣ್ಣುಗಳನ್ನು ಮಾತ್ರ ಮಾರಾಟ ಮಾಡಲಾಗುತ್ತದೆ ಎನ್ನುತ್ತಾರೆ ತೋಟಗಾರಿಕೆ ಇಲಾಖೆ ಅಧಿಕಾರಿಗಳು.

ವಿಟಮಿನ್ ಭರಿತ: ಮಾವಿನಹಣ್ಣಿನಲ್ಲಿ ವಿಟಮಿನ್ ಎ ಮತ್ತು ಸಿ ಅಂಶಗಳಿರುತ್ತವೆ. ಅಲ್ಲದೆ, ನಾರಿನಾಂಶ ಇರುತ್ತದೆ. ಮಾವು ಮಲಬದ್ಧತೆ ನಿವಾರಣೆಗೆ ತುಂಬ ಒಳ್ಳೆಯದು. ಜತೆಗೆ, ದೇಹದಲ್ಲಿನ ಕೊಬ್ಬಿನಾಂಶವನ್ನು ಕಡಿಮೆ ಮಾಡುತ್ತದೆ. ಹಾಗಾಗಿ ಮಾವಿನಹಣ್ಣಿನ ಸೀಜನ್ ಬಂದಾಗಲೆಲ್ಲ ಜನರು ಮುಗಿಬಿದ್ದು ಖರೀದಿಸುತ್ತಾರೆ.



### ಮಾರುಕಟ್ಟೆಗೆ ಮಾವು ಪ್ರವೇಶ

**ಹಣ್ಣುಗಳ ರಾಜ ಎಂದೇ ಖ್ಯಾತವಾದ ಮಾವು ಮೈಸೂರಿನ ಮಾರುಕಟ್ಟೆ ಪ್ರವೇಶಿಸಿ ಗ್ರಾಹಕರನ್ನು ಆಕರ್ಷಿಸುತ್ತಿದೆ. ವಿವಿಧ ತಳಿಯ ಹಣ್ಣುಗಳು ಜನರ ಬಾಯಲ್ಲಿ ನೀರೂರಿಸುತ್ತಿವೆ. ಕೋಲಾರ, ರಾಮನಗರ, ಚಿಕ್ಕಬಳ್ಳಾಪುರ ಸೇರಿದಂತೆ ರಾಜ್ಯದ ವಿವಿಧ ಭಾಗಗಳಿಂದ ಬಾದಾಮಿ, ರಸಪುರಿ, ತೋತಾಪುರಿ, ಬಂಗನಪಲ್ಲಿ, ದಶೇರಿ, ಮಲ್ಲಿಕಾ, ಮಲಗೋವ, ನೀಲಂ, ಸಿಂಧೂರ ತಳಿಯ ಮಾವು ಮೈಸೂರಿನ ಮಾರುಕಟ್ಟೆ ಪ್ರವೇಶ ಮಾಡಿದೆ. ಕುಕ್ಕರಹಳ್ಳಿ ಕೆರೆ ರಸ್ತೆ, ಜೆಎಲ್‌ಬಿ ರಸ್ತೆ, ಮಹಾರಾಜ ಕಾಲೇಜು ಮುಂಭಾಗದ ರಸ್ತೆ, ಕ್ರಾಫರ್ಡ್ ಹಾಲ್ ಮುಂಭಾಗ, ನಾರಾಯಣಶಾಸ್ತ್ರಿ ರಸ್ತೆ, ಚಾಮರಾಜ ಜೋಡಿ ರಸ್ತೆ ಸೇರಿದಂತೆ ನಗರದ ಹಲವೆಡೆ ತಳ್ಳುಗಾಡಿ ಹಾಗೂ ಆಟೋರಿಕ್ಷಾಗಳಲ್ಲಿ ವ್ಯಾಪಾರ ಮಾಡುತ್ತಿದ್ದಾರೆ.**

> **“ ತೋಟಗಾರಿಕೆ ಇಲಾಖೆ, ಜಿಲ್ಲಾ ಹಾಪ್ ಕಾಮ್ಸ್ ವತಿಯಿಂದ ನಗರದ ಕುಪ್ಪಣ್ಣ ಪಾರ್ಕ್ ಆವರಣದಲ್ಲಿ ಈ ಬಾರಿ ಮಾವು ಮತ್ತು ಹಲಸು ಮೇಳವನ್ನು ಮೇ 24, 25 ಮತ್ತು 26ರಂದು ಆಯೋಜಿಸಲಾಗುತ್ತದೆ. ಈ ಸಂಬಂಧ ಎಲ್ಲ ರೀತಿಯ ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ.**
> **-ಶಶಿಧರ್** ತೋಟಗಾರಿಕೆ ಇಲಾಖೆ ಸಹಾಯಕ ನಿರ್ದೇಶಕ

## ತಪ್ಪಿಸಿಕೊಳ್ಳಲು ಯತ್ನ: ಕಳ್ಳನಿಗೆ ಗಾಯ

**ಮೈಸೂರು:** ಕಳ್ಳನೊಬ್ಬ ಕಳ್ಳತನ ಮಾಡುವಾಗ ಸಿಕ್ಕಿ ಬಿದ್ದು ತಪ್ಪಿಸಿಕೊಳ್ಳಲು ಮಹಡಿಯಿಂದ ಜಿಗಿದು ಗಾಯಗೊಂಡ ಘಟನೆ ಮಾನಸಿ ನಗರದಲ್ಲಿ ನಡೆದಿದೆ. ಕಾರ್ಪೆಂಟರ್ ಕೆಲಸ ಮಾಡುತ್ತಿದ್ದ ರವಿ ಎಂಬಾತನೇ ಕಳ್ಳತನ ಮಾಡಿ ಸಿಕ್ಕಿಬಿದ್ದ ಖದೀಮ. ಡಾ.ಬಾಲಾಜಿ ಎಂಬುವರ ಮನೆಯಲ್ಲಿ ಕಳ್ಳತನ ಮಾಡುವಾಗ ಸಿಕ್ಕಿ ಬಿದ್ದಿದ್ದಾನೆ. ಕಳ್ಳ ಬಾಲಾಜಿ ಅವರಿಗೆ ದೃಷ್ಟಿ ಸಮಸ್ಯೆ ಇದೆ. ಮರ ಗೆಲಸ ಮಾಡಲು ರವಿ ಬಂದಿದ್ದ. ಮನೆಯಲ್ಲಿ ಜಾಗ ಕೊಟ್ಟು ಕೆಲಸ ಮಾಡಲು ಬಾಲಾಜಿ ಅವರು ರವಿಯನ್ನು ಇರಿಸಿಕೊಂಡಿದ್ದರು. ಈ ಹಿಂದೆಯೂ ಮೂರು ಬಾರಿ ಕಳ್ಳತನ ಮಾಡಿ ಸಿಕ್ಕಿಬಿದ್ದಾಗ ಬುದ್ದಿ ಹೇಳಿ ವಾರ್ನ್ ಮಾಡಿದ್ದರು. ಡಾ.ಬಾಲಾಜಿ ನಂಬಿಕೆಯನ್ನೇ ಬಂಡವಾಳ ಮಾಡಿಕೊಂಡು ಮತ್ತೆ ಕಳ್ಳತನಕ್ಕೆ ಯತ್ನಿಸಿದ್ದಾನೆ. ಮನೆಯ ನಕಲಿ ಬೀಗದ ಕೀ ಇಟ್ಟುಕೊಂಡಿದ್ದ ರವಿ ಯಾರು ಇಲ್ಲದ ವೇಳೆ ನಕಲಿ ಬೀಗ ಬಳಸಿ ಕಳ್ಳತನಕ್ಕೆ ಯತ್ನಸಿದ್ದಾನೆ.

ಈ ವೇಳೆ ದಿಢೀರ್ ಮನೆಗೆ ಬಂದ ಬಾಲಾಜಿ ಬೀಗ ತೆಗೆದಿರುವ ಬಗ್ಗೆ ಅನುಮಾನಗೊಂಡು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ವಿಷಯ ತಿಳಿಯುತ್ತಿದ್ದಂತೆಯೇ ಮನೆಯ ಮೇಲಿಂದ ರಗ್ಗು ಕಟ್ಟಿ ಹಾರಲು ಯತ್ನಿಸಿದ ಕಳ್ಳ ಕೆಳಗೆ ಬಿದ್ದು ತಲೆಗೆ ಪೆಟ್ಟು ಮಾಡಿಕೊಂಡಿದ್ದಾನೆ. ಈ ವೇಳೆ ಕಳ್ಳ ರವಿಯನ್ನು ಮೈಸೂರು ಗ್ರಾಮಾಂತರ ಪೊಲೀಸರು ವಶಕ್ಕೆ ಪಡೆದಿದ್ದಾರೆ.

## ರಸ್ತೆ ವಿಭಜಕಕ್ಕೆ ಬೈಕ್ ಡಿಕ್ಕಿಯಾಗಿ ಯುವಕ

**ಮೈಸೂರು:** ರಸ್ತೆ ವಿಭಜಕಕ್ಕೆ ಬೈಕ್ ಡಿಕ್ಕಿಯಾಗಿ ಯುವಕ ಮೃತಪಟ್ಟು, ಮತ್ತೊಬ್ಬ ಯುವಕ ಗಾಯಗೊಂಡಿರುವ ಘಟನೆ ಮೈಸೂರಿನ ರಾಮಕೃಷ್ಣನಗರದ ಪರಮಹಂಸ ವೃತ್ತ- ಕೆಇಬಿ ರಸ್ತೆ ನಡುವೆ ಭಾನುವಾರ ಬೆಳಗಿನ ಜಾವ ನಡೆದಿದೆ. ಟಿ.ಕೆ.ಲೇಔಟ್ ನಿವಾಸಿ ಶಿವಪ್ಪ ಎಂಬುವರ ಪುತ್ರ ರಕ್ಷಿತ್(26) ಮೃತಪಟ್ಟವರು. ಚಾಮುಂಡಿಪುರಂನ ಶಿವಕುಮಾರ್ ಎಂಬುವರ ಪುತ್ರ ತೇಜಸ್ ಗಾಯಗೊಂಡಿದ್ದು, ಆಸ್ಪತ್ರೆಗೆ ದಾಖಲಿಸಲಾಗಿದೆ. ರಕ್ಷಿತ್ ಮತ್ತು ತೇಜಸ್ ಬೈಕ್‌ನಲ್ಲಿ ಹೋಗುತ್ತಿದ್ದಾಗ ನಿಯಂತ್ರಣ ಕಳೆದುಕೊಂಡು ರಸ್ತೆ ವಿಭಜಕಕ್ಕೆ ಬೈಕ್ ಡಿಕ್ಕಿಯಾಗಿದೆ. ಈ ಅಪಘಾತದಲ್ಲಿ ಸವಾರ ರಕ್ಷಿತ್ ಸ್ಥಳದಲ್ಲೇ ಮೃತಪಟ್ಟಿದ್ದು, ಹಿಂಬದಿ ಸವಾರ ತೇಜಸ್ ಕಾಲಿಗೆ ತೀವ್ರ ಗಾಯವಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಈ ಸಂಬಂಧ ಕೆ.ಆರ್. ಸಂಚಾರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ರಾಘವೇಂದ್ರ ಶ್ರೀಗಳ ದಾಖಲೆಯ ರಂಗೋಲಿ

**ಮೈಸೂರು:** ಮಂತ್ರಾಲಯದ ರಾಘವೇಂದ್ರ ಶ್ರೀಗಳ ಮಠದ ಗರ್ಭಗುಡಿಯ ಮುಂದೆ ಅತಿ ಕಡಿಮೆ ಅವಧಿ ಹಾಗೂ ಅತಿ ಕಡಿಮೆ ಕಲಾವಿದರು ಒಳಗೊಂಡಂತೆ ರಾಘವೇಂದ್ರ ಶ್ರೀಗಳ ಸುಮಾರು 36,200 ಚದುರ ಅಡಿಯ ರಂಗೋಲಿ ಚಿತ್ರ ಬಿಡಿಸುವ ಮೂಲಕ ಮೂರು ಪ್ರಮುಖ ದಾಖಲೆ ನಿರ್ಮಿಸಲಾಗಿದೆ ಎಂದು ಕಲಾವಿದ ಎಸ್ .ಪುನೀತ್‌ಕುಮಾರ್ ತಿಳಿಸಿದರು.

ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಮೇ 7ರಿಂದ ತಮ್ಮ ಮೈಸೂರು ಕಲಾವಿದರ ತಂಡ ಮಂತ್ರಾಲಯಕ್ಕೆ ಹೊರಟು 8ರಂದು ಸಂಜೆ ರಾಘವೇಂದ್ರ ಸ್ವಾಮೀಜಿಗಳ ಮಠದಲ್ಲಿ ಪೂಜೆ ಸಲ್ಲಿಸಿ ಸಂಜೆ 5 ಗಂಟೆಗೆ ಚಿತ್ರ ರಚಿಸಲಾರಂಭಿಸಿದೆವು. ಆದರೆ, ಮಳೆ ಬಂದು ಚಿತ್ರ ಹಾಳಾಯಿತು. ಇದೇ ರೀತಿ ನಂತರದ ಮೂರು ದಿನವೂ ಮಳೆಯಿಂದ ಚಿತ್ರ ನೀರುಪಾಲಾಯಿತು. ಆದರೆ, ಹಠ ಬಿಡದೆ ನಾಲ್ಕನೇ ದಿನವೂ ಬೆಳಗ್ಗೆ 10ಕ್ಕೆ ಕಮಲದ ಮೇಲೆ ಕುಳಿತಿರುವ, ಹಿಂಬದಿಯಲ್ಲಿ ಬೃಂದಾವನವಿರುವ ರಾಘವೇಂದ್ರ ಶ್ರೀಗಳ ಚಿತ್ರ ರಚಿಸಲಾಯಿತು. ಈ ಮೂಲಕ ಇಂಡಿಯಾ ವರ್ಲ್ಡ್ ರೆಕಾರ್ಡ್, ಹಾಡ್ವರ್ಡ್ ರೆಕಾರ್ಡ್ ಮತ್ತು ಏಷ್ಯಾ ಬುಕ್ ಆಫ್ ವರ್ಲ್ಡ್ ರೆಕಾರ್ಡ್‌ಗಳಿಗೆ ಸೇರ್ಪಡೆ ಆಗಿದೆ. ಈ ಕೆಲಸದಲ್ಲಿ ಓಂ ಕಾರ್ಜ್ ಮಾಲೀಕ ಅಭಿಲಾಷ್ ಪ್ರಾಯೋಜಕತ್ವ ವಹಿಸಿದ್ದರು. ತಂಡದ ಸಿ.ಲಕ್ಷ್ಮೀ, ಪುನೀತ್ ರಾಯಣ್ಣ, ಎಂ.ಮಂಜುನಾಥ್, ಎಸ್.ಸೋನಾಕ್ಷಿ, ಸುಪ್ರೀತ್ ಚಂದನ್, ರವಿ, ಕೆ.ದೀಪಕ್, ಮಧುಸೂದನ್ ಪಾಲ್ಗೊಂಡಿದ್ದರೆಂದರು.

ಗೋಷ್ಠಿಯಲ್ಲಿ ತಂಡದ ಸದಸ್ಯರು ಹಾಜರಿದ್ದರು.



## ಛಾಯಾಗ್ರಹಣ ಮತ್ತು ಕಿರು ವಿಡಿಯೋ ಸ್ಪರ್ಧೆಗಳಿಗೆ ಅರ್ಜಿ ಆಹ್ವಾನ

**ಮೈಸೂರು:** ಪ್ರವಾಸೋದ್ಯಮ ಇಲಾಖೆ ವತಿಯಿಂದ ‘‘ಮೈಸೂರಿನ ಅನ್ವೇಷಿಸದ ಪ್ರವಾಸಿ ತಾಣಗಳು ಎಂಬ ಶೀರ್ಷಿಕೆಯಡಿಯಲ್ಲಿ ರಾಜ್ಯ ಮಟ್ಟದ ಛಾಯಾಚಿತ್ರ ಮತ್ತು ಕಿರು ವಿಡಿಯೋ ಸ್ಪರ್ಧೆಗಳನ್ನು ಏರ್ಪಡಿಸಲಾಗಿದ್ದು, ಸಾರ್ವಜನಿಕರಿಂದ ಅರ್ಜಿ ಆಹ್ವಾನಿಸಲಾಗಿದೆ. ಮೈಸೂರು ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ನದಿಗಳು, ಪ್ರಕೃತಿ ಮತ್ತು ರಮಣೀಯ ಸೌಂದರ್ಯ ತಾಣಗಳು, ಜಲಪಾತಗಳು, ವಸ್ತು ಸಂಗ್ರಹಾಲಯಗಳು, ಜಾನಪದ ಹಾಗೂ ಕಲೆಗಳು, ಸಾಂಪ್ರದಾಯಿಕ ಸ್ಥಳೀಯ ಹಬ್ಬಗಳು ಮತ್ತು ಕಲೆಗಳು, ಪಾರಂಪರಿಕ ಕಟ್ಟಡಗಳು ಮತ್ತು ಸ್ಮಾರಕಗಳು, ಧಾರ್ಮಿಕ ಮತ್ತು ಸಾಹಸ ಪ್ರವಾಸೋದ್ಯಮ ಹಾಗೂ ಇತರೆ ತಾಣಗಳ ರಾಜ್ಯ ಮಟ್ಟದ ಛಾಯಾಗ್ರಹಣ ಮತ್ತು ಕಿರು ವೀಡಿಯೋ ಸ್ಪರ್ಧೆಯಾಗಿದೆ. ಆಯ್ಕೆಯಾದ ಅತ್ಯುತ್ತಮ ಸಲ್ಲಿಕೆಗಳಿಗೆ ಪ್ರಥಮ ಬಹುಮಾನವಾಗಿ ರೂ.25,000 ದ್ವಿತೀಯ ಬಹುಮಾನ ರೂ.15,000 ಹಾಗೂ ತೃತೀಯ ಬಹುಮಾನವಾಗಿ ರೂ.10,000 ಗಳನ್ನು ನೀಡಲಾಗುವುದು. ಸ್ಪರ್ಧೆಯಲ್ಲಿ ಭಾಗವಹಿಸಲು ಇಚ್ಛಿಸುವವರು https://mysore.nic.in/en/competitions/ ವೆಬ್ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದ್ದು, ಜೂ.20 ಅಂತಿಮ ದಿನವಾಗಿದೆ.ಹೆಚ್ಚಿನ ಮಾಹಿತಿಗಾಗಿ visitmysurutourism@gmail.com ಹಾಗೂ 7411564510, 9008693409 ನ್ನು ಸಂಪರ್ಕಿಸಬಹುದು ಎಂದು ಮೈಸೂರು ವಿಭಾಗದ ಪ್ರವಾಸೋದ್ಯಮ ಇಲಾಖೆಯ ಜಂಟಿ ನಿರ್ದೇಶಕರಾದ ಎಂ.ಕೆ. ಸವಿತಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಳೆ ವಿದ್ಯುತ್ ವ್ಯತ್ಯಯ

**ಮೈಸೂರು:** ಮೇ 21 ರಂದು ಬೆಳಿಗ್ಗೆ 10 ರಿಂದ ಸಂಜೆ 05:30 ಗಂಟೆಯವರೆಗೆ ಸೌತ್ (ದಕ್ಷಿಣ) ವಿದ್ಯುತ್ ವಿತರಣಾ ಕೇಂದ್ರದಲ್ಲಿ ಕ.ವಿ.ಪ್ರ.ನಿ.ನಿ. ವತಿಯಿಂದ 1ನೇ ತ್ರೈಮಾಸಿಕ ಅವಧಿಯ ನಿರ್ವಹಣಾ ಕಾಮಗಾರಿಯನ್ನು ಹಮ್ಮಿಕೊಳ್ಳಲಾಗಿದ್ದು, ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ. ಇಂಡಸ್ಟ್ರಿಯಲ್ ಸಬರ್ಬ್, ವಿದ್ಯಾರಣ್ಯಪುರಂ 25, 26, 27, 28, 29 ಮತ್ತು 30ನೇ ಕ್ರಾಸ್, ಕನಕಗಿರಿ, ಬೆಸ್ತರ ಬ್ಲಾಕ್, ಇಂಡಸ್ಟ್ರಿಯಲ್ ಸಬರ್ಬ್ 1, 2 ಮತ್ತು 3ನೇ ಹಂತ, ಸ್ಟರ್ಲಿಂಗ್ ಸುತ್ತ-ಮುತ್ತ ವಿವರ್ಸ್ ಕಾಲೋನಿ, ಸುಬ್ರಮಣ್ಯ ಸ್ವಾಮಿ ದೇವಸ್ಥಾನದ ಸುತ್ತ-ಮುತ್ತ, ಚಾಮುಂಡಿಪುರಂ ವೃತ್ತ, ಪೋಸ್ಟಲ್ ಕಾಲೋನಿ, ಚಾಮುಂಡಿವನ, ವಾನಿ ವಿದ್ಯಾಮಂದಿರ ಸುತ್ತ-ಮುತ್ತ, ಸಿಲ್ಕ್ ಫ್ಯಾಕ್ಟರಿ ಸುತ್ತ-ಮುತ್ತ, ಅಶೋಕಪುರಂ, ನಾರಾಯಣ ಶಾಸ್ತ್ರಿ ರಸ್ತೆ, ಆಜಾಮ್ ಮಸೀದಿ ರಸ್ತೆ, ದಿವಾನ್ಸ್ ರಸ್ತೆ, ಬಲ್ಲಾಳ್ ರಸ್ತೆ, ಕೃಷ್ಣಮೂರ್ತಿಪುರಂ, ಆರ್.ಟಿ.ಓ ರಸ್ತೆ, ಚಾಮರಾಜಪುರಂ, ನಂಜುಮಳಿಗೆ ಸುತ್ತ-ಮುತ್ತಲಿನ ಪ್ರದೇಶಗಳು, ಬಂಡಿಪಾಳ್ಯ, ಹೊಸಹುಂಡಿ, ಗುಡುಮಾದನಹಳ್ಳಿ, ಉತ್ತನಹಳ್ಳಿ, ಏಳಿಗೆಹುಂಡಿ, ಹಾಲನಹಳ್ಳಿ ರಿಂಗ್ ರಸ್ತೆ ಸುತ್ತ-ಮುತ್ತಲಿನ ಪ್ರದೇಶಗಳು, ನಾಚನಹಳ್ಳಿ ಪಾಳ್ಯ, ಜೆ.ಪಿ ಎಂ.ಐ.ಜಿ.ಆ ಬ್ಲಾಕ್, ಕವಿತಾ ಬೇಕರಿ ವೃತ್ತ, ಪೊಲೀಸ್ ಬೂತ್ ವೃತ್ತ, ಗೊಬ್ಬಳಿ ಮರ ವೃತ್ತ, ಸಿದ್ದಲಿಂಗೇಶ್ವರ ಬಡಾವಣೆ, ಓಂಕಾರ್ ಬಡಾವಣೆ, ಅಮೋಘ ಪ್ಯಾಲೆಸ್ ಹೋಟೇಲ್ ಹಾಗೂ ಸುತ್ತ-ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ನಿಲುಗಡೆಯಾಗಲಿದ್ದು, ಸಾರ್ವಜನಿಕರು ಹಾಗೂ ಕೈಗಾರಿಕೋದ್ಯಮಿಗಳು ಸಹಕರಿಸಬೇಕೆಂದು ನ.ರಾ.ಮೊಹಲ್ಲಾ ವಿಭಾಗದ ಕಾರ್ಯ ಮತ್ತು ಪಾಲನೆಯ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸನ್ಯಾಸ ಸ್ವೀಕಾರ ಸುವರ್ಣ ಮಹೋತ್ಸವ

**ಮೈಸೂರು:** ಶೃಂಗೇರಿ ಮಠದ ಭಾರತಿ ತೀರ್ಥ ಸ್ವಾಮೀಜಿ ಸನ್ಯಾಸ ಸ್ವೀಕಾರದ ಸುವರ್ಣ ಮಹೋತ್ಸವ ಪ್ರಯುಕ್ತ ಶೃಂಗೇರಿಯ ಶಾರದಾ ಪೀಠ ಹಾಗೂ ಜಿಲ್ಲಾ ಮತ್ತು ನಗರ ಬ್ರಾಹ್ಮಣ ಸಂಘದ ವತಿಯಿಂದ ಭಾನುವಾರ ಫೋರ್ಟ್ ಮೊಹಲ್ಲಾದ ಶಂಕರಮಠದಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರ ನೆರವೇರಿತು. ಎಎಸ್‌ಜಿ ಕಣ್ಣಿನ ಆಸ್ಪತ್ರೆ ಹಾಗೂ ಡಿಆರ್‌ಎಂ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಸಹಯೋಗದಲ್ಲಿ ಆಯೋಜಿಸಿದ್ದ ಶಿಬಿರವನ್ನು ಶಾಸಕ ಟಿ.ಎಸ್.ಶ್ರೀವತ್ಸ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳುವ ಮೂಲಕ ಚಾಲನೆ ನೀಡಿದರು. ಸುಮಾರು 500ಕ್ಕೂ ಹೆಚ್ಚು ಮಠದ ಭಕ್ತರು ಹಾಗೂ ಸಾರ್ವಜನಿಕರು ಭಾಗವಹಿಸಿ ಶಿಬಿರದ ಸದುಪಯೋಗ ಪಡಿಸಿಕೊಂಡರು. ಮಠದ ವ್ಯವಸ್ಥಾಪಕ ಶೇಷಾದ್ರಿ, ಭಟ್, ಮೈಸೂರು ಜಿಲ್ಲಾ ಮತ್ತು ನಗರ ಬ್ರಾಹ್ಮಣ ಸಂಘದ ಅಧ್ಯಕ್ಷ ಡಿ.ಟಿ.ಪ್ರಕಾಶ್, ಗ್ರಾಮಾಂತರ ಬ್ರಾಹ್ಮಣ ಸಂಘದ ಅಧ್ಯಕ್ಷ ಗೋಪಾಲ್ ರಾವ್, ಮಠದ ಸೇವಾ ಕತೃಗಳಾದ ಎಸ್.ರಂಗನಾಥ, ಹರೀಶ್, ಎಂ.ಆರ್.ಬಾಲಕೃಷ್ಣ, ಶ್ರೀನಾಥ್, ಪ್ರಶಾಂತ್, ಮೀನಾಕ್ಷಿ, ಜ್ಯೋತಿ, ಬಾಬು, ಮಂಜುನಾಥ್, ಸುಚೇಂದ್ರ ತೀರ್ಥ, ನಾಗಶ್ರೀ, ಗಣೇಶ್, ಸತ್ಯಪ್ರಕಾಶ್ ಇತರರಿದ್ದರು.

## ಉಚಿತ ಟೈಲರಿಂಗ್ ತರಬೇತಿ

**ಬೆಂಗಳೂರು / ಕೋಲಾರ:** ಕೋಲಾರ ನಗರ ಹೊರವಲಯದ ಹೊನ್ನೇನಹಳ್ಳಿಯ ಕೆನರಾ ಬ್ಯಾಂಕ್ ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆಯಲ್ಲಿ ನಿರುದ್ಯೋಗಿ ಮಹಿಳೆಯರಿಗಾಗಿ ಉಚಿತ ಟೈಲರಿಂಗ್ ತರಬೇತಿಯನ್ನು ಹಮ್ಮಿಕೊಳ್ಳಲಾಗಿದೆ. ಆಸಕ್ತ ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು (ಗ್ರಾ) ಜಿಲ್ಲೆಯ 18 ರಿಂದ 45 ವರ್ಷ ವಯೋಮಿತಿಯುಳ್ಳವರು ಮೇ.23, ಗುರುವಾರದಂದು ಬೆಳಗ್ಗೆ.11ಕ್ಕೆ, ತರಬೇತಿ ಸಂಸ್ಥೆಯಲ್ಲಿ ನಡೆಯುವ ನೇರ ಸಂದರ್ಶನದಲ್ಲಿ ರೇಷನ್ ಕಾರ್ಡ್, ಆಧಾರ್ ಕಾಡ್, 3 ಪಾಸ್ ಪೋರ್ಟ್ ಅಳತೆಯ ಭಾವಚಿತ್ರದೊಂದಿಗೆ ಭಾಗವಹಿಸಬಹುದು. ತರಬೇತಿಯು 30 ದಿನಗಳ ಕಾಲಾವಧಿಯದಾಗಿದ್ದು, ತರಬೇತಿ ಅವಧಿಯಲ್ಲಿ ನುರಿತ ಸಂಪನ್ಮೂಲ ವ್ಯಕ್ತಿಗಳಿಂದ ತರಬೇತಿ ನೀಡಲಾಗುತ್ತದೆ. ಅಭ್ಯರ್ಥಿಗಳಿಗೆ ತರಬೇತಿ ವೇಳೆ ಉಚಿತವಾಗಿ ಊಟ ಹಾಗೂ ವಸತಿ ವ್ಯವಸ್ಥೆಯನ್ನು ಕಲ್ಪಿಸಲಾಗುತ್ತದೆ. ತರಬೇತಿ ನಂತರ ಕೇಂದ್ರ ಸರ್ಕಾರದ ಪ್ರಮಾಣ ಪತ್ರ ವಿತರಿಸಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಯ ತರಬೇತುದಾರರ ಮೊ.8971308776, 7760313833, 9483652240, ಸಂಪರ್ಕಿಸಬಹುದಾಗಿದೆ.

## ವಿಧಾನ ಪರಿಷತ್ ಚುನಾವಣೆ:ಚುನಾವಣಾ ವೀಕ್ಷಕರ ನೇಮಕ

**ಮೈಸೂರು:** ಕರ್ನಾಟಕ ದಕ್ಷಿಣ ಶಿಕ್ಷಕರ ಕ್ಷೇತ್ರ, ನೈರುತ್ಯ ಶಿಕ್ಷಕರ ಕ್ಷೇತ್ರ ಹಾಗೂ ನೈರುತ್ಯ ಪದವೀಧರರ ಕ್ಷೇತ್ರಗಳಿಂದ ಕರ್ನಾಟಕ ವಿಧಾನಪರಿಷತ್ತಿಗೆ ನಡೆಯಲಿರುವ ಚುನಾವಣೆ ಸಂಬಂಧ ಭಾರತ ಚುನಾವಣಾ ಆಯೋಗವು ಹಿರಿಯ ಐ.ಎ.ಎಸ್ ಅಧಿಕಾರಿಗಳನ್ನು ಚುನಾವಣಾ ವೀಕ್ಷಕರನ್ನು ನೇಮಕ ಮಾಡಿದೆ.

ಕೊಡಗು, ಚಿಕ್ಕಮಗಳೂರು, ದಕ್ಷಿಣ ಕನ್ನಡ, ಉಡುಪಿ, ಶಿವಮೊಗ್ಗ ಹಾಗೂ ದಾವಣಗೆರೆ ಜಿಲ್ಲೆಯ ಕರ್ನಾಟಕ ನೈರುತ್ಯ ಪದವೀಧರರ ಕ್ಷೇತ್ರಕ್ಕೆ ಅನೀಲ್ ಕುಮಾರ್ ಟಿ.ಕೆ ಹಾಗೂ ಹರ್ಷ ಗುಪ್ತ ಅವರನ್ನು ಚುನಾವಣಾ ವೀಕ್ಷಕರಾಗಿ ನೇಮಿಸಲಾಗಿದ್ದು, ತೋಟಗಾರಿಕೆ ಇಲಾಖೆಯ ಉಪನಿರ್ದೇಶಕರಾದ ರುದ್ರೇಶ್. ಕೆ(9964174107), ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ.ಎಂ.ಡಿ.ಸುದರ್ಶನ್(9448244340) ಅವರು ಸಹಾಯಕ ಅಧಿಕಾರಿಗಳಾಗಿರುತ್ತಾರೆ. ಮೈಸೂರು, ಮಂಡ್ಯ, ಚಾಮರಾಜನಗರ ಮತ್ತು ಹಾಸನ ಜಿಲ್ಲೆಗೆ ಡಾ.ರವಿಶಂಕರ್ ಅವರನ್ನು ಚುನಾವಣಾ ವೀಕ್ಷಕರಾಗಿ ನೇಮಿಸಲಾಗಿದ್ದು, ಮೈಸೂರಿನ ಅಬಕಾರಿ ಉಪ ಆಯುಕ್ತರಾದ ಎಸ್.ನಾಗರಾಜಪ್ಪ(9449597178) ಅವರು ಸಹಾಯಕ ಅಧಿಕಾರಿಗಳಾಗಿರುತ್ತಾರೆ.

ಮೂರು ಕ್ಷೇತ್ರಗಳ ಚುನಾವಣಾ ವೀಕ್ಷಕರು ಈಗಾಗಲೇ ಚುನಾವಣಾ ಕೆಲಸ-ಕಾರ್ಯಗಳ ವೀಕ್ಷಣೆ ನಡೆಸುತ್ತಿದ್ದು, ಸದರಿ ಚುನಾವಣಾ ಚುನಾವಣಾ ವೀಕ್ಷಕರನ್ನು ಭೇಟಿ ಮಾಡಲು ಅಥವಾ ಸಂಪರ್ಕಿಸಲು ದೂ.ಸಂ 7204294565 ಗೆ ಕರೆಮಾಡಬಹುದು ಎಂದು ಕರ್ನಾಟಕ ವಿಧಾನ ಪರಿಷತ್ತಿನ ನೈರುತ್ಯ ಪದವೀಧರ ಕ್ಷೇತ್ರ, ನೈರುತ್ಯ ಮತ್ತು ದಕ್ಷಿಣ ಶಿಕ್ಷಕರ ಕ್ಷೇತ್ರದ ಚುನಾವಣಾಧಿಕಾರಿಗಳು ಹಾಗೂ ಪ್ರಾದೇಶಿಕ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬೆಂಗಳೂರು ಪದವೀಧರರ ಕ್ಷೇತ್ರದ ಚುನಾವಣೆ

# ಬೆಂ.ಗ್ರಾಮಾಂತರ ಜಿಲ್ಲೆಯ ಮತದಾನ ಕೇಂದ್ರಗಳ ವಿವರ

**ಬೆಂಗಳೂರು ಗ್ರಾಮಾಂತರ:** ಬೆಂಗಳೂರು ಪದವೀಧರರ ಕ್ಷೇತ್ರದಿಂದ ರಾಜ್ಯ ವಿಧಾನ ಪರಿಷತ್ತಿಗೆ ನಡೆಯುವ ಚುನಾವಣೆ 2024ರ ಪ್ರಯುಕ್ತ ಜೂನ್ 03 ರಂದು ನಡೆಯಲಿರುವ ಮತದಾನ ಸಂಬಂಧ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಮತದಾನ ಕೇಂದ್ರಗಳ ಅಂತಿಮ ಪಟ್ಟಿ ಪ್ರಕಟಿಸಲಾಗಿದ್ದು ಮತದಾನ ಕೇಂದ್ರಗಳ ವಿವರ ಇಂತಿದೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ಟೌನ್ ಮತ್ತು ಕಸಬಾ ವ್ಯಾಪ್ತಿಯ ಪದವೀಧರ ಮತದಾರರು ದೊಡ್ಡಬಳ್ಳಾಪುರ ಟೌನ್ ನಲ್ಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರೌಢಶಾಲೆ (ಮತಗಟ್ಟೆ-01, 01ಂ, 01ಃ, 01ಅ) ವಿಭಾಗದ ಕೊಠಡಿ ಸಂಖ್ಯೆ. 02, 03, 04, ಹಾಗೂ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರೌಢಶಾಲೆ ವಿಭಾಗದ ಗ್ರಂಥಾಲಯ(ದಕ್ಷಿಣ ವಿಭಾಗ) ಕೊಠಡಿ ಸಂಖ್ಯೆ. 05 ರಲ್ಲಿ ಮತ ಚಲಾಯಿಸಬಹುದಾಗಿದೆ.

ದೊಡ್ಡ ಬೆಳವಂಗಲ ಹೋಬಳಿಯ ಪದವೀಧರ ಮತದಾರರು ದೊಡ್ಡಬೆಳವಂಗಲ (ಮತಗಟ್ಟೆ-02) ಸರ್ಕಾರಿ ಕರ್ನಾಟಕ ಪಬ್ಲಿಕ್ ಶಾಲೆ ಕೊಠಡಿ ಸಂಖ್ಯೆ. 02 ಇಲ್ಲಿ ಮತ ಚಲಾಯಿಸಬಹುದು.

ಮಧುರೆ ಹೋಬಳಿಯ ಪದವೀಧರ ಮತದಾರರು ಮಧುರೆ (ಮತಗಟ್ಟೆ-03) ಹೋಬಳಿಯ ಕನಸವಾಡಿ ಗ್ರಾಮದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರೌಢಶಾಲೆ



ವಿಭಾಗದಲ್ಲಿ ಮತ ಚಲಾಯಿಸಬಹುದು.

ಸಾಸಲು ಹೋಬಳಿಯ ಪದವೀಧರ ಮತದಾರರು ಉನ್ನತ್ತೀಕರಿಸಿದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ (ಮತಗಟ್ಟೆ-04) ಕೊಠಡಿ ಸಂಖ್ಯೆ. 01 ರಲ್ಲಿ ಮತ ಚಲಾಯಿಸಬಹುದು.

ತೂಬಗೆರೆ ಹೋಬಳಿಯ ಪದವೀಧರ ಮತದಾರರು ತೂಬಗೆರೆ (ಮತಗಟ್ಟೆ-05) ಗ್ರಾಮ ಪಂಚಾಯತ ಕಾರ್ಯಾಲಯದಲ್ಲಿ ಮತ ಚಲಾಯಿಸಬಹುದು.

ದೇವನಹಳ್ಳಿ ಟೌನ್ ಮತ್ತು ಕಸಾಬ ಹೋಬಳಿ ಪದವೀಧರ ಮತದಾರರು ದೇವನಹಳ್ಳಿ ಟೌನ್ ಪುರಸಭೆಯ(ಮತಗಟ್ಟೆ-06) ಟೌನ್ ಹಾಲ್ ಕೊಠಡಿ ಸಂಖ್ಯೆ. 01, ಪುರಸಭೆ (ಮತಗಟ್ಟೆ-6ಂ) ಕಾರ್ಯಾಲಯದ ಕೊಠಡಿ ಸಂಖ್ಯೆ. 02 ರಲ್ಲಿ ಮತ ಚಲಾಯಿಸಬಹುದು.

ಚನ್ನರಾಯಪಟ್ಟಣ ಹೋಬಳಿಯ ಪದವೀಧರ ಮತದಾರರು ಚನ್ನರಾಯಪಟ್ಟಣ (ಮತಗಟ್ಟೆ-07) ಗ್ರಾಮ ಪಂಚಾಯತಿ ಕಾರ್ಯಾಲಯದಲ್ಲಿ ಮತ ಚಲಾಯಿಸಬಹುದು.

ಕುಂದಾಣ ಹೋಬಳಿಯ ಪದವೀಧರ ಮತದಾರರು ಕುಂದಾಣ(ಮತಗಟ್ಟೆ-08) ಗ್ರಾಮ ಪಂಚಾಯತ ಕಾರ್ಯಾಲಯ ಕುಂದಾಣದಲ್ಲಿ ಮತ ಚಲಾಯಿಸಬಹುದು.

ವಿಜಯಪುರ ಹೋಬಳಿ ಮತ್ತು ವಿಜಯಪುರ ಟೌನ್ ನ ಪದವೀಧರ ಮತದಾರರು ವಿಜಯಪುರ ಟೌನ್ (ಮತಗಟ್ಟೆ-9, 9ಂ) ನಲ್ಲಿರುವ ಸರ್ಕಾರಿ ಬಾಲಕಿಯರ ಪ್ರೌಢಶಾಲೆ ಕೊಠಡಿ ಸಂಖ್ಯೆ. 01, 02 ರಲ್ಲಿ ಮತ ಚಲಾಯಿಸಬಹುದು.

ಹೊಸಕೋಟೆ ಟೌನ್ ನ ಪದವೀಧರ ಮತದಾರರು ಹೊಸಕೋಟೆ ಟೌನ್ (ಮತಗಟ್ಟೆ-10, 10ಂ) ನ ತಾಲೂಕು ಪಂಚಾಯತ ಕಾರ್ಯಾಲಯದ ಕೊಠಡಿ ಸಂಖ್ಯೆ. 01, 02 ರಲ್ಲಿ ಮತ ಚಲಾಯಿಸಬಹುದು. ಆನುಗೊಂಡನಹಳ್ಳಿ ಹೋಬಳಿಯ ಪದವೀಧರ ಮತದಾರರು ಆನುಗೊಂಡನಹಳ್ಳಿ (ಮತಗಟ್ಟೆ-11) ಗ್ರಾಮ ಪಂಚಾಯತ ಕಾರ್ಯಾಲಯದಲ್ಲಿ ಮತ ಚಲಾಯಿಸಬಹುದು.

ಜಡಿಗೇನಹಳ್ಳಿ ಹೋಬಳಿಯ ಪದವೀಧರ ಮತದಾರರರು ಜಡಿಗೇನಹಳ್ಳಿ (ಮತಗಟ್ಟೆ-12) ಗ್ರಾಮ ಪಂಚಾಯತ ಕಾರ್ಯಾಲಯದಲ್ಲಿ ಮತ ಚಲಾಯಿಸಬಹುದು.

ನಂದಗುಡಿ ಹೋಬಳಿಯ ಪದವೀಧರ ಮತದಾರರು ನಂದಗುಡಿ (ಮತಗಟ್ಟೆ-13) ಗ್ರಾಮ ಪಂಚಾಯತ ಕಾರ್ಯಾಲಯದಲ್ಲಿ ಮತ ಚಲಾಯಿಸಬಹುದು.

ಸೂಲಿಬೆಲೆ ಹೋಬಳಿ ಪದವೀಧರ ಮತದಾರರು ಸೂಲಿಬೆಲೆ (ಮತಗಟ್ಟೆ-14) ಗ್ರಾಮ ಪಂಚಾಯತ ಕಾರ್ಯಲಯದಲ್ಲಿ ಮತ ಚಲಾಯಿಸಬಹುದು.

ನೆಲಮಂಗಲ ಟೌನ್ ಮತ್ತು ಕಸಬಾ ಹೋಬಳಿಯ ಪದವೀಧರ ಮತದಾರರು ನೆಲಮಂಗಲ ಟೌನ್ ನಲ್ಲಿರುವ (ಮತಗಟ್ಟೆ ಸಂಖ್ಯೆ 15, 15ಂ, 15ಃ) ಎಸ್.ಜೆ.ಎಮ್ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಕೊಠಡಿ ಸಂಖ್ಯೆ. 01,02,03 ರಲ್ಲಿ ಮತ ಚಲಾಯಿಸಬಹುದು.

ಸೋಂಪುರ ಹೋಬಳಿ ಪದವೀಧರ ಮತದಾರರು ಸೋಂಪುರದಲ್ಲಿರುವ (ಮತಗಟ್ಟೆ-16) ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆ, ಕೊರಟಗೆರೆ ರೋಡ್ ಸೋಂಪುರ ಇಲ್ಲಿ ಮತ ಚಲಾಯಿಸಬಹುದು.

ತ್ಯಾಮಗೊಂಡ್ಲು ಹೋಬಳಿ ವ್ಯಾಪ್ತಿಯ ಪದವೀಧರ ಮತದಾರರು ತ್ಯಾಮಗೊಂಡ್ಲು ನಲ್ಲಿರುವ (ಮತಗಟ್ಟೆ-17) ಕರ್ನಾಟಕ ಪಬ್ಲಿಕ್ ಶಾಲೆ ಕೊಠಡಿ ಸಂಖ್ಯೆ. 01 ರಲ್ಲಿ ಮತ ಚಲಾಯಿಸಬಹುದಾಗಿದ್ದು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವ್ಯಾಪ್ತಿಯಲ್ಲಿ 25 ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಎನ್ ಶಿವಶಂಕರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪಿ.ಸಿ.ಎಂ.ಬಿ, ಪಿ.ಸಿ.ಎಂ.ಸಿ ಕೋರ್ಸ್‌ಗಳ ದಾಖಲಾತಿಗೆ ಅರ್ಜಿ

**ಬೆಂಗಳೂರು ಗ್ರಾಮಾಂತರ:** ಸಮಾಜ ಕಲ್ಯಾಣ ಇಲಾಖೆಯಡಿಯಲ್ಲಿನ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಮೊರಾರ್ಜಿ ದೇಸಾಯಿ/ ಅಟಲ್ ಬಿಹಾರಿ ವಾಜಪೇಯಿ ವಸತಿ ವಿಜ್ಞಾನ ಪದವಿ ಪೂರ್ವ ಕಾಲೇಜುಗಳಲ್ಲಿ ವ್ಯಾಸಂಗ ಮಾಡಲು 2024-25 ನೇ ಸಾಲಿನ ಪ್ರಥಮ ಪಿ.ಯು.ಸಿ ವಿಜ್ಞಾನ ವಿಭಾಗದ ಪಿ.ಸಿ.ಎಂ.ಬಿ ಮತ್ತು ಪಿ.ಸಿ.ಎಂ.ಸಿ ಕೋರ್ಸ್ಗಳ ದಾಖಲಾತಿಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ದಿನಾಂಕ: 25-05-2024 ರಂದು ಕೊನೆಯ ದಿನಾಂಕವಾಗಿರುತ್ತದೆ. ದಾಖಲಾತಿ ಪಡೆದ ವಿದ್ಯಾರ್ಥಿಗಳಿಗೆ ಉಚಿತ ಶಿಕ್ಷಣ, ಊಟ ಮತ್ತು ವಸತಿ, ಲೇಖನ ಸಾಮಾಗ್ರಿ, ಪಠ್ಯ ಪುಸ್ತಕ, ಶೂ ಸಾಕ್ಸ್, ಸಮವಸ್ತ್ರ, ಸಿ.ಇ.ಟಿ ಮತ್ತು ನೀಟ್ ಪರೀಕ್ಷೆಗಳಿಗೆ ತರಬೇತಿ ಹಾಗೂ ಇತರೆ ಸೌಲಭ್ಯಗಳನ್ನು ಉಚಿತವಾಗಿ ನೀಡಲಾಗುವುದು. ಜಿಲ್ಲೆಯ ಎಲ್ಲಾ ವಸತಿ-ಶಾಲಾ ಕಾಲೇಜುಗಳಲ್ಲಿ ಅರ್ಜಿಯನ್ನು ವಿತರಿಸಲಾಗುವುದು. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಮೊರಾರ್ಜಿ ದೇಸಾಯಿ/ ಅಟಲ್ ಬಿಹಾರಿ ವಾಜಪೇಯಿ ವಸತಿ ವಿಜ್ಞಾನ ಪದವಿ ಪೂರ್ವ ಕಾಲೇಜುಗಳು: ● ಮೊರಾರ್ಜಿ ದೇಸಾಯಿ ಪದವಿ ಪೂರ್ವ ವಸತಿ ಕಾಲೇಜು, ಜಡಿಗೇನಹಳ್ಳಿ, ಹೊಸಕೋಟೆ ತಾಲ್ಲೂಕು. ● ಮೊರಾರ್ಜಿ ದೇಸಾಯಿ ಪದವಿ ಪೂರ್ವ ವಸತಿ ಕಾಲೇಜು, ಬಚ್ಚಹಳ್ಳಿ, ದೊಡ್ಡಬಳ್ಳಾಪುರ ತಾಲ್ಲೂಕು. ● ಅಟಲ್ ಬಿಹಾರಿ ವಾಜಪೇಯಿ ವಸತಿ ಶಾಲೆ, ಬೊಮ್ಮವಾರ, ದೇವನಹಳ್ಳಿ ತಾಲ್ಲೂಕು. ಹೆಚ್ಚಿನ ವಿವರಗಳಿಗಾಗಿ ಪ್ರಾಂಶುಪಾಲರುಗಳಾದ ಕಿರಣ್ ಕುಮಾರ್.ಎನ್-9110256424 ಮತ್ತು ನಾಗರತ್ನಮ್ಮ,ಪಿ-8100526933, ರೇಖಾ ಎಸ್ 7349391473 ಹಾಗೂ ಉಪನಿರ್ದೇಶಕರ ಕಛೇರಿ, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ. ನಂ.217, 2ನೇ ಮಹಡಿ , ಜಿಲ್ಲಾಡಳಿತ ಭವನ, ಬೀರಸಂದ್ರ ಗ್ರಾಮ, ದೇವನಹಳ್ಳಿ ತಾಲ್ಲೂಕು, ಬೆಂ.ಗ್ರಾ. ಜಿಲ್ಲೆ-562110. ಅನ್ನು ಸಂಪರ್ಕಿಸಬಹುದಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಪ ನಿರ್ದೇಶಕರಾದ ಟಿ.ಎಲ್.ಎಸ್ ಪ್ರೇಮ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಿಪ್ಲೋಮೊ ಕೋರ್ಸ್ ಗಳ ತರಬೇತಿಗೆ ಅರ್ಜಿ ಆಹ್ವಾನ

**ಬೆಂಗಳೂರು ಗ್ರಾಮಾಂತರ:** ದೇವನಹಳ್ಳಿ ತಾಲ್ಲೂಕಿನ ಚನ್ನರಾಯಪಟ್ಟಣದಲ್ಲಿರುವ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರವು(ಜಿ.ಟಿ.ಟಿ.ಸಿ) ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿದೆ. ದೇವನಹಳ್ಳಿ ಜಿ.ಟಿ.ಟಿ.ಸಿ ಕೇಂದ್ರದಲ್ಲಿ 2024-25 ನೇ ಶೈಕ್ಷಣಿಕ ಸಾಲಿನ ಡಿಪ್ಲೊಮಾ ಕೋರ್ಸ್ಗಳ ದಾಖಲಾತಿ ಪ್ರಾರಂಭವಾಗಿದ್ದು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ (ಕೆ.ಇ.ಎ) ಮೂಲಕ ಆನ್ಲೈನ್ ಅರ್ಜಿ ಆಹ್ವಾನಿಸಲಾಗಿದೆ. ಆನ್ಲೈನ್ ಮೂಲಕ ಅರ್ಜಿ ಸಲ್ಲಿಸಲು ಮೇ 27 ಕೊನೆಯ ದಿನ. ಕೋರ್ಸ್ಗಳ ವಿವರ: ● ಡಿಪ್ಲೋಮೊ ಇನ್ ಟೂಲ್ ಡೈ ಮೇಕಿಂಗ್(ಡಿ.ಟಿ.ಡಿ.ಎಮ್) ● ಡಿಪ್ಲೋಮ ಇನ್ ಮೆಕಾಟ್ರಾನಿಕ್ಸ್, (ಡಿ.ಎಮ್.ಸಿ.ಹೆಚ್) ● ಡಿಪ್ಲೋಮಾ ಇನ್ ಎಲೆಕ್ಟ್ರಿಕಲ್ ಎಲೆಕ್ಟ್ರಾನಿಕ್ಸ್ ಇಂಜಿನಿಯರಿಂಗ್ (ಡಿ.ಇ.ಇ.ಇ) ● ಡಿಪ್ಲೋಮೊ ಆಫ್ ಆರ್ಟಿಫಿಶಿಯಲ್ ಇಂಟಲಿಜೆನ್ಸ್ ಮಿಷಿನ್ ಲರ್ನಿಂಗ್.(ಡಿ.ಎ.ಐಎಮ್.ಎಲ್). ● ಮೇಲಿನ 04 ಕೋರ್ಸ್ ಗಳಿಗೆ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆ ಉತ್ತೀಣ9ರಾದವರು ಅರ್ಹರಾಗಿರುತ್ತಾರೆ. ಈ ಡಿಪ್ಲೋಮೋ ಕೋರ್ಸ್ ಗಳ ಅವಧಿ 3+1(ಕಡ್ಡಾಯ ಒಂದು ವರ್ಷದ ಸ್ಟೈಫಂಡ್ ಸಹಿತ ಇಂಟರ್ನ್ಶಿಪ್ ತರಬೇತಿ) ವರ್ಷ. ಈ ಕೇಂದ್ರದಲ್ಲಿ ಎಸ್.ಎಸ್.ಎಲ್.ಸಿ, ಪಿಯುಸಿ ಮತ್ತು ಐಟಿಐ ಪಾಸಾದ ವಿದ್ಯಾರ್ಥಿಗಳು ಡಿಪ್ಲೋಮೋ ತರಗತಿಗಳಿಗೆ ದಾಖಲಾತಿ ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ 080-266 07666, 9036144417, 9242952017, 9980956422 ಅಥವಾ ಜಿ.ಟಿ.ಟಿ.ಸಿ ದೇವನಹಳ್ಳಿ ತರಬೇತಿ ಕೇಂದ್ರಕ್ಕೆ ಖುದ್ದಾಗಿ ಭೇಟಿ ನೀಡಿ ಮಾಹಿತಿ ಪಡೆದುಕೊಳ್ಳಬಹುದು ಎಂದು ದೇವನಹಳ್ಳಿ ಜಿ.ಟಿ.ಟಿ.ಸಿ ಕೇಂದ್ರದ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಂಗೀಕೃತ, ತಿರಸ್ಕೃತಗೊಂಡ ನಾಮಪತ್ರ ಪಟ್ಟಿ ಬಿಡುಗಡೆ

**ಮೈಸೂರು:** ಕರ್ನಾಟಕ ವಿಧಾನ ಪರಿಷತ್ತಿನ ನೈರುತ್ಯ ಪದವೀಧರರ ಕ್ಷೇತ್ರ ಮತ್ತು ದಕ್ಷಿಣ ಶಿಕ್ಷಕರ ಕ್ಷೇತ್ರಗಳ ಚುನಾವಣೆ ಸಂಬಂಧಿಸಿದಂತೆ ಮೇ 09 ರಿಂದ ಮೇ 16 ರವರೆಗೆ ಸ್ವೀಕೃತವಾದ ನಾಮಪತ್ರಗಳ ಪರಿಶೀಲನೆಯನ್ನು ಮೇ 17 ರಂದು ಬೆಳಿಗ್ಗೆ 11 ಗಂಟೆಗೆ ನಡೆಸಲಾಗಿದ್ದು, ನಾಮಪತ್ರಗಳ ಪರಿಶೀಲನೆಯಲ್ಲಿ ಕ್ಷೇತ್ರವಾರು, ನಾಮಪತ್ರಗಳು ಅಂಗೀಕಾರ ಮತ್ತು ತಿರಸ್ಕೃತವಾಗಿರುವ ಪಟ್ಟಿ ಬಿಡುಗಡೆ ಮಾಡಲಾಗಿದೆ.ದಕ್ಷಿಣ ಶಿಕ್ಷಕರ ಕ್ಷೇತ್ರದಲ್ಲಿ 13 ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದು, 13 ಅಭ್ಯರ್ಥಿಗಳ ನಾಮಪತ್ರ ಅಂಗೀಕರವಾಗಿರುತ್ತದೆ. ನೈರುತ್ಯ ಪದವೀಧರರ ಕ್ಷೇತ್ರದಲ್ಲಿ 11 ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದು, 11 ಅಭ್ಯರ್ಥಿಗಳ ನಾಮಪತ್ರ ಅಂಗೀಕರವಾಗಿರುತ್ತದೆ. ನೈರುತ್ಯ ಶಿಕ್ಷಕರ ಕ್ಷೇತ್ರದಲ್ಲಿ 10 ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದು, 09 ಅಭ್ಯರ್ಥಿಗಳ ನಾಮಪತ್ರ ಅಂಗೀಕರವಾಗಿದ್ದು, ಪಕ್ಷೇತರ ಅಭ್ಯರ್ಥಿಯಾದ ಎಂ.ಸತೀಶ್ ಕಾರಂತ್ ಅವರ ನಾಮಪತ್ರ ತಿರಸ್ಕೃತಗೊಂಡಿರುತ್ತದೆ. ಮೇ 17 ರಿಂದ ಮೇ 20 ರ ಮಧ್ಯಾಹ್ನ 3 ಗಂಟೆಯವರೆಗೆ ನಾಮಪತ್ರಗಳನ್ನು ಹಿಂಪಡೆಯಲು ಅವಕಾಶವಿರುತ್ತದೆ ಎಂದು ಕರ್ನಾಟಕ ವಿಧಾನಪರಿಷತ್ತಿನ ನೈರುತ್ಯ ಪದವೀಧರ ಕ್ಷೇತ್ರ, ನೈರುತ್ಯ ಮತ್ತು ದಕ್ಷಿಣ ಶಿಕ್ಷಕರ ಕ್ಷೇತ್ರದ ಚುನಾವಣಾಧಿಕಾರಿಗಳು ಹಾಗೂ ಪ್ರಾದೇಶಿಕ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 23ರಂದು ಮಾಂಸ ಮಾರಾಟ ನಿಷೇಧ

**ಮೈಸೂರು:** ಮೇ 23 ರಂದು ಬುದ್ಧಪೂರ್ಣಿಮೆ ಪ್ರಯುಕ್ತ ಮೈಸೂರು ಮಹಾನಗರ ಪಾಲಿಕೆಗೆ ಸೇರಿದ ಎಲ್ಲಾ ಮಾಂಸದ ಅಂಗಡಿಗಳನ್ನು ಮುಚ್ಚಲಾಗುತ್ತದೆ.ಈ ದಿನ ಕುರಿ, ಮೇಕೆ, ಕೋಳಿ, ಹಂದಿ ಮಾಂಸ ಮತ್ತು ಮೀನು ವ್ಯಾಪಾರವನ್ನು ಮೈಸೂರು ನಗರದಲ್ಲಿ ಕಡ್ಡಾಯವಾಗಿ ನಿಷೇದಿಸಲಾಗಿರುತ್ತದೆ ಎಂದು ಮೈಸೂರು ಮಹಾನಗರ ಪಾಲಿಕೆಯ ಆರೋಗ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಠಗಳ ಉದ್ಧಾರದಲ್ಲಿ ರಾಜಕೀಯ ಬೇಡ : ಅಮರ ಸಿದ್ದೇಶ್ವರ

**ಬೈಲಹೊಂಗಲ:** ಮಠಗಳು ಸಮಾಜ ತಿದ್ದುವಲ್ಲಿ ಬಹುಮುಖ್ಯ ಪಾತ್ರ ವಹಿಸುತ್ತಿದ್ದು ಇಂಥಹ ಶ್ರದ್ಧಾ ಕೇಂದ್ರಗಳಲ್ಲಿ ರಾಜಕೀಯ ಬೆರೆಸಿ ಕಪ್ಪು ಚುಕ್ಕೆಯಾಗದಂತೆ ಮಠಾಧೀಶರು ಎಚ್ಚರ ವಹಿಸಿ ಭಕ್ತರಿಗೆ ಸೂಕ್ತ ಮಾರ್ಗದರ್ಶನ ಮಾಡಬೇಕೆಂದು ಗೋಕಾಕ ತಾಲೂಕ ಅಂಕಲಗಿ ಅಡವಿ ಸಿದ್ದೇಶ್ವರ ಸಂಸ್ಥಾನ ಮಠದ ಪೂಜ್ಯ ಅಮರ ಸಿದ್ದೇಶ್ವರ ಸ್ವಾಮೀಜಿ ಹೇಳಿದರು.

ಅವರು ತಾಲೂಕಿನ ಬೈಲವಾಡ ಗ್ರಾಮದ ಸುಕ್ಷೇತ್ರ, ವರ್ತಿ ಸಿದ್ದಬಸವೇಶ್ವರ ಮಠದ ಜಾತ್ರಾ, ಮಹೋತ್ಸವ ಹಾಗೂ ಶ್ರೀ ಗುರುಪಾದ ಶಿವಾಚಾರ್ಯರ ಪುಣ್ಯ ಸ್ಮರಣೋತ್ಸವ, ವರ್ತಿ ವೈಭವ-2024 ರ ಅಂಗವಾಗಿ ನಡೆದ ಧಾರ್ಮಿಕ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಪುರಾತನ ಕಾಲದಿಂದಲೂ ಮಠಗಳ ಪರಂಪರೆಗೆ ವಿಶೇಷ ಗೌರವವಿದೆ. ಮಠಗಳೆಂದರೆ ಯಾವದೇ ಜಾತಿ, ಮತ, ಪಂಥಕ್ಕೆ ಅವಕಾಶ ನೀಡದೇ ರಾಜಕೀಯ ರಹಿತವಾಗಿ ಕಾರ್ಯನಿರ್ವಹಿಸಬೇಕು. ಮಠಗಳಲ್ಲಿ ರಾಜಕೀಯ ಮಾಡದೇ ರಾಜಕೀಯದಲ್ಲಿ ಮಠಾಧೀಶರು ಮಾರ್ಗದರ್ಶನ ಮಾಡಿದಾಗ ಮಾತ್ರ ಉತ್ತಮ ರಾಷ್ಟ್ರ ನಿರ್ಮಾಣ ಸಾಧ್ಯವೆಂದರು.

ರಾಜ್ಯ ಸರಕಾರದ ಧಾರ್ಮಿಕ ದತ್ತಿ ಇಲಾಖೆಯ ನಿರ್ದೇಶಕ ಡಾ. ಮಹಾಂತೇಶ ಶಾಸ್ತ್ರಿ ಆರಾದ್ರಿಮಠ ಜಾತ್ರಾ



ಮಹೋತ್ಸವ ಕಮೀಟಿಯಿಂದ ಸನ್ಮಾನ ಸ್ವೀಕರಿಸಿ ಮಾತನಾಡಿ, ಬೈಲಹೊಂಗಲ ತಾಲೂಕು ವೀರಶೂರ ನಾಡಿನ ಜೊತೆಗೆ ಹಲವಾರು ಮಠ ಮಂದಿರಗಳನ್ನು ಹೊಂದಿದ ಪುಣ್ಯ ಭೂಮಿಯಾಗಿದೆ. ಅದರಲ್ಲಿ ಈ ವರ್ತಿ ಕ್ಷೇತ್ರವೂ ಕೂಡಾ ಸಾಧಕರ ತಾಣವಾಗಿ ಪರಿಣಮಿಸಿದ್ದು ಇದರ ಅಭಿವೃದ್ದಿಗಾಗಿ ಪ್ರಯತ್ನಿಸಲಾಗುವದೆಂದು ತಿಳಿಸಿದರು.

ಮುರಗೋಡದ ಶ್ರೀ ಮಹಾಂತ ದುರದುಂಡೇಶ್ವರ ಮಠದ ನೀಲಕಂಠ ಸ್ವಾಮೀಜಿ, ಬಸವರಾಜ ದೇವರು ಹಿರೇಮಠ ಹುಣಶೀಕಟ್ಟಿ, ಬೈಲವಾಡ ವರ್ತಿ ಮಠದ ಶಂಕರ ದೇವರು, ಬಟಕುರ್ಕಿ ಗದಿಗಯ್ಯ ದೇವರು, ಆದೋನಿ ಗುರುಸಿದ್ದ ದೇವರು, ಮಾಜಿ ಶಾಸಕ ಮಹಾಂತೇಶ ದೊಡಗೌಡರ, ಗುರುವಯ್ಯ ಹಿರೇಮಠ, ತಾಲೂಕಾ ಕಜಾಪ ವಕ್ತಾರ ಮಹಾಂತೇಶ ರಾಜಗೋಳಿ, ಶ್ರೀಧರ ಗಿರೆಪ್ಪಗೌಡರ ವೇದಿಕೆ ಮೇಲಿದ್ದರು. ವೀರನಗೌಡಾ ಗಿರೆಪ್ಪಗೌಡರ, ಮೋಹನ ನಾಯಕ, ಮಹಾಂತೇಶ ಕಲ್ಲಪ್ಪಗೌಡರ, ಶಂಕರಗೌಡಾ ಮುದಕನಗೌಡರ, ರುದ್ರಪ್ಪ ಹೊಸೂರ, ರಮೇಶ ಯಲ್ಲಪ್ಪಗೌಡರ, ಬಸಪ್ಪ ಮಾಶೆಟ್ಟಿ, ಶಿವಪುತ್ರಪ್ಪ ಮಿಶೀಗೇರಿ, ವೀರಣ್ಣ ದಾನಣ್ಣವರ, ಶ್ರೀಶೈಲ ಶರಣಪ್ಪನವರ, ನಾಗನಗೌಡಾ ಪಾಟೀಲ, ಮಂಜುನಾಥ ಮೊರಬದ, ಮಂಜುನಾಥ ಹುಚ್ಚನವರ ಸೇರಿದಂತೆ ಶ್ರೀ ವರ್ತಿ ಸಿದ್ದಬಸವೇಶ್ವರ ಅಭಿವೃದ್ಧಿ ಸೇವಾ ಸಂಘದ ಸದಸ್ಯರು, ಚನ್ನಬಸವೇಶ್ವರ ಯುವಕ ಸಂಘದ ಸದಸ್ಯರು, ಗ್ರಾ.ಪ.ಆಡಳಿತ ಮಂಡಳಿ ಸದಸ್ಯರು, ಪಿಕೆಪಿಎಸ್ ಆಡಳಿತ ಮಂಡಳಿ ಸದಸ್ಯರು ಉಪಸ್ಥಿತರಿದ್ದರು. ಪಿಕೆಪಿಎಸ್ ಅಧ್ಯಕ್ಷ ಬಸವರಾಜ ಬೊಳಗೌಡ್ರ ಸ್ವಾಗತಿಸಿದರು. ಉಪನ್ಯಾಸಕ ಶಿವನಗೌಡಾ ಪಾಟೀಲ ನಿರೂಪಿಸಿದರು. ಶಿಕ್ಷಕ ಎಸ್.ವ್ಹಿ.ಗಾಡದ ವಂದಿಸಿದರು. ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಸಾಧಕರನ್ನು ಸತ್ಕರಿಸಲಾಯಿತು. ಮಕ್ಕಳಿಂದ ಸಾಂಸ್ಕತಿಕ ಕಾರ್ಯಕ್ರಮಗಳು ಜರುಗಿದವು. ಮಹಿಳೆಯರಿಗೆ ರಂಗೋಲಿ ಸ್ಪರ್ಧೆ ಏರ್ಪಡಿಸಲಾಗಿತ್ತು. ಶ್ರೀ ವರ್ತಿ ಸಿದ್ದಬಸವೇಶ್ವರಿಗೆ ವಿಶೇಷ ಪೂಜೆ ನೆರವೇರಿಸಲಾಯಿತು. ಅನ್ನ ಪ್ರಸಾದ ಜರುಗಿತು.

# ದಾಯಾದಿಗಳ ದೊಡ್ಡದ್ಯಾವರ

## 60 ಜೋಡಿಗಳ ಮೆರವಣಿಗೆ- 5 ಸಾವಿರಕ್ಕೂ ಹೆಚ್ಚು ಮಂದಿ ಭಾಗಿ



**ಕೋಲಾರ:** ಶ್ರೀನಿವಾಸಪುರ ರಸ್ತೆಯ ವಡಗೇರನಹಳ್ಳಿಯಲ್ಲಿ ನಡೆದಿದ್ದು, 5 ಸಾವಿರಕ್ಕೂ ಹೆಚ್ಚು ಮಂದಿ ಪಾಲ್ಗೊಂಡಿದ್ದರು.

ದಾಯಾದಿಗಳು ಮತ್ತು ರಕ್ತ ಸಂಬಂಧಿಗಳನ್ನು ಒಂದೆಡೆ ಸೇರಿಸುವ ಈ ಕಾರ್ಯಕ್ರಮ ಕಳೆದ 36 ವರ್ಷಗಳಿಂದ ನಡೆದಿತ್ತು. ಇದೀಗ 36 ವರ್ಷಗಳ ನಂತರ ನಡೆದ ಮೊದಲ ದ್ಯಾವರಾ ಇದಾಗಿದ್ದು, 60 ಜೋಡಿಗಳು ಈ ದ್ಯಾವರದಲ್ಲಿ ಭಾಗವಹಿಸಿದ್ದು, ಮಕ್ಕಳಿಗೆ ಹೂ ಮುಡಿಸುವ ಕಾರ್ಯಕ್ರಮ ನಡೆಯಿತು.

ಸಾಂಪ್ರದಾಯಿಕವಾಗಿ ಬುಟ್ಟಿಗಳನ್ನು ಹಿಡಿದು ಮಕ್ಕಳು ಮೆರವಣಿಗೆಯಲ್ಲಿ ಸಾಲು ಸಾಲಾಗಿ ದೇವಾಲಯಕ್ಕೆ ಪ್ರದಕ್ಷಿಣೆ ಹಾಕಿದ ನಂತರ ಸಂಪ್ರದಾಯಬದ್ದವಾಗಿ ಈ ಕಾರ್ಯಕ್ರಮ ನಡೆಯುತ್ತದೆ. ದಾಯಾದಿಗಳು,ಸಂಬಂಧಿಕರು, ಸ್ನೇಹಿತರು ಸೇರಿ ನಡೆಸುವ ಈ ಕಾರ್ಯಕ್ರಮದಿಂದ ಸಮುದಾಯದಲ್ಲಿ ಒಗ್ಗಟ್ಟು, ಒಂದೆಡೆ ಬೆರೆಯುವ ಮೂಲಕ ಸಂಬಂಧ, ಸೌಹಾರ್ದತೆ ಮರು ನೆಲೆಗೊಳ್ಳಲು ಇದು ಸಹಕಾರಿಯಾಗಿದೆ ಎಂದು ಅರಾಭಿಕೊತ್ತನೂರು ಶಾಲಾ ಶಿಕ್ಷಕ ವೆಂಕಟರೆಡ್ಡಿ ತಿಳಿಸಿದರು.

ಹೂಬುಟ್ಟಿಗಳಲ್ಲಿ ಹೂ ಸಿಂಗರಿಸಿ ಮೆರವಣಿಗೆಯಲ್ಲಿ ಮಕ್ಕಳು ಪಾಲ್ಗೊಂಡಿದ್ದು, ನೋಡಲು ಅತ್ಯಂತ ರಮಣೀಯವಾಗಿತ್ತು. ಸಾವಿರಾರು ಸಂಖ್ಯೆಯಲ್ಲಿ ಸಂಬಂಧಿಕರು ಸ್ನೇಹಿತರು ಆಗಮಿಸಿದ್ದರು.

ಊಟದ ವ್ಯವಸ್ಥೆಯ ಉಸ್ತುವಾರಿಯನ್ನು ರಮೇಶ್, ಶ್ರೀರಾಮರೆಡ್ಡಿ, ವೆಂಕಟೇಶರೆಡ್ಡಿ ಮತ್ತಿತರರು ವಹಿಸಿಕೊಂಡಿದ್ದು, ಐದು ಸಾವಿರಕ್ಕೂ ಹೆಚ್ಚು ಮಂದಿಗೆ ಮದುವೆ ಊಟದ ವ್ಯವಸ್ಥೆ ಮಾಡಿದ್ದು, ಎಲ್ಲರೂ ಒಂದೆಡೆ ಸೇರಿ ಊಟ ಮಾಡುವ ಮೂಲಕ ಸಂಪ್ರದಾಯವನ್ನು ಉಳಿಸುವ ಕೆಲಸ ಮಾಡಿದರು. ದ್ಯಾವರದಲ್ಲಿ ಕಮಲಮ್ಮ ಗೋಪಾಲಪ್ಪ, ರೂಪ ವೆಂಕಟರೆಡ್ಡಿ, ಶೋಭಾಮಂಜುನಾಥ್, ಅನಿತಾ ,ಶ್ರೀರಾಮ್ ಸರೋಜಮ್ಮ, ಹರೀಶ್‌ಕಾವ್ಯ ದಂಪತಿಗಳು ಸೇರಿದಂತೆ ನೂರಾರು ಕುಟುಂಬಗಳು ದ್ಯಾವರಕಾರ್ಯ ನಡೆಸಿದವು.

## ವೀರಬ್ರಹ್ಮೇಂದ್ರ ಸ್ವಾಮಿ ಆರಾಧನೆ

**ವಿಜಯಪುರ:** ಭೂತ, ಭವಿಷ್ಯತ್ ಕಾಲಗಳನ್ನು ತಮ್ಮ ತಪಃ ಪ್ರಭಾವದಿಂದ ಅರಿತುಕೊಂಡು, ಜನರಲ್ಲಿ ಜಾಗೃತಿ ಮೂಡಿಸುವಂತಹ ಸಾವಿರಾರು ತ್ರಿಪದಿಗಳನ್ನು ರಚಿಸಿದ ಮಹಾನ್ ವ್ಯಕ್ತಿ ಶ್ರೀ ಪೋತಲೂರು ವೀರಬ್ರಹ್ಮೇಂದ್ರ ಸ್ವಾಮಿ ಎಂದು ಶ್ರೀ ವಿಶ್ವಕರ್ಮ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ಬಿ. ಎಸ್. ರಾಜಶೇಖರಾಚಾರಿ ತಿಳಿಸಿದರು. ಪಟ್ಟಣದಲ್ಲಿರುವ ಶ್ರೀ ವೀರಬ್ರಹ್ಮೇಂದ್ರ ಸ್ವಾಮಿ ದೇವಾಲಯದಲ್ಲಿ ಶ್ರೀ ವೀರ ಬ್ರಹ್ಮೇಂದ್ರ ಸ್ವಾಮಿಯವರಿಗೆ ವಿಶೇಷ ಪೂಜೆಯೊಂದಿಗೆ ದೇವಾಲಯದ ಸಂಸ್ಥಾಪಕರಾದ ಶ್ರೀ ಚಂದ್ರಾಚಾರ್ ರವರ ನೇತೃತ್ವದಲ್ಲಿ ನಡೆದ ಪೂಜಾ ಕೈಂಕರ್ಯದಲ್ಲಿ ಪಾಲ್ಗೊಂಡು, ಮಾತನಾಡಿದರು. ಶ್ರೀ ವಿಶ್ವಕರ್ಮ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಶ್ರೀ ವೀರಬ್ರಹ್ಮೇಂದ್ರ ಸ್ವಾಮಿ ಉತ್ಸವಮೂತಿ9ಯನ್ನು ಮಂಗಳವಾದ್ಯ, ಸುಮಂಗಲಿಯರಿಂದ ಕಳಶ, ವೀರಗಾಸೆಕುಣಿತದೊಂದಿಗೆ ಊರಿನ ರಾಜಬೀದಿಗಳಲ್ಲಿ ಪಂಚಾಶ್ವ ಬೆಳ್ಳಿ ರಥದಲ್ಲಿ ಮೆರವಣಿಗೆ ಏಪ9ಡಿಸಲಾಗಿತ್ತು ವಿಶ್ವಕರ್ಮ ಕ್ಷೇಮಾಭಿವೃದ್ಧಿ ಸಂಘದ ಕಾರ್ಯದರ್ಶಿಗಳಾದ ಬಿ. ಪುರುಷೋತ್ತಮ್, ಖಜಾಂಚಿಗಳಾದ ಎಸ್. ಎಂ. ಗೋಪಾಲಕೃಷ್ಣಚಾಯ, ಸಮುದಾಯದ ಪ್ರಮುಖರಾದ ಮಾಳಿಗಾಚಾರ್, ಈಶ್ವರಾಚಾರಿ ಸಂಘದ ಪದಾಧಿಕಾರಿಗಳಾದ ಎ. ಸುಧಶ9ನ್, ನಾಗಭೂಷಣಚಾರ್, ಶ್ರೀಧರ್, ಮುರಳೀಧರ್, ನಂಜುಂಡಾಚಾರ್, ಪ್ರವೀಣ್ ಕುಮಾರ್, ಹರೀಶ್, ರಾಜೇಶ್ ಶ್ರೀ ಗಾಯತ್ರಿ ವಿಶ್ವಕರ್ಮ ಕ್ಷೇಮಾಭಿವೃದ್ಧಿ ಸಂಘದ ಮಹಿಳಾ ಪದಾಧಿಕಾರಿಗಳಾದ - ರಾಜೇಶ್ವರಿ, ಶೋಭಾದೇವಿ, ಶಶಿಕಲಾ, ಮಮತಾವೇಣು, ಸುಧಾ, ಕಮಲಮ್ಮ, ಪದ್ಮಮ್ಮ, ಅನುಸೂಯಮ್ಮ, ಸರೋಜಮ್ಮಮತ್ತು ಸಮುದಾಯವರು ಭಾಗವಹಿಸಿದ್ದರು.



## ಕ್ರಾಂತಿವೀರ ಸಿಂಧೂರ ಲಕ್ಷ್ಮಣ ಅವರ ಭಾವ ಚಿತ್ರಕ್ಕೆ ಪೂಜೆ

**ಸವಣೂರ:** ಪಟ್ಟಣದ ಓಝೋನ ಕಂಪ್ಯೂಟರ ಕೇಂದ್ರದಲ್ಲಿ ಕ್ರಾಂತಿವೀರ ಸಿಂಧೂರ ಲಕ್ಷ್ಮಣ ಅವರ 135ನೇ ಜಯಂತೋತ್ಸವದ ಅಂಗವಾಗಿ ಕ್ರಾಂತಿವೀರ ಸಿಂಧೂರ ಲಕ್ಷ್ಮಣ ಅವರ ಭಾವ ಚಿತ್ರಕ್ಕೆ ಪೂಜೆ ಸಲ್ಲಿಸುತ್ತಿರುವದು.

ಸವಣೂರ: ಯುವಕರಲ್ಲಿ ದೇಶಪ್ರೇಮದ ಕಿಚ್ಚನ್ನು ಹಚ್ಚಿ ಭಾರತ ಮಾತೆಯನ್ನು ಬ್ರಿಟಿಷರ ಸಂಕೋಲೆಯಿಂದ ಮುಕ್ತಗೊಳಿಸಲು ಹಗಲಿರುಳು ಹೋರಾಡಿದ ಅಪ್ರತಿಮ ದೇಶಭಕ್ತ ಎಂದು ಶ್ರೀ ಮಹರ್ಷಿ ವಾಲ್ಮೀಕಿ ಯುವ ಕ್ಷೇಮಾಭಿವೃದ್ಧಿ ಸಂಘದ ತಾಲೂಕಾಧ್ಯಕ್ಷ ಶ್ರೀಧರ ದೊಡ್ಮನಿ ಹೇಳಿದರು.

ಸವಣೂರ ಪಟ್ಟಣದ ಓಝೋನ ಕಂಪ್ಯೂಟರ ಕೇಂದ್ರದಲ್ಲಿ ಕ್ರಾಂತಿವೀರ ಸಿಂಧೂರ ಲಕ್ಷ್ಮಣ ಅವರ 135ನೇ ಜಯಂತೋತ್ಸವದ ಅಂಗವಾಗಿ ಕ್ರಾಂತಿವೀರ ಸಿಂಧೂರ ಲಕ್ಷ್ಮಣ ಅವರ ಭಾವ ಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದರು, ಬ್ರಿಟಿಷರ ವಿರುದ್ಧ ಕೆಚ್ಚೆದೆಯಿಂದ ಹೋರಾಡಿದ ದೇಶಭಕ್ತ ವೀರ ಸಿಂಧೂರ ಲಕ್ಷ್ಮಣ ಶೋಷಿತ ಜನಾಂಗದ ಧ್ವನಿಯಾಗಿದ್ದರು ಕೇವಲ ಬ್ರಿಟಿಷರ ವಿರುದ್ಧ ಮಾತ್ರವಲ್ಲದೆ ದೇಶದೊಳಗಿನ ದೇಶ ದ್ರೋಹಿಗಳ ವಿರುದ್ಧವೂ ಸಿಡಿದೆದ್ದ ಕ್ರಾಂತಿಕಾರಿ ವೀರ ಲಕ್ಷ್ಮಣರವರ ಪುತಳಿಯನ್ನು ಜಿಲ್ಲಾ ಕೇಂದ್ರದಲ್ಲಿ ಸ್ಥಾಪನೆ ಕಾರ್ಯ ಶೀಘ್ರ ನಡೆಯಬೇಕು ಎಂದರು. ಸಿಂಧೂರ ಲಕ್ಷ್ಮಣ ವೇಷದಲ್ಲಿ ಪ್ರಮೋದ್ ಹೊಳೆಮ್ಮನವರ ಎಲ್ಲರ ಗಮನ ಸೆಳೆದರು. ಪ್ರಧಾನ ಕಾರ್ಯದರ್ಶಿ ನಾಗರಾಜ್ ವಾಲ್ಮೀಕಿ, ಪದಾಧಿಕಾರಿಗಳಾದ ಪಕೀರಪ್ಪ ವಾಲ್ಮೀಕಿ, ಆಕಾಶ ಕರಿಚಿಕ್ಕಣ್ಣನವರ, ಬಸವರಾಜ ಜಲ್ಲಾಪುರ, ಮಂಜುನಾಥ ಹಿತ್ತಲಮನಿ, ರವಿ ಮೈದೂರ, ಸಂತೋಷ್ ತಳವಾರ, ಆಂಜನೇಯ ತಳವಾರ, ಧ್ರುವಕುಮಾರ್ ಹೊಳೆಮ್ಮನವರ ಹಾಗೂ ಇತರರು ಉಪಸ್ಥಿತರಿದ್ದರು.



## ಸಂವಿಧಾನ ಒಂದು ಹಣತೆಯಂತೆ, ಸದಾ ದಾರಿದೀಪವಾಗಿ ನಮ್ಮನ್ನು ಮುನ್ನಡೆಸುತ್ತದೆ

**ಚಾಮರಾಜನಗರ :** ಸಂವಿಧಾನ ನಮಗೆ ನಿಜರೂಪದಲ್ಲಿ ಮಾರ್ಗದಶಕನಿದ್ದಂತೆ. ಭಾರತದ ನಾಗರೀಕರಾದ ನಾವು ನಮ್ಮ ಸಂವಿಧಾನವನ್ನು ತಿಳಿಯುವ ಪ್ರಾಮಾಣಿಕ ಪ್ರಯತ್ನ ಮಾಡುವುದು ಅತ್ಯಂತ ಅವಶ್ಯಕವಾದದ್ದು ಎಂದು ಅಜೀಂ ಪ್ರೇಮ್ ಜಿ ಫೌಂಡೇಶನ್ ಓಂ ಪ್ರಕಾಶ್ ರವರು ಅಭಿಪ್ರಾಯ ವ್ಯಕ್ತಪಡಿಸಿದರು.

ಇನ್ಸಿಟ್ಯೂಟ್ ಆಫ್ ಪಬ್ಲಿಕ್ ಹೆಲ್ತ್ ಬೆಂಗಳೂರು ಸಂಸ್ಥೆಯು ಚಾಮರಾಜನಗರ ಜಿಲ್ಲೆಯ ಬಿಳಿಗಿರಿರಂಗನ ಬೆಟ್ಟದಲ್ಲಿ ಶುಕ್ರವಾರ ಸಂಸ್ಥೆಯ ಸಿಬ್ಬಂದಿಗಳಿಗಾಗಿ ಆಯೋಜಿಸಲಾಗಿದ್ದ ಎರಡು ದಿನಗಳ ಸಂವಿಧಾನ ತಿಳಿಯೋಣ ಬಾ ಎಂಬ ನಮ್ಮ ಸಂವಿಧಾನ ಕುರಿತ ಎರಡು ದಿನಗಳ ಜಾಗೃತಿ ಕಾರ್ಯಾಗಾರವನ್ನು ಉದ್ದೇಶಿಸಿ ಮಾತನಾಡಿದ ಕಾರ್ಯಾಗಾರದ ಸಂಪನ್ಮೂಲ ವ್ಯಕ್ತಿಯಾದ ಓಂ ಪ್ರಕಾಶ್ ರವರು ಸಂವಿಧಾನವು ಅರಿವಿನ ಹಣತೆ ಇದ್ದಂತೆ, ಪ್ರತಿಯೊಬ್ಬರನ್ನು ಪ್ರಜ್ಞಾವಂತ ನಾಗರೀಕರನ್ನಾಗಿ ಸರಿದಾರಿಯಲ್ಲಿ ಬೆಳಕಿನೆಡೆಗೆ ಕೊಂಡೊಯ್ಯುವ ಒಬ್ಬ ಗುರುವಿನಂತೆ ಎಂದರು. ಸಂವಿಧಾನವನ್ನು ನಾವು ತಿಳಿಯುವುದಷ್ಟೇ ಅಲ್ಲ, ನಮ್ಮ ಸುತ್ತಲಿನ ಸಮಾಜದಲ್ಲಿ ಅದನ್ನು ತಿಳಿಸುವ ಪ್ರಯತ್ನ ಕೂಡ ಅತ್ಯವಶ್ಯಕ ಎಂದು ತಿಳಿಸಿದರು.

ಸ್ಥಳೀಯ ಸೋಲಿಗ ಆದಿವಾಸಿ ಸಮುದಾಯದ ಮುಖಂಡರುಗಳಾದ ದಾಸೇಗೌಡ, ಬಸವರಾಜು, ಕಾರನ ಕೇತೇಗೌಡ ಅಜೀಮ್ ಪ್ರೇಮ್ ಜಿ ಫೌಂಡೇಶನ್ನಿನ ಪ್ರತಿನಿಧಿಗಳು ಹಾಗೂ ಇನ್ಸಿಟ್ಯೂಟ್ ಆಫ್ ಪಬ್ಲಿಕ್ ಹೆಲ್ತ್ ನ ಸಹಾಯಕ ನಿರ್ದೇಶಕರಾದ ಡಾ. ತಾನ್ಯಾ ರವರು ಈ ಕಾರ್ಯಗಾರಕ್ಕೆ ಚಾಲನೆ ನೀಡಿದರು. ಇನ್ಸಿಟ್ಯೂಟ್ ಆಫ್ ಪಬ್ಲಿಕ್ ಹೆಲ್ತ್ ಬೆಂಗಳೂರು ಸಂಸ್ಥೆಯ ನಿರ್ದೇಶಕರಾದ ಡಾ. ಪ್ರಶಾಂತ್ ಎನ್. ಎಸ್ ಮಾತನಾಡಿ, ಸಂವಿಧಾನವನ್ನು ಸರಿಯಾಗಿ ತಿಳಿಯುವುದೆಂದರೇ ಕೇವಲ ಸಂವಿಧಾನದ ವಿವಧ ಭಾಗಗಳನ್ನು, ಅನುಚ್ಛೇದಗಳನ್ನು ತಿಳಿಯುವುದಲ್ಲ, ಅದರ ಹಿನ್ನೆಲೆ, ಉದ್ದೇಶ ಹಾಗೂ ಈ ಒಂದು ಮಹತ್ಕಾರ್ಯದ ಹಿಂದೆ ಶ್ರಮಿಸಿರುವ ಬಹಳಷ್ಟು ವ್ಯಕ್ತಿಗಳ ಶ್ರಮಾದಾನದ ಕುರಿತೂ ತಿಳಿದಾಗ ಸಂವಿಧಾನವನ್ನು ಸರಿಯಾಗಿ ಅರ್ಥೈಸಲು ಸಾಧ್ಯವಾಗುತ್ತದೆ. ಪ್ರತಿಯೊಬ್ಬ ಪ್ರಜೆಯೂ ಸಂವಿಧಾನದಲ್ಲಿ ತನಗಿರುವ ಹಕ್ಕುಗಳ ಬಗ್ಗೆಯಷ್ಟೇ ತಿಳಿಯದೆ, ಮೂಲಭೂತ ಕರ್ತವ್ಯಗಳ ಬಗ್ಗೆಯೂ ತಿಳಿದು ತಮ್ಮ ದಿನನಿತ್ಯದ ಜೀವನದಲ್ಲಿ ಅವುಗಳ ಪಾಲನೆ ಮಾಡುವುದರಿಂದ ತನ್ನ ಹಾಗೂ ದೇಶದ ಹಿತ ಕಾಪಾಡಬಹುದಾಗಿದೆ, ಈ ನಿಟ್ಟಿನಲ್ಲಿ, ಸಾರ್ವಜನಿಕ ಆರೋಗ್ಯ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ನಮ್ಮ ಸಿಬ್ಬಂದಿಗಳಿಗೆ ಈ ಕಾರ್ಯಗಾರ ಬಹಳಷ್ಟು ಪ್ರಯೋಜನಕಾರಿಯಾಗಲಿದೆ ಎಂದರು.

ಇನ್ಸಿಟ್ಯೂಟ್ ಆಫ್ ಪಬ್ಲಿಕ್ ಹೆಲ್ತ್ ಬೆಂಗಳೂರು ಸಂಸ್ಥೆಯ ಚಾಮರಾಜನಗರ ಫೀಲ್ಡ್ ಸ್ಟೇಷನ್ ನ ವಿವಿಧ ಯೋಜನೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ 80ಕ್ಕೂ ಹೆಚ್ಚು ಸಿಬ್ಬಂದಿಗಳು ಭಾಗವಹಿಸಿದ್ದರು.

## ಚುನಾವಣೆ ನಡೆಸಲು ಕೆಪಿಟಿಸಿಎಲ್ ಸಿಬ್ಬಂದಿ ಆಗ್ರಹ

**ಕೋಲಾರ:** ಕೆಪಿಟಿಸಿಎಲ್ ನೌಕರರ ಸಂಘದ ಚುನಾವಣೆ ನಡೆಸದೆ ಏಕಪಕ್ಷೀಯವಾಗಿ ಅವಿರೋಧ ಆಯ್ಕೆಗೆ ನಿರ್ಧಾರ ಕೈಗೊಳ್ಳಲಾಗಿದ್ದು ಇದಕ್ಕೆ ಬಹುತೇಕರ ವಿರೋಧ ಇದೆ ಎಂದು ಎಂಜಿನಿಯರ್ ಸುನಿಲ್ ಕುಮಾರ್ ಹೇಳಿದರು. ಸುದ್ದಿಗಾರರೊಂದಿಗೆ ಮಾತನಾಡಿ, ಕೇಂದ್ರ ಸಮಿತಿಗೆ ಆಯ್ಕೆ ಮಾಡಲು ನಡೆದ ಸರ್ವ ಸದಸ್ಯರ ಸಭೆಯಲ್ಲಿ ಸದಸ್ಯರು ಚುನಾವಣೆ ಬೇಕೆಂದು ಮನವಿ ಮಾಡಿದರೂ

ಚುನಾವಣಾಧಿಕಾರಿಗಳು ನಮ್ಮ ಮನವಿಯನ್ನು ಆಲಿಸದೆ ಅನ್ಯಾಯ ಮಾಡಿದ್ದು ಹೀಗಾಗಿ ಸಂಬಂಧಪಟ್ಟವರು ಇದರ ಬಗ್ಗೆ ಗಮನ ಹರಿಸುವ ಮೂಲಕ ಸಂಘದಲ್ಲಿ ಚುನಾವಣೆ ನಡೆಸಲು ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು. ಕಳೆದ ಚುನಾವಣೆಗಳಲ್ಲಿ ಎದುರಾಳಿಗಳನ್ನು ಸೋಲಿಸಿರುವುದರಿಂದಾಗಿ ಈ ಬಾರಿಯೂ ಚುನಾವಣೆಯಲ್ಲಿ ಸೋಲುಂಟಾಗುತ್ತದೆ ಎಂಬುದನ್ನು ಮನಗಂಡು 7 ಮಂದಿ ಸೇರಿ ಅವಿರೋಧ ಆಯ್ಕೆ ಆಗಿದೆ ಎಂದು ನಿರ್ಣಯ ಬರೆದುಕೊಂಡಿದ್ದು ಇದಕ್ಕೆ ನಮ್ಮ ಸಮ್ಮತಿಯಿಲ್ಲ ಎಂದು ಸುನಿಲ್ ಕುಮಾರ್ ತಿಳಿಸಿದರು. ಲೈನ್ಮೆನ್ ಆನಂದಕುಮಾರ್ ಮಾತನಾಡಿ, ಪಾರದರ್ಶಕವಾಗಿ ಚುನಾವಣೆ ಮಾಡಬೇಕಿದ್ದು ಯಾರೊಬ್ಬರ ನಿರ್ಣಯದಂತೆ ಸಂಘವನ್ನು ಅಧೀನ ಮಾಡಬೇಡಿ ಎಂದು ಮನವಿ ಮಾಡಿದರು. ಕೆಪಿಟಿಸಿಎಲ್ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಬೈರೆಡ್ಡಿ,ಮುಖಂಡರಾದ ಪ್ರವೀಣಕುಮಾರ್,ವೆಂಕಟೇಶ್,ಕೃಷ್ಣಪ್ಪ,ಪ್ರಸನ್ನಕುಮಾರ್ ,ರವೀಂದ್ರಕುಮಾರ್,ಕೃಷ್ಣ ಇದ್ದರು.

## ದೇವೇಗೌಡರ ಹುಟ್ಟುಹಬ್ಬ ದೇವಾಲಯದಲ್ಲಿ ಪೂಜೆ

**ಮಂಡ್ಯ:** ಮಾಜಿ ಪ್ರಧಾನ ಮಂತ್ರಿ ಎಚ್.ಡಿ.ದೇವೇಗೌಡ ಅವರ 92ನೇ ಹುಟ್ಟುಹಬ್ಬದ ಅಂಗವಾಗಿ ಅವರ ಅಭಿಮಾನಿಗಳು ಹಾಗೂ ಶಂಭು ಸೇವಾ ಟ್ರಸ್ಟ್ ವತಿಯಿಂದ ನಗರದ ವಿದ್ಯಾಗಣಪತಿ ದೇವಾಲಯದಲ್ಲಿ ದೇವರಿಗೆ ವಿಶೇಷ ಪೂಜೆ ಸಲ್ಲಿಸಿ ಪ್ರಾರ್ಥಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಂಭು ಸೇವಾ ಟ್ರಸ್ಟ್ನ ಬಿ.ಆರ್.ಸುರೇಶ್ ಮಾತನಾಡಿ, ನಾಡು ಕಂಡ ದಿಗ್ಗಜ ರಾಜಕಾರಣಿ ಹಾಗೂ ಹಿರಿಯ ಮುತ್ಸದ್ದಿ ಎಚ್.ಡಿ.ದೇವೇಗೌಡ ಅವರಿಗೆ ಮತ್ತಷ್ಟು ಆಯುಷ್ ಆರೋಗ್ಯ ಕೊಟ್ಟು ದೇವರು ಕಾಪಾಡಲಿ ಎಂದು ಗಣೇಶ ದೇವಾಲಯದಲ್ಲಿ ಪೂಜೆ ಮಾಡಿಸುತ್ತಿದ್ದೇವೆ ಎಂದರು.



ರಾಜಕಾರಣದಲ್ಲಿ ಹಲವರನ್ನು ಬೆಳೆಸಿದ ಇವರ ಗುಣವನ್ನು ದೇಶವೇ ಮೆಚ್ಚಿಕೊಂಡಿದೆ, ಜಾತ್ಯಾತೀತ ಜನತಾ ದಳವನ್ನು ದೇಶವ್ಯಾಪಿ ಗುರುತಿಸುವಂತೆ ಮಾಡಿದ್ದಾರೆ, ರಾಜ್ಯದಲ್ಲಿಯೂ ಉತ್ತಮ ಹೆಸರು ಮಾಡುವ ಮೂಲಕ ಅಪಾರ ಅಭಿಮಾನಿಗಳು ಮತ್ತು ಕಾರ್ಯಕರ್ತರನ್ನು ಹೊಂದಿರುವ ಜೆಡಿಎಸ್ ಪಕ್ಷವು ಜನಪರವಾಗಿ ಕೆಲಸ ಮಾಡುತ್ತಿರುವುದೇ ವಿಶೇಷ ಎಂದು ಶ್ಲಾಘಿಸಿದರು.

ಜೆಡಿಎಸ್ ಜಿಲ್ಲಾಧ್ಯಕ್ಷ ಡಿ.ರಮೇಶ್ ಮಾತನಾಡಿ, ಸರಳ ಹಾಗೂ ಸಜ್ಜನಿಕೆ ರಾಜಕಾರಣಿಯಾಗಿರುವ ಸನ್ಮಾನ್ಯ ಮಾಜಿ ಪ್ರಧಾನ ಮಂತ್ರಿ, ದೇವೇಗೌಡರ ಹುಟ್ಟುಹಬ್ಬವನ್ನು ರಾಜ್ಯಾದ್ಯಂತ ಆಚರಿಸುತ್ತಿದ್ದೇವೆ, ವಿವಿಧ ದೇವಾಲಯಗಳಲ್ಲಿ ಪೂಜೆಗಳನ್ನು ಅವರ ಅಭಿಮಾನಿಗಳು ಮಾಡಿಸುವ ಮೂಲಕ ಅಭಿಮಾನ ಮೆರೆಯುತ್ತಿದ್ದಾರೆ, ದೇವೇಗೌಡರಿಗೆ ಹೆಚ್ಚಿನ ಆರೋಗ್ಯವನ್ನು ಆ ಭಗವಂತ ನೀಡಲಿ ಎಂದರು.

ಪ್ರಸ್ತುತದಲ್ಲಿ ಅವರ ಹೆಸರಿಗೆ ಮಸಿ ಬಳಿಯುವ ಕೆಲಸವನ್ನು ದುಷ್ಟ ಶಕ್ತಿಗಳು ಮಾಡುತ್ತಿದ್ದಾರೆ, ಅವೆಲ್ಲವನ್ನು ಗೆಲ್ಲುವ ಮಟ್ಟದಲ್ಲಿ ಅವರಿಗೆ ಶಕ್ತಿಯನ್ನು ದೇವರು ನೀಡಲಿ, ರಾಜ್ಯ ಮತ್ತು ರಾಷ್ಟ್ರದಲ್ಲಿ ದೇವೇಗೌಡರ ಸೇವೆ ಹೆಚ್ಚಿನ ರೀತಿ ಸಿಗಬೇಕು ಎನ್ನುವುದೇ ನಮ್ಮೆಲ್ಲರ ಆಶಯವಾಗಿದೆ ಎಂದು ತಿಳಿಸಿದರು.

ನಗರಸಭೆ ಸದಸ್ಯರಾದ ನಾಗೇಶ್, ಮೀನಾಕ್ಷಿ, ಮುಖಂಡರಾದ ತಿಮ್ಮೇಗೌಡ, ಬೋರೇಗೌಡ, ಕೆಂಚನಹಳ್ಳಿ ಪುಟ್ಟಸ್ವಾಮಿ, ತಂಡಸನಹಳ್ಳಿ ನವೀನ್, ಸಾತನೂರು ಜಯರಾಮ್, ಕೆ.ಸಿ.ನಾಗಮ್ಮ, ಮಂಜು ಭಾಗವಹಿಸಿದ್ದರು.

# ಮಳೆಗೆ ಜನಜೀವನ ಅಸ್ತವ್ಯಸ್ತ

**ಚಾಮರಾಜನಗರ:** ನಗರ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಲ್ಲಿ ಶನಿವಾರ ಮಧ್ಯಾಹ್ನ ಸುರಿದ ಜೋರು ಮಳೆಗೆ ಜನಜೀವನ ಅಸ್ತವ್ಯಸ್ತ ಗೊಂಡಿತು.

ಮಧ್ಯಾಹ್ನ 1.30ಕ್ಕೆ ಆರಂಭವಾದ ಮಳೆ ಅರ್ಧ ಗಂಟೆಗೂ ಹೆಚ್ಚು ಕಾಲ ಸುರಿಯಿತು. ಬೆಳಗ್ಗೆಯಿಂದಲೇ ಮೋಡದ ವಾತಾವರಣ ಇತ್ತು. ದಿಢೀರನೇ ಬಂದ ಮಳೆಯಿಂದಾಗಿ ಸಾರ್ವಜನಿ ಕರು, ವಿದ್ಯಾರ್ಥಿಗಳು ಪರದಾ ಡಿದರು. ಮಳೆಯಿಂದ ರಕ್ಷಣೆ ಪಡೆಯಲು ಛತ್ರಿ, ಅಂಗಡಿಗಳ ಮೊರೆ ಹೋದರು. ಗ್ರಾಮೀಣ ಭಾಗದ ಜಮೀನುಗಳಲ್ಲಿ ಕೆಲಸ ನಿರ್ವಹಿಸುತ್ತಿದ್ದ ಕೂಲಿ ಕಾರ್ಮಿಕರಿಗೆ ಮಳೆರಾಯ ಅಡ್ಡಿಪಡಿಸಿದ. ಮಳೆಯಿಂದಾಗಿ ನಗರದಲ್ಲಿ ವಾಹನ ಸಂಚಾರ ವಿರಳವಾಗಿತ್ತು. ಬೀದಿ ಬದಿ ವ್ಯಾಪಾರಿಗಳು ಪರದಾಡಿದರು.

ಕಳೆದ ಕೆಲ ದಿನಗಳಿಂದಲೂ ಸುರಿಯುತ್ತಿರುವ ಮಳೆಯಿಂದಾಗಿಜಿಲ್ಲೆಯರೈತರುಹರ್ಷಗೊಂಡಿದ್ದಾರೆ. ಈಗಾಗಲೇ ತಮ್ಮ ಜಮೀನುಗಳಲ್ಲಿ ಉಳುಮೆ ಆರಂಭಿಸಿ ಬಿತ್ತನೆ ಕಾರ್ಯ ಶುರು ಮಾಡಿದ್ದಾರೆ. ಕಳೆದ ಕೆಲ ತಿಂಗಳಿಂದಲೂ ಬಿಸಿಲಿನ ತಾಪಕ್ಕೆ ನಲುಗಿ ಹೋಗಿದ್ದ ಜನತೆಗೆ ಮಳೆರಾಯ ತಂಪನ್ನೆರೆದಿದ್ದಾನೆ. ಮುಂದಿನ ಕೆಲ ದಿನಗಳವರೆಗೂ ಮಳೆ ಬರುವ ಸಂಭವವಿದ್ದು ಈಗಾಗಲೇ ಹವಾಮಾನ ಇಲಾಖೆ ಕೂಡ ಸೂಚನೆ ನೀಡಿದೆ.

## ಚಾ.ನಗರ ಜಿಲ್ಲೆಯಲ್ಲಿ ಕೃಷಿ ಚಟುವಟಿಕೆ ಚುರುಕು

**ಚಾಮರಾಜನಗರ ಜಿಲ್ಲೆಯಲ್ಲಿ ಕಳೆದ 10 ದಿನಗಳಿಂದಲೂ ಉತ್ತಮ ಮಳೆ ಸುರಿಯುತ್ತಿದ್ದು, ಕೃಷಿ ಚಟುವಟಿಕೆ ಚುರುಕು ಪಡೆದುಕೊಂಡಿದೆ. ರೈತರು ಬಿತ್ತನೆ ಕಾರ್ಯ ಶುರು ಮಾಡಿದ್ದಾರೆ. ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲೂಕಿನ ಹಂಗಳ, ಕಸಬಾ. ತೆರಕಣಾಂಬಿ ಹೋಬಳಿ. ಚಾಮರಾಜನಗರ ತಾಲೂಕು**



**ಹಾಗೂ ಕೊಳ್ಳೇಗಾಲ ವ್ಯಾಪ್ತಿಯಲ್ಲಿ ಪೂರ್ವ ಮುಂಗಾರು ಮಳೆ ಉತ್ತಮವಾಗಿ ಸುರಿದಿದೆ. ಭೂಮಿ ಹದ ಮಾಡಿಕೊಳ್ಳುತ್ತಿರುವ ರೈತರು ಸೂರ್ಯಕಾಂತಿ, ಜೋಳ, ಅಲಸಂದೆ ಸೇರಿದಂತೆ ದ್ವಿದಳ ಧಾನ್ಯಗಳ ಬಿತ್ತನೆಯಲ್ಲಿ ತೊಡಗಿದ್ದಾರೆ. ಶೇ.20ರಷ್ಟು ಬಿತ್ತನೆ ಕಾರ್ಯ ಈಗಾಗಲೇ ಮುಗಿದಿದೆ. ಕೃಷಿ ಇಲಾಖೆ ಅಧಿಕಾರಿಗಳು ಮಳೆಗೂ ಮುನ್ನವೇ ಬಿತ್ತನೆ ಬೀಜಗಳನ್ನು ಸಂಗ್ರಹಿಸಿಟ್ಟುಕೊಂಡಿದ್ದರು. ಇಲಾಖೆ ಹೋಬಳಿಯ ರೈತ ಸಂಪರ್ಕ ಕೇಂದ್ರಗಳಲ್ಲಿ ಬೇಡಿಕೆಗೆ ಅನುಗುಣವಾಗಿ ಬಿತ್ತನೆ ಬೀಜಗಳನ್ನು ವಿತರಿಸಲಾಗುತ್ತಿದೆ. ಇದರಿಂದಾಗಿ ಈ ಬಾರಿ ಬಿತ್ತನೆ ಬೀಜ ಹಾಗೂ ಗೊಬ್ಬರಕ್ಕೆ ಸಮಸ್ಯೆ ಇಲ್ಲ ಎಂದು ಹೇಳಲಾಗುತ್ತಿದೆ. ಗ್ರಾಮೀಣ ಭಾಗದ ಬಹುತೇಕ ರೈತರ ಬಳಿ ಎತ್ತುಗಳಿಲ್ಲ. ಹೀಗಾಗಿ ಜಾನುವಾರುಗಳನ್ನು ಹೊಂದಿರುವ ರೈತರಿಗೆ ಬೇಡಿಕೆ ಹೆಚ್ಚಿದೆ. ನೇಗಿಲಿನ ಮೂಲಕವೇ ಬಿತ್ತನೆ ಮಾಡಿಸಬೇಕೆಂಬುದು ರೈತರ ಆಶಯ. ಹೀಗಾಗಿ ಕೆಲವು ರೈತರು ಒಂದು ದಿನಕ್ಕೆ 2 ಸಾವಿರ ರೂ. ನೀಡಿ ಸೂರ್ಯಕಾಂತಿ, ಜೋಳ, ಅಲಸಂದೆ ಬಿತ್ತನೆ ಮಾಡಿಸುತ್ತಿದ್ದಾರೆ. ಬಿತ್ತನೆ ವೇಳೆ ಮಾತ್ರ ನಮಗೆ ಬೇಡಿಕೆ ಹೆಚ್ಚಿರುತ್ತದೆ. ಸಾಮಾನ್ಯ ದಿನಗಳಲ್ಲಿ ನಮ್ಮನ್ನು ಯಾರೂ ಕರೆಯುವುದಿಲ್ಲ'' ಎಂದು ಎತ್ತುಗಳ ಮಾಲೀಕ ಪ್ರಸಾದ್ ತಿಳಿಸಿದರು. ಬಹುತೇಕ ರೈತರು ಬರ ಹಾಗು ಸಾಕಣೆಗೆ ತೊಂದರೆಯಾದ ಕಾರಣ ದನ ಕರುಗಳನ್ನು ಮಾರಾಟ ಮಾಡಿದ್ದಾರೆ. ಇದರಿಂದ ಜಮೀನಿನಲ್ಲಿ ಉಳುವೆ ಹಾಗೂ ಬಿತ್ತನೆ ಕಾರ್ಯಕ್ಕೆ ಜಾನುವಾರು ಸಿಗದೇ ಟ್ರ್ಯಾಕ್ಟರ್ ಸಹಾಯದಿಂದ ಕೃಷಿ ಚಟುವಟಿಕೆಗಳನ್ನು ಕೈಗೊಳ್ಳುತ್ತಿದ್ದಾರೆ.**

# ಬಾಳೆ ಬೆಳೆಗಾರರಿಗೆ ವಿಶೇಷ ಪ್ಯಾಕೇಜ್ ಘೋಷಿಸಿ

**ಚಾಮರಾಜನಗರ:** ವೈಜ್ಞಾನಿಕ ಬೆಳೆನಷ್ಟ ಪರಿಹಾರ ಹಾಗೂ ಬಾಳೆ ಬೆಳೆಗಾರರಿಗೆ ವಿಶೇಷ ಪ್ಯಾಕೇಜ್ ಘೋಷಣೆ ಮಾಡುವಂತೆ ಒತ್ತಾಯಿಸಿ ರಾಜ್ಯ ಕಬ್ಬು ಬೆಳೆಗಾರರ ಸಂಘದ ಜಿಲ್ಲಾ ಘಟಕದ ವತಿಯಿಂದ. ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ಪಟ್ಟಣದಲ್ಲಿ ಪ್ರತಿಭಟನೆ ನಡೆಯಿತು.

ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ಪಟ್ಟಣದ ಪ್ರವಾಸಿ ಮಂದಿರದ ಮುಂಭಾಗದ ಹೆದ್ದಾರಿ ಬಳಿ ಜಮಾಯಿಸಿದ ಕಬ್ಬು ಬೆಳೆಗಾರರ ಸಂಘದ ಪದಾಧಿಕಾರಿಗಳು ರಸ್ತೆ ತಡೆ ನಡೆಸಿ ಮಾನವ ಸರಪಳಿ ನಡೆಸಿ ನಿರ್ಮಿಸಿದರು. ಈ ವೇಳೆ ರಾಜ್ಯ ಸರ್ಕಾರ ಸಚಿವರು ಹಾಗೂ ಅಧಿಕಾರಿಗಳ ವಿರುದ್ಧ ಘೋಷಣೆ ಕೂಗಿ ಆಕ್ರೋಶ ಹೊರಹಾಕಿದರು. ನಂತರ ಹೆದ್ದಾರಿ ಮೂಲಕ ಮೆರವಣಿಗೆ ಸಾಗಿ ತಾಲೂಕು ಕಚೇರಿ ಮುಂದೆ ಜಮಾವಣೆಗೊಂಡರು.

ಕಬ್ಬು ಬೆಳೆಗಾರರ ಸಂಘದ ರಾಜ್ಯಾಧ್ಯಕ್ಷ ಹಳ್ಳಿಕೆರೆಹುಂಡಿ ಭಾಗ್ಯರಾಜ್ ಮಾತನಾಡಿ, ಮೈಸೂರು ಚಾಮರಾಜನಗರ ಜಿಲ್ಲಾ ವ್ಯಾಪ್ತಿಯಲ್ಲಿ ಸುಮಾರು 2 ಸಾವಿರ ಹೆಕ್ಟರ್ ಪ್ರದೇಶ ತೀವ್ರ ಬಿರುಗಾಳಿಯಿಂದ ನಾಶವಾಗಿದೆ. ಅಧಿಕಾರಿಗಳು ಗ್ರಾಮೀಣ ಭಾಗದಲ್ಲಿ ರೈತರ ಸಮಸ್ಯೆಗಳನ್ನು ಆಲಿಸುವಲ್ಲಿ ಹಾಗೂ ಚುನಾಯಿತ ಪ್ರತಿನಿಧಿಗಳು ಚುನಾವಣಾ ನೀತಿ ಸಂಹಿತೆ ನೆಪವೊಡ್ಡಿ ರೈತರ ಬೆಳೆ ನಷ್ಟ ಅಂದಾಜು ಮಾಡುವಲ್ಲಿ ವಿಫಲರಾಗಿದ್ದಾರೆ. ಜಿಲ್ಲೆಯಲ್ಲಿ ರೈತರ ಪರವಾಗಿ ಜನಪ್ರತಿನಿಧಿಗಳು ಮಾತನಾಡುತ್ತಿಲ್ಲ. ನಷ್ಟ ಹೊಂದಿರುವ ಬೆಳೆ ಸಮೀಕ್ಷೆಯ ಬಗ್ಗೆ ಜಿಲ್ಲೆಯ ಚುನಾಯಿತ ಪ್ರತಿನಿಧಿಗಳು ಹಾಗೂ ಜಿಲ್ಲಾಡಳಿತ ನೊಂದ ರೈತರಿಗೆ ವಿಶೇಷ ಪ್ಯಾಕೇಜ್ ಘೋಷಿಸಲು ಸರ್ಕಾರದ ಹಂತದಲ್ಲಿ ವಿಫಲರಾಗಿದ್ದಾರೆ ಎಂದು ಕಿಡಿಕಾರಿದರು. ಜಿಲ್ಲೆಯ ಕೆರೆಗಳಿಗೆ ಆದ್ಯತೆಯ ಮೇರೆಗೆ ನೀರು ತುಂಬಿಸಬೇಕು. ಹೊಸ ಕೃಷಿ ಪಂಪ್ ಸೆಟ್ ಗಳಿಗೆ ಅಕ್ರಮ ಸಕ್ರಮ ಯೋಜನೆಯನ್ನು ಮರು ಜಾರಿ ಮಾಡಬೇಕು. ರಾಜ್ಯ ಸರ್ಕಾರ ಬರದಲ್ಲಿ ನೊಂದಿರುವ ಹಾಲು ಉತ್ಪಾದಕರಿಗೆ ಪ್ರತಿ ಲೀಟರಿಗೆ 10 ರೂಪಾಯಿ ಹೆಚ್ಚುವರಿ ಪ್ರೋತ್ಸಾಹ ಧನ ನೀಡಬೇಕು. ಸಮರ್ಪಕವಾಗಿ ಕೃಷಿ ಪಂಪ್ ಸೆಟ್ ಗಳಿಗೆ 10 ಗಂಟೆ ಹಗಲು ವೇಳೆ ವಿದ್ಯುತ್ ನೀಡಬೇಕು.

ಹೊಸ ಕೃಷಿ ಪಂಪ್ಸೆಟ್ಟುಗಳಿಗೆ ಸಂಪರ್ಕ ಪಡೆಯಲು ಮೊದಲಿದ್ದಂತೆ ಅಕ್ರಮ ಸಕ್ರಮ ಯೋಜನೆಯನ್ನು ಮರು ಜಾರಿ ಮಾಡಬೇಕು ಎಂದು ಹೇಳಿದರು

ರೈತರು ಜಾಗೃತರಾಗಿ ಅಧಿಕಾರಿಗಳಿಗೆ ಮಾಹಿತಿಯನ್ನು ನೀಡಬೇಕು. ಮುಂದಿನ ದಿನಗಳಲ್ಲಿ ಸರ್ಕಾರಕ್ಕೆ ಜಿಲ್ಲಾಡಳಿತ ಸಮರ್ಪಕ ವರದಿಯನ್ನು ತಯಾರಿಸಿ ವಿಶೇಷ ಪ್ಯಾಕೇಜಿಗೆ ವರದಿ ಸಲ್ಲಿಸಬೇಕು. ಪ್ರತಿ ಎಕರೆಗೆ ಸುಮಾರು ಒಂದು ಲಕ್ಷ ರೂಪಾಯಿಯಷ್ಟು ಬೆಳೆ ನಷ್ಟ ನೀಡಬೇಕು. ಪ್ರಕೃತಿ ವಿಕೋಪದ ಅಡಿಯಲ್ಲಿ ಪ್ರತಿ ಎಕರೆಗೆ 6,800 ರೂ. ಮಾನದಂಡವನ್ನು ಕೈ ಬಿಟ್ಟು ನೊಂದ ಬಾಳೆ ಬೆಳೆಗಾರರಿಗೆ ವಿಶೇಷ ಪ್ಯಾಕೇಜ್ ಘೋಷಿಸಬೇಕು ಎಂದು ಒತ್ತಾಯಿಸಿದರು.

ಪ್ರತಿಯೊಬ್ಬ ರೈತರಿಗೂ ಬರಗಾಲದಿಂದ ಬೆಳಗಿನಷ್ಟವಾಗಿದೆ. ಆದರೆ ಸರ್ಕಾರ ಮಾನದಂಡ ಮತ್ತು ಸರತ್ತುಗಳಿಂದ ರೈತರನ್ನು ಒಡೆದು ಆಳುವ ನೀತಿಯನ್ನು ಅನುಸರಿಸುತ್ತಿದೆ. ತಕ್ಷಣ ಇದನ್ನು

ಕೃಷಿ ಸಂಬಂಧಿತ ಸಾಲಕ್ಕೆ ಸಿವಿಲ್ ಸ್ಕೋರ್ ಪರಿಗಣನೆಯನ್ನು ಕೈಬಿಡಬೇಕು. ದಿಪಕ್ಷಿಯ ಒಪ್ಪಂದ ಪತ್ರವನ್ನು ಜಾರಿಗೆ ತರಬೇಕು. ಕಬ್ಬು ಬೆಳೆಗಾರರಿಗೆ ಬರಬೇಕಾದ 950 ಕೋಟಿ ರೂಗಳನ್ನು ಲಾಭಾಂಶವನ್ನು ಹಾಗೂ 2023- 2024 ನೇ ಸಾಲಿನಲ್ಲಿ ಕಬ್ಬು ಅರೆದಿರುವ ಕಾರ್ಖಾನೆಗಳಿಂದ ರೈತರಿಗೆ ಲಾಭಾಂಶವನ್ನು ಹಂಚಿಕೆ ಮಾಡಲು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ನಾಗರಾಜು, ಬಿ.ರವಿ, ಕೆ.ಎಂ. ರಾಜಣ್ಣ, ಹರೀಶ್ ಕುಮಾರ್, ಮಧುಸೂಧನ್, ದೀಪಕ್ ಕುಮಾರ್, ಮಹೇಶ್, ನಾಗೇಂದ್ರ, ಮಂಜೇಶ್ ಕುಮಾರ್, ಗಣೇಶ್ ಕುಮಾರ್, ಗುರುಪ್ರಸಾದ್, ಮಲ್ಲೇಶ್, ಶ್ರೀಕಂಠಮೂರ್ತಿ, ಸುರೇಶ್, ರಾಜು, ಕೆಂಪಣ್ಣಚಾರಿ, ಶಿವಕುಮಾರ್, ಸಿದ್ದರಾಜು, ರವಿ, ಮಹೇಶ್, ಬಸವಣ್ಣ, ಪ್ರಭುಸ್ವಾಮಿ, ಸಿದ್ದರಾಜು, ನಂಜುಂಡಸ್ವಾಮಿ, ವೀರಭದ್ರಪ್ಪ, ಸಿದ್ದಪ್ಪ, ಶಿವಣ್ಣ, ರಾಜಶೇಖರ, ಮಹದೇವಸ್ವಾಮಿ ಸೇರಿದಂತೆ ರೈತ ಮುಖಂಡರು ಭಾಗವಹಿಸಿದ್ದರು.

# ಮಣ್ಣು, ಭೂಮಿಯ ಮೇಲೆ ಹವಾಮಾನ ಬದಲಾವಣೆ ಪರಿಣಾಮ ಪ್ರಬಂಧ ಸ್ಪರ್ಧೆ

**ಬೆಂಗಳೂರು:** ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ಮತ್ತು ಪರಿಸರ ಸಂಘ ಬೆಂಗಳೂರು ಜಂಟಿಯಾಗಿ ಜೂನ್ 8, 2024 ರಂದು ವಿಶ್ವ ಪರಿಸರ ದಿನವನ್ನು ಆಯೋಜಿಸುತ್ತಿದ್ದು, ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಸೃಜನಶೀಲತೆ, ನಾವೀನ್ಯತೆ ಮತ್ತು ವಿಶ್ವ ಪರಿಸರ ದಿನಾಚರಣೆಯಲ್ಲಿ ವಿದ್ಯಾರ್ಥಿಗಳ ಸಕ್ರಿಯತೆಯನ್ನು ಉತ್ತೇಜಿಸಲು ''ಪ್ರಬಂಧ ಸ್ಪರ್ಧೆ''ಯನ್ನು ಕರ್ನಾಟಕ ವಿಜ್ಞಾನ ತಂತ್ರಜ್ಞಾನ ಅಕಾಡೆಮಿಯಲ್ಲಿ ಆಯೋಜಿಸಲಾಗಿದೆ.



ಕರ್ನಾಟಕ ರಾಜ್ಯದ ಯಾವುದೇ ಮಂಡಳಿಯಲ್ಲಿ ಪ್ರಸ್ತುತ ದಾಖಲಾದ ಪ್ರೌಢಶಾಲಾ ವಿದ್ಯಾರ್ಥಿಗಳು ಈ ಪ್ರಬಂಧ ಸ್ಪರ್ಧೆಯಲ್ಲಿ ಭಾಗವಹಿಸಬಹುದು. ಪ್ರಬಂಧಗಳನ್ನು ಕನ್ನಡ ಅಥವಾ ಇಂಗ್ಲಿ?ನಲ್ಲಿ ಸಲ್ಲಿಸಬಹುದು. ಪ್ರತಿ ಭಾಷೆಗೆ ಒಬ್ಬ ಸ್ಪರ್ಧಿಗೆ ಕೇವಲ ಒಂದು ಪ್ರಬಂಧವನ್ನು ಮಾತ್ರ ಸಲ್ಲಿಸಲು ಅವಕಾಶವಿದೆ. ಯಾವುದೇ ಸ್ಪರ್ಧಿಯು ಒಂದು ನಿರ್ದಿಷ್ಟ ಭಾಷೆಯಲ್ಲಿ ಒಂದಕ್ಕಿಂತ ಹೆಚ್ಚು ಪ್ರಬಂಧಗಳನ್ನು ಸಲ್ಲಿಸಿರುವುದು ಕಂಡುಬಂದರೆ, ಅವರು ಸಲ್ಲಿಸಿದ ಎಲ್ಲಾ ಪ್ರಬಂಧಗಳನ್ನು ಅಮಾನ್ಯವೆಂದು ಪರಿಗಣಿಸಲಾಗುತ್ತದೆ.

ಪ್ರಬಂಧದ ಕೊನೆಯಲ್ಲಿ ಹೆಸರು, ವಿಳಾಸ. ಸಂಪರ್ಕ ಸಂಖ್ಯೆ ಮತ್ತು ಇ-ಮೇಲ್ ವಿವರಗಳನ್ನು ಒದಗಿಸಬೇಕು. ಪ್ರಬಂಧವನ್ನು ಸಲ್ಲಿಸಲು ಕೊನೆಯ ದಿನಾಂಕ ಮೇ 27, 2024 (ಸೋಮವಾರ) ಅಥವಾ ಅದಕ್ಕೂ ಮೊದಲು. ಮೂಲ ಪ್ರಬಂಧ ಮಾತ್ರ ಅರ್ಹ ಮತ್ತು ಬೇರೆ ಯಾವುದೇ ಸ್ಪರ್ಧೆ(ಗಳಿಗೆ) ಸಲ್ಲಿಸಿರಬಾರದು ಅಥವಾ ಬೇರೆ ರೀತಿಯಲ್ಲಿ ಪ್ರಕಟಿಸಿರಬಾರದು. ಕೃತಿಚೌರ್ಯಕ್ಕಾಗಿ ಎಲ್ಲಾ ಪ್ರಬಂಧಗಳನ್ನು ಪರಿಶೀಲಿಸಲಾಗುತ್ತದೆ. ಪ್ರಬಂಧವನ್ನು ಒಮ್ಮೆ ಸಲ್ಲಿಸಿದ ನಂತರ, ಸ್ಪರ್ಧಿಗಳಿಗೆ ಯಾವುದೇ ಪರಿಷ್ಕರಣೆಗಳನ್ನು ಮಾಡಲು ಅನುಮತಿಸಲಾಗುವುದಿಲ್ಲ.

ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ಮತ್ತು ಪರಿಸರ ಸಂಘ ಬೆಂಗಳೂರು ರಚಿಸಿದ ತಜ್ಞರ ಸಮಿತಿಯು ಪ್ರಬಂಧಗಳನ್ನು ಮೌಲ್ಯಮಾಪನ ಮಾಡುತ್ತದೆ. ಸಮಿತಿಯ ನಿರ್ಧಾರವು ಅಂತಿಮವಾಗಿರುತ್ತದೆ ಮತ್ತು ಎಲ್ಲರೂ ಇದಕ್ಕೆ ಬದ್ಧರಾಗಿರಬೇಕು.

ಮೊದಲ ಮೂರು ಸ್ಥಾನ ಪಡೆದ ಪ್ರಬಂಧಗಳು ನಗದು ಬಹುಮಾನಗಳನ್ನು ನೀಡಲಾಗುವುದು. 1ನೇ ಬಹುಮಾನ ರೂ.5,000/-2ನೇ ಬಹುಮಾನ ರೂ. 3,000/- ಮತ್ತು 3ನೇ ಬಹುಮಾನ ರೂ. 2.000/-ಇಂಗ್ಲಿ? ಮತ್ತು ಕನ್ನಡ ಪ್ರಬಂಧಗಳಿಗೆ ಪ್ರತ್ಯೇಕವಾಗಿ ಬಹುಮಾನಗಳನ್ನು ನೀಡಲಾಗುವುದು. ಸ್ಪರ್ಧೆಯ ವಿಜೇತರನ್ನು ಇಮೇಲ್ ಮೂಲಕ ಸಂಪರ್ಕಿಸಲಾಗುತ್ತದೆ. ಬಹುಮಾನ ವಿಜೇತರು ಗುರುತಿನ ಪುರಾವೆಗಳನ್ನು ಸಲ್ಲಿಸಬೇಕಾಗುತ್ತದೆ.

ಎಲ್ಲಾ ಪ್ರಬಂಧಗಳು ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ಮತ್ತು ಪರಿಸರ ಸಂಘ ಬೆಂಗಳೂರು ಜಂಟಿ ಒಡೆತನಕ್ಕೆ ಒಳಗೊಂಡಿರುತ್ತವೆ ಹಾಗೂ ಪ್ರಬಂಧಗಳನ್ನು ಯಾವುದೇ ಉದ್ದೇಶಕ್ಕಾಗಿ ಯಾವುದೇ ಮಾಧ್ಯಮದಲ್ಲಿ ಬಳಸುವ, ಪುನರುತ್ಪಾದಿಸುವ, ಪ್ರಕಟಿಸುವ, ಪ್ರಸಾರ ಮಾಡುವ ಅಥವಾ ಇತರ ರೀತಿಯಲ್ಲಿ ಸಂವಹನ ನಡೆಸುವ ಹಕ್ಕನ್ನು ಹೊಂದಿರುತ್ತದೆ.

ಮೌಲ್ಯಮಾಪನ ಮಾನದಂಡಗಳಿಗೆ ಸಂಬಂಧಿಸಿದಂತೆ ಯಾವುದೇ ವಿಚಾರಣೆಯನ್ನು ಪುರಸ್ಕರಿಸಲಾಗುವುದಿಲ್ಲ. ಅಗತ್ಯವಿದ್ದರೆ ಮೇಲಿನ ನಿಯಮಗಳಿಗೆ ತಿದ್ದುಪಡಿಗಳನ್ನು ತರಲು ಮತ್ತು ಸ್ಪರ್ಧೆಯ ವಿಜೇತರನ್ನು ಆಯ್ಕೆ ಮಾಡುವ ಅಂತಿಮ ಹಕ್ಕನ್ನು ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ಮತ್ತು ಪರಿಸರ ಸಂಘ ಬೆಂಗಳೂರು ಹೊಂದಿರುತ್ತದೆ

ಪ್ರಬಂಧವು 1000 ಪದಗಳನ್ನು ಮೀರಬಾರದು ಮತ್ತು ಇಂಗ್ಲಿಷ್‌ನಲ್ಲಿ ಏರಿಯಾಲ್ ಫಾಂಟ್ ಗಾತ್ರ 14 ಮತ್ತು ಕನ್ನಡದಲ್ಲಿ ನುಡಿ ಯೂನಿಕೋಡ್ 12 ಗಾತ್ರದಲ್ಲಿ ಟೈಪ್ ಮಾಡಿ ಕಳುಹಿಸಬೇಕು.

ಪ್ರಬಂಧ ರಚನೆ: ಪ್ರಬಂಧವನ್ನು ಪೀಠಿಕೆ, ಮುಖ್ಯ ಪ್ಯಾರಗಳು ಮತ್ತು ತೀರ್ಮಾನ ಎಂಬ ವಿಭಾಗಗಳಿರುವಂತೆ ರಚಿಸಬಹುದು. ಇದು ಕೇವಲ ಸೂಚಿಸಿದ ಮತ್ತು ನಿರೀಕ್ಷಿತ ಮೂಲ ರಚನೆಯಾಗಿದ್ದು, ಅಗತ್ಯ ಅಥವಾ ಪ್ರಸ್ತುತವೆನಿಸಿದರೆ ಇತರ ವಿಭಾಗಗಳನ್ನು ಒಳಗೊಂಡಂತೆ ರಚಿಸಬಹುದು.

**ಮೌಲ್ಯಮಾಪನ ಮಾನದಂಡ:** ಪ್ರಬಂಧಗಳನ್ನು ವಿಷಯ ಪ್ರಸ್ತುತತೆ ಮತ್ತು ಸ್ವಂತಿಕೆ (30%), ಪ್ಯಾರಾಗಳ ನಡುವೆ ಸಂಪರ್ಕ, ಸುಸಂಬದ್ಧತೆ, ರಚನೆ ಮತ್ತು ಪದ ಮಿತಿ (20%), ಸೃಜನಶೀಲತೆ ಮತ್ತು ಪ್ರಸ್ತುತಿ (30%) ಮತ್ತು ಭಾಷೆ, ನ್ಯಾಯಸಮ್ಮತತೆ, ನಿರರ್ಗಳತೆ, ಸಾಮರ್ಥ್ಯ (20%) ಮಾನದಂಡಗಳ ಆಧಾರದ ಮೇಲೆ ಮೌಲ್ಯಮಾಪನ ಮಾಡಲಾಗುತ್ತದೆ.

ಪ್ರಬಂಧದ ಹಾರ್ಡ್ ಕಾಪಿಯನ್ನು ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ಪ್ರೊ.ಯು.ಆರ್.ರಾವ್ ವಿಜ್ಞಾನ ಭವನ, ಮೇಜರ್ ಸಂದೀಪ್ ಉನ್ನಿಕೃಷ್ಣನ್ ರಸ್ತೆ, ತೋಟಗಾರಿಕೆ ವಿಜ್ಞಾನ ಕಾಲೇಜು ಪ್ರವೇಶ ದ್ವಾರದ ಬಳಿ, ವಿದ್ಯಾರಣ್ಯಪುರ ಪೊ?ಸ್ಟ್, ಯಲಹಂಕ, ಬೆಂಗಳೂರು- 560 097, ವಿಳಾಸಕ್ಕೆ ಅಂಚೆ ಮೂಲಕ ಮತ್ತು ಪಿಡಿಎಫ್ ಪ್ರತಿಯನ್ನು ಇ-ಮೇಲ್ essay.ksta@gmail.com ಗೆ ಕಳುಹಿಸುವುದು.

ಪ್ರಬಂಧದ ಜೊತೆಗೆ ವಿದ್ಯಾರ್ಥಿಯ ಗುರುತಿನ (ಆಧಾರ್ / ವಿದ್ಯಾರ್ಥಿ ಐಡಿ ಕಾರ್ಡ್) ಪುರಾವೆಯನ್ನು ಸಲ್ಲಿಸಿ (ಪೋಸ್ಟ್ ಮೂಲಕ ಹಾರ್ಡ್ ಕಾಪಿ ಮತ್ತು ಮೇಲೆ ನೀಡಲಾದ ಇ-ಮೇಲ್ಗೆ ಸಾಫ್ಟ್ ಕಾಪಿ) ಕಳುಹಿಸಲು ಪ್ರಕಟಣೆ ತಿಳಿಸಿದೆ.

# ಜೋಡಿ ಕರಗ ಮಹೋತ್ಸವ ಸಂಪನ್ನ

**ಮೈಸೂರು:** ಕಳೆದ ಐದು ದಿನಗಳಿಂದ ಶ್ರದ್ಧಾ, ಭಕ್ತಿಭಾವದಿಂದ ನಡೆದ ಇಟ್ಟಿಗೆಗೂಡಿನ ಶ್ರೀ ಚಾಮುಂಡೇಶ್ವರಿ ಮತ್ತು ಶ್ರೀ ಮಾರಿಯಮ್ಮನವರ 100ನೇ ವರ್ಷದ ಜೋಡಿ ಕರಗ ಮಹೋತ್ಸವ ಭಾನುವಾರ ಸಂಪನ್ನಗೊಂಡಿತು.

ದಸರಾದಷ್ಟೇ ವೈಭವ ಹೊಂದಿರುವ, ಮಿನಿ ದಸರಾವೆಂದೇ ಖ್ಯಾತಿ ಗಳಿಸಿರುವ ಮೈಸೂರು ಕರಗವನ್ನು ದುಷ್ಟಶಕ್ತಿಯ ವಿರುದ್ಧ ಶಿಷ್ಟ ಶಕ್ತಿಯ ವಿಜಯದ ಸಂಕೇತವಾಗಿ ಪ್ರತಿ ವರ್ಷ ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ವಿಜೃಂಭಣೆಯಿಂದ ಆಚರಿಸಲಾಗುತ್ತದೆ.

ಕರಗದ ಕೊನೆಯ ದಿನದ ಅಂಗವಾಗಿ ಭಾನುವಾರ ಮಧ್ಯಾಹ್ನ ದೇವಸ್ಥಾನದ ಆವರಣದಲ್ಲಿ ದೇವಿಯರಿಗೆ ಅಂಬಲಿ ಸೇವೆ ಮಾಡಲಾಯಿತು. ನಂತರ ಸ್ಥಳದಲ್ಲಿ ನೆರೆದಿದ್ದ ನೂರಾರು ಭಕ್ತರ ಸಮೂಹದ ನಡುವೆ ಅರಿಶಿನದ ಓಕುಳಿ ಉತ್ಸವ ನೆರವೇರಿಸಲಾಯಿತು. ಇದಾದ ತರುವಾಯ ಸಂಜೆ ಹೊತ್ತಿಗೆ ತಂಬಿಟ್ಟಿನ ಆರತಿ ಮಾಡಲಾಯಿತು. ಇಟ್ಟಿಗೆಗೂಡು ಬಡಾವಣೆ ಸೇರಿದಂತೆ ಅಕ್ಕ-ಪಕ್ಕದ ಬಡಾವಣೆಗಳ ಜನರು ಮನೆಯಿಂದ ತಂಬಿಟ್ಟನ್ನು ತಂದು ದೇವಿಯರಿಗೆ ನೈವೇದ್ಯ ಸಲ್ಲಿಸಿದರು. ಹಣ್ಣು-ಕಾಯಿ ಪೂಜೆ ಮಾಡಿಸಿ ಹರಕೆ ಕಾಣಿಕೆಗಳನ್ನು ಸಲ್ಲಿಸಿದರು. ರಾತ್ರಿ ಸಂಪ್ರದಾಯದಂತೆ ಇಟ್ಟಿಗೆಗೂಡಿನ ಪ್ರಮುಖ ಬೀದಿಯಲ್ಲಿ ಕರಗದ ಮೆರವಣಿಗೆ ನಡೆಯಿತು. ಮಧ್ಯರಾತ್ರಿ ಉಯ್ಯಾಲೋತ್ಸವ ಜರುಗಿತು. ಬಳಿಕ ದೇವಸ್ಥಾನದ ಪ್ರಧಾನ ಅರ್ಚಕರು ಮಹಾಮಂಗಳಾರತಿ ನೆರವೇರಿಸಿದರು. ಈ ಸಮಯದಲ್ಲಿ ಭಕ್ತರ ಜಯಘೋಷಗಳು, ಹರ್ಷೋದ್ಗಾರ ಮುಗಿಲು ಮುಟ್ಟಿತ್ತು.

ಕರಗ ಮಹೋತ್ಸವಕ್ಕೆ ಶತಮಾನದ ಇತಿಹಾಸವಿದೆ. ಲೋಕಕಲ್ಯಾಣಕ್ಕಾಗಿ ದುರಿತ ನಿವಾರಿಣಿ, ಅಮೃತವರ್ಷಿಣಿಯಾದ ಜಗದಾಂಬೆಗೆ ಅಂದಿನಿಂದಲೂ ಕರಗ ಮಹೋತ್ಸವ ನಡೆಸಲಾಗುತ್ತದೆ. ಶತಮಾನಗಳ ಹಿಂದೆ ಊರನ್ನು ಸಾಂಕ್ರಾಮಿಕ ರೋಗ ಆವರಿಸಿ ದಿನನಿತ್ಯ ಹತ್ತಾರು ಜನ ಸಾವನ್ನಪ್ಪಲು ಪ್ರಾರಂಭಿಸಿದರು. ಒಂದೆಡೆ ಮನೆಮಂದಿ ರೋಗದಿಂದ ನರಳುತ್ತಿದ್ದರೆ ಮತ್ತೊಂದೆಡೆ ಮಳೆ ಇಲ್ಲದೆ ಕ್ಷಾಮ ಆವರಿಸಿತ್ತು. ಇವೆಲ್ಲದರ ಜತೆಗೆ ರೋಗದಿಂದ ದಿನನಿತ್ಯ ಸಾಯುವವರ ಅಂತ್ಯ ಸಂಸ್ಕಾರ ನಡೆಸುವುದೇ ಊರ ಜನರ ನಿತ್ಯಕಾಯಕವಾಗಿ ಬಿಟ್ಟಿತ್ತು. ಹಾಗಾಗಿ ಊರಿನ ಜನರೆಲ್ಲರೂ ಸೇರಿ ನಾಡದೇವತೆಯ ಮೊರೆ ಹೋಗಲು ನಿರ್ಧರಿಸಿದರು. ಆಗ ಪ್ರಾರಂಭವಾದುದೇ ಮೈಸೂರು ಕರಗ ಮಹೋತ್ಸವವಾಗಿದೆ.



# ಘನತೆಯ ಬದುಕು ಕಣ್ಮರೆ

## ಸಂಸ್ಕೃತಿ ಪುರಸ್ಕಾರ ಕಾರ್ಯಕ್ರಮದಲ್ಲಿ ಪ್ರೊ.ಕೃಷ್ಣೇಗೌಡ ವಿಷಾದ

**ಮೈಸೂರು:** ಆಧುನಿಕ ಕಾಲದ ಜನರಲ್ಲಿ ಘನತೆಯ ಬದುಕು ಕಣ್ಮರೆಯಾಗಿದೆ. ಸ್ಥಾಪಿತ ಅಭಿಪ್ರಾಯಕ್ಕೆ ಬದ್ಧರಾಗಿ ಎಲ್ಲವನ್ನೂ ಸೀಮಿತ ವ್ಯಾಪ್ತಿಯಲ್ಲಿ ನೋಡುವ ಮಟ್ಟಕ್ಕೆ ತಮ್ಮ ವ್ಯಕ್ತಿತ್ವವನ್ನು ಕುಬ್ಜಗೊಳಿಸಿಕೊಂಡಿದ್ದಾರೆ ಎಂದು ಖ್ಯಾತ ವಾಗ್ಮಿ, ಸಂಸ್ಕೃತಿ ಚಿಂತಕ ಪ್ರೊ.ಎಂ.ಕೃಷ್ಣೇಗೌಡ ವಿಷಾದ ವ್ಯಕ್ತಪಡಿಸಿದರು.

ನಗರದ ಎಂಜಿನಿಯರುಗಳ ಸಂಸ್ಥೆ ಸಭಾಂಗಣದಲ್ಲಿ ಭಾನುವಾರ ತಳುಕಿನ ವೆಂಕಣ್ಣಯ್ಯ ಸ್ಮಾರಕ ಗ್ರಂಥ ಮಾಲೆ, ಕನ್ನಡ ಸಾಹಿತ್ಯ ಕಲಾಕೂಟ, ಹೊಯ್ಸಳ ಕನ್ನಡ ಸಂಘದ ವತಿಯಿಂದ ನಡೆದ ಪ್ರಕಾಶಕ ಟಿ.ಎಸ್.ಛಾಯಾಪತಿ ಸಂಸ್ಕೃತಿ ಪುರಸ್ಕಾರ-2024 ಹಾಗೂ ಪುಸ್ತಕ ಬಿಡುಗಡೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಜನರು ವ್ಯಕ್ತಿತ್ವವನ್ನು ಕುಬ್ಜರಾಗಿಸಿಕೊಂಡಿರುವ ಇಂತಹ ಸಂದರ್ಭದಲ್ಲಿ ಹಿಂದಿನವರಂತೆ ಉದಾತ್ತ ತಾತ್ವಿಕ ಚಿಂತನೆಗಳನ್ನು ಅಳವಡಿಸಿಕೊಂಡು ಬದುಕುವುದು ತುಂಬಾ ಕಷ್ಟ. ಬದುಕಿಗೆ ಬೇಕಾದ ತಾತ್ವಿಕತೆಯನ್ನಾದರೂ ಕಟ್ಟಿಕೊಳ್ಳಬೇಕಾದ ಅನಿವಾರ್ಯತೆ ಪ್ರಸ್ತುತ ಕಾಲಘಟ್ಟದಲ್ಲಿ ಎದುರಾಗಿದೆ ಎಂದರು.

ಕುವೆಂಪು, ಶಿವರಾಮ ಕಾರಂತ, ಬೇಂದ್ರೆ ಮುಂತಾದ ನವೋದಯ ಕವಿಗಳು ತಮಗೆ ಅನಿಸಿದ್ದನ್ನು ನಿಷ್ಠೂರವಾದರೂ ಸರಿ, ನೇರವಾಗಿ ಹೇಳುವ ಧೈರ್ಯ ಹೊಂದಿದ್ದರು. ಆದರೆ ಈಗಿನ ಸಾಹಿತಿಗಳಲ್ಲಿ ಆ ತರಹದ ಧೈರ್ಯ ಕಾಣಲು ಸಾಧ್ಯವಿಲ್ಲ. ಸಾಹಿತ್ಯ ಕೃತಿಗಳಿಗಿಂತ ನವೋದಯ ಕವಿಗಳ ಬದುಕು ಅತ್ಯಂತ ಘನತೆಯಿಂದ ಕೂಡಿತ್ತು. ಪಾವಿತ್ರ್ಯವಿರದ ವ್ಯಕ್ತಿಯಿಂದ ಅದ್ಭುತ ಸಾಹಿತ್ಯ ಸೃಷ್ಠಿ ಅಸಾಧ್ಯ ಎಂದು ಅವರು ನಂಬಿದ್ದರು. ಆದರೆ ಇತ್ತೀಚಿನ ವರ್ಷಗಳಲ್ಲಿ ಸಾಹಿತಿಗಳು ಕವಿಗಿಂತ ಕಾವ್ಯ ಮುಖ್ಯ ಎಂದು ವಾದಿಸುತ್ತಾ ತಮ್ಮ ಸಮರ್ಥನೆಗೆ ಕಾವ್ಯವನ್ನು ಬಳಸಿಕೊಳ್ಳುತ್ತಿದ್ದಾರೆ ಎಂದು ಹೇಳಿದರು.

ಕೃತಿಗಳನ್ನು ಕುರಿತು ಮಾತನಾಡಿದ ಜೆಎಸ್ ಎಸ್ ಮಹಾವಿದ್ಯಾ ಪೀಠದ ಪ್ರಕಟಣಾ ವಿಭಾಗದ ನಿರ್ದೇಶಕ ಪ್ರೊ.ಮೊರಬದ ಮಲ್ಲಿಕಾರ್ಜುನ, ಪುರಾಣ, ಚರಿತ್ರೆ, ವರ್ತಮಾನದ ಕುರಿತು ಕಲ್ಪಿತ ಭಾವನೆಗಳ ಭ್ರಮೆಯಲ್ಲಿ ಇಂದಿನ ಯುವ ಪೀಳಿಗೆ



> **“ಕಾಲ ಮತ್ತು ಸಂದರ್ಭಕ್ಕೆ ಅನುಗುಣವಾಗಿ ಸಮಾಜ ಸುಧಾರಣೆಗೆ, ಸಮಾಜದ ಏಳು-ಬೀಳು, ಒಳಿತು-ಕೆಡುಕುಗಳ ಕುರಿತು ಮಾತನಾಡುವುದಕ್ಕೆ, ಪ್ರತಿಭಟಿಸುವುದಕ್ಕೆ ಸಂಗೀತ, ಚಿತ್ರಕಲೆ ಸೇರಿದಂತೆ ಕಲೆಯ ಎಲ್ಲಾ ಪ್ರಕಾರಗಳೂ ಬಳಕೆಯಾಗಿವೆ. ಆದರೆ, ಸಮಾಜದಲ್ಲಿ ನಡೆಯುವ ಅನ್ಯಾಯ, ತಾರತಮ್ಯಗಳ ವಿರುದ್ಧ ಪ್ರತಿಭಟನೆಯ ಅಸ್ತ್ರವಾಗಿ ಬೇರೆಲ್ಲಾ ಕಲಾಪ್ರಕಾರಗಳಿಗಿಂತ ಹೆಚ್ಚಿನ ಜವಾಬ್ದಾರಿಯನ್ನು ಸಾಹಿತ್ಯ ನಿರ್ವಹಿಸುತ್ತಿದೆ. ಆದರೆ, ಇಂತಹ ದೊಡ್ಡ ಜವಾಬ್ದಾರಿ ನಿಭಾಯಿಸುವ ಘನತೆ ನಮ್ಮ ಬಹಳಷ್ಟು ಸಾಹಿತಿಗಳಿಗೆ ಇಲ್ಲ.**
> **-ಪ್ರೊ.ಎಂ.ಕೃಷ್ಣೇಗೌಡ** ಸಂಸ್ಕೃತಿ ಚಿಂತಕ

ಬದುಕುತ್ತಿದೆ. ಆದರೆ ಎಲ್ಲಾ ಕಾಲದ ಚರಿತ್ರೆ ಮತ್ತು ವಾಸ್ತವ ಅತ್ಯಂತ ಮಾನವೀಯ ಅಂತಃಕರಣದ ಬದುಕಿನೆಡೆಗೆ ನಮ್ಮನ್ನು ಮುನ್ನಡೆಸಬೇಕೆಂಬ ನಿದರ್ಶನ ಹೊಂದಿತ್ತು ಎಂಬ ಸತ್ಯವನ್ನು ತ.ಸು.ಶಾಮರಾಯ ಅವರ ಮೂರು ತಲೆಮಾರು ಕೃತಿ ತಿಳಿಸುತ್ತದೆ. ಅಲ್ಲದೇ ಇಂದು ಬಿಡುಗಡೆಗೊಂಡಿರುವ ಎಲ್ಲಾ ಕೃತಿಗಳು ಸಹ ವರ್ತಮಾನದ ತಲ್ಲಣಗಳಿಂದ ಹೊರಬರಲು ಅಗತ್ಯ ಮಾರ್ಗದರ್ಶ ನೀಡುತ್ತವೆ ಎಂದರು.

ಇದೇ ಸಂದರ್ಭದಲ್ಲಿ ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾನಿಲಯದ ವಿಶ್ರಾಂತ ಕುಲಪತಿ ಪ್ರೊ. ಮಲ್ಲೇಪುರಂ ಜಿ.ವೆಂಕಟೇಶ ಅವರಿಗೆ ಪ್ರಕಾಶಕ ಟಿ.ಎಸ್.ಛಾಯಾಪತಿ ಸಂಸ್ಕೃತ ಪುರಸ್ಕಾರ-2024 ಪ್ರಶಸ್ತಿ ನೀಡಿ ಗೌರವಿಸಲಾಯಿತು. ತ.ಸು.ಶಾಮರಾಯ ಅವರ ಮೂರು ತಲೆಮಾರು, ಡಾ.ನೀಲಗಿರಿ ತಳವಾರ ಅವರ ನೂರಾರು ನುಡಿಗಟ್ಟುಗಳು, ಟಿ.ಎಸ್. ಲಕ್ಷ್ಮೀದೇವಿ ಅವರ ಸೃಜನಶೀಲರು, ಆರ್.ದಿಲೀಪ್ ಕುವಾರ್ ಅವರ ಶಬ್ದ ಸೋಪಾನ ಕೃತಿಗಳನ್ನು ಬಿಡುಗಡೆಗೊಳಿಸಲಾಯಿತು.

ರಾಜಶೇಖರ್ ಮೆಡಿಕಲ್ ಫೌಂಡೇಶನ್ ನಿರ್ದೇಶಕ ಡಾ.ಎಚ್.ಬಿ.ರಾಜಶೇಖರ್ ಅಧ್ಯಕ್ಷತೆ ವಹಿಸಿದ್ದರು. ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷ ಮಾನಸ, ಕನ್ನಡ ಸಾಹಿತ್ಯ ಕಲಾ ಕೂಟದ ಅಧ್ಯಕ್ಷ ಎಂ.ಚಂದ್ರಶೇಖರ್, ತಳುಕಿನ ವೆಂಕಣ್ಣಯ್ಯ ಸ್ಮಾರಕ ಗ್ರಂಥ ಮಾಲೆಯ ಪ್ರಕಾಶಕರಾದ ಪ್ರತಿಭಾ ಛಾಯಾಪತಿ, ಹೊಯ್ಸಳ ಕನ್ನಡ ಸಂಘದ ಕಾರ್ಯದರ್ಶಿ ರಂಗನಾಥ್ ಇದ್ದರು.

# ವಿವಿಧ ಯೋಜನೆಗಳ ಉಚಿತ ತರಬೇತಿ

**ಬೆಂಗಳೂರು:** ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅರ್ಹ ನಿರುದ್ಯೋಗಿ ಉದ್ಯೋಗಾಕಾಂಕ್ಷಿಗಳಿಗೆ ವಿಶೇಷ ಕೋಚಿಂಗ್ ಸ್ಕೀಮ್, 'ಒ' ಹಂತದ ಕಂಪ್ಯೂಟರ್ ತರಬೇತಿ, 'ಒ' ಹಂತದ ಕಂಪ್ಯೂಟರ್ ಹಾರ್ಡ್ವೇರ್ ನಿರ್ವಹಣೆ ತರಬೇತಿ, ಆಫೀಸ್ ಆಟೋಮೇಷನ್ ಅಕೌಂಟಿಂಗ್ ಮತ್ತು ಪಬ್ಲಿಷಿಂಗ್ ಅಸಿಸ್ಟೆಂಟ್, ಕಂಪ್ಯೂಟರ್ ಅಪ್ಲಿಕೇಶನ್ಸ್ ಮತ್ತು ಬಿಸಿನೆಸ್ ಅಕೌಂಟಿಂಗ್ ಅಸೋಸಿಯೇಟ್ ಹಾಗೂ ಸೈಬರ್ ಸುರಕ್ಷಿತ ವೆಬ್ ಡೆವಲಪ್ಮೆಂಟ್ ಅಸೋಸಿಯೇಟ್ ಕೋರ್ಸ್ಗಳಿಗೆ ಬೆಂಗಳೂರಿನ ರಾಷ್ಟ್ರೀಯ ವೃತ್ತಿ ಕೇಂದ್ರವು ಅರ್ಜಿಗಳನ್ನು ಆಹ್ವಾನಿಸಿದೆ. ಈ ಉಚಿತ ಕೋರ್ಸ್ಗಳು ಜುಲೈ 01, 2024 ರಿಂದ ಪ್ರಾರಂಭವಾಗುತ್ತವೆ. ಕೋರ್ಸ್ ತರಬೇತಿ ಅವಧಿಯಲ್ಲಿ ಮಾಹೆಯಾನ ರೂ.1000/- ಸ್ಟೈಫಂಡ್ ನೀಡಲಾಗುವುದು ಮತ್ತು ಪುಸ್ತಕಗಳು ಮತ್ತು ಸ್ಟೇಷನರಿಗಳನ್ನು ಉಚಿತವಾಗಿ ನೀಡಲಾಗುತ್ತದೆ. ತರಬೇತಿ ಅವಧಿಯು ಒಂದು ವರ್ಷವಾಗಿದ್ದು, ಅಭ್ಯರ್ಥಿಯು ಪಿಯುಸಿ ಪಾಸಾಗಿರಬೇಕು. ವಿಶೇಷ ಕೋಚಿಂಗ್ ಯೋಜನೆಗಾಗಿ ಅಭ್ಯರ್ಥಿಯ ವಯಸ್ಸಿನ ಮಿತಿ 18 - 27 ವರ್ಷಗಳು ಮತ್ತು ಇತರ ಕೋರ್ಸ್ಗಳಿಗೆ 18-30 ವರ್ಷದೊಳಗಿರಬೇಕು. ಕುಟುಂಬದ ವಾರ್ಷಿಕ ಆದಾಯ ರೂ. ವರ್ಷಕ್ಕೆ 3 ಲಕ್ಷ ರೂ. ಮೀರಿರಬಾರದು. ಆಸಕ್ತ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಉದ್ಯೋಗಾಕಾಂಕ್ಷಿಗಳು ಅರ್ಜಿಯನ್ನು ನಿಗದಿತ ನಮೂನೆಯಲ್ಲಿ ಎಸ್ಎಸ್ಎಲ್ಸಿ, ಪಿಯುಸಿ ಅಂಕಪಟ್ಟಿ, ಜಾತಿ ಮತ್ತು ಆದಾಯ ಪ್ರಮಾಣಪತ್ರ, ಸ್ಥಳೀಯ ಉದ್ಯೋಗ ವಿನಿಮಯ ನೋಂದಣಿ ಕಾರ್ಡ್, ಆಧಾರ್ ಕಾರ್ಡ್ ಮತ್ತು ಬ್ಯಾಂಕ್ ಖಾತೆ ವಿವರಗಳೊಂದಿಗೆ (ಪಾಸ್ ಪುಸ್ತಕದ ಪ್ರತಿ) ಸಲ್ಲಿಸಬೇಕು. ಅರ್ಜಿ ನಮೂನೆಯನ್ನು ಇ-ಮೇಲ್ ncscbengaluru@gmail.com ಮೂಲಕ ಪಡೆಯಬಹುದಾಗಿದೆ. ಅಭ್ಯರ್ಥಿಗಳು ತಮ್ಮ ಆದ್ಯತೆಯ ಕೋರ್ಸ್ನ ಆಯ್ಕೆಯನ್ನು ಸೂಚಿಸಬಹುದಾಗಿದ್ದು, ಕೇವಲ ಒಂದು ಕೋರ್ಸ್ನ್ನು ಮಾತ್ರ ಆಯ್ಕೆ ಮಾಡಬಹುದಾಗಿದೆ. ಅರ್ಜಿಯನ್ನು ಸಲ್ಲಿಸಲು ಜೂನ್ 10, 2024 ಕೊನೆಯ ದಿನಾಂಕವಾಗಿದೆ.

ಅರ್ಜಿಗಳನ್ನು ಉಪ-ಪ್ರಾದೇಶಿಕ ಉದ್ಯೋಗ ಅಧಿಕಾರಿ, ಎಸ್ಸಿ/ಎಸ್ಟಿಗಳ ರಾಷ್ಟ್ರೀಯ ವೃತ್ತಿ ಸೇವಾ ಕೇಂದ್ರ, ಸರ್ಕಾರಿ ಮಾದರಿ ಐಟಿಐ (ಪುರುಷ) ಕ್ಯಾಂಪಸ್, ಡೈರಿ ಸರ್ಕಲ್, ಬೆಂಗಳೂರು ? 560029 ಈ ವಿಳಾಸಕ್ಕೆ ಸಲ್ಲಿಸಲು ಪ್ರಕಟಣೆಯಲ್ಲಿ ತಿಳಿಸಿದೆ.

# ವೃತ್ತಿಪರ ತರಬೇತಿಗೆ ಅರ್ಜಿ

**ಬೆಂಗಳೂರು:** ಕರ್ನಾಟಕ ರಾಜ್ಯ ಶಿಶು ಕಲ್ಯಾಣ ಸಂಸ್ಥೆ ಕಳೆದ 60 ವರ್ಷಗಳಿಂದ ಗ್ರಾಮೀಣ ಹಾಗೂ ನಗರ ಪ್ರದೇಶದ ಆರ್ಥಿಕವಾಗಿ ಹಿಂದುಳಿದ ಯುವತಿಯರು / ಮಹಿಳೆಯರಿಗೆ ವೃತ್ತಿಪರ ತರಬೇತಿ ನೀಡುತ್ತಿದ್ದು, 2024 ನೇ ಸಾಲಿನ ವೃತ್ತಿಪರ ತರಬೇತಿಗೆ ಅರ್ಜಿಯನ್ನು ಆಹ್ವಾನಿಸಿದೆ. ಎಸ್ಎಸ್ಎಲ್ಸಿ/ ಪಿಯುಸಿ ಪಾಸ್ ಅಥವಾ ಫೇಲ್ ಆದ 17 ರಿಂದ 35 ವರ್ಷದೊಳಗಿನ ಯುವತಿಯರು ಅರ್ಜಿ ಸಲ್ಲಿಸಬಹುದಾಗಿದ್ದು, ಮೇ 30 ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವಾಗಿದೆ. ತರಬೇತಿ ಪಡೆದ ಅಭ್ಯರ್ಥಿಗಳು ಬಾಲವಾಡಿ, ಶಿಶುವಿಹಾರ, ಹಗಲು ಪೊ?ಷಣಾ ಕೇಂದ್ರ, ವಿಶೇಷ ಮಕ್ಕಳ ಶಾಲೆ, ಗಾರ್ಮೆಂಟ್ಸ್ ಕಂಪೆನಿಗಳಲ್ಲಿ ಶಾಲಾಪೂರ್ವ ಶಿಕ್ಷಕಿಯಾಗಿ ಕೆಲಸ ಮಾಡಲು ಅರ್ಹರಾಗುತ್ತಾರೆ. ಜೂನ್ 10 ರಿಂದ ಬೆಂಗಳೂರಿನ ಜಯಮಹಲ್ ಬಡಾವಣೆಯ ಬಾಲಸೇವಿಕಾ ತರಬೇತಿ ಕೇಂದ್ರದಲ್ಲಿ ತರಬೇತಿ ಆರಂಭವಾಗಲಿದೆ. ತರಬೇತಿ ಅವಧಿ 10 ತಿಂಗಳಾಗಿದ್ದು, ತರಬೇತಿಯು ಸಂಪೂರ್ಣ ಉಚಿತವಾಗಿದ್ದು, ಅವಶ್ಯಕತೆ ಇರುವವರಿಗೆ, ವಸತಿ ಮತ್ತು ಊಟದ ವ್ಯವಸ್ಥೆ ಕಲ್ಪಿಸಲಾಗುವುದು. ಅಭ್ಯರ್ಥಿಗಳಿಗೆ ವಿದ್ಯಾರ್ಥಿ ವೇತನ ಸಹ ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ರಾಜ್ಯ ಶಿಶು ಕಲ್ಯಾಣ ಸಂಸ್ಥೆ, ಬಾಲಸೇವಿಕಾ ತರಬೇತಿ ಕೇಂದ್ರ, ನಂ. 135, 3 ನೇ ಅಡ್ಡ ರಸ್ತೆ, ನಂದಿದುರ್ಗ ರಸ್ತೆ, ಜಯಮಹಲ್ ಬಡಾವಣೆ, ಬೆಂಗಳೂರು - 46 ಹಾಗೂ ದೂರವಾಣಿ ಸಂಖ್ಯೆ :080-23330846 / 22925898 ಗೆ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# ಲೋಕಾಯುಕ್ತರಿಂದ ಸಾರ್ವಜನಿಕರ ಕುಂದು ಕೊರತೆ ಸಭೆ

**ಚಿಕ್ಕಬಳ್ಳಾಪುರ:** ಜಿಲ್ಲೆಯ ಕರ್ನಾಟಕ ಲೋಕಾಯುಕ್ತ, ಪೊಲೀಸ್ ಅಧೀಕ್ಷಕರು ಬಾಗೇಪಲ್ಲಿ ತಾಲ್ಲೂಕಿಗೆ ಸಂಬಂಧಪಟ್ಟಂತೆ



ಸಾರ್ವಜನಿಕರ ಕುಂದು ಕೊರತೆಗಳ ಸಭೆಯನ್ನು ಮೇ 22 ರಂದು ಬೆಳಿಗ್ಗೆ 11 ಗಂಟೆಗೆ ಬಾಗೇಪಲ್ಲಿ ತಾಲ್ಲೂಕು ತಹಶೀಲ್ದಾರ್ ಕಚೇರಿಯ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದಾರೆ. ಸರ್ಕಾರಿ ಕಚೇರಿಗಳಲ್ಲಿ ಅಧಿಕಾರಿಗಳು ಮತ್ತು ಸಿಬ್ಬಂದಿ ಸಾರ್ವಜನಿಕರ ಕೆಲಸ ಕಾರ್ಯಗಳನ್ನು ಮಾಡದೆ ವಿಳಂಬ, ನಿರ್ಲಕ್ಷ್ಯ ಮಾಡುತ್ತಿದ್ದಲ್ಲಿ ಮತ್ತು ಸರ್ಕಾರಿ ಯೋಜನೆಗಳ ಅನುಷ್ಠಾನದಲ್ಲಿ ಅಕ್ರಮಗಳನ್ನು ನಡೆಸಿ ಹಣ ದುರುಪಯೋಗ ಪಡಿಸಿಕೊಂಡಿದ್ದಲ್ಲಿ, ಸಾರ್ವಜನಿಕರು ನಿರ್ದಿಷ್ಟ ಮಾಹಿತಿಯೊಂದಿಗೆ ಸಭೆಗೆ ಹಾಜರಾಗಿ ದೂರು ಅರ್ಜಿ ಹಾಗೂ ಸಂಬಂಧಪಟ್ಟ ದಾಖಲೆಗಳನ್ನು ನೀಡಬಹುದೆಂದು ಚಿಕ್ಕಬಳ್ಳಾಪುರ ಜಿಲ್ಲೆಯ ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕ ಡಾ. ರಾಮ್ ಎಲ್ ಅರಸಿದ್ದಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರಾಣಿಗಳ ದತ್ತು ಸ್ವೀಕಾರ

**ಮೈಸೂರು:** ಚಾಮರಾಜೇಂದ್ರ ಮೃಗಾಲಯದಲ್ಲಿ ಬೆಂಗಳೂರಿನ ಡಾ. ಅಭಿಲಾಷ್ ಅವರು ಭಾರತದ ಘೇಂಡಾಮೃಗ ಪ್ರಾಣಿಯನ್ನು 29.04.2024 ರಿಂದ 28.04.2025 ರವರೆಗೆ ಹಾಗೂ ಮೈಸೂರಿನ ಚರಿತ್ ಮಹೀಂದ್ರ, ಅವರು ಹೂಲಕ್ ಗಿಬ್ಬನ್ ಎಂಬ ಪ್ರಾಣಿಯನ್ನು 19.04.2024.ರಿಂದ 18.04.2025 ರವರಿಗೆ ದತ್ತು ಸ್ವೀಕಾರ ಮಾಡಿರುತ್ತಾರೆ ಎಂದು ಶ್ರೀ ಚಾಮರಾಜೇಂದ್ರ ಮೃಗಾಲಯದ ಕಾರ್ಯನಿರ್ವಾಹಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅವ್ಯವಹಾರದ ಬಗ್ಗೆ ನಿಷ್ಪಕ್ಷಪಾತ ತನಿಖೆಗೆ ಒತ್ತಾಯ

**ಚಾಮರಾಜನಗರ:** ನಗರದ ಶ್ರೀ ವಿಶ್ವಗುರು ಮಲ್ಟಿ ಪರ್ಪಸ್ ಕೋ ಆಪರೇಟಿವ್ ಸೊಸೈಟಿಯಲ್ಲಿ ನಡೆದಿರುವ ಅವ್ಯವಹಾರದ ಬಗ್ಗೆ ಪೊಲೀಸರು ಪಾರದರ್ಶಕ ಮತ್ತು ನಿಷ್ಪಕ್ಷಪಾತ ತನಿಖೆ ನಡೆಸಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆಯ ಜಿಲ್ಲಾ ಅಧ್ಯಕ್ಷ ಮಾಡ್ರಳ್ಳಿ ಮಹದೇವಪ್ಪ ಒತ್ತಾಯಿಸಿದರು.

ಚಾಮರಾಜನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 'ಬೆಳಗಾವಿ ಮೂಲದ ಸೊಸೈಟಿಯ ಚಾಮರಾಜನಗರ ಶಾಖೆಗೆ ಎಂ.ಕೆ. ಶಶಿಕುಮಾರ್ ಅಲಿಯಾಸ್ ಪೃಥ್ವಿ ಎಂಬುವವರನ್ನು ಮ್ಯಾನೇಜರ್ ಆಗಿ ನೇಮಕ ಮಾಡಲಾಗಿತ್ತು. ಅವರು ತಮ್ಮ ಹೆಸರಿಗೆ ?16 ಲಕ್ಷ ಹಾಗೂ ಸಹೋದರ ವಿಜಯ್ಕುಮಾರ್ ಹೆಸರಿಗೆ 20 ಲಕ್ಷ ಸಾಲ ನೀಡಿದ್ದಲ್ಲದೆ, ಅವರಿಗೆ ಬೇಕಾದ ಸಂಬಂಧಿಕರು, ಸ್ನೇಹಿತರ ಹೆಸರಿನಲ್ಲಿ ಹಣವನ್ನು ಲೂಟಿ ಮಾಡಿ ಸೊಸೈಟಿಯನ್ನು ಮುಚ್ಚಿದ್ದಾರೆ. ಈಗ ಅವರ ವಿರುದ್ಧ ಪ್ರಕರಣ ದಾಖಲಾಗಿದ್ದು, ಪೊಲೀಸರು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ' ಎಂದರು.

ಪ್ರಕರಣ ದಾಖಲಾದ ನಂತರ ಎರಡು ತಿಂಗಳ ಕಾಲ ತಲೆಮರೆಸಿಕೊಂಡಿದ್ದ ಪೃಥ್ವಿ ಸಾಕ್ಷ್ಯಗಳನ್ನು ನಾಶ ಮಾಡಿ, ಸುಳ್ಳು ದಾಖಲೆಗಳನ್ನು ಸೃಷ್ಟಿಸಿ ನಂತರ ಶರಣಾಗಿದ್ದಾರೆ. ಸೊಸೈಟಿಗೆ 400ಕ್ಕೂ ಹೆಚ್ಚು ಸದಸ್ಯರಿದ್ದರು. ನಾವು ಸೊಸೈಟಿಯಲ್ಲಿ ಇಟ್ಟ ಠೇವಣಿಗೆ ಸಂಬಂಧಿಸಿದ ದಾಖಲೆಗಳು, ಸೊಸೈಟಿ ವ್ಯವಹಾರ, ಷೇರುದಾರರಿಗೆ ಸಂಬಂಧಿಸಿದ ದಾಖಲೆಗಳನ್ನು ಆತ ನೀಡುತ್ತಿಲ್ಲ' ಎಂದು ದೂರಿದರು.ನನ್ನನ್ನೂ ಸೇರಿದಂತೆ ರೈತ ಸಂಘದ ಹಲವರು ಲಕ್ಷಾಂತರ ರೂಪಾಯಿ ಠೇವಣಿ ಇರಿಸಿದ್ದಾರೆ. ಪೃಥ್ವಿ ಮೇಲೆ ವಿಶ್ವಾಸವಿಟ್ಟು, ನಮ್ಮ ಸ್ನೇಹಿತರು, ನೆಂಟರಿಷ್ಟರು ಅವರನ್ನೂ ಸೊಸೈಟಿಯ ಸದಸ್ಯರನ್ನಾಗಿ ಮಾಡಲಾಗಿತ್ತು. ಈಗ ಎಲ್ಲರಿಗೂ ವಂಚಿಸಿದ್ದಾರೆ' ಎಂದು ಆರೋಪಿಸಿದರು. ಬೆಳಗಾವಿಯಲ್ಲಿರುವ ಪ್ರಧಾನ ಶಾಖೆ ಎರಡು ವರ್ಷಗಳ ಹಿಂದೆಯೇ ಮುಚ್ಚಿದ್ದರೂ, ಅದಿನ್ನೂ ನಡೆಯುತ್ತಿದೆ ಎಂದು ನಂಬಿಸಿ, ಇಲ್ಲಿ ವ್ಯವಹಾರ ನಡೆಸಿದ್ದಾರೆ. ದೊಡ್ಡ ಮಟ್ಟಿನ ವಂಚನೆ ನಡೆಸಿದ್ದರೂ, ಪೊಲೀಸರು ಸರಿಯಾದ ರೀತಿಯಲ್ಲಿ ತನಿಖೆ ನಡೆಸುತ್ತಿಲ್ಲ ಎಂಬ ಅನುಮಾನ ಮೂಡುತ್ತಿದೆ. ಹಾಗಾಗಿ, ಹಿರಿಯ ಅಧಿಕಾರಿಗಳು ಇದರ ಬಗ್ಗೆ ಗಮನ ಹರಿಸಿ, ನ್ಯಾಯಸಮ್ಮತ, ಪಾರದರ್ಶಕ ತನಿಖೆ ನಡೆಸಬೇಕು' ಎಂದು ಮಹದೇವಪ್ಪ ಆಗ್ರಹಿಸಿದರು.

ರೈತಸಂಘದ ಉಪಾಧ್ಯಕ್ಷ ಕುಂದುಕೆರೆ ಸಂಪತ್ತು, ರೈತ ಮುಖಂಡರಾದ ಮಹೇಶ್, ಪುಟ್ಟರಾಜು, ಕಂದೇಗಾಲ ಮಹೇಶ್, ಶಿವಣ್ಣ, ತಂಗವೇಲು ಇದ್ದರು.

# ಮೇವು ಒದಗಿಸುವಂತೆ ರೈತರು ಒತ್ತಾಯ

**ಚಾಮರಾಜನಗರ:** ಚಾಮರಾಜನಗರ ಜಿಲ್ಲೆಯ ಹನೂರು ತಾಲ್ಲೂಕಿನ ಕುರಟ್ಟಿ ಹೊಸೂರು ಸೇರಿ ನಾನಾ ಕಡೆ ತೆರೆಯಲಾಗಿರುವ ಗೋ ಶಿಬಿರಗಳಲ್ಲಿ ಜಾನುವಾರುಗಳು ಮೇವಿಲ್ಲದೆ ಪರದಾಡುತ್ತಿದ್ದು ಇನ್ನು 15 ದಿನಗಳ ಕಾಲ ಜಿಲ್ಲಾಡಳಿತ ಮೇವು ಒದಗಿಸುವಂತೆ ರೈತರು ಒತ್ತಾಯಿಸಿದ್ದಾರೆ. ಚಾಮರಾಜನಗರ ಜಿಲ್ಲೆಯ ಹನೂರು ತಾಲ್ಲೂಕಿನ ರೈತರು ಶನಿವಾರ ಮದ್ಯಾಹ್ನ 12ಘಂಟೆಯ ವೇಳೆ ರೈತ ಕುಮಾರ್ ಮಾತನಾಡಿ ಕಳೆದ 15 ದಿನಗಳ ಹಿಂದೆ

ಅಧಿಕಾರಿಗಳು ಗೋ ಶಿಬಿರಗಳಿಗೆ ಮೇವನ್ನು ಸಮರ್ಪಕವಾಗಿ ಪೂರೈಕೆ ಮಾಡುತ್ತಿದ್ದಾದರೂ ಮಳೆ ಬಂದಿದೆ ಎಂದು ನೆಪಹೊಡ್ಡಿ ಕಳೆದ ನಾಲ್ಕು ದಿನಗಳಿಂದಲೂ ಕೂಡ ಮೇವನ್ನ ಸರಬರಾಜು ಮಾಡದೆ ಗೋ ಶಿಬಿರಗಳಲ್ಲಿ ಆಶ್ರಯ ಪಡುತ್ತಿರುವಂತಹ ಜಾನುವಾರುಗಳು ಮೇವಿಲ್ಲದೆ ಪರದಾಡುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ ನಮ್ಮ ಗ್ರಾಮಗಳಲ್ಲಿ ಮಳೆ ಬಂದಿದ್ದರೂ ಕೂಡ ಮೇವು ಬರಲು ಇನ್ನು 15 ದಿನಗಳು ಬೇಕು ಅಲ್ಲಿಯ ತನಕ ಜಿಲ್ಲಾಡಳಿತ ಮೇವು ದೊರಕಿಸಿ ಕೊಡುವಂತೆ ಒತ್ತಾಯಿಸಿದ್ದಾರೆ.

# ಟ್ರ್ಯಾಕ್ಟರ್‌ಗೆ ಸಿಲುಕಿ ಬಾಲಕ ಸಾವು

**ಚಾಮರಾಜನಗರ:** ಕಾಗಲವಾಡಿ ಗ್ರಾಮದ ಬಾಲಕನೋರ್ವ ಮೈಸೂರು ಜಿಲ್ಲೆಯ ನಂಜನಗೂಡು ತಾಲೂಕಿನ ದೇವರಸನಹಳ್ಳಿ ಗ್ರಾಮದ ಜಮೀನಿನಲ್ಲಿ ಟ್ಯಾಕ್ಟರ್ ರೋಟೋವೇಟರ್ಗೆ ಆಕಸ್ಮಿಕವಾಗಿ ಸಿಲುಕಿ ಮೃತಪಟ್ಟಿರುವ ಘಟನೆ ನಡೆದಿದೆ. ಕಾಗಲವಾಡಿ ಗ್ರಾಮದ ಕಾರ್ತಿಕ್ ಎಂಬುವವರು ಪುತ್ರ ಭವೀಶ್ (7) ಮೃತ ಬಾಲಕ. ಈತ ದೇವರಸನಹಳ್ಳಿಯ ಅಜ್ಜಿ ಮನೆಗೆ ಬೇಸಿಗೆ ರಜೆಗೆ ತೆರಳಿದ್ದ. ಅಜ್ಜಿಗೆ ಸೇರಿದ ಜಮೀನಿನಲ್ಲಿ ಉಳುಮೆ ಮಾಡುವಾಗ ಬಾಲಕನೂ ಟ್ರ್ಯಾಕ್ಟರ್ನಲ್ಲಿ ಚಾಲಕನ ಜತೆಗೆ ಕುಳಿತ್ತಿದ್ದಾನೆ ಆಕಸ್ಮಿಕವಾಗಿ ಕೆಳಕ್ಕೆ ಬಿದ್ದಿದ್ದು ಇದು ಚಾಲಕನ ಗಮನಕ ಬರುವಷ್ಟರಲ್ಲಿ ರೋಟೋವೇಟರ್ಗೆ ಸಿಲುಕಿ ಮೃತಪಟ್ಟಿದ್ದಾನೆ.

# ಪಾಪನಕೆರೆ ಒತ್ತುವರಿ ಆರೋಪ ತಾಲೂಕು ಕಚೇರಿ ಮುಂದೆ ಪ್ರತಿಭಟನೆ

**ಚಾಮರಾಜನಗರ:** ಚಾಮರಾಜನಗರ ಜಿಲ್ಲೆಯ ಕೊಳ್ಳೇಗಾಲ ಪಟ್ಟಣದ ಬೆಂಗಳೂರು ರಸ್ತೆಯಲ್ಲಿ ಹತ್ತಾರು ಎಕರೆ ಪ್ರದೇಶದ ಪಾಪನಕೆರೆಯನ್ನು ಹೂಳು ತೆಗೆಯುವ ನೆಪದಲ್ಲಿ ಸಿದ್ದಯ್ಯನಪುರ ಗ್ರಾ.ಪಂ.ಪಿ. ಡಿ. ಓ ಒತ್ತುವರಿ ಮಾಡಿಕೊಂಡಿರುವುದರ ಜೊತೆಗೆ ಕೆರೆಯ ಸುತ್ತಮುತ್ತಲ ಜಮೀನುಗಳಿಗೆ ನೀರು ಬರದಂತೆ ಕಟ್ಟೆ ಹಾಕಿ ಬೆಳೆ ಬೆಳೆಯುವ ಜಮೀನುಗಳು ಒಣಗುವಂತೆ ಮಾಡಿದ್ದಾರೆಂದು ಆರೋಪಿಸಿ ಶನಿವಾರ ಭೀಮನಗರದ ರೈತರು ಯುವ ಮುಖಂಡ ಕೃಷ್ಣಕುಮಾರ್ ನೇತೃತ್ವದಲ್ಲಿತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಕಚೇರಿ ಮುಂದೆ ಧರಣಿ ಕುಳಿತು ಪ್ರತಿಭಟನೆ ನಡೆಸಿದರು.

# ಆಗ್ನೇಯ ಶಿಕ್ಷಕರ ಕ್ಷೇತ್ರದ ಚುನಾವಣೆ ಹಿನ್ನೆಲೆ ಜಿಲ್ಲಾಧಿಕಾರಿಗಳಿಂದ ನಿಷೇಧಾಜ್ಞೆ ಜಾರಿ

**ಚಿಕ್ಕಬಳ್ಳಾಪುರ:** ಕರ್ನಾಟಕ ಆಗ್ನೇಯ ಶಿಕ್ಷಕರ ಕ್ಷೇತ್ರದ ದ್ವೈವಾರ್ಷಿಕ ಚುನಾವಣೆಯ ಮತದಾನವು ಜೂನ್ 3 ರಂದು ನಿಗದಿಯಾಗಿರುವ ಹಿನ್ನೆಲೆಯಲ್ಲಿ ಐಪಿಸಿ ಸೆಕ್ಷನ್ 144 ಅಡಿಯಲ್ಲಿ ಹಲವು ಆದೇಶಗಳನ್ನು ಪಾಲನೆ ಮಾಡಲು ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಅವರು ಆದೇಶ ಹೊರಡಿಸಿದ್ದಾರೆ.

ಜೂನ್ 1 ರ ಸಂಜೆ 5 ಗಂಟೆಯಿಂದ ಜೂನ್ 3 ರ ಮಧ್ಯ ರಾತ್ರಿ 12 ಗಂಟೆಯವರೆಗೆ ಕಾನೂನುಬಾಹಿರವಾಗಿ ಗುಂಪು ಗೂಡುವುದು, ಮೆರವಣಿಗೆ, ರ್ಯಾಲಿ ನಿಷೇಧಿಸಲಾಗಿದೆ. ಸಾರ್ವತ್ರಿಕ ಸ್ಥಳಗಳಲ್ಲಿ, ಬೀದಿಗಳಲ್ಲಿ ಐವರು ಹಾಗೂ ಅದಕ್ಕಿಂತ ಹೆಚ್ಚು ವ್ಯಕ್ತಿಗಳು ಗುಂಪು ಗೂಡುವಂತಿಲ್ಲ. ಘೋಷಣೆಗಳನ್ನು ಕೂಗುವಂತಿಲ್ಲ. ಸಾರ್ವಜನಿಕರ ಶಾಂತಿ ಹಾಗೂ ನೆಮ್ಮದಿಗೆ ಭಂಗತರುವುದನ್ನು ನಿಷೇಧಿಸಲಾಗಿದೆ.

ಮತದಾನದ ಮುಕ್ತಾಯದ ಸಮಯದ ಕೊನೆಗೊಳ್ಳುವ 48 ಗಂಟೆಗಳ ಅವಧಿಯಲ್ಲಿ ಚುನಾವಣೆಯ ಉದ್ದೇಶಕ್ಕಾಗಿ ಯಾವುದೇ ಧ್ವನಿವರ್ಧಕ ಬಳಸಲು ಅನುಮತಿಸಲಾಗುವುದಿಲ್ಲ.

ಯಾವುದೇ ಹಣ, ಉಡುಗೊರೆ ಅಥವಾ ಮದ್ಯದ ವಿತರಣೆ ತಪ್ಪಿಸಲು ಮತ್ತು ಕಾನೂನು ಸುವ್ಯವಸ್ಥೆಗಳ ಸಮಸ್ಯೆಗಳನ್ನು ತಡೆಗಟ್ಟುವ ಉದ್ದೇಶದಿಂದ ಚುನಾವಣಾ ದಿನದಂದು ಅಭ್ಯರ್ಥಿಗಳು ಚುನಾವಣೆಗಾಗಿ ಅನುಮತಿ ಪಡೆದುಕೊಂಡಿರುವ ವಾಹನಗಳನ್ನು ಮಾತ್ರ ಬಳಕೆ ಮಾಡಬೇಕು. ಹಣ, ಉಡುಗೊರೆ, ಮದ್ಯ ವಿತರಣೆಯನ್ನು ತಪ್ಪಿಸುವ ಸಲುವಾಗಿ ಎಲ್ಲಾ ಖಾಸಗಿ ವಾಹನಗಳನ್ನು ನಿಯಮಾನುಸಾರ ಪರಿಶೀಲಿಸಲಾಗುತ್ತದೆ.

ಯಾವುದೇ ಮದ್ಯದಂಗಡಿ, ಹೋಟೆಲ್ ರೆಸ್ಟೋರೆಂಟ್, ಕ್ಲಬ್ ಗಳು, ಮದ್ಯ ಮಾರಾಟ/ ವಿತರಣೆ ಮಾಡುವ ಇತರೆ ಎಸ್ಟಾಬ್ಲಿಷ್ ಮೆಂಟ್ ಗಳು ಸೂಚಿಸಲಾಗಿರುವ ದಿನ ಹಾಗೂ ಅವಧಿಗಳಲ್ಲಿ ಮದ್ಯ ಮಾರಾಟ ಮಾಡಬಾರದು. ಸ್ವಾಮ್ಯದ ಕ್ಲಬ್ ಗಳು, ಸ್ಟಾರ್ ಹೋಟೆಲ್ ಗಳು, ರೆಸ್ಟೋರೆಂಟ್ ಗಳು ಇತ್ಯಾದಿ ಮತ್ತು ಮದ್ಯದ ಪೂರೈಕೆಗಾಗಿ ವಿವಿಧ ವರ್ಗಗಳ ಪರವಾನಗಿಗಳನ್ನು ಪಡೆದಿದ್ದರೂ ಸಹ ಸೂಚಿಸಲಾಗಿರುವ ದಿನ ಹಾಗೂ ಸಮಯದಲ್ಲಿ ಮದ್ಯ ಪೂರೈಕೆಗೆ ಅನುಮತಿಸಲಾಗುವುದಿಲ್ಲ.

ಮತದಾನ ನಡೆಯುವ ಎಲ್ಲಾ ಕ್ಷೇತ್ರಗಳಲ್ಲಿ ಮತದಾನದ ದಿನಕ್ಕಿಂತ 72 ಗಂಟೆಗಳ ಮೊದಲು ಯಾವುದೇ ಸ್ಥಳದಲ್ಲಿ ಬೈಕ್ ರ್ಯಾಲಿ ನಡೆಸಲು ಅನುಮತಿಸಲಾಗುವುದಿಲ್ಲ.

ಮತದಾನ ಕೊನೆಗೊಳ್ಳುವ 48 ಗಂಟೆಗಳ ಹಿಂದಿನ ಅವಧಿಯಲ್ಲಿ ಪ್ರಜಾಪ್ರತಿನಿಧಿ ಕಾಯ್ದೆ 1951ರ ಸೆಕ್ಷನ್ 126ರ ಅಡಿಯಲ್ಲಿ ಯಾವುದೇ ಸಾರ್ವಜನಿಕ ಸಭೆ, ಮೆರವಣಿಗೆ, ಸಂಗೀತ ಕಛೇರಿಗಳು, ರ್ಯಾಲಿಗಳು ಅಥವಾ ಯಾವುದೇ ರೀತಿಯ ಚುನಾವಣ ಪ್ರಚಾರಕ್ಕೆ ಅವಕಾಶವಿರುವುದಿಲ್ಲ. ಆದಾಗ್ಯೂ ಈ ಅವಧಿಯಲ್ಲಿ ಮನೆಮನೆ ಪ್ರಚಾರಕ್ಕೆ ಯಾವುದೇ ನಿರ್ಬಂಧ ಇರುವುದಿಲ್ಲ.

ಆದೇಶದ ಉಲ್ಲಂಘನೆಯು ಐಪಿಸಿ ಸೆಕ್ಷನ್ 188 ಮತ್ತು ಕಾನೂನಿನಿಂದ ಇತರೆ ಸಂಬಂಧಿತ ನಿಬಂಧನೆಗಳಡಿಯಲ್ಲಿ ಶಿಕ್ಷಾರ್ಹವಾಗಿರುತ್ತದೆ. ಆದೇಶವು ಧಾರ್ಮಿಕ ಕಾರ್ಯಗಳು, ಮದುವೆ, ಅಂತ್ಯಕ್ರಿಯೆ ಕಾರ್ಯಗಳಿಗೆ ಅನ್ವಯಿಸುವುದಿಲ್ಲ ಹಾಗೂ ಚುನಾವಣಾ ಕರ್ತವ್ಯಕ್ಕೆ ನಿಯೋಜಿತರಾಗಿರುವ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಈ ಆದೇಶವು ಅನ್ವಯಿಸುವುದಿಲ್ಲ ಎಂದು ಜಿಲ್ಲಾ ಚುನಾವಣಾಧಿಕಾರಿ ಪಿ.ಎನ್. ರವೀಂದ್ರ, ಅವರು ಆದೇಶದಲ್ಲಿ ತಿಳಿಸಿದ್ದಾರೆ.

# ಗಣಪತಿ ಆಶ್ರಮದಲ್ಲಿ ಸತ್ಯನಾರಾಯಣ ವ್ರತ

**ಮೈಸೂರು:** ನಗರದ ಊಟಿ ರಸ್ತೆಯಲ್ಲಿರುವ ಅವಧೂತ ದತ್ತಪೀಠದ ಶ್ರೀಗಣಪತಿ ಸಚ್ಚಿದಾನಂದ ಆಶ್ರಮದಲ್ಲಿ ಭಾನುವಾರ ಸಾಮೂಹಿಕ ಸತ್ಯನಾರಾಯಣ ವ್ರತ ಸಾಂಗವಾಗಿ ನೆರವೇರಿತು. ಮೈಸೂರು ಸೇರಿದಂತೆ ರಾಜ್ಯ, ಹೊರ ರಾಜ್ಯಗಳಿಂದ ಬಂದಿದ್ದ ಸಾವಿರಕ್ಕೂ ಹೆಚ್ಚು ದಂಪತಿ ಸತ್ಯನಾರಾಯಣ ವ್ರತದಲ್ಲಿ ಪಾಲ್ಗೊಂಡಿದ್ದರು.



ಗಣಪತಿ ಹೋಮದ ನಂತರ ಸತ್ಯನಾರಾಯಣ ವ್ರತವನ್ನು ಪ್ರಾರಂಭಿಸಲಾಯಿತು. ಅವಧೂತ ದತ್ತಪೀಠದ ಕಿರಿಯ ಶ್ರೀ ದತ್ತವಿಜಯಾನಂದ ತೀರ್ಥ ಸ್ವಾಮೀಜಿ ಜ್ಯೋತಿ ಬೆಳಗಿಸಿ ಸಾಮೂಹಿಕ ಸತ್ಯನಾರಾಯಣ ಪೂಜಾ ಕಾರ್ಯಕ್ಕೆ ಚಾಲನೆ ನೀಡಿದರು. ಸಂತೋಷ್ ಘನಪಾಟಿ ಮತ್ತು ಶಿಷ್ಯರ ನೇತೃತ್ವದಲ್ಲಿ ವ್ರತ ನೆರವೇರಿತು.

ಅವಧೂತ ದತ್ತಪೀಠದ ವತಿಯಿಂದಲೇ ಉಚಿತವಾಗಿ ಸತ್ಯನಾರಾಯಣ ವ್ರತ ಏರ್ಪಡಿಸಿದ್ದಲ್ಲದೆ ಈ ವ್ರತಕ್ಕೆ ಬೇಕಾದಂತಹ ಸಕಲ ಪೂಜಾ ಸಾಮಗ್ರಿಗಳು ಮತ್ತು ಪ್ರಸಾದವನ್ನು ಕೂಡಾ ಉಚಿತವಾಗಿ ನೀಡಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಗಣಪತಿ ಸಚ್ಚಿದಾನಂದ ಸ್ವಾಮೀಜಿ, ಸತ್ಯನಾರಾಯಣ ವ್ರತ ಮಾಡುವುದರಿಂದ ಮನುಷ್ಯರ ದುಃಖ, ಕಷ್ಟ ಕೋಟಲೆ ದೂರವಾಗಲಿದೆ. ಸಂಸಾರದಲ್ಲಿ ಸುಖ, ದುಃಖ ಎರಡೂ ಇರಬೇಕು, ಸದಾ ಸತ್ಯವನ್ನೆ ನುಡಿಯಬೇಕು. ಸಾಧ್ಯವಾದಷ್ಟೂ ಒಳಿತನ್ನೇ ಮಾಡಬೇಕು ಎಂದು ಹೇಳಿದರು.

ಪ್ರಪಂಚದಲ್ಲಿ ನಮ್ಮ ಆಶ್ರಮಗಳು ಬಹಳಷ್ಟು ಇವೆ. ಆದರೆ ನಮಗೆ ನಮ್ಮ ಮೈಸೂರಿನ ಕಾವೇರಿ ನದಿ ಬಿಟ್ಟು ಹೋಗಲು ಮನಸ್ಸಿಲ್ಲ. ಆದರೆ ಕೆಲವರು ಕಾವೇರಿ ನದಿಯಲ್ಲಿ ನೀರೆ ಇಲ್ಲ ಎನ್ನುತ್ತಾರೆ. ಈಗ ಮತ್ತಮ ಮಳೆಯಾಗುತ್ತಿದ್ದು, ಕಷ್ಟಗಳು ದೂರವಾಗಲಿವೆ ಎಂದು ಸ್ವಾಮೀಜಿ ತಿಳಿಸಿದರು.

ಪ್ರತಿ ವರ್ಷ ಈ ರೀತಿಯ ಸಾಮೂಹಿಕ ಸತ್ಯನಾರಾಯಣ ಪೂಜೆ ನಡೆಯಬೇಕೆಂಬುದು ನಮ್ಮ ಮಹದಾಸೆ. ಆಶ್ರಮದಲ್ಲಿ ಪ್ರತಿದಿನ ಸಂಜೆ ಸತ್ಸಂಗ ನಡೆಯಬೇಕು ಎಂಬ ಆಶಯವಿದೆ. ಇದೆಲ್ಲದರಲ್ಲೂ ಭಕ್ತರು ಭಾಗವಹಿಸಬೇಕು ಎಂದು ತಿಳಿಸಿದರು.

ಹಿಂದೂಗಳಲ್ಲಿ ಹಣೆಗೆ ಕುಂಕುಮದ ಬೊಟ್ಟು ಇಡುವ ಅಭ್ಯಾಸವಿದೆ, ಇದು ಅತ್ಯಂತ ಒಳ್ಳೆಯ ಪದ್ಧತಿ. ಕುಂಕುಮವನ್ನು ಹಣೆಯಲ್ಲಿ ಇಡುವುದರಿಂದ ಸದಾ ದೇವರ ಆಶೀರ್ವಾದ ನಿಮ್ಮ ಮೇಲಿರುತ್ತದೆ ಎಂದು ಶ್ರೀಗಳು ತಿಳಿಸಿದರು.

# ಸಂಜೆ ಟಿಪ್ಸ್



## ರಾಯಚೂರಿನಲ್ಲಿ ಬಜಾಜ್ ಅಲಾಯನ್ಸ್ ಜನರಲ್ ಇನ್ಶೂರೆನ್ಸ್ ಕಚೇರಿ ಉದ್ಘಾಟನೆ

ಬಜಾಜ್ ಅಲಾಯನ್ಸ್ ಜನರಲ್ ಇನ್ಶೂರೆನ್ಸ್, ಭಾರತದ ಪ್ರಮುಖ ಖಾಸಗಿ ಜನರಲ್ ಇನ್ಶೂರರ್ಗಳಲ್ಲಿ ಒಂದಾಗಿದ್ದು, ಕರ್ನಾಟಕದ ರಾಯಚೂರಿನಲ್ಲಿ ಅದರ ಹೊಸ ಕಚೇರಿಯ ಉದ್ಘಾಟನೆಯನ್ನು ಘೋಷಿಸಿದೆ. ಈ ಕಾರ್ಯತಂತ್ರದ ವಿಸ್ತರಣೆಯು ಭಾರತದ ಶ್ರೇಣಿ 2 ಮತ್ತು ಶ್ರೇಣಿ 3 ನಗರಗಳಲ್ಲಿ ಇನ್ಶೂರೆನ್ಸ್ ಪ್ರವೇಶವನ್ನು ಹೆಚ್ಚಿಸುವ ಮತ್ತು ನಮ್ಮ ನಾಗರಿಕರಿಗೆ ಹಣಕಾಸಿನ ಸ್ಥಿರತೆಯನ್ನು ಒದಗಿಸುವ ಗುರಿಯನ್ನು ಹೊಂದಿದೆ. ಭಾರತದ ಬೆಳೆಯುತ್ತಿರುವ ಆರ್ಥಿಕತೆಯು ವೇಗವಾಗಿ ವಿಕಸನಗೊಳ್ಳುತ್ತಿದೆ, ಆದರೆ ಅದರೊಂದಿಗೆ, ಅಪಾಯ ಮತ್ತು ಅನಿಶ್ಚಿತತೆಗಳ ಪಾಲು ಕೂಡ ಹೆಚ್ಚುತ್ತಿದೆ. ತನ್ನ ಪರಿಣತಿಯೊಂದಿಗೆ, ಬಜಾಜ್ ಅಲಾಯನ್ಸ್ ತನ್ನ ನವೀನ ಪ್ರಾಡಕ್ಟ್‌ಗಳು ಮತ್ತು ಪರಿಹಾರಗಳನ್ನು ರಾಯಚೂರಿನ ಜನರ ಹತ್ತಿರಕ್ಕೆ ತರುವ ಗುರಿಯನ್ನು ಹೊಂದಿದೆ. ಗ್ರಾಹಕರ ಅಗತ್ಯಗಳನ್ನು ತಡೆರಹಿತವಾಗಿ ಪೂರೈಸಲು ಕಂಪನಿಯು ತಂತ್ರಜ್ಞಾನದಿಂದ ಬೆಂಬಲಿತವಾದ ವಿಶಾಲ ಶ್ರೇಣಿಯ ಸೇವೆಗಳನ್ನು ಒದಗಿಸುತ್ತದೆ. ಹೊಸ ಕಚೇರಿಯು ತನ್ನ ಉಪಸ್ಥಿತಿಯನ್ನು ಮತ್ತಷ್ಟು ಬಲಪಡಿಸಲು ಮತ್ತು ಈ ಪ್ರದೇಶದಲ್ಲಿ ತನ್ನ ಗ್ರಾಹಕರನ್ನು ತಲುಪಲು ಬಜಾಜ್ ಅಲಾಯನ್ಸ್ ಜನರಲ್ ಇನ್ಶೂರೆನ್ಸ್‌ನ ಕಾರ್ಯತಂತ್ರದ ಕೇಂದ್ರವಾಗಿ ಕಾರ್ಯನಿರ್ವಹಿಸುತ್ತದೆ.

ಹೊಸ ಕಚೇರಿಯ ಉದ್ಘಾಟನೆಯ ಕುರಿತು ಪ್ರತಿಕ್ರಿಯಿಸಿದ ಬಜಾಜ್ ಅಲಾಯನ್ಸ್ ಜನರಲ್ ಇನ್ಶೂರೆನ್ಸ್‌ನ ಜಿಯೋ ರಾಷ್ಟ್ರೀಯ ಮುಖ್ಯಸ್ಥರಾದ ಅಮಿತೇಶ್ ಆನಂದ್, ''ಇಂದಿನ ವೇಗವಾಗಿ ಬೆಳೆಯುತ್ತಿರುವ ಆರ್ಥಿಕ ದೃಶ್ಯಾವಳಿಯಲ್ಲಿ, ಇನ್ಶೂರೆನ್ಸ್ ಅನಿಶ್ಚಿತತೆಗಳ ನಡುವೆ ಆರ್ಥಿಕ ಭದ್ರತೆಯ ಸುರಕ್ಷತಾ ಜಾಲವನ್ನು ಒದಗಿಸುವಲ್ಲಿ ಪ್ರಮುಖ ಪಾತ್ರವನ್ನು ವಹಿಸುತ್ತದೆ. ಆದಾಗ್ಯೂ, ಇನ್ಶೂರೆನ್ಸ್‌ನ ಪ್ರಯೋಜನಗಳು ಮತ್ತು ಮಹತ್ವವನ್ನು ಅರ್ಥಮಾಡಿಕೊಳ್ಳುವಲ್ಲಿ ಅಂತರದ ತಡೆಗೋಡೆಯಿದೆ, ಆದ್ದರಿಂದ,ಅದಕ್ಕೆ ಪ್ರವೇಶವು ಕಡಿಮೆಯಾಗಿದೆ. ನಾಗರಿಕರಿಗೆ ಸಮಗ್ರ ಇನ್ಶೂರೆನ್ಸ್ ಪರಿಹಾರ ಒದಗಿಸಲುಮತ್ತು ತಲುಪಿಸಲು ಮೀಸಲಾದ ಕಂಪನಿಯಾಗಿದೆ ಎಂದರು.

## ವೆಜ್ ಮಿಕ್ಸ್ ದೋಸೆ

### ಪಾಕ ಶಾಲೆ



### ಮಾಡುವ ವಿಧಾನ

ಹಿಂದಿನ ದಿನ ರಾತ್ರಿಯೇ ದೋಸೆ ಅಕ್ಕಿಯನ್ನು ನೀರಿನಲ್ಲಿ ನೆನೆ ಹಾಕಬೇಕು. ಬೆಳಗ್ಗೆ ಅಕ್ಕಿಯನ್ನು ನುಣ್ಣಗೆ ರುಬ್ಬಿಕೊಂಡು ಅದಕ್ಕೆ ಸಣ್ಣಗೆ ತುರಿದ ಕ್ಯಾರೆಟ್, ಸೌತೆಕಾಯಿ, ಶುಂಠಿ, ಕ್ಯಾಬೇಜನ್ನು ಹಾಗೂ ಸಣ್ಣಗೆ ಕತ್ತರಿಸಿದ ಈರುಳ್ಳಿ, ಕ್ಯಾಪ್ಸಿಕಂ ಮತ್ತು ಹಸಿ ಮೆಣಸಿನಕಾಯಿ ಪೇಸ್ಟ್, ಉಪ್ಪು ಹಾಕಿ ಚೆನ್ನಾಗಿ ಕಲೆಸಬೇಕು. ಆ ನಂತರ ದೋಸೆ ಹಂಚನ್ನು ಕಾಯಿಸಿ ಅದಕ್ಕೆ ಎಣ್ಣೆ ಸವರಿ ದೋಸೆ ಹಾಕಿ ಅದರ ಮೇಲೆ ಎಣ್ಣೆ ಸವರಬೇಕು. ದೋಸೆ ಒಂದು ಕಡೆ ಬೆಂದ ನಂತರ ಇನ್ನೊಂದು ಕಡೆಗೆ ಮಗುಚಿ ಹಾಕಿ ಬೇಯಿಸಿ ತೆಗೆದರೆ ಸವಿಯಲು ವೆಜ್ ಮಿಕ್ಸ್ ದೋಸೆ ರೆಡಿ.

### ಬೇಕಾಗಿರುವ ಪದಾರ್ಥ

**ದೋಸೆ ಅಕ್ಕಿ- ಎರಡು ಕಪ್, ಸೌತೆಕಾಯಿ- ಒಂದು (ಚಿಕ್ಕದ್ದು), ಈರುಳ್ಳಿ- ಒಂದು, ಕ್ಯಾರೆಟ್- ಒಂದು(ಚಿಕ್ಕದ್ದು), ದಪ್ಪ ಮೆಣಸಿನಕಾಯಿ- ಒಂದು(ಚಿಕ್ಕದ್ದು), ಕ್ಯಾಬೇಜ್- ಸ್ವಲ್ಪ, ಹಸಿಶುಂಠಿ- ಸ್ವಲ್ಪ, ಹಸಿಮೆಣಸಿನಕಾಯಿ ಪೇಸ್ಟ್- ಒಂದು ಟೇಬಲ್ ಚಮಚೆ, ಉಪ್ಪು- ರುಚಿಗೆ ತಕ್ಕಷ್ಟು, ಎಣ್ಣೆ- ಬೇಯಿಸಲು ಅಗತ್ಯವಿರುವಷ್ಟು**

## ಅಶ್ಲೀಲ ವೆಬ್ ಸೈಟ್‌ಗೆ ಫೋಟೋ ಹಾಕಿದ್ರು: ನಟಿ ಜಾನ್ವಿ ಕಪೂರ್

ಬಾಲಿವುಡ್ ಬ್ಯೂಟಿ, ನಟಿ ಶ್ರೀದೇವಿ ಪುತ್ರಿ ಜಾನ್ವಿ ಕಪೂರ್ ಬಾಲಿವುಡ್ ಜೊತೆಗೆ ದಕ್ಷಿಣ ಭಾರತದ ಸಿನಿಮಾಗಳಲ್ಲೂ ಬ್ಯುಸಿಯಾಗಿದ್ದಾರೆ. ನಟಿಯ ಸಖತ್ ಗ್ಲಾಮರಸ್ ಫೋಟೋಗಳು ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗುತ್ತಿರುತ್ತದೆ. ಕೆಲವರು ಮೆಚ್ಚುಗೆ ಸೂಚಿಸುತ್ತಾರೆ. ಆದರೆ ಇನ್ನೂ ಕೆಲವರು ಕೆಟ್ಟದಾಗಿ ಟ್ರೋಲ್ ಮಾಡುತ್ತಾರೆ. ಸಾರ್ವಜನಿಕ ಜೀವನದಲ್ಲಿ ಇರುವ ನಟಿಯರು ಇಂಥದ್ದನ್ನು ಪ್ರತಿ ದಿನವೂ ಎದುರಿಸುತ್ತಾರೆ. ಅದಕ್ಕೆ ಜಾನ್ವಿ ಕಪೂರ್ ಕೂಡ ಹೊರತಾಗಿಲ್ಲ. ಇತ್ತೀಚೆಗೆ ಅವರು ಕರಣ್ ಜೋಹರ್ಗೆ ನೀಡಿದ ಸಂದರ್ಶನದಲ್ಲಿ ಈ ವಿಷಯದ ಬಗ್ಗೆ ಮಾತನಾಡಿದ್ದಾರೆ. ಬಾಲಕಿ ಆಗಿದ್ದಾಗಲೇ ತಮ್ಮ ಫೋಟೋವನ್ನು ಅಶ್ಲೀಲ ವೆಬ್ಸೈಟ್‌ನಲ್ಲಿ ಹಾಕಲಾಗಿತ್ತು ಎಂದು ಜಾನ್ವಿ ಕಪೂರ್ ನೋವು ತೋಡಿಕೊಂಡಿದ್ದಾರೆ.

'ಮಿಸ್ಟರ್ ಆಯಂಡ್ ಮಿಸೆಸ್ ಮಾಹಿ' ಸಿನಿಮಾದಲ್ಲಿ ಜಾನ್ವಿ ಕಪೂರ್ ಅವರು ನಟಿಸಿದ್ದಾರೆ. ಮೇ 31ರಂದು ಈ ಸಿನಿಮಾ ಬಿಡುಗಡೆ ಆಗಲಿದೆ. ನಟ ರಾಜ್ಕುಮಾರ್ ರಾವ್ ಜೊತೆ ಜಾನ್ವಿ ಕಪೂರ್ ತೆರೆಹಂಚಿಕೊಂಡಿದ್ದಾರೆ. ಚಿತ್ರದ ಕುರಿತು ಕರಣ್ ಜೋಹರ್ ಅವರ ಸಂದರ್ಶನ ನಡೆಸಿದ್ದಾರೆ. ಈ ವೇಳೆ ಜಾನ್ವಿ ಕಪೂರ್ ಅವರ ವೈಯಕ್ತಿಕ ಜೀವನದ ಬಗ್ಗೆಯೂ ಪ್ರಶ್ನೆಗಳು ಎದುರಾಗಿದ್ದು ಈ ವೇಳೆ ತಾವು ಅನುಭವಿಸಿದ ನೋವನ್ನು ನಟಿ ಹೇಳಿಕೊಂಡಿದ್ದಾರೆ.

'ಇದನ್ನು ನಾನು ತುಂಬ ವರ್ಷಗಳಿಂದ ನೋಡುತ್ತಾ ಬಂದಿದ್ದೇನೆ. ನಾನು 12 ಅಥವಾ 13 ವರ್ಷದ ಬಾಲಕಿ ಆಗಿದ್ದಾಗ ಮೊದಲ ಬಾರಿಗೆ ಮಾಧ್ಯಮಗಳು ನನ್ನನ್ನು ಕೆಟ್ಟ ರೀತಿಯಲ್ಲಿ ಬಿಂಬಿಸಿದ್ದವು. ಅಪ್ಪ-ಅಮ್ಮನ ಜೊತೆ ನಾನು ಕಾರ್ಯಕ್ರಮವೊಂದಕ್ಕೆ ಹೋಗಿದ್ದೆ. ಆ ಸಂದರ್ಭದಲ್ಲಿ ಕ್ಲಿಕ್ಕಿಸಿದ ನನ್ನ ಫೋಟೋಗಳನ್ನು ಮೀಡಿಯಾದಲ್ಲಿ ಪ್ರಕಟಿಸಿದ್ದರು' ಎಂದಿದ್ದಾರೆ ಜಾನ್ವಿ ಕಪೂರ್.

ಅಶ್ಲೀಲ ವೆಬ್ಸೈಟ್ ರೀತಿ ಕಾಣುವಂತಹ ಜಾಲತಾಣದಲ್ಲಿ ನನ್ನ ಫೋಟೋಗಳನ್ನು ಹಾಕಿದ್ದರು. ನಮ್ಮ ಶಾಲೆಯಲ್ಲಿನ ಹುಡುಗರು ಆ ಫೋಟೋಗಳನ್ನು ನೋಡಿ ನಗುತ್ತಿದ್ದರು. ಅದೊಂದು ವಿಚಿತ್ರವಾದ ಸಂಗತಿ' ಎಂದು ಜಾನ್ವಿ ಕಪೂರ್ ಹೇಳಿದ್ದಾರೆ. ಇಂದಿಗೂ ಕೂಡ ಜಾನ್ವಿ ಕಪೂರ್ ಅವರನ್ನು ಕೆಲವರು ಟ್ರೋಲ್ ಮಾಡುತ್ತಾರೆ. ನೆಪೋಟಿಸಂ ಫಲಾನುಭವಿ ಎಂದು ಜನರು ಅಣಕಿಸುತ್ತಾರೆ. ಆದರೆ ಇದ್ಯಾವುದಕ್ಕೂ ಕ್ಯಾರೆ ಎನ್ನದ ನಟಿ ಸಿನಿಮಾದ ಕೆಲಸಗಳಲ್ಲಿ ಬ್ಯುಸಿಯಾಗಿದ್ದಾರೆ.



## ತೂಕ ಇಳಿಸಲು ಸಲಹೆ



### ಹೆಲ್ತ್ ಟಿಪ್ಸ್

ದೇಹದ ತೂಕ ಹೆಚ್ಚಾಗುವುದರಿಂದ ಅನೇಕ ರೋಗಗಳು ನಮ್ಮನ್ನು ಆಕ್ರಮಿಸುತ್ತವೆ. ನೀವು ಕೆಲವು ಸರಳ ವಿಧಾನಗಳಲ್ಲಿ ತೂಕವನ್ನು ಕಳೆದುಕೊಳ್ಳಬಹುದು. ಅವುಗಳಲ್ಲಿ ಒಂದು ನಮ್ಮ ಊಟ ಮತ್ತು ನಿದ್ರೆಯನ್ನು ಸರಿಪಡಿಸುವುದು. ಸ್ಥೂಲಕಾಯತೆಯನ್ನು ತಪ್ಪಿಸಲು ರಾತ್ರಿಯಲ್ಲಿ ನಾವು ನೆನಪಿನಲ್ಲಿಟ್ಟುಕೊಳ್ಳಬೇಕಾದ ಕೆಲವು ಸಲಹೆಗಳು ಇಲ್ಲಿವೆ..

ರಾತ್ರಿಯಲ್ಲಿ ಕನಿಷ್ಠ 7-8 ಗಂಟೆಗಳ ನಿದ್ದೆ ಅತ್ಯಗತ್ಯ. ಸಾಕಷ್ಟು ನಿದ್ರೆ ಮಾಡದ ಜನರು ಬೊಜ್ಜು ಹೊಂದುವ ಸಾಧ್ಯತೆ ಹೆಚ್ಚು ಎಂದು ಅಧ್ಯಯನಗಳು ತಿಳಿಸುತ್ತವೆ. ತೂಕ ನಷ್ಟಕ್ಕೆ ಸಾಕಷ್ಟು ತೊಂದರೆಯಿಲ್ಲದ ನಿದ್ರೆ ಅತ್ಯಗತ್ಯ.

**ಅಧಿಕ ಸಕ್ಕರೆ:** ರಾತ್ರಿಯ ಊಟದಲ್ಲಿ ಹೆಚ್ಚಿನ ಸಕ್ಕರೆ ಆಹಾರಗಳನ್ನು ತಪ್ಪಿಸಿ. ಈ ಆಹಾರಗಳು ರಕ್ತದಲ್ಲಿನ ಸಕ್ಕರೆಯನ್ನು ಹೆಚ್ಚಿಸುತ್ತವೆ. ಇದು ನಿದ್ರೆಗೆ ಅಡ್ಡಿಪಡಿಸುತ್ತದೆ ಮತ್ತು ಹಸಿವನ್ನು ಉತ್ತೇಜಿಸುತ್ತದೆ. ಆದ್ದರಿಂದ ರಾತ್ರಿಯಲ್ಲಿ ಸಿಹಿತಿಂಡಿಗಳು ಮತ್ತು ಸಕ್ಕರೆ ಆಹಾರಗಳನ್ನು ತಿನ್ನುವುದನ್ನು ಬಿಡಿ..

**ಲಘು ಭೋಜನ:** ರಾತ್ರಿಯ ಊಟವು ಲಘು ಆಹಾರ ಮತ್ತು ಸಮತೋಲಿತ ಊಟವಾಗಿರಬೇಕು. ರಾತ್ರಿಯಲ್ಲಿ ಸುಲಭವಾಗಿ ಜೀರ್ಣವಾಗುವ ಆಹಾರವನ್ನು ಮಾತ್ರ ಸೇವಿಸಬೇಕು. ರಾತ್ರಿಯಲ್ಲಿ ನಾವು ಸೇವಿಸುವ ಆಹಾರದ ಅಜೀರ್ಣವೂ ಸ್ಥೂಲಕಾಯತೆಗೆ ಪ್ರಮುಖ ಕಾರಣವಾಗಿದೆ.

**ಆಹಾರದ ಪ್ರಮಾಣ:** ಮಲಗುವ ಮುನ್ನ ಹೆಚ್ಚಿನ ಪ್ರಮಾಣದ ಆಹಾರವನ್ನು ಸೇವಿಸುವುದು ಒಳ್ಳೆಯದಲ್ಲ. ಇದು ದೇಹದ ಜೀರ್ಣಾಂಗ ವ್ಯವಸ್ಥೆಗೆ ದೊಡ್ಡ ಸವಾಲನ್ನು ಒಡ್ಡುತ್ತದೆ. ಅಲ್ಲದೆ, ಇದು ಅಸ್ವಸ್ಥತೆ, ಹೊಟ್ಟೆ ಉಬ್ಬುವುದು ಮತ್ತು ಗ್ಯಾಸ್ ಉಂಟುಮಾಡಬಹುದು. ಅದಕ್ಕಾಗಿ ಪ್ರೋಟೀನ್ಗಳು, ತರಕಾರಿಗಳು ಮತ್ತು ಧಾನ್ಯಗಳನ್ನು ಒಳಗೊಂಡಿರುವ ಸಮತೋಲಿತ ಆಹಾರವನ್ನು ಸೇವಿಸಿ.

**ಕಾಫಿ, ಟೀ:** ರಾತ್ರಿಯಲ್ಲಿ ಕಾಫಿ, ಟೀ, ಕೆಫೀನ್ ಇರುವ ಪಾನೀಯಗಳು ಮತ್ತು ಶಕ್ತಿ ಪಾನೀಯಗಳನ್ನು ತಪ್ಪಿಸಿ. ಈ ಕಾರಣದಿಂದಾಗಿ, ನಿದ್ರೆಗೆ ತೊಂದರೆಯಾಗುತ್ತದೆ ಮತ್ತು ಜೀರ್ಣಾಂಗ ವ್ಯವಸ್ಥೆಯ ಮೇಲೆ ಪರಿಣಾಮ ಬೀರುತ್ತದೆ. ಈ ಪಾನೀಯಗಳ ಬದಲಿಗೆ ಹರ್ಬಲ್ ಟೀ, ಗ್ರೀನ್ ಟೀ, ಅರಿಶಿನ ಹಾಲು ಇತ್ಯಾದಿಗಳನ್ನು ಸೇವಿಸಬಹುದು.

**ನಡಿಗೆ:** ಊಟದ ನಂತರ ನಡೆಯುವುದು ಒಳ್ಳೆಯದು. ಇದು ದಿನವಿಡೀ ನಮ್ಮ ದೇಹದಲ್ಲಿ ಸಂಗ್ರಹವಾಗಿರುವ ಕ್ಯಾಲೊರಿಗಳನ್ನು ಸುಡುವಲ್ಲಿ ಸಹಾಯ ಮಾಡುತ್ತದೆ.

## ತಲೆಹೊಟ್ಟು ಸಮಸ್ಯೆಗೆ ಹೇಳಿ ಗುಡ್ ಬೈ

### ಬ್ಯೂಟಿ ಟಿಪ್ಸ್



ತಲೆಹೊಟ್ಟಿನಿಂದ ಕಿರಿಕಿರಿ ಅನುಭವಿಸುವುದು ಮಾತ್ರವಲ್ಲ, ಅದರಿಂದ ಕೂದಲು ಉದುರುವ ಸಮಸ್ಯೆ ಕೂಡ ಕಂಡು ಬರುತ್ತದೆ. ತಲೆಹೊಟ್ಟು ಕಾಣಿಸಿದರೆ ಕೆಮಿಕಲ್ ಇರುವ ಡ್ಯಾಂಡ್ರಫ್ ಫ್ರೀ ಶ್ಯಾಂಪೂ ಹಾಕುವ ಬದಲು ಈ ಟಿಪ್ಸ್ ಪಾಲಿಸಿದರೆ ತಲೆಹೊಟ್ಟು ಸಮಸ್ಯೆಯೂ ಇರುವುದಿಲ್ಲ, ಕೂದಲಿನ ಆರೋಗ್ಯ ಮತ್ತಷ್ಟು ಹೆಚ್ಚಾಗುವುದರಲ್ಲಿ ಸಂದೇಹವಿಲ್ಲ. ಕೂದಲಿನ ಬುಡ ಒಣಗುವುದರಿಂದ ತಲೆಹೊಟ್ಟು ಸಮಸ್ಯೆ ಕಾಣಿಸುತ್ತದೆ. ಆದ್ದರಿಂದ ಕೂದಲಿಗೆ ಚೆನ್ನಾಗಿ ಎಣ್ಣೆ ಮಸಾಜ್ ಮಾಡಿ ಬಳಿಕ ಸ್ನಾನ ಮಾಡಿ. ಇದರಿಂದ ಕ್ರಮೇಣ ತಲೆಹೊಟ್ಟು ಕಡಿಮೆ ಆಗುತ್ತದೆ. ಮೆಂತೆಯನ್ನು ರುಬ್ಬಿ ಅದನ್ನು ತಲೆಗೆ ಹಚ್ಚಿ ಒಂದು ಗಂಟೆಯ ಬಳಿಕ ಸ್ನಾನ ಮಾಡಿದರೆ ತಲೆಹೊಟ್ಟು ಸಮಸ್ಯೆ ನಿವಾರಣೆ ಆಗುತ್ತದೆ.ತಲೆ ಹೊಟ್ಟಿನಿಂದ ತಲೆ ತುಂಬಾ ತುರಿಸುತ್ತಿದೆಯೇ?, ಒಂದು ಕಪ್ ಬಿಸಿ ನೀರಿಗೆ ಸ್ವಲ್ಪ ಕಹಿಬೇವಿನ ಎಲೆ ಹಾಕಿ ಮಾರನೆಯ ದಿನ ಎಲೆಯನ್ನು ತೆಗೆದು, ಆ ನೀರಿನಿಂದ ತಲೆ ಬುಡಕ್ಕೆ ಮಸಾಜ್ ಮಾಡಿ ಅರ್ಧ ಗಂಟೆಯ ಬಳಿಕ ತಲೆಗೆ ಸ್ನಾನ ಮಾಡಿ. ಈ ರೀತಿ ಮಾಡುವುದರಿಂದ ತಲೆ ತುರಿಕೆ ಬೇಗನೆ ಕಡಿಮೆಯಾಗುತ್ತದೆ. ತಲೆಗೆ ಮೆಹಂದಿ ಹಾಕುವುದರಿಂದ ತಲೆಹೊಟ್ಟಿನ ಸಮಸ್ಯೆ ಇಲ್ಲವಾಗುತ್ತದೆ.

## ಅಪೌಷ್ಟಿಕತೆಯನ್ನು ವ್ಯಾಪಕ ಪ್ರಚಾರ ಮತ್ತು ಸೂಕ್ತ ಕ್ರಮಗಳ ಮೂಲಕ ನಿವಾರಿಸುವ ಗುರಿಯನ್ನು



ಗ್ಲೆನ್ಮಾರ್ಕ್ ಫೌಂಡೇಶನ್, ಇಡೊಬ್ರೊ ಇಂಪ್ಯಾಕ್ಟ್ ಸೊಲ್ಯೂಷನ್ಸ್‌ಗಳ ಸಹಯೋಗದೊಂದಿಗೆ ಮೇರಿ ಪೌಷ್ಟಿಕ್ ರಸೋಯಿ ಅಡುಗೆ ಸ್ಪರ್ಧೆಯ ಆರನೇ ಸೀಸನ್ನ ಯಶಸ್ವಿ ಮುಕ್ತಾಯವನ್ನು ಘೋಷಿಸಿತು. ದೇಶಾದ್ಯಂತ ವ್ಯಾಪ್ತಿ ಹೊಂದಿರುವ ಉಪಕ್ರಮವು ಅಪೌಷ್ಟಿಕತೆಯನ್ನು ವ್ಯಾಪಕ ಪ್ರಚಾರ ಮತ್ತು ಸೂಕ್ತ ಕ್ರಮಗಳ ಮೂಲಕ ನಿವಾರಿಸುವ ಗುರಿಯನ್ನು ಹೊಂದಿದೆ. ಸ್ಥಳೀಯ ಶ್ರೀಮಂತ ಪಾಕವಿಧಾನಗಳು, ಆರೋಗ್ಯಕರ ಆಹಾರ ಪದ್ಧತಿಯನ್ನು ಅಳವಡಿಸಿಕೊಳ್ಳಲು ರಾಷ್ಟ್ರವ್ಯಾಪಿ ಸಮುದಾಯಗಳಿಗೆ ಈ ಕಾರ್ಯಕ್ರಮ ಉತ್ತೇಜನ ನೀಡುತ್ತಿದೆ.

24 ರಾಜ್ಯಗಳು ಮತ್ತು ನಾಲ್ಕು ಕೇಂದ್ರಾಡಳಿತ ಪ್ರದೇಶಗಳಿಂದ 800 ಕ್ಕೂ ಹೆಚ್ಚು ಪ್ರವೇಶ ಪತ್ರಗಳ ಜತೆಗೆ ಲಕ್ಷದ್ವೀಪ, ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ ಪ್ರವೇಶಗಳು ಮತ್ತು ಜಮ್ಮು ಮತ್ತು ಕಾಶ್ಮೀರದಿಂದ ಮೊದಲ ಬಾರಿಗೆ ಭಾಗವಹಿಸುವಿಕೆ ಸೇರಿದಂತೆ ಈ ಕಾರ್ಯಕ್ರಮವು 250+ ಪಟ್ಟಣಗಳು ಮತ್ತು ನಗರಗಳನ್ನು ವ್ಯಾಪಿಸಿದೆ.

50 ರಿಂದ 65 ವರ್ಷ ವಯಸ್ಸಿನ ವ್ಯಕ್ತಿಗಳಿಂದ ಸಲ್ಲಿಕೆಯಾಗಿರುವ ಪ್ರವೇಶ ಪತ್ರಗಳ ಉಲ್ಬಣವು ತಲೆಮಾರುಗಳಾದ್ಯಂತ ಪೌಷ್ಟಿಕಾಂಶವನ್ನು ಸುಧಾರಿಸುವ ವ್ಯಾಪಕ ಬದ್ಧತೆಯನ್ನು ಎತ್ತಿ ತೋರಿಸುತ್ತದೆ.

ಭಾಗವಹಿಸಿದವರು ತಮ್ಮ ಪಾಕಶಾಲೆಯ ಕೌಶಲ್ಯವನ್ನು ಎನ್ಜಿಓಗಳು, ವೃತ್ತಿಪರರು, ವಿದ್ಯಾರ್ಥಿಗಳು ಮತ್ತು ಮುಕ್ತ/ವ್ಯಕ್ತಿಗಳು ಎಂಬ ನಾಲ್ಕು ವಿಭಾಗಗಳಲ್ಲಿ ಪ್ರದರ್ಶಿಸಿದರು.

ಕಠಿಣ ಆಯ್ಕೆ ಪ್ರಕ್ರಿಯೆಯು ಮುಂಬೈನ ರಾಮನಾಥ್ ಪಯ್ಯಡೆ ಕಾಲೇಜ್ ಆಫ್ ಹಾಸ್ಪಿಟಾಲಿಟಿ ಮ್ಯಾನೇಜ್ಮೆಂಟ್ ಸ್ಟಡೀಸ್‌ನಲ್ಲಿ ಗ್ರ್ಯಾಂಡ್ ಕುಕ್-ಆಫ್‌ನಲ್ಲಿ 25 ಅಂತಿಮ ಸ್ಪರ್ಧಾಳುಗಳ ಸ್ಪರ್ಧೆಯೊಂದಿಗೆ ಕೊನೆಗೊಂಡಿತು.

ಪ್ರತಿಷ್ಠಿತ ಗ್ರ್ಯಾಂಡ್ ಜ್ಯೂರಿ ಗಳಾಗಿದ್ದ ಸೆಲೆಬ್ರಿಟಿ ಬಾಣಸಿಗ ಗೌತಮ್ ಮೆಹ್ರಿಷಿಹಿ ಅನುರಾಧಾ ಶೇಖರ್, ಡಾ. ಬಿಎಂಎನ್ ಕಾಲೇಜಿನ ಮಾಜಿ ಉಪ ಪ್ರಾಂಶುಪಾಲರು ಮತ್ತು ಆರ್ಪಿಹೆಚ್ ಹಾಸ್ಪಿಟಾಲಿಟಿ ಸ್ಟಡೀಸ್ನ ಪ್ರಿನ್ಸಿಪಲ್ ಶೆಫ್ ಯೋಗೇಶ್ ಉಟೇಕರ್ ಅವರು ಪೌಷ್ಟಿಕಾಂಶ, ನಾವೀನ್ಯತೆ ಮತ್ತು ಅಡುಗೆಯ ಮೇಲಿನ ಉತ್ಸಾಹವನ್ನು ಕೇಂದ್ರೀಕರಿಸಿ ಪಾಕವಿಧಾನಗಳನ್ನು ಮೌಲ್ಯಮಾಪನ ಮಾಡಿದರು. ಈ ಉಪಕ್ರಮದ ಕುರಿತು ಮಾತನಾಡಿದ ಗ್ಲೆನ್ಮಾರ್ಕ್ ಫಾರ್ಮಾಸ್ಯುಟಿಕಲ್ಸ್ ಲಿಮಿಟೆಡ್ನ ಕಾರ್ಪೊರೇಟ್ ಸೇವೆಗಳ ಕಾರ್ಯನಿರ್ವಾಹಕ ನಿರ್ದೇಶಕ ಚೆರಿಲ್ ಪಿಂಟೊ, ಗ್ಲೆನ್ಮಾರ್ಕ್ ಫೌಂಡೇಶನ್ನಲ್ಲಿ, ನಾವು ನಮ್ಮ ಶ್ರೀಮಂತ ಆಹಾರ ಪರಂಪರೆಯನ್ನು ಸಂರಕ್ಷಿಸಲು ಮತ್ತು ಆಚರಿಸಲು ಬದ್ಧರಾಗಿದ್ದೇವೆ, ಆಗಾಗ್ಗೆ ಅದು ಆಧುನಿಕ ಜೀವನಶೈಲಿಯಿಂದ ಮರೆಯಾಗಿ ಹೋಗಿದೆ. 'ಮೇರಿ ಪೌಷ್ಟಿಕ್ ರಸೋಯಿ' ಮೂಲಕ, ಅಪೌಷ್ಟಿಕತೆಯಂತಹ ನಿರ್ಣಾಯಕ ಆರೋಗ್ಯ ಸಮಸ್ಯೆಗಳನ್ನು ಪರಿಹರಿಸುವಲ್ಲಿ ಸಾಂಪ್ರದಾಯಿಕ ಅಡುಗೆಯ ಆಳವಾದ ಪರಿಣಾಮವನ್ನು ನಾವು ನೋಡಿದ್ದೇವೆ. ಈ ಉಪಕ್ರಮವು ಪಾಕವಿಧಾನಗಳನ್ನು ಮೀರಿಸುತ್ತದೆ; ಇದು ನಮ್ಮ ಸಮುದಾಯಗಳು ಎದುರಿಸುತ್ತಿರುವ ಪೌಷ್ಟಿಕಾಂಶದ ಸವಾಲುಗಳ ಮೇಲೆ ಬೆಳಕು ಚೆಲ್ಲುವ ಸಂದರ್ಭದಲ್ಲಿ ಆರೋಗ್ಯಕರ ಆಹಾರ ಪದ್ಧತಿಯತ್ತ ಗಮನಾರ್ಹ ಬದಲಾವಣೆಗೆ ವೇಗವರ್ಧಕವಾಗಿದೆ. ಸಂವಾದವನ್ನು ಬೆಳೆಸುವ ಮೂಲಕ ಮತ್ತು ಸುಸ್ಥಿರ ಆಹಾರ ಸಂಸ್ಕೃತಿಗಳನ್ನು ಉತ್ತೇಜಿಸುವ ಮೂಲಕ, ನಾವು ರಾಷ್ಟ್ರವ್ಯಾಪಿ ವ್ಯಕ್ತಿಗಳು, ಕುಟುಂಬಗಳು ಮತ್ತು ಸಮುದಾಯಗಳ ಮೇಲೆ ಶಾಶ್ವತವಾದ, ಪರಿವರ್ತನೆಯ ಪ್ರಭಾವಕ್ಕಾಗಿ ಶ್ರಮಿಸುತ್ತೇವೆ ಎಂದು ಹೇಳಿದರು. ಡಾ ಬಿಎನ್‌ಎಂ ಕಾಲೇಜಿನ ನಿವೃತ್ತ ಪ್ರಾಂಶುಪಾಲರು ಮತ್ತು ತೀರ್ಪುಗಾರರ ಸದಸ್ಯರಾದ ಅನುರಾಧಾ ಶೇಖರ್ ಮಾತನಾಡಿ, ''ರೆಸಿಪಿಗಳು ನೋಡುವುದಕ್ಕೆ ಮಾತ್ರ ಆಕರ್ಷಕವಾಗಿರಲಿಲ್ಲ ಆದರೆ ಹೆಚ್ಚು ಪೌಷ್ಟಿಕ, ನವೀನ ಮತ್ತು ಪ್ರೀತಿಯಿಂದ ತಯಾರಿಸಲ್ಪಟ್ಟವು. ಅಂತಿಮ ಸ್ಪರ್ಧಿಗಳು ನಿಜವಾಗಿಯೂ ಅಡುಗೆ ಮತ್ತು ಪೌಷ್ಟಿಕಾಂಶದ ಬಗ್ಗೆ ತಮ್ಮ ಉತ್ಸಾಹವನ್ನು ಪ್ರದರ್ಶಿಸಿದರು, ವಿಜೇತರನ್ನು ಆಯ್ಕೆ ಮಾಡಲು ತೀರ್ಪುಗಾರರಿಗೆ ಕಷ್ಟವಾಯಿತು ಎಂದರು.

## ರಾಶಿ ಭವಿಷ್ಯ



**ಜಯಶ್ರೀ.ಬಿ.ಆರ್**
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ಕಾರ್ಯ ವಿಘಾತ, ಅನಾರೋಗ್ಯ, ಗೆಳೆಯರಿಂದ ಅನರ್ಥ, ಮನಕ್ಲೇಶ, ಮಾನಸಿಕ ಒತ್ತಡ, ದ್ರವ್ಯ ಲಾಭ.

**ವೃಷಭ:** ಮನೆಗೆ ಹಿರಿಯರ ಆಗಮನ, ಹೆಚ್ಚು ಶ್ರಮ ಅಲ್ಪ ಲಾಭ, ವೈವಾಹಿಕ ಜೀವನದಲ್ಲಿ ತೊಂದರೆ.

**ಮಿಥುನ:** ಪ್ರಿಯ ಜನರ ಭೇಟಿ, ಕೆಲಸದಲ್ಲಿ ಮುನ್ನುಗ್ಗುವಿರಿ, ಸಾಮಾನ್ಯ ಸೌಖ್ಯಕ್ಕೆ ಧಕ್ಕೆ, ಪರರ ಧನ ಪ್ರಾಪ್ತಿ.

**ಕಟಕ:** ವಿವಿಧ ಕಾರ್ಯಕ್ರಮಗಳಲ್ಲಿ ಭಾಗಿ, ಮೋಸದ ಕುತಂತ್ರಕ್ಕೆ ಬೀಳುವಿರಿ.

**ಸಿಂಹ:** ಉದ್ಯೋಗದಲ್ಲಿ ಪ್ರಗತಿ, ದೃಷ್ಟಿ ದೋಷದಿಂದ ಪ್ರಗತಿ, ಅತಿಯಾದ ನಿದ್ರೆ.

**ಕನ್ಯಾ:** ಮಿತ್ರರಲ್ಲಿ ವಿರೋಧ, ಮಾತಿನಿಂದ ಅನರ್ಥ, ಅನಾರೋಗ್ಯ, ದೈವಾನುಗ್ರಹದಿಂದ ಶುಭ.

**ತುಲಾ:** ತಾಳ್ಮೆ ಅಗತ್ಯ, ಹಣಕಾಸು ಮುಗ್ಗಟ್ಟು, ನಂಬಿದ ಜನರಿಂದ ಮೋಸ, ಹಿತಶತ್ರುಗಳಿಂದ ಭಾದೆ, ಮನಕ್ಲೇಶ .

**ವೃಶ್ಚಿಕ:** ಮಾನಸಿಕ ಒತ್ತಡ, ಚಂಚಲ ಮನಸ್ಸು, ವಿಪರೀತ ವ್ಯಸನ, ಶತ್ರು ಭಾದೆ.

**ಧನಸ್ಸು:** ಅನಾವಶ್ಯಕ ಹಣವ್ಯಯ, ಹಿರಿಯರಿಗೆ ಗೌರವ ನೀಡಿ, ಸಾಧಾರಣ ಪ್ರಗತಿ.

**ಮಕರ:** ಆತ್ಮೀಯರ ಭೇಟಿ, ಸ್ಥಿರಾಸ್ತಿ ಮಾರಾಟ, ದೈವಿಕ ಚಿಂತನೆ, ಅವಿವಾಹಿತರಿಗೆ ವಿವಾಹ ಯೋಗ.

**ಕುಂಭ:** ಮಾತಿನ ಚಕಮಕಿ, ಭೋಗ ವಸ್ತುಗಳನ್ನು ಕಳೆದುಕೊಳ್ಳುವಿರಿ, ಸಹೋದರರನಿಂದ ಬೋಧನೆ.

**ಮೀನ:** ತೀರ್ಥಕ್ಷೇತ್ರ ದರ್ಶನ, ನೆರೆಹೊರೆಯವರ ಜೊತೆ ಸುತ್ತಾಟ, ಅಧಿಕಾರಿಗಳಿಂದ ಹೊಗಳಿಕೆ.

## ವಿಶ್ವ ಜೇನುನೊಣ ದಿನ




ಮೇ 20 ರಂದು ಪ್ರಪಂಚದಾದ್ಯಂತ ವಿಶ್ವ ಜೇನುನೊಣ ದಿನವನ್ನು ಆಚರಿಸಲಾಗುತ್ತದೆ. ಈ ದಿನದಂದು ಜೇನುಸಾಕಣೆಯ ಕಾರ್ಯಕ್ರಮಗಳನ್ನು ಜೇನುನೊಣಗಳು ಮತ್ತು ಜೇನುಸಾಕಣೆಯ ಪ್ರಾಮುಖ್ಯತೆಯ ಬಗ್ಗೆ ಸಾರ್ವಜನಿಕರಿಗೆ ತಿಳಿಸಲು ನಡೆಸಲಾಗುತ್ತದೆ. ಜೇನುನೊಣಗಳ ಪರಾಗಸ್ಪರ್ಶಕಗಳ ಪಾತ್ರ ಮತ್ತು ಅರಣ್ಯವನ್ನು ಪುನರುಜ್ಜೀವನಗೊಳಿಸಲು ಅವು ಹೇಗೆ ಸಹಾಯ ಮಾಡುತ್ತವೆ ಎಂಬುದರ ಕುರಿತು ವಿಶೇಷ ಒತ್ತು ನೀಡಲಾಗಿದೆ. ಜೇನುನೊಣಗಳ ಜನಸಂಖ್ಯೆಯು ಅಪಾಯದಲ್ಲಿದೆ, ವಿಶ್ವ ಜೇನುನೊಣ ದಿನವು ಜೇನುನೊಣಗಳು ಮತ್ತು ಇತರ ಪರಾಗಸ್ಪರ್ಶಕಗಳನ್ನು ಹೇಗೆ ರಕ್ಷಿಸುವುದು ಎಂದು ನಮಗೆ ತಿಳಿಸುತ್ತದೆ. ಸ್ಲೋವೇನಿಯನ್ ಜೇನುಸಾಕಣೆದಾರರ ಸಂಘವು ವಿಶ್ವ ಜೇನುನೊಣ ದಿನಾಚರಣೆಗೆ ಉಪಕ್ರಮವನ್ನು ತೆಗೆದುಕೊಂಡಿತು, ಇದನ್ನು ಈಗ ಪ್ರಪಂಚದಾದ್ಯಂತ ಪರಿಸರವಾದಿಗಳು ಆಚರಿಸುತ್ತಾರೆ.ಜೇನುನೊಣಗಳು ಮತ್ತು ಇತರ ಪರಾಗಸ್ಪರ್ಶಕಗಳನ್ನು ರಕ್ಷಿಸಲು, ಸ್ಲೋವೇನಿಯನ್ ಜೇನುಸಾಕಣೆದಾರರ ಸಂಘವು 2014 ರಲ್ಲಿ ಅಭಿಯಾನವನ್ನು ಪ್ರಾರಂಭಿಸಿತು, ಮೇ 20 ಅನ್ನು ವಿಶ್ವ ಜೇನುನೊಣ ದಿನವೆಂದು ಗೊತ್ತುಪಡಿಸಲು ಕರೆ ನೀಡಿತು. ಈ ಉಪಕ್ರಮವನ್ನು ಸ್ಲೊವೇನಿಯನ್ ಸರ್ಕಾರವು ಬೆಂಬಲಿಸಿತು. 2015 ರಲ್ಲಿ, ಈ ಉಪಕ್ರಮವನ್ನು ಅತಿದೊಡ್ಡ ಅಂತರರಾಷ್ಟ್ರೀಯ ಜೇನುಸಾಕಣೆದಾರರ ಸಂಸ್ಥೆಯಾದ ಅಪಿಮೊಂಡಿಯಾ ಸಹ-ಆಪ್ಟ್ ಮಾಡಿತು. ಸ್ಲೊವೇನಿಯಾದ ಕೃಷಿ, ಅರಣ್ಯ ಮತ್ತು ಆಹಾರ ಸಚಿವಾಲಯವು ಬೀ ವರ್ಲ್ಡ್ ಎಂಬ ಪೆವಿಲಿಯನ್ನೊಂದಿಗೆ ಪ್ರಪಂಚದಾದ್ಯಂತ ಪ್ರಯಾಣಿಸಿತು, ಯೋಜನೆಗಳನ್ನು ಸಕ್ರಿಯವಾಗಿ ಪ್ರಚಾರ ಮಾಡಿತು. ಪರಿಸರ ಯೋಜನೆಗಳಲ್ಲಿ ತೊಡಗಿರುವ ಇತರ ದೇಶಗಳು ಮತ್ತು ಅಂತರರಾಷ್ಟ್ರೀಯ ಸಂಸ್ಥೆಗಳ ಪ್ರತಿನಿಧಿಗಳೊಂದಿಗೆ ಸಭೆಗಳನ್ನು ಸಹ ಸಚಿವಾಲಯ ಆಯೋಜಿಸಿದೆ. 2017 ರಲ್ಲಿ, ವಿಶ್ವಸಂಸ್ಥೆಯ ಆರ್ಥಿಕ ಮತ್ತು ಹಣಕಾಸು ಸಮಿತಿಯು ವಿಶ್ವ ಜೇನುನೊಣ ದಿನವನ್ನು ಘೋಷಿಸುವ ನಿರ್ಣಯವನ್ನು ಅಂಗೀಕರಿಸಿತು. ನಿರ್ಣಯವನ್ನು ಯು.ಎನ್.ನ ಸಾಮಾನ್ಯ ಸಭೆಯು ಸರ್ವಾನುಮತದಿಂದ ಬೆಂಬಲಿಸಿತು ಮತ್ತು ಮೇ 20 ಅನ್ನು ವಿಶ್ವ ಜೇನುನೊಣ ದಿನವೆಂದು ಘೋಷಿಸಲಾಯಿತು. ಯುನೈಟೆಡ್ ಸ್ಟೇಟ್ಸ್, ಕೆನಡಾ, ಚೀನಾ, ರಷ್ಯಾ, ಭಾರತ, ಬ್ರೆಜಿಲ್, ಅರ್ಜೆಂಟೀನಾ, ಆಸ್ಟ್ರೇಲಿಯಾ, ಮತ್ತು ಎಲ್ಲಾ ಇ.ಗ ಸೇರಿದಂತೆ 115 ದೇಶಗಳು ಸದಸ್ಯ ರಾಷ್ಟ್ರಗಳು, ಪ್ರಮುಖ ಪ್ರಾಯೋಜಕರಾಗಿ ಸಹಿ ಹಾಕಿದವು. ಜೇನುನೊಣಗಳು, ಪ್ರಮುಖ ಪರಾಗಸ್ಪರ್ಶಕಗಳಲ್ಲಿ ಒಂದಾಗಿ, ಆಹಾರ ಮತ್ತು ಆಹಾರ ಭದ್ರತೆ, ಸುಸ್ಥಿರ ಕೃಷಿ ಮತ್ತು ಜೀವವೈವಿಧ್ಯಕ್ಕೆ ಕೊಡುಗೆ ನೀಡುತ್ತವೆ. ಹವಾಮಾನ ಬದಲಾವಣೆ ತಗ್ಗಿಸುವಿಕೆ ಮತ್ತು ಪರಿಸರ ಸಂರಕ್ಷಣೆಯಲ್ಲಿ ಜೇನುನೊಣಗಳು ಪ್ರಮುಖ ಪಾತ್ರವಹಿಸುತ್ತವೆ. ಜೇನುನೊಣಗಳು ಹೆಚ್ಚು ಅಳಿವಿನಂಚಿನಲ್ಲಿವೆ ಎಂದು ವೈಜ್ಞಾನಿಕ ಅಧ್ಯಯನಗಳು ಸಾಬೀತುಪಡಿಸಿವೆ. ವಿಶ್ವ ಜೇನುನೊಣ ದಿನದಂದು ಜೇನುನೊಣಗಳು ಮತ್ತು ಅವುಗಳ ಆವಾಸಸ್ಥಾನಗಳನ್ನು ರಕ್ಷಿಸಲು ಸಹಾಯ ಮಾಡಲು ಪ್ರತಿಯೊಬ್ಬ ಪರಿಸರವಾದಿ ಮತ್ತು ಕಾಳಜಿಯುಳ್ಳ ನಾಗರಿಕರನ್ನು ಪ್ರೋತ್ಸಾಹಿಸಲಾಗುತ್ತದೆ.

# ಬ್ಲೂ ಒರಿಜಿನ್‌ನಲ್ಲಿ ಬ್ಯಾಹ್ಯಾಕಾಶ ಪ್ರವಾಸ ಮಾಡಿದ ಮೊದಲ ಭಾರತೀಯ ಹೆಗ್ಗಳಿಕೆಗೆ ಪಾತ್ರವಾದ ಕ್ಯಾಪ್ಟನ್ ಗೋಪಿಚಂದ್

**ನವದೆಹಲಿ:** ಕ್ಯಾಪ್ಟನ್ ಗೋಪಿಚಂದ್ ತೋಟಕುರಾ ಅವರು ಬ್ಲೂ ಒರಿಜಿನ್ ನ ಸಿಬ್ಬಂದಿ ವಿಮಾನ ಕಾರ್ಯಾಚರಣೆಯಲ್ಲಿ ಬಾಹ್ಯಾಕಾಶದ ಅಂಚಿನಲ್ಲಿ ಸುತ್ತಿದ ಮೊದಲ ಭಾರತೀಯ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ.

1984 ರಲ್ಲಿ ರಷ್ಯಾದ ಸೊಯುಜ್ ಟಿ -11 ಬಾಹ್ಯಾಕಾಶ ನೌಕೆಯಲ್ಲಿ ರಾಕೇಶ್ ಶರ್ಮಾ ಐತಿಹಾಸಿಕ ಹಾರಾಟ ನಡೆಸಿದ ನಂತರ ವಿಜಯವಾಡ ಮೂಲದ ಪೈಲಟ್ ತೋಟಕುರಾ ಬಾಹ್ಯಾಕಾಶಕ್ಕೆ ಭೇಟಿ ನೀಡಿದ ಎರಡನೇ ಭಾರತೀಯರಾಗಿದ್ದಾರೆ.

ಶರ್ಮಾ ನಂತರ, ಕಲ್ಪನಾ ಚಾವ್ಲಾ (1997), ಸುನೀತಾ ವಿಲಿಯಮ್ಸ್ (2006) ಮತ್ತು ರಾಜಾ ಚಾರಿ (2021) ನಾಸಾ ಗಗನಯಾತ್ರಿಗಳಾಗಿ ಬಾಹ್ಯಾಕಾಶವನ್ನು ತಲುಪಿದ್ದಾರೆ.

ಕ್ಯಾಪ್ಸೂಲ್ ಟಚ್‌ಡೌನ್. ಮರಳಿ ಸ್ವಾಗತ, ಓಖ25 ಸಿಬ್ಬಂದಿ! ಬ್ಲೂ ಒರಿಜಿನ್ ಎಕ್ಸ್ ನಲ್ಲಿ ಪೋಸ್ಟ್ ನಲ್ಲಿ ತಿಳಿಸಿದೆ.

ಜೆಫ್ ಬೆಜೋಸ್ ಒಡೆತನದ ಕಂಪನಿಯ ಏಳನೇ ಮಾನವ ಹಾರಾಟ ಕಾರ್ಯಾಚರಣೆಗಳಲ್ಲಿ 90 ವರ್ಷದ ಎಡ್ ಡ್ವೈಟ್, ಮೇಸನ್ ಏಂಜೆಲ್, ಸಿಲ್ವೈನ್ ಚಿರಾನ್, ಕೆನ್ನೆತ್ ಎಲ್.

ಪಶ್ಚಿಮ ಟೆಕ್ಸಾಸ್ನಲ್ಲಿರುವ ಕಂಪನಿಯ ಉಡಾವಣಾ ತಾಣ



ಒಂದರಿಂದ ಭಾರತೀಯ ಕಾಲಮಾನ ರಾತ್ರಿ 8.06 ಕ್ಕೆ 11 ನಿಮಿಷಗಳ ಹಾರಾಟವನ್ನು ಪ್ರಾರಂಭಿಸಲಾಯಿತು.

# ಕಾಂಗೋ ಗಣರಾಜ್ಯದಲ್ಲಿ ದಂಗೆಗೆ ವಿಫಲ ಯತ್ನ

**ಕಿನಾಶ:** ಕಾಂಗೋ ಗಣರಾಜ್ಯದಲ್ಲಿ ರವಿವಾರ ಬೆಳಿಗ್ಗೆ ನಡೆದ ದಂಗೆ ಪ್ರಯತ್ನವನ್ನು ವಿಫಲಗೊಳಿಸಿರುವುದಾಗಿ ಕಾಂಗೋದ ಸೇನಾಪಡೆ ಹೇಳಿದೆ.

ರಾಜಧಾನಿಯಲ್ಲಿ ಮಿಲಿಟರಿ ಸಮವಸ್ತ್ರ ಧರಿಸಿದ ಸಶಸ್ತ್ರಧಾರಿ ವ್ಯಕ್ತಿಗಳು(ವಿದೇಶೀಯರೂ ಸೇರಿದ್ದರು) ಮತ್ತು ರಾಜಕೀಯ ಮುಖಂಡರ ಭದ್ರತಾ ಪಡೆಯ ನಡುವೆ ಗುಂಡಿನ ದಾಳಿ ನಡೆದಿದ್ದು ಮೂವರು ಸಾವನ್ನಪ್ಪಿದ್ದಾರೆ. ಇದು ದಂಗೆಗೆ ನಡೆದ ವಿಫಲ ಪ್ರಯತ್ನವಾಗಿದೆ ಎಂದು ಸೇನಾಪಡೆ ಹೇಳಿದೆ. ಅಧ್ಯಕ್ಷರ ಭವನದ ಸಮೀಪವಿರುವ ಸಂಸದ ವಿಟಾಲ್ ಕಮೆರ್ಹೆ ಅವರ ಮನೆಯ ಮೇಲೆ ನಡೆದ ದಾಳಿಯಲ್ಲಿ ಇಬ್ಬರು ಭದ್ರತಾ ಸಿಬಂದಿ ಹಾಗೂ ಓರ್ವ ದಾಳಿಕೋರ ಸಾವನ್ನಪ್ಪಿದ್ದಾನೆ ಎಂದು ಸರಕಾರದ ವಕ್ತಾರರು ದೃಢಪಡಿಸಿದ್ದಾರೆ.



# ಬಿಜೆಪಿ ಅಧಿಕಾರಕ್ಕೆ ಬಂದರೆ ಆರ್.ಎಸ್.ಎಸ್. ನಿಷೇಧ



**ಮುಂಬೈ:** ಬಿಜೆಪಿ ಕೇಂದ್ರದಲ್ಲಿ ಮೂರನೇ ಬಾರಿಗೆ ಅಧಿಕಾರಕ್ಕೆ ಬಂದರೆ ಆರ್.ಎಸ್.ಎಸ್. ನಿಷೇಧಿಸಲು ಚಿಂತನೆ ನಡೆಸಿದೆ ಎಂದು ಶಿವಸೇನೆ(ಯುಬಿಟಿ) ಮುಖ್ಯಸ್ಥ ಉದ್ದವ್ ಠಾಕ್ರೆ ಹೇಳಿದ್ದಾರೆ. ಮುಂಬೈನಲ್ಲಿ ನಡೆದ ರ್ಯಾಲಿಯಲ್ಲಿ ಮಾತನಾಡಿದ ಅವರು, ಶಿವಸೇನೆಯನ್ನು ಬಳಸಿ ಬಿಸಾಡಲು ಯತ್ನಿಸಿದ ರೀತಿಯ ಆಟವನ್ನು ಪ್ರಧಾನಿ ನರೇಂದ್ರ ಮೋದಿ ಅವರು ಮುಂದಿನ ದಿನಗಳಲ್ಲಿ ಆರ್‌ಎಸ್‌ಎಸ್ ಜೊತೆಗೂ ಆಡಲಿದ್ದಾರೆ. ಇದರ ಬಗ್ಗೆ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ ಹಿಂದೆಯೇ ಹೇಳಿದ್ದರು ಎಂದು ಉದ್ದವ್ ಠಾಕ್ರೆ ತಿಳಿಸಿದ್ದಾರೆ. ಆರ್.ಎಸ್.ಎಸ್. ಅಗತ್ಯ ಇಲ್ಲಿಯವರೆಗೂ ಇತ್ತು. ಆದರೆ, ಈಗ ನಾವು ಸಮರ್ಥರಾಗಿದ್ದೇವೆ. ನಮಗೆ ಆರೆಸ್ಸೆಸ್ ಅಗತ್ಯವಿಲ್ಲ ಎಂದು ಜೆ.ಪಿ. ನಡ್ಡಾ ಹೇಳಿದ್ದರು. ಬಿಜೆಪಿ ಕೇಂದ್ರದಲ್ಲಿ ಮತ್ತೆ ಅಧಿಕಾರಕ್ಕೆ ಬಂದರೆ ಅದು ಆರ್.ಎಸ್.ಎಸ್. ಕಾರ್ಯಕರ್ತರಿಗೆ ದೊಡ್ಡ ಅಪಾಯ. ಏಕೆಂದರೆ ಬಿಜೆಪಿಯವರು ಆರ್.ಎಸ್.ಎಸ್. ನಿಷೇಧಿಸುತ್ತಾರೆ ಎಂದು ಉದ್ದವ್ ಠಾಕ್ರೆ ಹೇಳಿದ್ದಾರೆ. ಈ ಹಿಂದೆ ಕೇಂದ್ರ ಗೃಹ ಸಚಿವರಾಗಿದ್ದ ಸರ್ದಾರ್ ವಲ್ಲಬಾಯ್ ಪಟೇಲ್ ಅವರು ಆರ್.ಎಸ್.ಎಸ್. ನಿಷೇಧಿಸಿದ್ದರು ಎಂದು ಠಾಕ್ರೆ ಸ್ಮರಿಸಿದ್ದಾರೆ.

# ಜಪಾನ್‌ನಲ್ಲಿ ಹೊಸ ಕಾನೂನು ಅಂಗೀಕಾರ

**ಜಪಾನ್:** ಜಪಾನ್‌ನ ಸಂಸತ್ತು ವಿಚ್ಛೇದಿತ ಗಂಡ ಹೆಂಡ್ತಿ ಇಬ್ಬರಿಗೂ ಮಕ್ಕಳ ಪಾಲನೆಯ ಆಯ್ಕೆಯನ್ನು ಅನುಮತಿಸುವ ಕಾನೂನಿನ ಮಸೂದೆಯನ್ನು ಇತ್ತೀಚೆಗೆ ಅಂಗೀಕರಿಸಿದೆ. ಇದು 77 ವರ್ಷಗಳಲ್ಲೇ ಪೋಷಕರ ಅಧಿಕಾರದ ಕಾನೂನುಗಳಿಗೆ ಮೊದಲ ತಿದ್ದುಪಡಿಯಾಗಿದೆ. ಸಂಸತ್ತಿನ ಮೇಲ್ಮನೆ ಶುಕ್ರವಾರ ಮಸೂದೆಯನ್ನು ಅಂಗೀಕರಿಸಿತು. ಶಾಸನವು ವಿಚ್ಛೇದಿತ ಪೋಷಕರಿಗೆ ತಮ್ಮ ಮಕ್ಕಳನ್ನು ಜಂಟಿಯಾಗಿ ಪೋಷಿಸುವ ಅಥವಾ ಒಬ್ಬರೇ ಪಾಲನೆ ಮಾಡುವ ಬಗ್ಗೆ ನಿರ್ಧರಿಸುವ ಅವಕಾಶವನ್ನು ನೀಡುತ್ತದೆ. ಇದುವರೆಗೂ ವಿಚ್ಛೇದನದ ನಂತರ ಒಬ್ಬ ಪೋಷಕರು ಮಾತ್ರ ಮಗುವನ್ನು ತಮ್ಮ ಅಸ್ತಿತ್ವದಲ್ಲಿ ಇಟ್ಟುಕೊಂಡು ಪೋಷಿಸುವ ಹಕ್ಕನ್ನು ಹೊಂದಿದ್ದರು. ಸದ್ಯ ಈ ಕಾನೂನಿನಲ್ಲಿ ತಿದ್ದುಪಡಿಯಾಗಿದ್ದು ಇಬ್ಬರಿಗೂ ಅವಕಾಶ ನೀಡಲಾಗಿದೆ. ಈ ವೇಳೆ ವಿವಾದ ಉಂಟಾದಲ್ಲಿ ಕೌಟುಂಬಿಕ ನ್ಯಾಯಾಲಯವು ಮಧ್ಯಪ್ರವೇಶಿಸಿ ಮಗುವಿನ ಕಸ್ಟಡಿ ವ್ಯವಸ್ಥೆಗಳನ್ನು ನಿರ್ಧರಿಸುತ್ತದೆ. ಪೋಷಕರಿಂದ ಕೌಟುಂಬಿಕ ಹಿಂಸಾಚಾರ ಅಥವಾ ನಿಂದನೆಯಾಗುತ್ತಿದ್ದರೆ, ಪರಿಷ್ಕರಣೆ ನಂತರ ಮತ್ತೊಬ್ಬ ಪೋಷಕರಿಗೆ ಏಕೈಕ ಪಾಲನೆ ಹಕ್ಕನ್ನು ನೀಡಲಾಗುತ್ತದೆ. ನವೀಕರಿಸಿದ ಕಾನೂನನ್ನು ಪ್ರಕಟಿಸಿದ ಎರಡು ವರ್ಷಗಳೊಳಗೆ ಜಾರಿಗೆ ಬರಲಿದೆ ಮತ್ತು ಈಗಾಗಲೇ ವಿಚ್ಛೇದನ ಪ್ರಕ್ರಿಯೆಗೆ ಒಳಗಾದ ಜನರಿಗೆ ಪೂರ್ವಭಾವಿಯಾಗಿ ಅನ್ವಯಿಸಲಾಗುತ್ತದೆ.



# ಹೆಲಿಕಾಪ್ಟರ್ ಪತನ: ಇರಾನ್ ಅಧ್ಯಕ್ಷ ಇಬ್ರಾಹಿಂ ರೈಸಿ ಸಾವು




**ಇರಾನ್:** ಇರಾನ್ ಅಧ್ಯಕ್ಷ ಪ್ರಯಾಣಿಸುತ್ತಿದ್ದ ಹೆಲಿಕಾಪ್ಟರ್ ಭಾನುವಾರ ಪತನಗೊಂಡಿದ್ದು, ಇಬ್ರಾಹಿಂ ರೈಸಿ ಸಜೀವದಹನವಾಗಿರುವ ಮಾಹಿತಿ ಲಭ್ಯವಾಗಿದೆ. ಭಾನುವಾರ ಪತನಗೊಂಡಿದ್ದ ಹೆಲಿಕಾಪ್ಟರ್‌ನಲ್ಲಿದ್ದ ಅಧ್ಯಕ್ಷ ಇಬ್ರಾಹಿಂ ರೈಸಿ ಸಹಿತ ಎಲ್ಲರೂ ಮೃತಪಟ್ಟಿರುವುದಾಗಿ ಇರಾನ್ ಮಾಧ್ಯಮಗಳು ವರದಿ ಮಾಡಿವೆ.

ಈ ದುರ್ಘಟನೆಯಲ್ಲಿ ವಿದೇಶಾಂಗ ಸಚಿವ ಹುಸೇನ್ ಅಮೀರ್ ಅಬ್ದುಲ್ಲಾಹಿಯಾನ್, ಪೂರ್ವ ಅಜೆರ್ಬೈಜಾನ್ ಪ್ರಾಂತ್ಯದ ಗವರ್ನರ್ ಮಾಲೆಕ್ ರಹಮತಿ, ತಬ್ರಿಜ್‌ನ ಇಮಾಮ್ ಮೊಹಮ್ಮದ್ ಅಲಿ ಅಲೆಹಶೆಮ್, ಪೈಲಟ್, ಕೋ ಪೈಲಟ್, ಸಿಬ್ಬಂದಿ ಮುಖ್ಯಸ್ಥ, ಭದ್ರತಾ ಮುಖ್ಯಸ್ಥ ಹಾಗೂ ಗನ್‌ಮ್ಯಾನ್‌ಗಳು ಮೃತಪಟ್ಟಿದ್ದಾರೆ ಎಂದು ಹೇಳಲಾಗುತ್ತಿದೆ.

ರೈಸಿ ನೆರೆಯ ರಾಷ್ಟ್ರವಾದ ಅಝುರ್ಬೈಜಾನ್‌ನಲ್ಲಿ ಆ ದೇಶದ ಅಧ್ಯಕ್ಷ ಇಲ್ಹಾಮ್ ಅಲಿಯಎವ್ ಜತೆ ಅಣೆಕಟ್ಟು ಉದ್ಘಾಟಿಸಿದ್ದರು. ಉಭಯ ರಾಷ್ಟ್ರಗಳು ಅರಾಸ್ ನದಿಗೆ ನಿರ್ಮಿಸಿದ ಮೂರನೇ ಅಣೆಕಟ್ಟು ಇದಾಗಿದೆ.

ರೈಸಿ ಅವರಿದ್ದ ಹೆಲಿಕಾಪ್ಟರ್‌ನೊಂದಿಗೆ ಪ್ರಯಾಣಿಸುತ್ತಿದ್ದ ಇತರೆ ಎರಡು ಬೆಂಗಾವಲು ಹೆಲಿಕಾಪ್ಟರ್‌ಗಳು ಸುರಕ್ಷಿತವಾಗಿ ಹಿಂದಿರುಗಿವೆ.

ಬೆಂಗಾವಲು ಹೆಲಿಕಾಪ್ಟರ್‌ಗಳಲ್ಲಿ ಇಂಧನ ಸಚಿವ ಅಲಿ ಅಕ್ಬರ್ ಮೆಹ್ರಾಬಿಯಾನ್ ಹಾಗೂ ವಸತಿ ಸಚಿವ ಮೆಹ್ರದಾದ್ ಇದ್ದು ಅವರು ಸುರಕ್ಷಿತವಾಗಿ ಮರಳಿದ್ದಾರೆ.

ರೆಡ್ ಕ್ರೆಸೆಂಟ್ ಅನ್ನು ಉಲ್ಲೇಖಿಸಿ ಹಲವಾರು ಇರಾನಿನ ಮಾಧ್ಯಮ ಚಾನೆಲ್‌ಗಳು, ರಕ್ಷಣಾ ತಂಡಗಳು ರೈಸಿಯ ಹೆಲಿಕಾಪ್ಟರ್‌ನ ಅವಶೇಷಗಳನ್ನು ಪತ್ತೆಮಾಡಿದ್ದವು. ರೆಡ್ ಕ್ರೆಸೆಂಟ್ ಅಧ್ಯಕ್ಷ ಮತ್ತು ಅವರ ಸಹಚರರು ಬದುಕುಳಿದಿದ್ದಾರೆಯೇ ಎಂಬ ಮಾಹಿತಿಯನ್ನು ನೀಡಿರಲಿಲ್ಲ. ಅಪಘಾತದ ಸ್ಥಳದಲ್ಲಿ ಯಾರೂ ಜೀವಂತವಾಗಿರುವ ಯಾವುದೇ ಕುರುಹು ಕಂಡುಬಂದಿರಲಿಲ್ಲ. ಇದೀಗ ಇಬ್ರಾಹಿಂ ರೈಸಿ ಮೃತಪಟ್ಟಿರುವ ಬಗ್ಗೆ ಅಧಿಕೃತ ಮಾಹಿತಿ ಹೊರಬಿದ್ದಿದೆ

# ಗೆದ್ದೇ ಗೆಲ್ಲುತ್ತೇವೆ ಎಂಬ ವಿಶ್ವಾಸವಿದೆ

**ನವದೆಹಲಿ:** ಲೋಕಸಭೆ ಚುನಾವಣೆಯಲ್ಲಿ ಬಿಜೆಪಿ 370, ಎನ್ಡಿಎ ಒಕ್ಕೂಟ 400 ಸ್ಥಾನಗಳನ್ನು ಗೆಲ್ಲುವುದರೊಂದಿಗೆ 3ನೇ ಬಾರಿಗೆ ಅಧಿಕಾರದ ಗದ್ದುಗೆ ಏರುವ ವಿಶ್ವಾಸವನ್ನು ಪ್ರಧಾನಿ ನರೇಂದ್ರ ಮೋದಿ ವ್ಯಕ್ತಪಡಿಸಿದ್ದಾರೆ.

ಪ್ರಸ್ತುತ ನಾಲ್ಕು ಹಂತದ ಮತದಾನ ಮುಕ್ತಾಯಗೊಂಡಿದೆ.

ಸೋಮವಾರ (ಮೇ 20) ರಾಯ್ ಬರೇಲಿ, ಅಮೇಥಿ ಹೈವೋಲ್ಟೇಜ್ ಕ್ಷೇತ್ರಗಳು ಸೇರಿ ಒಟ್ಟು 14 ಕ್ಷೇತ್ರಗಳಲ್ಲಿ ಮತದಾನ ನಡೆಯಲಿದೆ.

ಇತ್ತ ಖಾಸಗಿ ವಾಹಿನಿಯೊಂದಕ್ಕೆ ನೀಡಿದ ವಿಶೇಷ ಸಂದರ್ಶನವೊಂದರಲ್ಲಿ ಮಾತನಾಡಿದ ಮೋದಿ, ನಮ್ಮ ಗುರಿ ತುಂಬಾ ದೊಡ್ಡದಿದೆ. ನಾವು ಗೆದ್ದೇ ಗೆಲ್ಲುತ್ತೇವೆ ಎಂಬ ಆತ್ಮವಿಶ್ವಾಸ ನನಗಿದೆ. ಅತಿಯಾದ ಆತ್ಮವಿಶ್ವಾಸ ಇಲ್ಲ. ಈ ಹಿಂದೆಯೂ ಅತಿಯಾದ ಆತ್ಮವಿಶ್ವಾಸದಿಂದ ಗೆದ್ದಿಲ್ಲ. ನಮ್ಮ ಮುಂದಿನ ಆಡಳಿತ ಒಂದು ಪ್ರದೇಶಕ್ಕೆ ಸೀಮಿತವಾಗಿರುವುದಿಲ್ಲ. ದೊಡ್ಡ ಗುರಿಯನ್ನು ಕ್ಷಿಪ್ರವಾಗಿ ಸಾಧಿಸುವ ಛಲ ಹೊಂದಿದ್ದೇವೆ. ಗುರಿ ದೊಡ್ಡದಾಗಿ ಇಟ್ಟುಕೊಂಡು, ಅದರ ವೇಗಕ್ಕೆ ತಕ್ಕಂತೆ ಮುನ್ನಡೆಯುವುದು ನಮ್ಮ ಉದ್ದೇಶವಾಗಿದೆ ಎಂದು ಮೋದಿ ತಿಳಿಸಿದರು.

ದೇಶದ ಚುನಾವಣೆ ಫಲಿತಾಂಶ ಏನಾಗಲಿದೆ ಎಂಬುದು ಎಲ್ಲರಿಗೂ ತಿಳಿದಿದೆ. ನಾವು 3ನೇ



ಅವಧಿಯ ಆಡಳಿತಕ್ಕೆ ಸಿದ್ಧವಾಗುತ್ತಿದ್ದೇವೆ. ಅಧಿಕಾರಕ್ಕೆ ಬಂದ 100 ದಿನಗಳಲ್ಲಿ ಏನೆಲ್ಲ ತೀರ್ಮಾನ ತೆಗೆದುಕೊಳ್ಳಬೇಕು ಎಂಬುದರ ಬಗ್ಗೆ ಕಾರ್ಯಸೂಚಿಯನ್ನು ಹಾಕಿಕೊಂಡು ಬನ್ನಿ ಅಂತ ಈಗಾಗಲೇ ನಮ್ಮ ಸಚಿವರಿಗೆ ತಿಳಿಸಿದ್ದೇನೆ ಎಂದು ವಿಶ್ವಾಸ ವ್ಯಕ್ತಪಡಿಸಿದರು

ಮರುಬಳಕೆ ಮಾಡಬಹುದಾದ ನ್ಯೂ ಶೆಪರ್ಡ್ ರಾಕೆಟ್ ತನ್ನ 25 ನೇ ಮಿಷನ್ನಲ್ಲಿ, ಆರು ಜನರ ಸಿಬ್ಬಂದಿಯನ್ನು ಕರ್ಮನ್ ರೇಖೆಯ ಮೇಲೆ ಬಾಹ್ಯಾಕಾಶಕ್ಕೆ ಹಾರಿಸುತ್ತದೆ - ಇದು ಭೂಮಿಯ ಮೇಲ್ಮೈಯಿಂದ 100 ಕಿ.ಮೀ ಎತ್ತರದಲ್ಲಿರುವ ಅಂತರರಾಷ್ಟ್ರೀಯವಾಗಿ ಗುರುತಿಸಲ್ಪಟ್ಟ ಬಾಹ್ಯಾಕಾಶದ ಗಡಿಯಾಗಿದೆ.

## ಸಂಸತ್‌ಗೆ ಸಿಐಎಸ್‌ಎಫ್ ಭದ್ರತೆ

**ನವದೆಹಲಿ:** ರಾಷ್ಟ್ರ ರಾಜಧಾನಿಯಲ್ಲಿರುವ ನೂತನ ಸಂಸತ್ ಭವನದ ರಕ್ಷಣೆಯ ಹೊಣೆಯನ್ನು ಸೋಮವಾರದಿಂದ (ಮೇ 20) ಕೇಂದ್ರೀಯ ಮೀಸಲು ಪೊಲೀಸ್ ಪಡೆಯ ಬದಲು ಕೇಂದ್ರೀಯ ಕೈಗಾರಿಕಾ ಭದ್ರತಾ ಪಡೆಯ ಸಿಬ್ಬಂದಿಯು ವಹಿಸಿಕೊಳ್ಳಲಿದೆ. ಕಳೆದ ವರ್ಷ ಸಂಸತ್ನಲ್ಲಿ ಭದ್ರತಾ ಲೋಪ ಉಂಟಾದ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರವು ಸಿಐಎಸ್‌ಎಫ್ ಸಿಬ್ಬಂದಿಯ ಭದ್ರತೆಗೆ ವಹಿಸಿದೆ.ಅದರಂತೆ, ಸೋಮವಾರದಿಂದ ಸಿಐಎಸ್‌ಎಫ್ ಸಿಬ್ಬಂದಿಯೇ ಸಂಸತ್ನ ಸಂಪೂರ್ಣ ರಕ್ಷಣೆಯ ಜವಾಬ್ದಾರಿಯನ್ನು ನಿರ್ವಹಿಸಲಿದೆ.ಸಿಐಎಸ್‌ಎಫ್ನ ಸುಮಾರು 3,300 ಸಿಬ್ಬಂದಿಯು ಸಂಸತ್‌ಅನ್ನು ಹಗಲು-ರಾತ್ರಿ ಎನ್ನದೆ ರಕ್ಷಣೆ ಮಾಡಲಿದ್ದಾರೆ. ಕಳೆದ ಹಲವು ವರ್ಷಗಳಿಂದ ದೇಶದ ಸಂಸತ್‌ಅನ್ನು ಕಾಯುತ್ತಿದ್ದ ಸಿಆರ್‌ಪಿಎಫ್ನ 1,400 ಸಿಬ್ಬಂದಿಯು ಸಂಸತ್ ಭದ್ರತೆಯಿಂದ ವಿಮುಖರಾಗಲಿದ್ದಾರೆ. 2013ರಿಂದಲೂ ಸಿಆರ್‌ಪಿಎಫ್ ಪಡೆಗಳು ಸಂಸತ್ಗೆ ಭದ್ರತೆ ಒದಗಿಸಿದ್ದವು. ಸಿಆರ್‌ಪಿಎಫ್ನ ಪಿಡಿಜಿ ವಾಹನಗಳು, ಶಸ್ತ್ರಾಸ್ತ್ರ, ಸಿಬ್ಬಂದಿಯನ್ನು ಸೋಮವಾರ ತೆರವುಗೊಳಿಸಲಾಗುತ್ತದೆ ಎಂದು ಮೂಲಗಳು ತಿಳಿಸಿವೆ. ಈಗಾಗಲೇ ಸಿಐಎಸ್‌ಎಫ್ ಪಡೆಗಳು ಸಂಸತ್ ಭದ್ರತೆಗೆ ನಿಯೋಜನೆಗೊಂಡಿವೆ ಎಂದು ಹೇಳಲಾಗುತ್ತಿದೆ.




# ಮಲ್ಲಿಕಾರ್ಜುನ ಖರ್ಗೆ ಪೋಸ್ಟರ್‌ಗೆ ಮಸಿ



**ಕೋಲ್ಕತ್ತಾ:** ಅಧೀರ್ ರಂಜನ್ ಚೌದರಿ ಅವರನ್ನು ನಿಂದಿಸಿದ್ದಕ್ಕೆ ಮಲ್ಲಿಕಾರ್ಜುನ್ ಖರ್ಗೆ ಅವರ ಪೋಸ್ಟರ್ಗಳನ್ನು ವಿರೂಪಗೊಳಿಸಿದ ಘಟನೆ ಕೋಲ್ಕತ್ತಾದಲ್ಲಿ ನಡೆದಿದೆ. ಕೋಲ್ಕತ್ತಾದಲ್ಲಿರುವ ಕಾಂಗ್ರೆಸ್ನ ರಾಜ್ಯ ಕಚೇರಿಯ ಮುಂಭಾಗದಲ್ಲಿರುವ ಹಲವು ಪೋಸ್ಟರ್ಗಳಲ್ಲಿ ಖರ್ಗೆ ಅವರ ಚಿತ್ರಕ್ಕೆ ಮಸಿ ಬಳಿಯಲಾಗಿದೆ.ಜೊತೆಗೆ ತೃಣಮೂಲ ಕಾಂಗ್ರೆಸ್ ಏಜೆಂಟ್ ಎಂದು ಬರೆಯಲಾಗಿದೆ.ಘಟನೆ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿರುವ ಅಧೀರ್ ಚೌಧರಿ, ಪೊಲೀಸ್ ದೂರು ನೀಡುವಂತೆ ಪಕ್ಷದ ಕಾರ್ಯಕರ್ತರಿಗೆ ಸೂಚಿಸಿದ್ದಾರೆ. ಅಲ್ಲದೇ ಪೋಸ್ಟರ್ಗಳನ್ನು ತೆರವುಗೊಳಿಸುವಂತೆಯೂ ನಿರ್ದೇಶಿಸಲಾಗಿದೆ. ಮೈತ್ರಿಕೂಟಕ್ಕೆ ಮಮತಾ ಬ್ಯಾನರ್ಜಿಯವರ ನಿಷ್ಠೆಯನ್ನು ಅಧೀರ್ ರಂಜನ್ ಚೌಧರಿ ಪ್ರಶ್ನಿಸಿದ್ದರು. ಇದಾದ ಬೆನ್ನಲ್ಲೇ ಚೌಧರಿ ಅವರ ಹೇಳಿಕೆಗೆ ಖರ್ಗೆ ಛೀಮಾರಿ ಹಾಕಿದ್ದರು. ಜೊತೆಗೆ ಇಂಡಿಯಾ ಒಕ್ಕೂಟಕ್ಕೆ ಮಮತಾ ಬ್ಯಾನರ್ಜಿ ಅವರು ಸೇರುವ ಬಗ್ಗೆ ಅಧೀರ್ ರಂಜನ್ ಚೌಧರಿ ಅವರು ನಿರ್ಧರಿಸುವುದಿಲ್ಲ ಎಂದು ಹೇಳಿದ್ದರು. ಇದಾದ ಒಂದು ದಿನದ ನಂತರ ಈ ಘಟನೆ ನಡೆದಿದೆ.

# ರಾಹುಲ್, ಅಖಿಲೇಶ್ ಕಾರ್ಯಕ್ರಮದಲ್ಲಿ ನೂಕುನುಗ್ಗಲು

**ಉತ್ತರ ಪ್ರದೇಶ:** ಕಾಂಗ್ರೆಸ್ ಸಂಸದ ರಾಹುಲ್ ಗಾಂಧಿ ಮತ್ತು ಸಮಾಜವಾದಿ ಪಕ್ಷದ ಮುಖ್ಯಸ್ಥ ಅಖಿಲೇಶ್ ಯಾದವ್ ಸೇರಿದ್ದ ಸಾರ್ವಜನಿಕ ಸಭೆಯಲ್ಲಿ ನೂಕು ನುಗ್ಗಲು ಉಂಟಾದ ಘಟನೆ ನಡೆದಿದೆ. ಉತ್ತರ ಪ್ರದೇಶದ ಫುಲ್ಪುರ್ ಕ್ಷೇತ್ರದಲ್ಲಿ ಪ್ರಯಾಗ್ ರಾಜ್ನಲ್ಲಿ ಈ ಘಟನೆ ನಡೆದಿದೆ. ಚುನಾವಣಾ ಪ್ರಚಾರಕ್ಕೆಂದು ಸಾರ್ವಜನಿಕ ಸಭೆಯಲ್ಲಿ ಕಾಂಗ್ರೆಸ್ ಸಂಸದ ರಾಹುಲ್ ಗಾಂಧಿ ಮತ್ತು ಸಮಾಜವಾದಿ ಪಕ್ಷದ ಮುಖ್ಯಸ್ಥ ಅಖಿಲೇಶ್ ಯಾದವ್ ಸೇರಿದ್ದರು. ಈ ವೇಳೆ ನೂಕುನುಗ್ಗಲು ಉಂಟಾಗಿದ್ದು, ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡದೇ ರಾಹುಲ್ ಗಾಂಧಿ ಮತ್ತು ಅಖಿಲೇಶ್ ಯಾದವ್ ನಿರ್ಗಮಿಸಿದರು. ವರದಿಗಳ ಪ್ರಕಾರ, ಕಾಂಗ್ರೆಸ್ ಮತ್ತು ಸಮಾಜವಾದಿ ಪಕ್ಷದ ಕಾರ್ಯಕರ್ತರ ನಡುವೆ ಗಲಾಟೆ ನಡೆದಿದೆ, ಈ ವೇಳೆ ಅನೇಕರು ವೇದಿಕೆಯನ್ನು ಸಮೀಪಿಸಲು ಪ್ರಯತ್ನಿಸಿದ್ದಾರೆ. ಅಲ್ಲೇ ಇದ್ದ ರಾಹುಲ್ ಗಾಂಧಿ ಮತ್ತು ಅಖಿಲೇಶ್ ಯಾದವ್ ಜನರನ್ನು ಶಾಂತಗೊಳಿಸಲು ಯತ್ನಿಸಿದರೂ ಸಾಧ್ಯವಾಗಲಿಲ್ಲ. ಆದರೆ ಪರಿಸ್ಥಿತಿ ಹದಗೆಡುತ್ತಿದ್ದಂತೆ, ಅವರ ಭದ್ರತಾ ಸಿಬ್ಬಂದಿಯ ಶಿಫಾರಸ್ಸಿನ ಮೇರೆಗೆ ಸಭೆಯನ್ನು ತೊರೆದಿದ್ದಾರೆ.



# ನಿರಾಶ್ರಿತರ ಶಿಬಿರದ ಮೇಲೆ ಇಸ್ರೇಲ್‌ನಿಂದ ವೈಮಾನಿಕ ದಾಳಿ ; 20 ಮಂದಿ ಬಲಿ

**ಗಾಝಾ ಪಟ್ಟಿ:** ಗಾಝಾ ಪಟ್ಟಿಯ ನುಸಿರಾತ್ ನಿರಾಶ್ರಿತರ ಶಿಬಿರ ಪ್ರದೇಶದಲ್ಲಿರುವ ಮನೆಯೊಂದನ್ನು ಗುರಿಯಾಗಿಸಿ ಇಸ್ರೇಲ್ ನಡೆಸಿದ ವೈಮಾನಿಕ ದಾಳಿಯಲ್ಲಿ ಕನಿಷ್ಠ 20 ಮಂದಿ ಸಾವನ್ನಪ್ಪಿರುವುದಾಗಿ ಗಾಝಾದ ಅಲ್-ಅಕ್ಸಾ ಆಸ್ಪತ್ರೆಯ ಹೇಳಿಕೆ ತಿಳಿಸಿದೆ.

ಮಕ್ಕಳ ಸಹಿತ ಹಲವರು ಗಾಯಗೊಂಡಿದ್ದಾರೆ.

ದಾಳಿಯಿಂದ ನೆಲಸಮಗೊಂಡ ಕಟ್ಟಡದ ಅವಶೇಷಗಳಡಿ ಹಲವರು ಸಿಕ್ಕಿಬಿದ್ದಿರುವ ಶಂಕೆಯಿದೆ ಎಂದು ಫೆಲೆಸ್ತೀನ್ನ 'ವಫಾ' ಸುದ್ದಿಸಂಸ್ಥೆ ವರದಿ ಮಾಡಿದೆ. ರವಿವಾರ ಬೆಳಗ್ಗೆ 3 ಗಂಟೆಗೆ ದಾಳಿ ನಡೆದಿರುವುದಾಗಿ ಸ್ಥಳೀಯರು ಹೇಳಿದ್ದು ಈ ವರದಿಯನ್ನು ಪರಿಶೀಲಿಸುವುದಾಗಿ ಇಸ್ರೇಲ್ ಸೇನೆ ಹೇಳಿದೆ.

ಈ ಮಧ್ಯೆ, ಉತ್ತರ ಗಾಝಾದ ಜಬಾಲ ನಿರಾಶ್ರಿತರ ಶಿಬಿರದ ಸುತ್ತಮುತ್ತ ಹಮಾಸ್ ಮತ್ತು ಇಸ್ರೇಲ್ ಪದಾತಿ ದಳದ ನಡುವೆ ಸಂಘರ್ಷ ಮುಂದುವರಿದಿದೆ. ರಫಾ ಸೇರಿದಂತೆ ಗಾಝಾದ ಹಲವು ಮನೆಗಳನ್ನು ಗುರಿಯಾಗಿಸಿ ವೈಮಾನಿಕ ಮತ್ತು ಫಿರಂಗಿದಾಳಿ ನಡೆದಿದೆ. ಶುಕ್ರವಾರ ಗಾಝಾದಲ್ಲಿ ತನ್ನ ಇಬ್ಬರು ಯೋಧರು ಸಾವನ್ನಪ್ಪಿರುವುದಾಗಿ ಇಸ್ರೇಲ್ ಸೇನೆ ಹೇಳಿದೆ.



# ವಿವಾದಾತ್ಮಕ ವಿದೇಶಿ ಪ್ರಭಾವ ಮಸೂದೆಗೆ ಜಾರ್ಜಿಯಾ ಅಧ್ಯಕ್ಷೆ ತಡೆ

**ಟಿಬಿಲಿಸಿ:** ವ್ಯಾಪಕ ವಿರೋಧ ಮತ್ತು ಪ್ರತಿಭಟನೆಗೆ ಕಾರಣವಾಗಿದ್ದ ವಿವಾದಾತ್ಮಕ 'ವಿದೇಶಿ ಪ್ರಭಾವ; ಮಸೂದೆಗೆ ಜಾರ್ಜಿಯಾ ಅಧ್ಯಕ್ಷೆ ಸಲೋಮ್ ಝುರಬಿಷ್ವಿಲಿ ಸಾಂಕೇತಿಕ ತಡೆಯಾಜ್ಞೆ ನೀಡಿದ್ದಾರೆ.

ಆದರೆ, ಅಧ್ಯಕ್ಷರ ತಡೆಯಾಜ್ಞೆಯನ್ನು ನಿವಾರಿಸಲು ಅಗತ್ಯವಿರುವ ಸಂಸತ್ ಸದಸ್ಯರನ್ನು ಆಡಳಿತಾರೂಢ ಜಾರ್ಜಿಯನ್ ಡ್ರೀಮ್ ಪಕ್ಷ ಹೊಂದಿರುವುದರಿಂದ ತಡೆಯಾಜ್ಞೆ ಕೇವಲ ಸಾಂಕೇತಿಕವಾಗಿದೆ.

ಮಸೂದೆಯ ಪ್ರಕಾರ, ತಮ್ಮ ಹಣಕಾಸು ನಿಧಿಯ ಶೇ. 20 ಕ್ಕೂ ಹೆಚ್ಚಿನ ಮೊತ್ತವನ್ನು ವಿದೇಶದಿಂದ ಪಡೆಯುವ ಸರಕಾರೇತರ ಸಂಘಟನೆಗಳು ಹಾಗೂ ಮಾಧ್ಯಮ ಸಂಸ್ಥೆಗಳು 'ವಿದೇಶಿ ಶಕ್ತಿಗಳ ಹಿತಾಸಕ್ತಿಯನ್ನು ಅನುಸರಿಸುವ ಸಂಸ್ಥೆಗಳು' ಎಂದು ನೋಂದಣಿ ಮಾಡಿಕೊಳ್ಳಬೇಕಿದೆ.

ವಿರೋಧ, ಪ್ರತಿಭಟನೆಯನ್ನು ಕಡೆಗಣಿಸಿ ಆಡಳಿತಾರೂಢ ಜಾರ್ಜಿಯನ್ ಡ್ರೀಮ್ ಪಕ್ಷ ಈ ವಾರ ಮಸೂದೆಗೆ ಸಂಸತ್ನ ಅನುಮೋದನೆ ಪಡೆಯಲು ಸಫಲರಾಗಿದ್ದರು. ಇದರಿಂದಾಗಿ ಈ ಹಿಂದಿನ ಸೋವಿಯತ್ ಗಣರಾಜ್ಯದ ಭಾಗವಾಗಿದ್ದ ಜಾರ್ಜಿಯಾ ಮತ್ತೆ ರಶ್ಯದತ್ತ ವಾಲುವ ಬಗ್ಗೆ ಕಳವಳ ಹೆಚ್ಚುತ್ತಿರುವಂತೆಯೇ ಈ ವಿವಾದಾಸ್ಪದ ಮಸೂದೆಯು ಯುರೋಪಿಯನ್ ಯೂನಿಯನ್ಗೆ ಸೇರ್ಪಡೆಗೊಳ್ಳುವ ಜಾರ್ಜಿಯಾದ ಹಂಬಲಕ್ಕೆ ತೊಡಕಾಗಬಹುದು ಎಂದು ಯುರೋಪಿಯನ್ ಯೂನಿಯನ್ ಎಚ್ಚರಿಕೆ ನೀಡಿತ್ತು.



# ಚುನಾವಣಾ ರ್ಯಾಲಿಯಲ್ಲಿ ಚಾಕು ಇರಿತ

**ಜಮ್ಮು:** ಜಮ್ಮು ಮತ್ತು ಕಾಶ್ಮೀರದ ಪೂಂಚ್ ಜಿಲ್ಲೆಯ ಮೆಂಧರ್ನಲ್ಲಿ ನಡೆಯುತ್ತಿದ್ದ ಚುನಾವಣಾ ಸಮಾವೇಶದಲ್ಲಿ ಅಪರಿಚಿತ ವ್ಯಕ್ತಿಗಳು ಚಾಕುವಿನಿಂದ ಹಲ್ಲೆ ನಡೆಸಿದ್ದು, ನ್ಯಾಷನಲ್ ಕಾನ್ಫರೆನ್ಸ್ ಪಕ್ಷದ ಮೂವರು ಕಾರ್ಯಕರ್ತರು ಗಾಯಗೊಂಡಿದ್ದಾರೆ.ನ್ಯಾಷನಲ್ ಕಾನ್ಫರೆನ್ಸ್ ಅಧ್ಯಕ್ಷ ಫಾರೂಕ್ ಅಬ್ದುಲ್ಲಾ ಅವರು ಮೆಂಧರ್ನಲ್ಲಿ ಅನಂತ್ನಾಗ್- ರಜೌರಿ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಮಿಯಾನ್ ಅಲ್ತಾಫ್ ಪರ ಪ್ರಚಾರ ನಡೆಸುತ್ತಿದ್ದರು.ಈ ವೇಳೆ ಎರಡು ಗುಂಪುಗಳ ನಡುವೆ ಘರ್ಷಣೆ ನಡೆಸಿದೆ. ಗಲಾಟೆಯ ಲಾಭ ಪಡೆದ ದಾಳಿಕೋರರು ಮೂವರಿಗೆ ಚಾಕು ಇರಿದು ಪರಾರಿಯಾಗಿದ್ದಾರೆ.ಹರ್ನಿಯ ನಿವಾಸಿಗಳಾದ ಸೊಹೈಲ್ ಅಹ್ಮದ್, ಯಾಸೀರ್ ಅಹ್ಮದ್ ಹಾಗೂ ಕಸ್ಬ್ಲಾರಿ ಗ್ರಾಮದ ಮೊಹಮ್ಮದ್ ಇಮ್ರಾನ್ ಗಾಯಗೊಂಡಿದ್ದು, ಸ್ಥಳೀಯ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಸೊಹೈಲ್ ಮತ್ತು ಯಾಸೀರ್ ಸ್ಥಿತಿ ಗಂಭೀರವಾಗಿದ್ದು, ಹೆಚ್ಚಿನ ಚಿಕಿತ್ಸೆಗೆ ರಜೌರಿಯ ಸರ್ಕಾರಿ ವೈದ್ಯಕೀಯ ಕಾಲೇಜಿಗೆ ಸ್ಥಳಾಂತರಿಸಲು ಸಿದ್ಧತೆ ನಡೆದಿದೆ. ಇದರೊಂದು ಭದ್ರತಾ ಲೋಪವಾಗಿದ್ದು, ತಪ್ಪಿತಸ್ಥರನ್ನು ತಕ್ಷಣ ಬಂಧಿಸಬೇಕೆಂದು ಪಕ್ಷದ ನಾಯಕ ಜಾವೇದ್ ಅಹ್ಮದ್ ರಾಣಾ ತಿಳಿಸಿದ್ದಾರೆ.



# ಅಫ್ಘಾನಿಸ್ತಾನದಲ್ಲಿ ಭಾರೀ ಮಳೆ: 68 ಮಂದಿ ಬಲಿ!

**ಕಾಬೂಲ್:** ಅಫ್ಘಾನಿಸ್ತಾನದ ಘೋರ್ ಪ್ರಾಂತ್ಯದಲ್ಲಿ ಭಾರಿ ಮಳೆಯಿಂದಾಗಿ ಉಂಟಾದ ಪ್ರವಾಹದಲ್ಲಿ ಕನಿಷ್ಠ 68 ಜನರು ಸಾವನ್ನಪ್ಪಿದ್ದಾರೆ. ಆರಂಭಿಕ ವರದಿಗಳ ಆಧಾರದ ಮೇಲೆ ಸಾವಿನ ಸಂಖ್ಯೆ ಹೆಚ್ಚಾಗಿದೆ ಮತ್ತು ಹೆಚ್ಚಾಗಬಹುದು ಎಂದು ತಾಲಿಬಾನ್ ಅಧಿಕಾರಿಯೊಬ್ಬರು ಶನಿವಾರ ತಿಳಿಸಿದ್ದಾರೆ. ಘೋರ್ ಪ್ರಾಂತ್ಯದ ರಾಜ್ಯಪಾಲರ ವಕ್ತಾರ ಅಬ್ದುಲ್ ವಾಹಿದ್ ಹಮಾಸ್, ಡಜನ್ಗಟ್ಟಲೆ ಜನರು ಕಾಣೆಯಾಗಿದ್ದಾರೆ ಎಂದು ಹೇಳಿದರು. ಇಲ್ಲಿ ಅಸಾಮಾನ್ಯ ಮಳೆ ಮುಂದುವರಿಯುತ್ತದೆ. ಶುಕ್ರವಾರದ ಪ್ರವಾಹದ ನಂತರ ರಾಜಧಾನಿ ಫಿರೋಜ್ ಕೋಹ್ ಸೇರಿದಂತೆ ವಿವಿಧ ಪ್ರದೇಶಗಳಲ್ಲಿ ಸಾವಿರಾರು ಮನೆಗಳು ಮತ್ತು ಆಸ್ತಿಪಾಸ್ತಿಗಳಿಗೆ ಹಾನಿಯಾಗಿದೆ ಮತ್ತು ನೂರಾರು ಹೆಕ್ಟೇರ್ ಕೃಷಿ ಭೂಮಿ ನಾಶವಾಗಿರುವುದರಿಂದ ಪ್ರಾಂತ್ಯವು ಭಾರಿ ಆರ್ಥಿಕ ನಷ್ಟವನ್ನು ಅನುಭವಿಸಿದೆ ಎಂದು ತಾಲಿಬಾನ್ ಹೇಳಿದೆ. ಉತ್ತರ ಪ್ರಾಂತ್ಯದ ಫರ್ಯಾಬ್ನಲ್ಲಿ 18 ಜನರು ಸಾವನ್ನಪ್ಪಿದ್ದಾರೆ ಮತ್ತು ಇಬ್ಬರು ಗಾಯಗೊಂಡಿದ್ದಾರೆ ಎಂದು ಪ್ರಾಂತೀಯ ಗವರ್ನರ್ ಅವರ ವಕ್ತಾರ ಇಸ್ಮತುಲ್ಲಾ ಮೊರಾಡಿ ಹೇಳಿದ್ದಾರೆ. ನಾಲ್ಕು ಜಿಲ್ಲೆಗಳಲ್ಲಿ ಆಸ್ತಿ ಮತ್ತು ಭೂಮಿಗೆ ಹಾನಿಯಾಗಿದ್ದು, 300 ಕ್ಕೂ ಹೆಚ್ಚು ಪ್ರಾಣಿಗಳು ಸಾವನ್ನಪ್ಪಿವೆ. ತೀವ್ರ ಪ್ರವಾಹದಿಂದ 2,500 ಕುಟುಂಬಗಳು ಹೆಚ್ಚು ಹಾನಿಗೊಳಗಾಗಿವೆ.



Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಸಣ್ಣ ವಯಸ್ಸಿನಲ್ಲಿಯೇ ನನ್ನ ಫೋಟೋ ಅಶ್ಲೀಲ ವೆಬ್‌ಸೈಟ್‌ಗೆ ಹಾಕಿದ್ರು

ನಟಿ ಜಾನ್ವಿ ಕಪೂರ್ ಬಾಲಿವುಡ್ ಮತ್ತು ಟಾಲಿವುಡ್‌ನಲ್ಲಿ ಬೇಡಿಕೆಯ ನಟಿಯರಲ್ಲಿ ಒಬ್ಬರಾಗಿದ್ದಾರೆ. ಜ್ಯೂ.ಎನ್ ಟಿಆರ್, ರಾಮ್ ಚರಣ್, ಸೂರ್ಯ ಸೇರಿದಂತೆ ಅನೇಕ ಸಿನಿಮಾಗಳಲ್ಲಿ ನಟಿ ತೊಡಗಿಕೊಂಡಿದ್ದಾರೆ. ಸದ್ಯ 'ಮಿಸ್ಟರ್ ಅಂಡ್ ಮಿಸೆಸ್ ಮಹಿ' ಸಿನಿಮಾ ಪ್ರಚಾರವೊಂದರಲ್ಲಿ ವೈಯಕ್ತಿಕ ಬದುಕಿನ ಬಗ್ಗೆ ನಟಿ ಮಾತನಾಡಿದ್ದಾರೆ. ಚಿಕ್ಕವಯಸ್ಸಿನಲ್ಲಿ ಅಶ್ಲೀಲ ವೆಬ್ ಸೈಟ್‌ನಲ್ಲಿ ನನ್ನ ಫೋಟೋ ಹಾಕಿದ್ದರು ಎಂದು ಬೇಸರ ವ್ಯಕ್ತಪಡಿಸಿದ್ದಾರೆ.

ಸಿನಿಮಾ ಪ್ರಚಾರದ ಸಂದರ್ಶನ ವೇಳೆ, 12 –13 ವರ್ಷ ವಯಸ್ಸಿನಲ್ಲಿರುವಾಗ ಸೋಷಿಯಲ್ ಮೀಡಿಯಾದಿಂದಾಗಿ ಲೈಂಗಿಕವಾಗಿ ನಾನು ಸಮಸ್ಯೆ ಎದುರಿಸಿದ್ದೆ ಎಂದು ಹೇಳಿಕೊಂಡಿದ್ದಾರೆ. ಆಗ ನನಗೆ ಚಿಕ್ಕ ವಯಸ್ಸು. ಒಮ್ಮೆ ನನ್ನ ತಾಯಿ ಮತ್ತು ತಂದೆಯೊಂದಿಗೆ ಈವೆಂಟ್‌ಗೆ ಹೋಗಿದ್ದೆ. ಆ ಚಿತ್ರಗಳು ಇಂಟರ್‌ನೆಟ್‌ನಲ್ಲಿ ವೈರಲ್ ಆಗಿತ್ತು. ಮಾರ್ಫಿಂಗ್ ಮಾಡಿ ಪೋರ್ನ್ ವೆಬ್‌ಸೈಟ್‌ಗಳಲ್ಲಿ ಹಾಕಿದ್ದರು.

ಆದರೆ ಇದು ಮಾರ್ಫ್ ಮಾಡಿದ ಚಿತ್ರಗಳು ಎಂದು ಹಲವರಿಗೆ ತಿಳಿದೇ ಇರಲಿಲ್ಲ. ನಿಜ ಎಂದು ನಂಬಿದ್ದರು. ಆ ಚಿಕ್ಕ ವಯಸ್ಸಿನಲ್ಲಿಯೇ ನನಗೆ ತುಂಬಾ ಆಘಾತವಾಗಿತ್ತು. ನನ್ನ ಫ್ರೆಂಡ್ಸ್ ಕೂಡ ಗೇಲಿ ಮಾಡುತ್ತಿದ್ದರು. ಆ ವಯಸ್ಸಿನಲ್ಲಿ ಏನಾಗುತ್ತಿದೆ ಎಂದು ನನಗೆ ತಿಳಿದೆ ಇರಲಿಲ್ಲ ಎಂದಿದ್ದಾರೆ.

'ಮಿಸ್ಟರ್ ಅಂಡ್ ಮಿಸೆಸ್ ಮಹಿ' ಸಿನಿಮಾದಲ್ಲಿ ಬಾಲಿವುಡ್ ನಟ ರಾಜ್‌ಕುಮಾರ್ ರಾವ್‌ಗೆ ನಾಯಕಿಯಾಗಿ ಜಾನ್ವಿ ಕಪೂರ್ ನಟಿಸಿದ್ದಾರೆ. ಕ್ರಿಕೆಟಿಗ ಮಹೇಂದ್ರ ಸಿಂಗ್ ಧೋನಿ ಜರ್ನಿಯನ್ನು ಚಿತ್ರದ ಮೂಲಕ ತೋರಿಸಲು ಸಜ್ಜಾಗಿದ್ದಾರೆ. ಇದೇ ಮೇ 31ಕ್ಕೆ ಸಿನಿಮಾ ರಿಲೀಸ್ ಆಗುತ್ತಿದೆ.

ಮೇ 31ಕ್ಕೆ ಸಿನಿಮಾ ರಿಲೀಸ್



# ಕನ್ನಡದ ಮೇಲೆ ಇದೆ ಜೂನಿಯರ್ ಎನ್‌ಟಿಆರ್‌ಗೆ ವಿಶೇಷ ಪ್ರೀತಿ

ಜೂನಿಯರ್ ಎನ್‌ಟಿಆರ್ ಅವರಿಗೆ ಇಂದು (ಮೇ 20) ಬರ್ತ್ ಡೇ. ಈ ವಿಶೇಷ ದಿನದಂದು ಸೆಲೆಬ್ರಿಟಿಗಳು, ಕುಟುಂಬದವರು, ಅಭಿಮಾನಿಗಳು ನಟನಿಗೆ ಶುಭಾಶಯ ಬರುತ್ತಿದೆ. ಜೂನಿಯರ್ ಎನ್ ಟಿಆರ್ ಹೆಸರಲ್ಲಿ ಅನೇಕ ಸಾಮಾಜಿಕ ಕೆಲಸಗಳು ನಡೆಯುತ್ತಿವೆ. ರಕ್ತದಾನ, ಅನ್ನದಾನ ಕೂಡ ಆಯೋಜನೆ ಮಾಡಲಾಗಿದೆ. ಅವರ ಬರ್ತ್ ಡೇ ದಿನ 'ದೇವರ' ಸಿನಿಮಾದ ಸಾಂಗ್ ಕೂಡ ರಿಲೀಸ್ ಆಗಿದೆ. ಅವರಿಗೆ ಕನ್ನಡದ ಬಗ್ಗೆ ವಿಶೇಷ ಪ್ರೀತಿ ಇದೆ. ಪುನೀತ್ ಗಾಗಿ ಅವರು ಒಂದು ಕನ್ನಡ ಹಾಡು ಕೂಡ ಹಾಡಿದ್ದರು.

ಜೂನಿಯರ್ ಎನ್ ಟಿಆರ್ ಅವರು ಬಾಲ ಕಲಾವಿದನಾಗಿ ಮಿಂಚಿದರು. 2001ರಲ್ಲಿ ರಿಲೀಸ್ ಆದ 'ನಿನ್ನು ಚೂಡಾಲನಿ' ಸಿನಿಮಾ ತೆರೆಗೆ ಬಂದು ಯಶಸ್ಸು ಕಂಡಿತು. ಹೀರೋ ಆಗಿ ಅವರು ನಟಿಸಿದ ಇದು ಮೊದಲ ಸಿನಿಮಾ. ಅದೇ ವರ್ಷ ರಿಲೀಸ್ ಆದ 'ಸ್ಟೂಡೆಂಟ್ ನಂಬರ್ 1' ಚಿತ್ರ ದೊಡ್ಡ ಯಶಸ್ಸು ಕಂಡಿತು. ಇದನ್ನು ಸೆಲ್ವ ಅವರು ನಿರ್ದೇಶನ ಮಾಡಿದ್ದರು. ಈ ಚಿತ್ರದಿಂದ ಜೂನಿಯರ್ ಎನ್ ಟಿಆರ್ ಅವರು ಟಾಲಿವುಡ್‌ನಲ್ಲಿ ಭದ್ರ ನೆಲೆ ಕಂಡುಕೊಂಡರು. 'ಸಿಂಹಾದ್ರಿ', 'ಟೆಂಪರ್ ' ಸೇರಿ ಹಲವು ಸೂಪರ್ ಹಿಟ್ ಚಿತ್ರಗಳಲ್ಲಿ ಅವರು ನಟಿಸಿದ್ದಾರೆ. 2022ರಲ್ಲಿ ರಿಲೀಸ್ ಆದ 'ಆರ್ ಆರ್ ಆರ್' ಸಿನಿಮಾ ಕೂಡ ಯಶಸ್ಸು ಕಂಡಿತು. 'ನಾಟು ನಾಟು..' ಹಾಡು ಮಾಡಿದ ಮೋಡಿ ತುಂಬಾನೇ ದೊಡ್ಡದು.





ಜೂನಿಯರ್ ಎನ್ ಟಿಆರ್ ಅವರಿಗೆ ಕನ್ನಡದ ಬಗ್ಗೆ ವಿಶೇಷ ಪ್ರೀತಿ ಇದೆ. ಜೂನಿಯರ್ ಎನ್ ಟಿಆರ್ ತಾಯಿ ಕುಂದಾಪುರದವರು. ಹೀಗಾಗಿ, ಅವರಿಗೆ ಕನ್ನಡದ ನಂಟಿದೆ. 'ಆರ್ ಆರ್ ಆರ್' ಚಿತ್ರದ ಕನಡ ವರ್ಷನ್ ಗೆ ಅವರೇ ಡಬ್ ಮಾಡಿದ್ದರು ಅನ್ನೋದು ವಿಶೇಷ. ಅವರ ಕನ್ನಡ ಪ್ರೀತಿ ಇಲ್ಲಿಗೆ ಮುಗಿದಿಲ್ಲ. ತೆಲುಗು ರಿಯಾಲಿಟಿ ಶೋ ಬಿಗ್ ಬಾಸ್‌ನ ಜೂನಿಯರ್ ಎನ್ ಟಿಆರ್ ಒಮ್ಮೆ ನಡೆಸಿಕೊಟ್ಟಿದ್ದರು. ಅಲ್ಲಿಗೆ ಕನ್ನಡ ಸ್ಪರ್ಧಿಗಳ ಆಗಮನ ಆಗಿತ್ತು. ಈ ವೇಳೆ ಅವರು ಕನ್ನಡದಲ್ಲೇ ಸಂವಹನ ಮಾಡಿದ್ದರು. ಈ ವಿಡಿಯೋ ವೈರಲ್ ಆಗಿತ್ತು.

ಸ್ಪರ್ಧಿಗಳಿಬ್ಬರು ಕನ್ನಡದಲ್ಲಿ ಮಾತನಾಡುತ್ತಿದ್ದರು. ಈ ವೇಳೆ ಕನ್ನಡದಲ್ಲೇ ಮಾತನಾಡಿದ್ದ ಜೂನಿಯರ್ ಎನ್ ಟಿಆರ್, 'ನೀವು ಕನ್ನಡದಲ್ಲಿ ಚೆನ್ನಾಗಿ ಮಾತಾಡ್ತಾ ಇದ್ರಿ. ನಿಮ್ಮಲ್ಲಿ ಕನ್ನಡದವರು ಯಾರು' ಎಂದು ಪ್ರಶ್ನೆ ಮಾಡಿದರು ಜೂನಿಯರ್ ಎನ್ ಟಿಆರ್. 'ನಾವಿಬ್ಬರೂ ಕನ್ನಡವರೇ' ಎಂದರು ಸ್ಪರ್ಧಿಗಳು. 'ನನ್ನ ಅಮ್ಮ ಕೂಡ ಕನ್ನಡವರು, ಕುಂದಾಪುರದವರು' ಎಂದು ಕನ್ನಡದಲ್ಲೇ ಜೂನಿಯರ್ ಎನ್ ಟಿಆರ್ ಸಂವಹನ ಮಾಡಿದರು.'

ಜೂನಿಯರ್ ಎನ್ ಟಿಆರ್ ಅವರಿಗೆ ಪುನೀತ್ ರಾಜ್ ಕುಮಾರ್ ಜೊತೆ ಒಳ್ಳೆಯ ಗೆಳೆತನ ಇತ್ತು. ಪುನೀತ್ ನಟನೆಯ 'ಚಕ್ರವ್ಯೂಹ' ಸಿನಿಮಾದ 'ಗೆಳೆಯಾ.. ಗೆಳೆಯಾ..' ಹಾಡನ್ನು ಜೂನಿಯರ್ ಎನ್ ಟಿಆರ್ ಅವರು ಹಾಡಿದ್ದರು. ಅವರು ಕರ್ನಾಟಕಕ್ಕೆ ಸಿನಿಮಾ ಪ್ರಮೋಷನ್ ಗೆ ಬಂದ ಸಂದರ್ಭದಲ್ಲೂ ಸ್ವಚ್ಛ ಕನ್ನಡದಲ್ಲೇ ಮಾತನಾಡುತ್ತಾರೆ ಅನ್ನೋದು ವಿಶೇಷ. ಈ ಮೂಲಕ ಅವರು ಕನ್ನಡ ಪ್ರೇಮ ಹೊರಹಾಕುತ್ತಾ ಇರುತ್ತಾರೆ.

# ಶಿವಕಾರ್ತಿಕೇಯನ್‌ಗೆ ರಶ್ಮಿಕಾ ಮಂದಣ್ಣ ಹೀರೋಯಿನ್

ಕೊಡಗಿನ ಬೆಡಗಿ ರಶ್ಮಿಕಾ ಮಂದಣ್ಣ ಬಹುಭಾಷಾ ನಾಯಕಿಯಾಗಿ ಬೇಡಿಕೆ ಹೆಚ್ಚಿಸಿಕೊಂಡಿದ್ದಾರೆ. ಅಲ್ಲು ಅರ್ಜುನ್, ರಣ್‌ಬೀರ್ ಕಪೂರ್, ಸಲ್ಮಾನ್ ಖಾನ್ ನಂತರ ಮತ್ತೆ ತಮಿಳಿನ ಸ್ಟಾರ್ ನಟನ ಜೊತೆ ನಟಿಸುವ ಅವಕಾಶ ಗಿಟ್ಟಿಸಿಕೊಂಡಿದ್ದಾರೆ.



ಇತ್ತೀಚೆಗಷ್ಟೇ ಸಲ್ಮಾನ್ ಖಾನ್‌ಗೆ ಹೀರೋಯಿನ್ ಆಗುವ ಮೂಲಕ ಸಿಕ್ಕಾಪಟ್ಟೆ ಸುದ್ದಿಯಾಗಿದ್ದರು. ಈಗ ತಮಿಳಿನ ನಟ ಶಿವಕಾರ್ತಿಕೇಯನ್ ಚಿತ್ರಕ್ಕೆ ನಟಿ ಕೈಜೋಡಿಸಿದ್ದಾರೆ ಎನ್ನಲಾಗಿದೆ. ಅವರ ಮುಂಬರುವ ಸಿನಿಮಾಗೆ ರಶ್ಮಿಕಾ ನಾಯಕಿಯಾಗಲಿದ್ದಾರೆ ಎಂಬ ಸುದ್ದಿ ಹರಿದಾಡುತ್ತಿದೆ.

ಮೊದಲ ಬಾರಿಗೆ ಶಿವಕಾರ್ತಿಕೇಯನ್ ಮತ್ತು ರಶ್ಮಿಕಾ ಮಂದಣ್ಣ ಜೋಡಿಯಾಗಿ ಕಾಣಿಸಿಕೊಳ್ಳುವ ಸಿನಿಮಾ ಬಗ್ಗೆ ಸುದ್ದಿ ಹಬ್ಬಿದೆ. ಚಿತ್ರತಂಡ ಈಗಾಗಲೇ ನಟಿಯನ್ನು ಸಂಪರ್ಕಿಸಿ ಕಥೆ ಕೂಡ ಹೇಳಿದ್ದಾರೆ. ಆದರೆ 'ಪುಷ್ಪ' ನಟಿ ಹೊಸ ಪ್ರಾಜೆಕ್ಟ್‌ಗೆ ಗ್ರೀನ್ ಸಿಗ್ನಲ್ ಕೊಟ್ರಾ? ಎಂಬುದರ ಬಗ್ಗೆ ಮಾಹಿತಿ ಹೊರಬಿದ್ದಿಲ್ಲ. ಚಿತ್ರತಂಡ ಅಧಿಕೃತ ಘೋಷಣೆ ಮಾಡುವವರೆಗೂ ಕಾಯಬೇಕಿದೆ.

ಕನ್ನಡದ 'ಕಿರಿಕ್ ಪಾರ್ಟಿ' ಸಿನಿಮಾದ ಮೂಲಕ ಚಿತ್ರರಂಗಕ್ಕೆ ಕಾಲಿಟ್ಟ ನಟಿ ರಶ್ಮಿಕಾ ಮಂದಣ್ಣ ಈಗ ಪ್ಯಾನ್ ಇಂಡಿಯಾ ಸ್ಟಾರ್ ನಟಿಯಾಗಿ ಜನಪ್ರಿಯತೆ ಪಡೆದಿದ್ದಾರೆ. ಬಾಲಿವುಡ್‌ನಲ್ಲಿ ಹೆಚ್ಚೆಚ್ಚು ಅವಕಾಶಗಳು ನಟಿಗೆ ಅರಸಿ ಬರುತ್ತಿವೆ.

ಸದ್ಯ ಪುಷ್ಪ 2, ಅನಿಮಲ್ ಪಾರ್ಕ್, ರೈನ್‌ಬೋ, ಸಿಖಂದರ್, ಕುಬೇರ, ದಿ ಗರ್ಲ್‌ಫ್ರೆಂಡ್ ಸೇರಿದಂತೆ ಹಲವು ಸಿನಿಮಾ ರಶ್ಮಿಕಾ ಕೈಯಲ್ಲಿವೆ.

# ಲವ್ ಮಿ ಎನ್ನುತ್ತಾ ಮತ್ತೆ ಎಂಟ್ರಿ ಕೊಟ್ಟ 'ಬೇಬಿ' ನಟಿ

ಟಾಲಿವುಡ್ ನಟಿ ವೈಷ್ಣವಿ ಚೈತನ್ಯ 'ಬೇಬಿ' ಸಿನಿಮಾದ ಮೂಲಕ ಸೂಪರ್ ಸಕ್ಸಸ್ ಕಂಡಿದ್ದರು. ಇದೀಗ 'ಲವ್ ಮಿ' ಎನ್ನುತ್ತಾ ಮತ್ತೆ ಟಿಟೌನ್‌ನಲ್ಲಿ ಸದ್ದು ಮಾಡುತ್ತಿದ್ದಾರೆ. ತೆಲುಗಿನ ನಟ ಆಶಿಶ್‌ಗೆ ನಾಯಕಿ ಬೇಬಿ ವೈಷ್ಣವಿ ಚೈತನ್ಯ ಎಂಟ್ರಿ ಕೊಟ್ಟಿದ್ದಾರೆ.



'ಬೇಬಿ' ಸಿನಿಮಾದಲ್ಲಿ ಆನಂದ್ ದೇವರಕೊಂಡಗೆ ನಾಯಕಿಯಾಗಿ ವೈಷ್ಣವಿ ನಟಿಸಿದ್ದರು. ಈ ಚಿತ್ರದ ಸಕ್ಸಸ್ ನಂತರ ನಟಿಗೆ ಬೇಡಿಕೆ ಹೆಚ್ಚಾಗಿತ್ತು. ತೆಲುಗಿನ ಹಲವು ಸಿನಿಮಾಗಳಿಗೆ ನಾಯಕಿಯಾಗಿ ಅವಕಾಶಗಳು ಹರಿದು ಬರುತ್ತಿವೆ.

ಹೀಗಿರುವಾಗ ಈ ಬಾರಿ ಹೀರೋ ಆಶಿಶ್ ಜೊತೆ ಸೇರಿ ಹಾರರ್ ಕಥೆ ಹೇಳೋಕೆ ನಟಿ ವೈಷ್ಣವಿ ಹೊರಟಿದ್ದಾರೆ. ಎಂದೂ ನಟಿಸಿರದ ಡಿಫರೆಂಟ್ ಪಾತ್ರದಲ್ಲಿ ಬೇಬಿ ನಟಿ ಕಾಣಿಸಿಕೊಂಡಿದ್ದಾರೆ. ಸದ್ಯ 'ಲವ್ ಮಿ' ಸಿನಿಮಾದ ಟ್ರೈಲರ್ ರಿಲೀಸ್ ಆಗಿ ಅಭಿಮಾನಿಗಳ ಮೆಚ್ಚುಗೆ ಪಡೆದಿದೆ. ಹಾರರ್ ಜೊತೆ ಒಂದು ಸುಂದರ ಲವ್ ಸ್ಟೋರಿ ಕೂಡ ಸಿನಿಮಾದಲ್ಲಿದೆ. ಇದೇ ಮೇ 25ಕ್ಕೆ ಸಿನಿಮಾ ರಿಲೀಸ್ ಆಗುತ್ತಿದೆ. 'ಬೇಬಿ' ಮೂಲಕ ಗೆದ್ದಿರುವ ವೈಷ್ಣವಿ ಇದೀಗ 'ಲವ್ ಮಿ' ಚಿತ್ರದ ಮೂಲಕ ಗೆದ್ದು ಬೀಗುತ್ತಾರಾ? ಕಾದುನೋಡಬೇಕಿದೆ.

### ಪಂಜಾಬ್ ವಿರುದ್ಧ 4 ವಿಕೆಟ್‌ಗಳ ಜಯ

# 2ನೇ ಸ್ಥಾನಕ್ಕೆ ಜಿಗಿದ ಹೈದರಾಬಾದ್

**ಹೈದರಾಬಾದ್:** ಅಭಿಷೇಕ್ ಶರ್ಮಾ, ಹೆನ್ರಿಚ್ ಕ್ಲಾಸೆನ್ ಬ್ಯಾಟಿಂಗ್ ಅಬ್ಬರದಿಂದ ಪಂಜಾಬ್ ಕಿಂಗ್ಸ್ ವಿರುದ್ಧ ಸನ್‌ರೈಸರ್ಸ್ ಹೈದರಾಬಾದ್ 4 ವಿಕೆಟ್‌ಗಳ ಜಯ ಸಾಧಿಸಿತು. ಆ ಮೂಲಕ ಪಾಯಿಂಟ್ ಪಟ್ಟಿಯಲ್ಲಿ ಎರಡನೇ ಸ್ಥಾನಕ್ಕೆ ಜಿಗಿಯಿತು.



ಟಾಸ್ ಗೆದ್ದು ಬ್ಯಾಟಿಂಗ್ ಆಯ್ದುಕೊಂಡಿದ್ದ ಪಂಜಾಬ್ 20 ಓವರ್‌ಗೆ 5 ವಿಕೆಟ್ ನಷ್ಟಕ್ಕೆ 214 ಬೃಹತ್ ಮೊತ್ತ ಪೇರಿಸಿತು. 215 ರನ್ ಗುರಿ ಬೆನ್ನತ್ತಿದ ಹೈದರಾಬಾದ್ 19.1 ಓವರ್‌ಗೆ 6 ವಿಕೆಟ್ ನಷ್ಟಕ್ಕೆ 215 ರನ್ ಗಳಿಸಿ ಗೆಲುವು ದಾಖಲಿಸಿತು.

ಮೊದಲು ಬ್ಯಾಟ್ ಮಾಡಿದ ಪಂಜಾಬ್ ಉತ್ತಮ ಶುಭಾರಂಭವನ್ನೇ ಪಡೆಯಿತು. ಆರಂಭಿಕರಾಗಿ ಕಣಕ್ಕಿಳಿದ ಅಥರ್ವ ತೈಡೆ ಹಾಗೂ ಪ್ರಭ್‌ಸಿಮ್ರನ್ ಸಿಂಗ್ ಉತ್ತಮ ಅಡಿಪಾಯ ಹಾಕಿದರು. ಈ ಜೋಡಿ ಮೊದಲ ವಿಕೆಟ್‌ಗೆ 9.1 ಓವರ್‌ಗಳಲ್ಲಿ 97 ರನ್ ಪೇರಿಸಿದ್ದರು. ಅಥರ್ವ 46 ರನ್ (27 ಬಾಲ್, 5 ಫೋರ್, 2 ಸಿಕ್ಸರ್) ಗಳಿಸಿದರು. ಪ್ರಭ್‌ಸಿಮ್ರನ್ 71 (45 ಬಾಲ್, 7 ಫೋರ್, 4 ಸಿಕ್ಸರ್) ರನ್‌ಗಳ ಅಮೋಘ ಆಟವಾಡಿದರು.

ಮೂರನೇ ಕ್ರಮಾಂಕದಲ್ಲಿ ರಿಲಿ ರಾಸ್ಸೋ 49 ರನ್ ಗಳಿಸಿ (24 ಬಾಲ್, 3 ಫೋರ್, 4 ಸಿಕ್ಸರ್) ಕಮಿನ್ಸ್‌ಗೆ ವಿಕೆಟ್ ಒಪ್ಪಿಸಿ ಅರ್ಧಶತಕ ವಂಚಿತರಾಗಿ ಹೊರನಡೆದರು.

ನಾಯಕ ಜಿತೇಶ್ ಶರ್ಮಾ 32 ರನ್ (15 ಬಾಲ್, 2 ಫೋರ್, 2 ಸಿಕ್ಸರ್) ಗಳಿಸಿ ತಂಡವು ಸವಾಲಿನ ಮೊತ್ತ ಪೇರಿಸಲು ನೆರವಾದರು. ಹೈದರಾಬಾದ್ ಪರ ಟಿ ನಟರಾಜನ್ 2 ಹಾಗೂ ಪ್ಯಾಟ್ ಕಮಿನ್ಸ್, ವಿಜಯಕಾಂತ್ ವ್ಯಾಸಕಾಂತ್ ತಲಾ 1 ವಿಕೆಟ್ ಗಳಿಸಿದರು.

ಪಂಜಾಬ್ ನೀಡಿದ 215 ರನ್‌ಗಳ ಗುರಿ ಬೆನ್ನತ್ತಿದ ಹೈದರಾಬಾದ್ ಆರಂಭಿಕ ಆಘಾತ ಎದುರಿಸಿತು. ಆರಂಭಿಕರಾಗಿ ಕಣಕ್ಕಿಳಿದಿದ್ದ ಟ್ರಾವಿಸ್ ಹೆಡ್ ಒಂದೇ ಬಾಲ್‌ಗೆ ವಿಕೆಟ್ ಕೈಚೆಲ್ಲಿ ಹೊರನಡೆದರು. ಈ ವೇಳೆ ಅಭಿಷೇಕ್ ಶರ್ಮಾ (66 ರನ್, 28 ಬಾಲ್, 5 ಫೋರ್, 6 ಸಿಕ್ಸರ್) ಹಾಗೂ ರಾಹುಲ್ ತ್ರಿಪಾಠಿ (33 ರನ್, 18 ಬಾಲ್, 4 ಫೋರ್, 2 ಸಿಕ್ಸರ್) ಜವಾಬ್ದಾರಿಯುತ ಆಟವಾಡಿದರು. ಈ ಜೋಡಿ 30 ಬಾಲ್‌ಗಳಿಗೆ 72 ರನ್‌ಗಳ ಜೊತೆಯಾಟವಾಡಿತು.

ಪಂಜಾಬ್ ಬೌಲರ್‌ಗಳನ್ನು ಹೈದರಾಬಾದ್ ಬ್ಯಾಟರ್‌ಗಳು ಮನಬಂದಂತೆ ದಂಡಿಸಿದರು. ನಿತೀಶ್ ಕುಮಾರ್ ರೆಡ್ಡಿ (37), ಹೆನ್ರಿಕ್ ಕ್ಲಾಸೆನ್ 42, ಅಬ್ದುಲ್ ಸಮದ್ 11 ರನ್‌ಗಳಿಸಿ ತಂಡವನ್ನು ಗೆಲುವಿನ ದಡ ಸೇರಿಸಿದರು. ಪಂಜಾಬ್ ಪರ ಅರ್ಷದೀಪ್ ಸಿಂಗ್ ಹಾಗೂ ಹರ್ಷಲ್ ಪಟೇಲ್ ತಲಾ 2 ವಿಕೆಟ್ ಕಿತ್ತರು. ಹಪ್ರೀತ್ ಬ್ರಾರ್ ಮತ್ತು ಶಶಾಂಕ್ ಸಿಂಗ್ ತಲಾ 1 ವಿಕೆಟ್ ಗಳಿಸಿದರು.

# ಐಪಿಎಲ್ ಪ್ರಸಾರಕರಿಗೆ ರೋಹಿತ್ ಶರ್ಮಾ ತರಾಟೆ

ಮುಂಬೈ ತಂಡದ ಮಾಜಿ ನಾಯಕ ರೋಹಿತ್ ಶರ್ಮಾ ಅವರು ಐಪಿಎಲ್ ಬ್ರಾಡ್‌ಕಾಸ್ಟರ್ ಸ್ಟಾರ್ ಸ್ಪೋರ್ಟ್ಸ್ ವಿರುದ್ಧ ಕಿಡಿಕಾರಿದ್ದಾರೆ. ಖಾಸಗಿ ಸಂಭಾಷಣೆ ಪ್ರಸಾರ ಮಾಡಿ ಗೌಪ್ಯತೆ ಉಲ್ಲಂಘಿಸಿದ್ದಾರೆ ಎಂದು ಆರೋಪ ಮಾಡಿದ್ದಾರೆ.



ಎಕ್ಸ್‌ನಲ್ಲಿ ಪೋಸ್ಟ್ ಹಾಕಿರುವ ರೋಹಿತ್ ಶರ್ಮಾ, ಕ್ರಿಕೆಟಿಗರ ಜೀವನವು ಎಷ್ಟು ಕಷ್ಟಕರವಾಗಿದೆಯೆಂದರೆ, ಈಗ ನಾವು ನಮ್ಮ ಸ್ನೇಹಿತರು ಮತ್ತು ಸಹೋದ್ಯೋಗಿಗಳೊಂದಿಗೆ, ತರಬೇತಿ ಅಥವಾ ಪಂದ್ಯದ ದಿನಗಳಲ್ಲಿ ಗೌಪ್ಯವಾಗಿ ನಡೆಸುವ ಪ್ರತಿಯೊಂದು ಸಂಭಾಷಣೆಯನ್ನು ಕ್ಯಾಮೆರಾಗಳು ರೆಕಾರ್ಡ್ ಮಾಡುತ್ತಿವೆ ಎಂದು ಬೇಸರ ಹೊರಹಾಕಿದ್ದಾರೆ.

ನನ್ನ ಸಂಭಾಷಣೆಯನ್ನು ರೆಕಾರ್ಡ್ ಮಾಡಬೇಡಿ ಎಂದು ಸ್ಟಾರ್ ಸ್ಪೋರ್ಟ್ಸ್‌ಗೆ ಕೇಳಿಕೊಂಡರೂ, ಅದನ್ನು ಪ್ರಸಾರದಲ್ಲಿ ಪ್ಲೇ ಮಾಡಲಾಗಿತ್ತು. ಅದು ಗೌಪ್ಯತೆಯ ಉಲ್ಲಂಘನೆಯಾಗಿದೆ. ಎಕ್ಸ್‌ಕ್ಲೂಸಿವ್ ಕಂಟೆಂಡ್ ಹಾಗೂ ಚಾನೆಲ್‌ನ್ನು ಎಂಗೇಜ್ ಆಗಿ ಇಡುವುದು ಮತ್ತು ವೀವ್ಸ್‌ಗೆ ಗಮನ ಕೇಂದ್ರೀಕರಿಸುವುದು ಒಂದು ದಿನ ಅಭಿಮಾನಿಗಳು, ಕ್ರಿಕೆಟಿಗರು ಮತ್ತು ಕ್ರಿಕೆಟ್ ನಡುವಿನ ನಂಬಿಕೆಯನ್ನು ಮುರಿಯುತ್ತದೆ ಎಂದು ಹೇಳಿದ್ದಾರೆ.

ರೋಹಿತ್ ಶರ್ಮಾ ಈಚೆಗೆ ಕೆಕೆಆರ್ ತಂಡದ ಸದಸ್ಯರೊಂದಿಗೆ ಸಂವಾದ ನಡೆಸುವಾಗ ಹಿಂದೆ ಬಂದ ಕ್ಯಾಮೆರಾಮನ್ ತನ್ನನ್ನು ಸೆರೆಹಿಡಿಯುತ್ತಿರುವುದನ್ನು ಕಂಡು ದೂರದಿಂದಲೇ ಕೈಮುಗಿದ ಹಿಟ್ ಮ್ಯಾನ್, ದಯವಿಟ್ಟು ಮೈಕ್ ಆಫ್ ಮಾಡಿ ಎಂದು ಮನವಿ ಮಾಡಿದ್ದರು. ಆದರೂ ವೀಡಿಯೋ ಸೋಷಿಯಲ್ ಮೀಡಿಯಾದಲ್ಲಿ ವ್ಯಾಪಕವಾಗಿ ಹರಿದಾಡುತ್ತಿದೆ. ಇದರಿಂದ ಬೇಸರಗೊಂಡಿರುವ ರೋಹಿತ್ ಟ್ವೀಟ್ ಮಾಡಿ ಅಸಮಾಧಾನ ಹೊರಹಾಕಿದ್ದಾರೆ.

# ಪೆನ್‌ಡ್ರೈವ್ ಪ್ರಕರಣ: ಹೊಸ ಆಡಿಯೋ ಔಟ್

**ಬೆಂಗಳೂರು:** ಸಂಸದ ಪ್ರಜ್ವಲ್ ರೇವಣ್ಣ ಪೆನ್‌ಡ್ರೈವ್ ಪ್ರಕರಣವು ದಿನಕ್ಕೊಂದು ಟ್ವಿಸ್ಟ್ ಪಡೆಯುತ್ತಿದೆ. ಇದೀಗ ವಕೀಲ ದೇವರಾಜೇಗೌಡ ಮತ್ತು ಶಿವರಾಮೇಗೌಡ ಮಾತಾಡಿದ್ದಾರೆ ಎನ್ನಲಾದ ಮತ್ತೊಂದು ಆಡಿಯೋ ರಿಲೀಸ್ ಆಗಿದೆ.



ಕುಮಾರಸ್ವಾಮಿ ಹೆಸರೇಳುವಂತೆ ಶಿವರಾಮೇಗೌಡ ಹೇಳಿದ್ದಾರೆನ್ನಲಾದ ಆಡಿಯೋ ಸ್ಫೋಟಗೊಂಡಿದ್ದು, ಇದೀಗ ಈ ಆಡಿಯೋ ಮತ್ತೆ ರಾಜಕೀಯ ಸಂಚಲನ ಸೃಷ್ಟಿಸಿದೆ. ಶಿವರಾಮೇಗೌಡ–ದೇವರಾಜೇಗೌಡ ನಡುವಿನ ಸಂಭಾಷಣೆಯ ಆಡಿಯೋ ವೈರಲ್ ಆಗಿದ್ದು, ಇದರಲ್ಲಿ ದೇವೇಗೌಡರ ಬಗ್ಗೆಯೂ ಶಿವರಾಮೇಗೌಡ ಲಘು ಮಾತುಗಳನ್ನಾಡಿದ್ದಾರೆ.

ದೇವರಾಜೇಗೌಡ ಆರೋಪ ಸಂಬಂಧ ಇಂದು ಶಿವರಾಮೇಗೌಡ ಸುದ್ದಿಗೋಷ್ಠಿ ನಡೆಸಿದ್ದರು. ಈ ಬೆನ್ನಲ್ಲೇ ಆಡಿಯೋ ವೈರಲ್ ಆಗಿದೆ. ಆಡಿಯೊದಲ್ಲಿ ಅಶ್ಲೀಲ ಪೆನ್ ಡ್ರೈವ್ ಹಂಚಿಕೆಗೆ ಎಲ್‌ಆರ್ ಶಿವರಾಮೇಗೌಡ ಅವರೇ ಒತ್ತಡ ಹಾಕಿರುವುದು ಬಯಲಾಗಿದೆ. ಇದಲ್ಲದೇ ಆಡಿಯೊದಲ್ಲಿ ಹೆಚ್‌ಡಿಕೆ, ದೇವೇಗೌಡ ಹಾಗೂ ಅಮಿತ್ ಶಾ ಹೆಸರು ಉಲ್ಲೇಖ ಮಾಡಿದ್ದಾರೆ.

**ಆಡಿಯೋದಲ್ಲೇನಿದೆ..?:** ದೇವರಾಜೇಗೌಡರ ಜೊತೆ ಮಾತನಾಡಿರುವ ಶಿವರಾಮೇಗೌಡ, ಕುಮಾರಸ್ವಾಮಿನೇ ಬಿಟ್ಟಿದ್ದಾನೆ ಅಂತಾನೇ ಹೇಳಿ. ಕುಮಾರಸ್ವಾಮಿಗೆ ಅವರ ಮಗ ಮುಂದಕ್ಕೆ ಬರಬೇಕೆಂಬ ಆಸೆ ಇದೆ, ಇವನು ಮುಂದಕ್ಕೆ ಬಂದುಬಟ್ಟನ್ನಲ್ಲ ಅಂತಾ, ಅದಕ್ಕೆ ಮಾಡಿದ್ದಾನೆ ಅಂತಾ ಹೇಳಿ. ದೇವೇಗೌಡ ಹಾಗೂ ದೇವೇಗೌಡ ಮಕ್ಕಳು ಏನು ಕಡಿಮೆ ಅಂದುಕೊಳ್ಳಬೇಡಿ. ಇನ್ನು ದೇವೇಗೌಡ ಆತ್ಮಹತ್ಯೆ ಮಾಡಿಕೊಳ್ಳಲ್ಲಿಲ್ವಲಾ..?.ಇನ್ನೇನು ವಿಡಿಯೋ ಇದೆ. ಡಿಕೆ ಮಾತನಾಡಿದ್ರು, ಬೆಳಗ್ಗೆ, ನಿಮ್ಮ ಹತ್ತಿರ ಏನೇನಿದೆ ನಮಗೆ ಕೊಡಿ ನಿವು ತಲೆನೆ ಕೆಡಿಸಿಕೊಳ್ಳಬೇಡಿ. ಅವರನ್ನ ಬಲಿ ಹಾಕೋಕೆ ಸರ್ಕಾರದಿಂದಲೇ ತೀರ್ಮಾನವಾಗಿದೆ ಎಂದಿದ್ದಾರೆ.

ನೀನೇನು ಪೆನ್‌ಡ್ರೈವ್‌ನ ನಾಗಮಂಗದಲ್ಲೋ, ಹಾಸನದಲ್ಲಿ ಹಂಚಿಲ್ಲ.. ಹಂಚಿದ್ರೂ ತಪ್ಪೇನಿದೆ ಹೇಳಿ. ನೀವ್ ಲಾಯರ್ ಅಲ್ವೇನಲ್ವೆನ್ರಿ..ಅದು ಏನು..? ಏನು ಆಗಲ್ಲ ಎಂದು ಶಿವರಾಮೇಗೌಡ ಹೇಳಿದಾಗ, ಅಣ್ಣ ಕಾನೂನು ಪ್ರಕಾರ ಶಿಕ್ಷೆ ಅಲ್ವೇನಣ್ಣ. ಹೆಣ್ಮಕ್ಕಳ ಮಾಣ ಮರ್ಯಾದೆ ಅಣ್ಣ. ಶೀಲದ ಬಗ್ಗೆ ನಾವೂ ಯೋಚನೆ ಮಾಡಬೇಕಲ್ವ ಎಂದು ದೇವರಾಜೇಗೌಡ ಹೇಳುತ್ತಾರೆ. ಈ ವೇಳೆ ಶಿವರಾಮೇಗೌಡ, ಅದರ ಬಗ್ಗೆ ನೀವೇಕೆ ತಲೆಕೆಡಿಸಿಕೊಳ್ತೀರಿ. ಅಮಿತ್ ಶಾ ಚನ್ನೈನಲ್ಲಿ ಹೇಳಿದ್ದಾರಲ್ಲ, ಹೆಣ್ಮಕ್ಕಳಿಗೆ ಸುರಕ್ಷಿತ ತಾಣವಲ್ಲ ಕರ್ನಾಟಕ ಅಂತಾ ಎಂದಿದ್ದಾರೆ.

ಈ ಹಿಂದೆಯೋ ಆಡಿಯೋವೊಂದು ವೈರಲ್ ಆಗಿತ್ತು. ಅದರಲ್ಲಿ ಎಸ್‌ಐಟಿಯವರು ಮಾಹಿತಿ ಕೇಳಿದ್ರೆ, ಡಿಕೆ ಶಿವಕುಮಾರ್ ಬಗ್ಗೆ ಏನು ಹೇಳಬೇಡ ಎಂದು ಎಲ್ ಆರ್ ಶಿವರಾಮೇಗೌಡ, ದೇವರಾಜೆಗೌಡ ಗೌಡಗೆ ಹೇಳುತ್ತಾರೆ. ಈ ಆಡಿಯೋ ಇದೀಗ ಭಾರೀ ಸದ್ದು ಮಾಡಿತ್ತು.

# ಮುಂಗಾರು ಪೂರ್ವದಲ್ಲೇ ಕಾವೇರಿಗೆ ಜೀವಕಳೆ

**ಕೊಡಗು:** ಬೆಂಗಳೂರು ಮಾತ್ರವಲ್ಲ ರಾಜ್ಯದ ವಿವಿಧೆಡೆ ವ್ಯಾಪಕವಾದ ಮಳೆಯಾಗುತ್ತಿದೆ. ಕೊಡಗಿನ ತ್ರಿವೇಣಿ ಸಂಗಮದಲ್ಲಿ ಮಳೆ ಹೆಚ್ಚಾಗಿದ್ದು, ಕಾವೇರಿ ಒಡಲಿಗೆ ಜೀವಕಳೆ ಬಂದಿದೆ. ಪರಿಣಾಮ ಕೆಆರ್‌ಎಸ್ ಒಳ ಹರಿವು ಹೆಚ್ಚಾಗಿದೆ.



ಕಳೆದೊಂದು ವಾರದಲ್ಲಿ 1 ಟಿಎಂಸಿಯಷ್ಟು ನೀರು ಕನ್ನಂಬಾಡಿ ಕಟ್ಟೆ ಸೇರಿದೆ. ಚಿತ್ರದುರ್ಗದಲ್ಲಿ ಸತತ ಎರಡು ದಿನಗಳ ಮಳೆಗೆ ಮೊಳಕಾಲ್ಮೂರಿನ ಕೆರೆ ಕಟ್ಟೆಗಳು ತುಂಬಿ ಹರಿಯುತ್ತಿವೆ. ಮೇಗಳ ಕಣಿವೆ ಭರ್ತಿಯಾಗಿದೆ. ಹೊಸದುರ್ಗದ ಕೃಷ್ಣಾಪುರ ಕೆರೆ ಕೋಡಿಬಿದ್ದಿದೆ.

ಕೆಲ್ಲೋಡು ಸೇತುವೆ ಭರ್ತಿಯಾಗಿದೆ. ವಾಣಿವಿಲಾಸ ಸಾಗರ ಜಲಾಶಯವನ್ನು ಈ ನೀರು ಸೇರುತ್ತಿದೆ. ಕೆಲವೆಡೆ ತೋಟಗಳಿಗೆ ನೀರು ನುಗ್ಗಿ ಅವಾಂತರ ಸೃಷ್ಟಿಸಿದೆ. ಅಲ್ಲಲ್ಲಿ ಅವಾಂತರಗಳು ಸೃಷ್ಟಿಯಾಗಿವೆ. ಸಿಡಿಲಿಗೆ ಕೊಪ್ಪಳ ಮತ್ತು ನೆಲಮಂಗಲದಲ್ಲಿ ತಲಾ ಒಬ್ಬರು ಬಲಿ ಆಗಿದ್ದಾರೆ. ಚಿಕ್ಕಮಗಳೂರಿನಲ್ಲಿ ಧಾರಾಕಾರ ಮಳೆ ಆಗ್ತಿದೆ. ಅಜ್ಜಂಪುರದ ಸೇತುವೆಗಳು ಜಲಾವೃತವಾಗಿದೆ.

ದಂದೂರು–ಚೀರನಹಳ್ಳಿ ಸಂಪರ್ಕ ಕಡಿದುಹೋಗಿದೆ. ಚಾರ್ಮಾಡಿಘಾಟ್‌ನಲ್ಲಿ ದಾರಿ ಗೊತ್ತಾಗದೇ ಬಸ್–ಲಾರಿ ಮುಖಾಮುಖಿ ಡಿಕ್ಕಿ ಹೊಡೆದಿದೆ. ನೂರಾರು ವಾಹನ ಸಾಲು ಗಟ್ಟಿವೆ. ಕಳಸಾ ಬಳಿ ರಸ್ತೆ ಗೊತ್ತಾಗದೇ ಕಾರೊಂದು ತೋಟಕ್ಕೆ ನುಗ್ಗಿದೆ. ಚನ್ನರಾಯಪಟ್ಟಣದಲ್ಲಿ ರಸ್ತೆ ಮೇಲೆ ನದಿಯೋಪಾದಿಯಲ್ಲಿ ನೀರು ಹರಿದಿದೆ. ಶಿವಮೊಗ್ಗದ ಗುಡ್ಡೆಕಲ್‌ನಲ್ಲಿ ಮದುವೆ ಛತ್ರಕ್ಕೆ ನೀರು ನುಗ್ಗಿ ಅವಾಂತರ ಸೃಷ್ಟಿಯಾಗಿದೆ. ಮಳೆಯ ನೀರಿನ ನಡುವೆಯೂ ಊಟೋಪಚಾರ ಮುಂದುವರೆದಿತ್ತು.

ಕೊರಟಗೆರೆಯ ಬೈರೇನಹಳ್ಳಿಯಲ್ಲಿ ಮನೆಗಳಿಗೆ ನೀರು ನುಗ್ಗಿದೆ. ದಾವಣಗೆರೆಯ ದೊಡ್ಡಬಾತಿಯಲ್ಲಿ 20 ಕ್ಕೂ ಹೆಚ್ಚು ಎಕರೆ ಭತ್ತದ ಬೆಳೆ ನಾಶವಾಗಿದೆ. ಹಾಸನ, ಮೈಸೂರು, ಮಂಡ್ಯ, ರಾಮನಗರ, ಚಾಮರಾಜನಗರ, ಕೊಪ್ಪಳ, ವಿಜಯನಗರ, ಹಾವೇರಿ ಸೇರಿ ಹಲವೆಡೆ ಉತ್ತಮ ಮಳೆ ಆಗುತ್ತಿದ್ದು, ಜನಜೀವನ ಅಸ್ತವ್ಯಸ್ತವಾಗಿದೆ. ಇಂದಿನಿಂದ ಮೂರು ದಿನ ದಕ್ಷಿಣ ಒಳನಾಡಿನಲ್ಲಿ ಆರೆಂಜ್ ಅಲರ್ಟ್ ಜಾರಿ ಮಾಡಲಾಗಿದೆ. ಈ ಮಧ್ಯೆ ನಿಕೋಬಾರ್ ದ್ವೀಪಗಳನ್ನು ಮುಂಗಾರು ಮಾರುತಗಳು ಇಂದು ತಲುಪಿವೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com